ಮೈಸೂರು ಮಿತ್ರ

ಮೈಸೂರು-ಮಂಡ್ಯ-ಚಾಮರಾಜನಗರ-ಕೊಡಗು-ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 11 ಮಂಗಳವಾರ 2023

ಸಂಪುಟ: 44 | ಸಂಚಿಕೆ: 86 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ - ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಚಾಮುಂಡೇಶ್ವರಿ ವರ್ಧಂತಿ ಉತ್ಸವ

ಅಸಂಖ್ಯಾತ ಭಕ್ತರಿಗೆ ದೇವಿಯ ದರ್ಶನ ಭಾಗ್ಯ

ರಾಜವಂಶಸ್ಥರಿಂದ ಚಿನ್ನದ ಪಲ್ಲಕ್ಕಿ ಉತ್ಸವಕ್ಕೆ ಚಾಲನೆ

ಮೈಸೂರು, ಜು.10(ಎಂಟಿವೈ)- ಅಪಾರ ಭಕ್ತರ ಸಮ್ಮುಖದಲ್ಲಿ ಸೋಮವಾರ ಚಾಮುಂಡಿಬೆಟ್ಟದಲ್ಲಿ ನಾಡದೇವಿ ಚಾಮುಂಡೇಶ್ವರಿಯ ವರ್ಧಂತಿ ವಿಜೃಂಭಣೆಯಿಂದ ನೆರವೇರಿತು. ಆಷಾಢ ಮಾಸದ ಕೃಷ್ಣ ಪಕ್ಷದ ಅಷ್ಟಮಿಯ ರೇವತಿ ನಕ್ಷತ್ರ ದಿನದಂದು ಚಾಮುಂಡೇಶ್ವರಿ ಅಮ್ಮನವರ ವರ್ಧಂತಿ ಉತ್ಸವ (ಜನ್ಮದಿನ) ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಸಾಂಪ್ರದಾಯಿಕ ಪೂಜಾ ಕೈಂಕರ್ಯಗಳೊಂದಿಗೆ ಶಕ್ತಿದೇವತೆ ಚಾಮುಂಡೇಶ್ವರಿ ಜನ್ಮದಿನವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ನಾನಾ ರೀತಿಯ ಹೂವುಗಳಿಂದ ದೇಗುಲವನ್ನು ಅಲಂಕರಿಸಲಾಗಿದ್ದು, ವರ್ಧಂತಿ ಉತ್ಸವದ ಮೆರಗು ಹೆಚ್ಚಿಸಿತ್ತು.

ವಿಶೇಷ ಪೂಜೆ: ನಾಡದೇವಿಯ ಉತ್ಸವ ಮೂರ್ತಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ದೇವಾಲಯದಲ್ಲಿ ಪ್ರಧಾನ ಆಗಮಿಕ ಡಾ.ಎನ್.ಶಶಿಶೇಖರ್ ದೀಕ್ಷಿತ್ ನೇತೃತ್ವದಲ್ಲಿ ಮುಂಜಾನೆ 5.30ರಿಂದ ವಿಶೇಷ ಪೂಜಾ ಕೈಂಕರ್ಯ ನೆರವೇರಿತು. ಉತ್ಸವ ಮೂರ್ತಿಗೆ ಅಭ್ಯಂಜನ (ಎಣ್ಣೆಸ್ನಾನ), ಮಹಾನ್ಯಾಸ ಪೂರ್ವಕ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ಸಹಸ್ರನಾಮಾರ್ಚನೆ, ತ್ರಿಪದಿ, ಅಷ್ಟೋತ್ತರ ಪೂಜೆ ನೆರವೇರಿಸಿದ ಬಳಿಕ, ಮಂಗಳಾರತಿ ಬೆಳಗ್ಗೆ 8 ಗಂಟೆಗೆ ಭಕ್ತರ ದರ್ಶನಕ್ಕೆ ಅವಕಾಶ ನೀಡಲಾಯಿತು. ಮುಂಜಾನೆಯಿಂದಲೇ ಕಾತುರದಿಂದ ಕಾಯುತ್ತಿದ್ದ ಭಕ್ತರು ದೇವಾಲಯ ಪ್ರವೇಶ ದ್ವಾರ ದಾಟುತ್ತಿದ್ದಂತೆಯೇ ಕಣ್ಮನ ಸೆಳೆಯುವ ಹೂವಿನ ಅಲಂಕಾರದಲ್ಲಿ ಭಕ್ತಿಪರವಶರಾದರು.

ಅಡ್ಡ ಪಲ್ಲಕ್ಕಿ ಉತ್ಸವ: ಬೆಳಗ್ಗೆ 10.30ಕ್ಕೆ ಚಿನ್ನದ ಅಡ್ಡ ಪಲ್ಲಕ್ಕಿಯಲ್ಲಿ ಚಾಮುಂಡೇಶ್ವರಿಯ ಉತ್ಸವ ಮೂರ್ತಿಯನ್ನು ದೇವಾಲಯದ ಸುತ್ತ ಮೆರವಣಿಗೆ ಮಾಡಲಾಯಿತು. ಸಂಪ್ರದಾಯದಂತೆ ಚಿನ್ನದ ಅಡ್ಡ ಪಲ್ಲಕ್ಕಿ ಉತ್ಸವಕ್ಕೆ ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್, ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ತ್ರಿಷಿಕಾ ಕುಮಾರಿ ಒಡೆಯರ್, ಪಲ್ಲಕ್ಕಿ ಎಳೆಯುವ ಮೂಲಕ ಧಾರ್ಮಿಕ ಸಂಪ್ರದಾಯಕ್ಕೆ ಚಾಲನೆ ನೀಡಿದರು. ಈ ವೇಳೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಮಾಜಿ ಸಚಿವ ಹೆಚ್.ಎಂ. ರೇವಣ್ಣ ಇನ್ನಿತರರು ಸಾಥ್ ನೀಡಿದರು. ಮಂಗಳ ವಾದ್ಯ, ಪೊಲೀಸ್ ● 6ನೇ ಪುಟಕ್ಕೆ

ನಾಡಿನ ಒಳಿತಿಗಾಗಿ ಪ್ರಾರ್ಥನೆ

“ಸಂಪ್ರದಾಯದಂತೆ ಚಾಮುಂಡೇಶ್ವರಿ ಅಮ್ಮನವರ ವರ್ಧಂತಿ ಮಹೋತ್ಸವ ನೆರವೇರಿದೆ. ಮುಮ್ಮಡಿ ಕೃಷ್ಣರಾಜ ಒಡೆಯರ್ ಕಾಲದಿಂದಲೂ ಉತ್ಸವ ಆಚರಿಸಲಾಗುತ್ತಿದೆ. ಪ್ರತಿ ಬಾರಿಯೂ ರಾಜಮನೆತನದ ವತಿಯಿಂದ ನಾಡದೇವಿಗೆ ಪೂಜೆ ಸಲ್ಲಿಸಿ, ನಾಡಿಗೆ ಒಳಿತಾಗಲೆಂದು ಪ್ರಾರ್ಥನೆ ಸಲ್ಲಿಸುತ್ತಾ ಬಂದಿದ್ದೇವೆ.

-ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ರಾಜವಂಶಸ್ಥರು

ಮುಕ್ತ ವಿವಿಯ 250 ಕೋಟಿ ಹಗರಣ

ಸಿಬಿಐ ತನಿಖೆ ಆರಂಭ

● 2009-10 ರಿಂದ 2015-16ನೇ ಸಾಲಿನವರೆಗೆ ದೇಶಾದ್ಯಂತ ಸಹಭಾಗಿತ್ವದ ಕೇಂದ್ರಗಳಿಂದ ಬಂದ ಹಣ ದುರುಪಯೋಗ ಆರೋಪ ● ಮುಕ್ತ ವಿವಿ ಆಡಳಿತ ವ್ಯವಸ್ಥಾಪನಾ ಮಂಡಳಿಯಲ್ಲಿ ನಿರ್ಣಯ ಕೈಗೊಂಡು ರಾಜ್ಯಪಾಲರಿಗೆ ವರದಿ ● ಹಗರಣದ ತನಿಖೆಯನ್ನು ಸಿಬಿಐಗೆ ಒಪ್ಪಿಸುವಂತೆ 2022 ಏ.7ರಂದು ಸರ್ಕಾರಕ್ಕೆ ರಾಜ್ಯಪಾಲರ ಶಿಫಾರಸು ● 2023 ಮಾ.13ರಂದು ರಾಜ್ಯ ಸರ್ಕಾರದಿಂದ ಸಿಬಿಐಗೆ ಹಗರಣದ ತನಿಖೆ ಹಸ್ತಾಂತರ ● ಸಿಬಿಐನಿಂದ 15 ದಿನಗಳ ಹಿಂದೆ ತನಿಖೆ ಆರಂಭ, ಮುಕ್ತ ವಿವಿ ಅಧಿಕಾರಿಗಳು, ಲೆಕ್ಕ ಪರಿಶೋಧಕರಿಗೆ ನೋಟಿಸ್ ಜಾರಿ ● ಸಂಬಂಧಪಟ್ಟ ಬ್ಯಾಂಕ್ ಬ್ರಾಂಚ್ ಮ್ಯಾನೇಜರ್‌ಗಳಿಂದಲೂ ಮಾಹಿತಿ ಸಂಗ್ರಹಿಸಿರುವ ಸಿಬಿಐ ಅಧಿಕಾರಿಗಳು ● ಸಹಭಾಗಿತ್ವ ಕೇಂದ್ರಗಳಿಂದ ಪಡೆದ ಡಿಡಿ ಸಂಖ್ಯೆಗಳನ್ನು ಸಂದಾಯ ಪುಸ್ತಕದಲ್ಲಿ ನಮೂದಿಸಿ ನಂತರ ಅವರಿಗೆ ವಾಪಸ್ ಕೊಟ್ಟು ಕೋಟ್ಯಂತರ ರೂ. ಕಿಕ್ ಬ್ಯಾಕ್ ಪಡೆದ ಆರೋಪ



■ ಎಸ್.ಟಿ.ರವಿಕುಮಾರ್

ಮೈಸೂರು, ಜು.10- ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯಕ್ಕೆ ದೇಶಾದ್ಯಂತ ಇರುವ ಸಹಭಾಗಿತ್ವ (Collaborative) ಕೇಂದ್ರಗಳಿಂದ ಸಂದಾಯವಾಗಿದ್ದ ನೂರಾರು ಕೋಟಿ ಹಣ ದುರುಪಯೋಗವಾಗಿರುವ ಭಾರೀ ಹಗರಣ ಸಂಬಂಧ ಸಿಬಿಐ (ಸೆಂಟ್ರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್) ಕಡೆಗೂ ತನಿಖೆ ಆರಂಭಿಸಿದೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (KSOU)ದಲ್ಲಿ 2009-10ರಿಂದ 2015-16ನೇ ಸಾಲಿನವರೆಗೆ ನಡೆದಿದೆ ಎನ್ನಲಾದ ಸುಮಾರು 250 ಕೋಟಿ ರೂ. ಹಗರಣ ಸಂಬಂಧ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ರೀತಿಯ ಕ್ರಮ ವಹಿಸಬೇಕೆಂದು ನಂತರದ ಅವಧಿಯ ಮುಕ್ತ ವಿಶ್ವವಿದ್ಯಾನಿಲಯದ ವ್ಯವಸ್ಥಾಪನಾ ಮಂಡಳಿ (Board of Management) ನಿರ್ಣಯ ಕೈಗೊಂಡು ರಾಜ್ಯಪಾಲರಿಗೆ ವರದಿ ಸಲ್ಲಿಸಿತ್ತು.

ರಾಜ್ಯಪಾಲರ ಸೂಚನೆಯಂತೆ, ರಾಜಭವನದ ಸಚಿವಾಲಯದ ಅಧೀನ ಕಾರ್ಯದರ್ಶಿ ಪ್ರತಿಭಾ ಡಿ. ಹಬ್ಬು ಅವರು 2022ರ ಏಪ್ರಿಲ್ 7 ರಂದು ರಾಜ್ಯದ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದು 2009-10ರಿಂದ 2015-16 ಅವಧಿಯಲ್ಲಿ ಸಹಭಾಗಿತ್ವ ಕೇಂದ್ರಗಳಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯಕ್ಕೆ ಸಂದಾಯವಾದ ಸಹಭಾಗಿತ್ವದ ಶುಲ್ಕದ ಹಣ ದುರುಪಯೋಗವಾಗಿದೆ ಎನ್ನಲಾದ ಪ್ರಕರಣದ ತನಿಖೆಯನ್ನು ಸಿಬಿಐಗೆ ಒಪ್ಪಿಸುವಂತೆ ಶಿಫಾರಸು ಮಾಡಿದ್ದರು. ಅದರಲ್ಲಿ 2022ರ ಫೆಬ್ರವರಿ 15 ರಂದು ತಮ್ಮ ಕಚೇರಿಗೆ ಮುಕ್ತ ವಿವಿ ಕುಲಸಚಿವರು ಬರೆದಿದ್ದ ಪತ್ರ (KSOU/RPA/28/2021-2022)ವನ್ನು ಉಲ್ಲೇಖಿಸಲಾಗಿದ್ದು, ಸಹಭಾಗಿತ್ವ ಕೇಂದ್ರಗಳಿಂದ ● 9ನೇ ಪುಟಕ್ಕೆ

ಐದು ಕೆಜಿ ಅಕ್ಕಿಯ ಜೊತೆಗೆ ಇನ್ನೈದು ಕೆಜಿ ಅಕ್ಕಿಯ ಹಣ ಫಲಾನುಭವಿಗಳ ಖಾತೆಗೆ ಜಮಾ

■ ಐದು ಗ್ಯಾರಂಟಿಗಳಲ್ಲಿ ಮೂರನೇ ಭರವಸೆ 'ಅನ್ನಭಾಗ್ಯ'ಕ್ಕೆ ಸರ್ಕಾರದ ಚಾಲನೆ
■ ಇದರಿಂದ 1.25 ಕೋಟಿ ಕುಟುಂಬದ 4.42 ಕೋಟಿ ಜನರಿಗೆ ಅನುಕೂಲ



ಬೆಂಗಳೂರು, ಜು.10(ಕೆಎಂಶಿ)- ಅನ್ನಭಾಗ್ಯ ಯೋಜನೆಯಡಿ ಎಂದಿನಂತೆ ಅಕ್ಕಿ ಜತೆಗೆ ಹೆಚ್ಚುವರಿಯಾಗಿ ನೀಡಬೇಕಿದ್ದ ಅಕ್ಕಿಯ ಹಣವನ್ನು ಫಲಾನುಭವಿಗಳ ಖಾತೆಗೆ ರಾಜ್ಯ ಸರ್ಕಾರ ವರ್ಗಾಯಿಸಿದೆ.

ವಿಧಾನಸಭಾ ಚುನಾವಣೆಗೂ ಮುನ್ನ ಕಾಂಗ್ರೆಸ್ ನೀಡಿದ್ದ 5 ಭರವಸೆಗಳಲ್ಲಿ ಮೂರನೇ ಭರವಸೆ ಅನ್ನಭಾಗ್ಯ ಯೋಜನೆ ರಾಜ್ಯಾದ್ಯಂತ ಜಾರಿಗೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ಅವರು ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಫಲಾನುಭವಿಗಳ ಜತೆ ಸಂವಾದ ನಡೆಸಿ ಅವರ ಖಾತೆಗಳಿಗೆ ಹಣ ವರ್ಗಾವಣೆ ಮಾಡುವುದಕ್ಕೆ ಚಾಲನೆ ನೀಡಿದರು.

ಇದರಿಂದ ಗ್ಯಾರಂಟಿ ಭರವಸೆಗಳಲ್ಲಿ ಶಕ್ತಿ, ಗೃಹಜ್ಯೋತಿ ಹಾಗೂ ಅನ್ನಭಾಗ್ಯ ಯೋಜನೆಗಳು ಜನರಿಗೆ ತಲುಪಿದಂತಾಗಿದೆ. ಸಿದ್ದರಾಮಯ್ಯ ಹಿಂದಿನ ಬಾರಿ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಾಗ ಜಾರಿ ಮಾಡಿದ್ದ ಅನ್ನಭಾಗ್ಯ ಯೋಜನೆಗೆ 10 ವರ್ಷಗಳು ಕಳೆದಿವೆ.

ಇದರ ನೆನಪಿನಲ್ಲೇ ಈ ಹಿಂದೆ ನೀಡುತ್ತಿದ್ದ 5 ಕೆ.ಜಿ.ಆಹಾರ ಧಾನ್ಯಗಳ ಜತೆಗೆ ಹೆಚ್ಚುವರಿ 5 ಕೆ.ಜಿ.ಗೆ ಆಹಾರಧಾನ್ಯದ ಬದಲು ಪ್ರತಿಯೊಬ್ಬರಿಗೆ ಮಾಸಿಕ 170 ರೂ. ದೊರೆಯಲಿದೆ. ಪ್ರತಿ ಕೆ.ಜಿ.ಗೆ 34 ರೂ.ನಂತೆ ಹಣ ನೀಡಲಾಗುತ್ತದೆ. ಕುಟುಂಬದಲ್ಲಿ ಕನಿಷ್ಠ 5 ಮಂದಿ ಇದ್ದರೆ, ಆ ಕುಟುಂಬದ ವಾರಸುದಾರನ ಖಾತೆಗೆ 850 ರೂ. ಸಂದಾಯವಾಗಲಿದೆ. ಒಂದು ವೇಳೆ ಆ ಕುಟುಂಬದಲ್ಲಿ 5ಕ್ಕಿಂತ ಹೆಚ್ಚು ಇದ್ದರೂ ಯುನಿಟ್ ಆಧಾರದಲ್ಲಿ ಹಣ ಸಂದಾಯ ಮಾಡಲು ಸರ್ಕಾರ ಹಸಿರು ನಿಶಾನೆ ತೋರಿದೆ. ಸರ್ಕಾರದ ಈ ನಿರ್ಧಾರದಿಂದ ರಾಜ್ಯದ 1.27 ಕೋಟಿ ಕುಟುಂಬದ ● 9ನೇ ಪುಟಕ್ಕೆ

ಮೈಸೂರು ಜಿಲ್ಲೆಯಲ್ಲಿವೆ 7,11,722 ಎಎವೈ, ಬಿಪಿಎಲ್ ಕಾರ್ಡ್; 23 ಲಕ್ಷ ಯೋಜನೆ ಫಲಾನುಭವಿಗಳು

ಮೈಸೂರು, ಜು.10(ಎಸ್‌ಬಿಡಿ)- ಮೈಸೂರು ಜಿಲ್ಲೆಯಲ್ಲಿ ಅಂತ್ಯೋದಯ (ಎಎವೈ) ಹಾಗೂ ಬಿಪಿಎಲ್ ಸೇರಿ ಒಟ್ಟು 7,11,722 ಪಡಿತರ ಕಾರ್ಡ್‌ಗಳಿದ್ದು, ಸುಮಾರು 23 ಲಕ್ಷ ಫಲಾನುಭವಿಗಳಿದ್ದಾರೆ. ಅಂತ್ಯೋದಯ ಅನ್ನ ಯೋಜನೆ ಕಾರ್ಡ್ ಹೊಂದಿರುವ 50,432 ಕುಟುಂಬಗಳ 2,17,199 ಮಂದಿ ಹಾಗೂ ಬಿಪಿಎಲ್ ಕಾರ್ಡ್ ಹೊಂದಿರುವ 6,61,290 ಕುಟುಂಬಗಳ 20,83,627 ಸದಸ್ಯರು ಈ ಯೋಜನೆಯ ಅನುಕೂಲ ಪಡೆಯಲಿದ್ದಾರೆ. ಅರ್ಹ ಪಡಿತರ ಕುಟುಂಬಗಳಿಗೆ ನೀಡಲಾಗುವ ನಗದು ವರ್ಗಾವಣೆ ಸೌಲಭ್ಯದ ಪ್ರಕ್ರಿಯೆ ಜಿಲ್ಲಾ ಹಂತದಲ್ಲೇ ನಡೆಯಲಿದೆ. ● 9ನೇ ಪುಟಕ್ಕೆ

ಮೈಸೂರು ಜಿಲ್ಲೆಯ ಫಲಾನುಭವಿಗಳ ವಿವರ

ತಾಲೂಕು	ಎಎವೈ	ಬಿಪಿಎಲ್	ಒಟ್ಟು ಕಾರ್ಡ್	ಒಟ್ಟು ಸದಸ್ಯರು
ಮೈಸೂರು	8767	217481	226248	781911
ಹೆಚ್.ಡಿ.ಕೋಟೆ	5653	46492	52145	165820
ಹುಣಸೂರು	6592	70932	77524	247147
ಕೆ.ಆರ್.ನಗರ	2962	31618	34580	104159
ನಂಜನಗೂಡು	5606	104172	109778	339240
ಪಿರಿಯಾಪಟ್ಟಣ	8975	58567	67542	209188
ತಿ.ನರಸೀಪುರ	6375	76988	83363	266573
ಸರಗೂರು	2117	23319	25436	78725
ಸಾಲಿಗ್ರಾಮ	3385	31721	35106	108063
ಒಟ್ಟು	50,432	6,61,290	7,11,722	23,00,826



“ಮೈಸೂರಿನ ಅನೇಕ ಫಲಾನುಭವಿಗಳ ಖಾತೆಗೆ ಅನ್ನಭಾಗ್ಯ ಅಕ್ಕಿಯ ನಗದು ಸಂದಾಯವಾಗಿದೆ ಬಿಪಿಎಲ್ ಪಡಿತರ ಚೀಟಿ ಹೊಂದಿರುವ ಹೊಸ ಬಂಡಿಕೇರಿ ನಿವಾಸಿ, ವರಲಕ್ಷ್ಮೀ ಅವರ ಪತಿ ರಾಜೇಂದ್ರ ರಾಜು ಪ್ರತಿಕ್ರಿಯಿಸಿ, ನಮ್ಮ ಕುಟುಂಬದಲ್ಲಿ ಮಗ ಕಿರಣ್‌ರಾಜು ಸೇರಿ ಒಟ್ಟು ಮೂವರಿದ್ದೇವೆ. ಬ್ಯಾಂಕ್ ಖಾತೆಗೆ 510 ರೂ. ಸಂದಾಯವಾಗಿರುವ ಸಂದೇಶ ಬಂದಿತು. ಅದನ್ನು 6ನೇ ಕ್ರಾಸ್‌ನಲ್ಲಿರುವ ಡಿಪೋ ಸಿಬ್ಬಂದಿಗೆ ತೋರಿಸಿದ್ದೇವು. ಇದು ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿ ನೀಡಲಾಗಿರುವ ನಗದು. ತಲಾ 5 ಕೆಜಿಯಂತೆ ಒಟ್ಟು 15 ಕೆಜಿಗೆ ಹಣ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದರು. ಮುಖ್ಯಮಂತ್ರಿಗಳು ಹೇಳಿದಂತೆ ಎಲ್ಲರೂ ಈ ಹಣವನ್ನು ಆಹಾರ ಪದಾರ್ಥ ಕೊಳ್ಳಲು ಮಾತ್ರ ಬಳಸಬೇಕು ಎಂದು ಮನವಿ ಮಾಡಿದರು.

ನದಿಗೆ ಹಾರಿ ದೇವನೂರು ಮಠದ ಶಿವಪ್ಪ ಸ್ವಾಮೀಜಿ ಆತ್ಮಹತ್ಯೆ



ನಂಜನಗೂಡು, ಜು.10- ನದಿಗೆ ಹಾರಿ ಸ್ವಾಮೀಜಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಿ.ನರಸೀಪುರ ತಾಲೂಕಿನ ಮುಡುಕುತೊರೆ ಬಳಿ ನಡೆದಿದೆ. ತಾಲೂಕಿನ ದೇವನೂರು ಮಠದ ಶಿವಪ್ಪ ಸ್ವಾಮೀಜಿ(60) (ಬಾನಹಳ್ಳಿ ಮರಿಯವರು) ಆತ್ಮಹತ್ಯೆ ಮಾಡಿಕೊಂಡವರು. ಕೆಲ ದಿನಗಳಿಂದ ಅನಾರೋಗ್ಯಕ್ಕೆ ತುತ್ತಾಗಿದ್ದ ಇವರು ತೀವ್ರ ಮಾನಸಿಕ ಖಿನ್ನತೆಗೆ ಒಳಗಾಗಿದ್ದರು ಎನ್ನಲಾಗಿದೆ. ಕಳೆದ 2 ದಿನಗಳಿಂದ ನಾಪತ್ತೆಯಾಗಿದ್ದ ● 9ನೇ ಪುಟಕ್ಕೆ

ಲೋಕಸಭಾ ಚುನಾವಣೆಗೆ ಪ್ರದೇಶ ಕಾಂಗ್ರೆಸ್ ರಣತಂತ್ರ

ಮೈಸೂರು-ಕೊಡಗು ಇಲ್ಲವೇ ಚಿಕ್ಕಮಗಳೂರು-ಉಡುಪಿಯಿಂದ

ಪ್ರಿಯಾಂಕ ಗಾಂಧಿ ಸ್ಪರ್ಧೆಗಿಳಿಸಲು ಗಂಭೀರ ಚಿಂತನೆ



● ಮಂಡ್ಯದಿಂದ ರಮ್ಯಾ ಕಣಕ್ಕಿಳಿಸಲು ನಿರ್ಧಾರ
● ಕೋಲಾರದಿಂದ ಖರ್ಗೆ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣದಲ್ಲಿ ಡಿ.ಕೆ.ಸುರೇಶ್ ಸ್ಪರ್ಧೆ ಸಾಧ್ಯತೆ
● ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉನ್ನತ ಸಭೆಯಲ್ಲಿ ಸಂಭವನೀಯ ಅಭ್ಯರ್ಥಿಗಳ ಪಟ್ಟಿ ಅಂತಿಮ





ಬೆಂಗಳೂರು, ಜು.10(ಕೆಎಂಶಿ)- ವಿಧಾನಸಭಾ ಚುನಾವಣಾ ಫಲಿತಾಂಶವನ್ನೇ ಲೋಕಸಭಾ ಚುನಾವಣೆಯಲ್ಲಿ ಮುಂದುವರೆಸಿ ಕನಿಷ್ಠ 20 ಕ್ಷೇತ್ರಗಳನ್ನು ಗೆಲ್ಲಲು ಕಾರ್ಯತಂತ್ರ ರೂಪಿಸಿರುವ ಪ್ರದೇಶ ಕಾಂಗ್ರೆಸ್, ತಮ್ಮ ನಾಯಕಿ ಪ್ರಿಯಾಂಕ ಗಾಂಧಿ ಅವರನ್ನು ಕರ್ನಾಟಕದಿಂದ ಕಣಕ್ಕಿಳಿಸಲು ತೀರ್ಮಾನಿಸಿದೆ. ಪ್ರಿಯಾಂಕ ಅವರನ್ನು ಮೈಸೂರು ಇಲ್ಲವೇ ಉಡುಪಿ-ಚಿಕ್ಕಮಗಳೂರಿನಿಂದಲೂ, ಚಿತ್ರನಟಿ ರಮ್ಯಾ ಅವರನ್ನು ಮತ್ತೆ ಸಕ್ರಿಯ ರಾಜಕಾರಣಕ್ಕೆ ಕರೆತಂದು ಮಂಡ್ಯದಿಂದಲೂ ಕಣಕ್ಕಿಳಿಸುವ ನಿರ್ಧಾರ ಕೈಗೊಂಡಿದೆ.

ಯದುವಂಶದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ರಾಜಕೀಯಕ್ಕೆ ಕರೆತಂದು ಮೈಸೂರು-ಕೊಡಗು ಕ್ಷೇತ್ರದಿಂದ ಕಣಕ್ಕಿಳಿಸಲು ಆಸಕ್ತಿ ತೋರಿದ್ದ ಕಾಂಗ್ರೆಸ್‌ಗೆ ಅವರು ಸಮ್ಮತಿ ನೀಡಿಲ್ಲ. ಈ ಕ್ಷೇತ್ರದಿಂದ ಪ್ರಿಯಾಂಕ ಇಲ್ಲವೇ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಡಾ.ಯತೀಂದ್ರ ಸಿದ್ದರಾಮಯ್ಯ ಅವರನ್ನು ಕಣಕ್ಕಿಳಿಸಲು ನಿರ್ಧರಿಸಿದೆ. ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಕಲಬುರಗಿ ಮೀಸಲು ಕ್ಷೇತ್ರದ ಬದಲಾಗಿ ಕೋಲಾರ ಮೀಸಲು ಲೋಕಸಭೆ ಕ್ಷೇತ್ರದಿಂದ ಕಣಕ್ಕಿಳಿಸುವ ತೀರ್ಮಾನ ಕೈಗೊಂಡಿದ್ದಾರೆ. ● 6ನೇ ಪುಟಕ್ಕೆ

ಚಾಮರಾಜನಗರ ನೂತನ ಡಿಸಿ ಶಿಲ್ಪನಾಗ್, ಹಾಸನ ಡಿಸಿ ಸತ್ಯಭಾಮ



ಶಿಲ್ಪನಾಗ್



ಸತ್ಯಭಾಮ

ಚಾಮರಾಜನಗರ, ಜು.10- ಚಾಮರಾಜನಗರ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಶಿಲ್ಪನಾಗ್ ಅವರನ್ನು ನೇಮಿಸಿ, ಸರ್ಕಾರ ಆದೇಶ ಹೊರಡಿಸಿದೆ. ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಿರ್ದೇಶಕರಾಗಿದ್ದ ಶಿಲ್ಪನಾಗ್ ಅವರು ಈ ಹಿಂದೆ ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರಾಗಿದ್ದರು. ಹಾಗೆಯೇ ಹಾಸನ ಜಿಲ್ಲಾಧಿಕಾರಿಯಾಗಿ ಸಿ.ಸತ್ಯಭಾಮ ಅವರನ್ನು ವರ್ಗಾವಣೆ ಮಾಡಲಾಗಿದೆ. ಇದರೊಂದಿಗೆ 9 ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿದೆ.

ಮೈಸೂರು ಮಿತ್ರ ಮಂಗಳವಾರ 11 ಜುಲೈ 2023

ಗ್ರಾಮ ಪಂಚಾಯತ್ ಸದಸ್ಯನಿಂದ ನಿರಾಶ್ರಿತರ ನಿವೇಶನ ಕಬಳಿಕೆ ಆರೋಪ

ಕೃತ್ಯ ಖಂಡಿಸಿ ಸಂತ್ರಸ್ತರಿಂದ ಪ್ರತಿಭಟನೆ



ಮೈಸೂರು,ಜು.10– ಮೈಸೂರಿನ ತಿ.ನರಸೀಪುರದ ನುಗ್ಗನಹಳ್ಳಿಕೊಪ್ಪಲು ಗ್ರಾಮದಲ್ಲಿ ನಿರಾಶ್ರಿತರಿಗೆ ಸರ್ಕಾರ ನೀಡಿದ್ದ ನಿವೇಶನ ಕಬಳಿಸಿರುವ ಗ್ರಾಮ ಪಂಚಾಯಿತಿ ಸದಸ್ಯನ ವಿರುದ್ಧ ನಾಗರಿಕ ಹಕ್ಕು ರಕ್ಷಣಾ ಸಮಿತಿಯವರು ಮೈಸೂರಿನ ಜಿಲ್ಲಾ ಪಂಚಾಯತ್ ಕಚೇರಿ ಮುಂದೆ ಸೋಮವಾರ ಪ್ರತಿಭಟನೆ ನಡೆಸಿದರು.

ನುಗ್ಗನಹಳ್ಳಿಕೊಪ್ಪಲು ಗ್ರಾಮದ ಕಮಲಮ್ಮ ಎಂಬುವರಿಗೆ ಸರ್ಕಾರ ನಿವೇಶನ ನೀಡಿತ್ತು. ಈ ನಿವೇಶನದಲ್ಲಿ ಗುಡಿಸಲು ನಿರ್ಮಾಣ ಮಾಡಿ ಕಮಲಮ್ಮ ವಾಸ ಮಾಡುತ್ತಿದ್ದರು. ಅವರು ಮೃತರಾದ ನಂತರ ಅವರ ಮಗ ಸುರೇಶ ಆ ಗುಡಿಸಲಲ್ಲಿ ವಾಸ ಮಾಡಲು ಗ್ರಾಮ ಪಂಚಾಯಿತಿ ಸದಸ್ಯ ನಿಂಗೇಗೌಡ ತಡೆದಿದ್ದಾನೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಗುಡಿಸಲು ನೆಲಸಮ ಮಾಡಿ ಸುತ್ತಲು ಇದ್ದ ಬೆಲೆಬಾಳುವ ಮರಗಳನ್ನು ಕಡಿದು ಹಾಕಿದ್ದಾರೆ. ಅಷ್ಟೇ ಅಲ್ಲದೆ ತನ್ನ ಪ್ರಭಾವ ಬಳಸಿರುವ ನಿಂಗೇಗೌಡ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಕಮಲಮ್ಮ ಅವರ ಆಸ್ತಿ ದಾಖಲೆ ನಾಶ ಮಾಡಿ ತಮ್ಮ ಹೆಸರು ಸೇರಿಸಿಕೊಂಡಿದ್ದಾನೆ ಎಂದು ಪ್ರತಿಭಟನಾಕಾರರು ದೂರಿದರು.

ಸರ್ಕಾರ ನೀಡಿರುವ ನಿವೇಶನವನ್ನು ಬಡವರಿಗೆ ದೊರಕಿಸಿಕೊಡಬೇಕು. ಜೊತೆಗೆ ಸರ್ಕಾರದಿಂದ ಅನುದಾನ ನೀಡಿ ಮನೆ ನಿರ್ಮಾಣ ಮಾಡಿಕೊಡಬೇಕೆಂದು ಒತ್ತಾಯಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಮನವಿ ಸಲ್ಲಿಸಿದ ಸಮಿತಿಯವರು, ಕೂಡಲೇ ನ್ಯಾಯ ದೊರಕಿಸಿಕೊಡದಿದ್ದರೆ ತೀವ್ರ ರೀತಿಯ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದರು.

ನಾಗರಿಕ ಹಕ್ಕು ರಕ್ಷಣಾ ಸಮಿತಿ ಅಧ್ಯಕ್ಷ ಗೋವಿಂದರಾಜು, ಉಪಾಧ್ಯಕ್ಷೆ ಇಂದ್ರಮ್ಮ, ಕಾರ್ಯದರ್ಶಿ ಸ್ವಾಮಿ, ಪುಟ್ಟಮಾದಯ್ಯ, ಸತೀಶ, ರಾಜಮ್ಮ, ಭಾಗ್ಯಮ್ಮ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ದಾನಿಗಳು ದಯಪಾಲಿಸಿದರೆ ನಿರಾಶ್ರಿತರಿಗೆ ಒಂದೊತ್ತಿನ ಊಟ!

ಮೈಸೂರು, ಜು.10(ಎಂಕೆ)– ನಿರಾಶ್ರಿತರಿಗೆ ಆಶ್ರಯ ನೀಡುವಲ್ಲಿ ವಿಫಲವಾಗಿರುವ ಮೈಸೂರು ನಗರ ಪಾಲಿಕೆ, ಇರುವ ಒಂದೇ ಒಂದು 'ನಗರ ವಸತಿ ರಹಿತರ ಆಶ್ರಯ ಕೇಂದ್ರ' ನಿರ್ವಹಿಸುವಲ್ಲಿಯೂ ಹೆಣಗಾಡುತ್ತಿದೆ.

ಮೈಸೂರಿನ ಶೇಷಾದ್ರಿ ಅಯ್ಯರ್ ರಸ್ತೆಯಲ್ಲಿರುವ ಪಾಲಿಕೆಯ ಆಶ್ರಯ ಕೇಂದ್ರ ಇದ್ದರೂ ಇಲ್ಲದಂತಹ ಪರಿಸ್ಥಿತಿಯಲ್ಲಿ ನಿರ್ವಹಣೆಯಾಗುತ್ತಿದೆ. 30–40 ಮಂದಿ ನಿರಾಶ್ರಿತರು ಪ್ರತಿದಿನ ಆಶ್ರಯ ಪಡೆದಿದ್ದು, ಒಂದೊತ್ತಿನ ಊಟದ ವ್ಯವಸ್ಥೆಯೂ ಇಲ್ಲದಂತಾಗಿದೆ. ಪ್ರತಿನಿತ್ಯ ರಾತ್ರಿ ಯಾರಾದರೂ ದಾನಿಗಳು ಊಟದ ವ್ಯವಸ್ಥೆ ಮಾಡಿಕೊಡುತ್ತಾರೆಯೇ ಎಂದು ಚಾತಕ ಪಕ್ಷಿಯಂತೆ ಕಾಯುವ ದುಸ್ಥಿತಿ ಇದೆ.

ಡೇ–ನಲ್ಮ್(ದೀನ್ ದಯಾಳ್ ಅಂತ್ಯೋದಯ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ) ಮಾರ್ಗಸೂಚಿಯನ್ವಯ ಆಶ್ರಯ ಕೇಂದ್ರಗಳಲ್ಲಿ ಒಂದು ಹೊತ್ತು ಉಚಿತ ಊಟದ ವ್ಯವಸ್ಥೆ ಮಾಡಬೇಕು ಎಂದು ತಿಳಿಸಲಾಗಿದೆ. ಆದರೆ ಕೊರೊನಾ ಲಾಕ್‌ಡೌನ್‌ನಿಂದ ನಂತರದಿಂದ ಇಲ್ಲಿಯವರೆಗೆ ಪಾಲಿಕೆಯ ಆಶ್ರಯ ಕೇಂದ್ರದಲ್ಲಿ ಉಚಿತ ಊಟದ ವ್ಯವಸ್ಥೆ ಕಲ್ಪಿಸಿಲ್ಲ. ಯಾರಾದರೂ ದಾನಿಗಳು ಊಟದ ವ್ಯವಸ್ಥೆ ಮಾಡಿಕೊಟ್ಟರಷ್ಟೇ ನಿರಾಶ್ರಿತ ಹೊಟ್ಟೆ ತುಂಬಲಿದ್ದು, ದಾನಿಗಳು ಕೈಬಿಟ್ಟರೆ ಖಾಲಿ ಹೊಟ್ಟೆಯಲ್ಲೇ ರಾತ್ರಿ ಕಳೆಯುವ ಅನಿವಾರ್ಯತೆ ಇದೆ.

ಕೊರೊನಾ ಲಾಕ್‌ಡೌನ್ ಸಂದರ್ಭದಲ್ಲಿ ಖಾಸಗಿ ಹೋಟೆಲ್‌ನಿಂದ ಊಟದ ವ್ಯವಸ್ಥೆ ಮಾಡಲಾಗಿತ್ತು. ಒಂದು ಊಟಕ್ಕೆ 33 ರೂ.ನಂತೆ ಬೆಳಗ್ಗೆ ತಿಂಡಿ, ಮಧ್ಯಾಹ್ನ ಹಾಗೂ ರಾತ್ರಿ ಊಟವನ್ನು 2021ರ ಜೂ.1ರಿಂದ ಜು.5ರವರೆಗೆ ನೀಡಿದ್ದು, ಅದರ 1,21,275 ರೂ. ಬಿಲ್ ಪಾವತಿಯಾಗದೆ ಬಾಕಿ ಉಳಿದಿದೆ. ಹಾಗೆಯೇ ಮತ್ತೊಂದು ಖಾಸಗಿ ಹೋಟೆಲ್‌ನಿಂದ 2021ರ ಜು.7ರಿಂದ 2022ರ ಮಾ.5ರವರೆಗೆ ರಾತ್ರಿ ಊಟದ ವ್ಯವಸ್ಥೆ ಮಾಡಿದ್ದು, ಅದರ 91,125 ರೂ. ಬಿಲ್ ಇನ್ನೂ ಪಾವತಿಯಾಗಿಲ್ಲ. ಸ್ಥಗಿತಗೊಳಿಸಿದ್ದ ರಾತ್ರಿ ವೇಳೆಯ ಊಟದ ವ್ಯವಸ್ಥೆಯನ್ನು ಮತ್ತೆ ಆರಂಭಿಸುವಂತೆ ಎನ್‌ಜಿಒ ಸಂಸ್ಥೆ ಹಾಗೂ ನಿರಾಶ್ರಿತರು ಪಾಲಿಕೆಗೆ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ.

ಮೈಸೂರು ಪಾಲಿಕೆಯ ನಿರಾಶ್ರಿತ ತಾಣದ ದಯನೀಯ ಸ್ಥಿತಿ



ನಿರ್ವಹಣೆ ವೆಚ್ಚ, ಸಂಬಳವಿಲ್ಲ: ಕಳೆದೊಂದು ವರ್ಷದಿಂದ ಆಶ್ರಯ ಕೇಂದ್ರದ ನಿರ್ವಹಣಾ ವೆಚ್ಚ ಹಾಗೂ ಸಿಬ್ಬಂದಿಯ ಸಂಬಳ ಪಾವತಿಯಾಗಿಲ್ಲ. ತಿಂಗಳಿಗೆ ಆಶ್ರಯ ಕೇಂದ್ರದ ನಿರ್ವಹಣೆ ಹಾಗೂ ಸಿಬ್ಬಂದಿಗೆ ನೀಡುವ ಗೌರವ ಧನ ಸೇರಿ ಒಟ್ಟು 58,101 ರೂ.ವೆಚ್ಚ ತಗುಲಿದ್ದು, ಕಳೆದ 13 ತಿಂಗಳಿಂದ ಪಾವತಿಯಾಗಿಲ್ಲ. ಎನ್‌ಜಿಒ ಸಂಸ್ಥೆಯಿಂದ ನಿರ್ವಹಣೆ ನಡೆಯುತ್ತಿದ್ದು, ನಿರಾಶ್ರಿತರಿಗೆ ಒಂದೊತ್ತು ನೀಡುವ ಊಟ ಇಲ್ಲದಂತಾಗಿದೆ.

ಖಂಡನೆ: ಇರುವ ಒಂದೇ ಒಂದು ಆಶ್ರಯ ಕೇಂದ್ರವನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡದ ಮೈಸೂರು ಪಾಲಿಕೆ, ಗೋಕುಲಂ 4ನೇ ಹಂತದಲ್ಲಿರುವ ಗುರುದ್ವಾರ ಸಮುದಾಯ ಭವನ ಮತ್ತು ನಜರ್‌ಬಾದ್‌ನಲ್ಲಿರುವ ನಿರಾಶ್ರಿತರ ಕೇಂದ್ರ(ನಿರಾಶ್ರಿತ ಮಹಿಳೆಯರಿಗೆ), ಜಯನಗರದಲ್ಲಿ ಬಸವಯ್ಯ ಸಮುದಾಯ ಭವನ ಹಾಗೂ ಸಿದ್ದಾರ್ಥ ಬಡಾವಣೆಯಲ್ಲಿರುವ ಸಿಐಟಿಬಿ ಸಮುದಾಯ ಭವನ (ಪುರುಷರಿಗೆ)ದಲ್ಲಿ ಹೊಸದಾಗಿ ಆಶ್ರಯ ಕೇಂದ್ರಗಳನ್ನು ತೆರೆಯಲು ನಿರ್ಧರಿಸಿದ್ದು, ಅವೆಲ್ಲಾ ಇನ್ಯಾವ ಮಟ್ಟದಲ್ಲಿ ನಿರ್ವಹಣೆಯಾಗಲಿಯೋ ಎಂದು ಮೈಸೂರಿನ ಪ್ರಜ್ಞಾವಂತ ನಾಗರಿಕರು ವ್ಯಂಗ್ಯವಾಡಿದ್ದಾರೆ.

ವಿದುಷಿ ಎಂ.ಸಿ.ನಾಗಲಕ್ಷ್ಮಿ ಅವರಿಗೆ ಗುರುವಂದನೆ



ಮೈಸೂರು,ಜು.10–ಆಧ್ಯಾತ್ಮಿಕ ಹಾಗೂ ಧಾರ್ಮಿಕ ಗುರುಗಳಾದ ವಿದುಷಿ ಶ್ರೀಮತಿ ಎಂ.ಸಿ.ನಾಗಲಕ್ಷ್ಮಿ ಚಂದ್ರಶೇಖರ್ ಅವರಿಗೆ ಶಿಷ್ಯ ಸಮೂಹ ಗುರುವಂದನಾ ಕಾರ್ಯಕ್ರಮ ಹಾಗೂ ಪ್ರವಚನದ ರಚಿತ ಮಹೋತ್ಸವ ಆಚರಣೆಯನ್ನು ರಾಮಕೃಷ್ಣನಗರದ ಕೆ ಬ್ಲಾಕ್‌ನಲ್ಲಿರುವ ಗಣಪತಿ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಯಿತು.

ಅನ್ನದಾನಕ್ಕಿಂತ ವಿದ್ಯಾದಾನವು ಸ್ಮರಣೀಯ, ಅನ್ನದಾನ ಒಂದು ಹೊತ್ತಿನ ಹಸಿವನ್ನು ಇಂಗಿಸಿದರೆ ವಿದ್ಯಾದಾನ ವ್ಯಕ್ತಿಯ ಭವಿಷ್ಯವನ್ನು ರೂಪಿಸಿ ಜೀವನವಿಡೀ ಕಾಪಾಡಲಿದೆ ಎಂದು ನಿವೃತ್ತ ಪ್ರಾಂಶುಪಾಲರು ಹಾಗೂ ಯೋಗಾನಂದೇಶ್ವರ ಮಠದ ಆಡಳಿತಾಧಿಕಾರಿ ಹೇರಂಭ ರಾಯರು ಹೇಳಿದರು. ಪ್ರತಿಯೊಬ್ಬರಿಗೂ ಶಿಕ್ಷಣ ಅತ್ಯಗತ್ಯ. ಶಿಕ್ಷಕರಿಂದ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯವಿದೆ. ವಿದುಷಿ ಎಂ.ಸಿ.ನಾಗಲಕ್ಷ್ಮಿ ಚಂದ್ರಶೇಖರ್ ಗುರುವಂದನಾ ಕಾರ್ಯಕ್ರಮವು ಅವರ ಜೀವನೋತ್ಸಾಹ ತುಂಬಲಿದೆ ಎಂದರು.

ಕಾರ್ಯಕ್ರಮದಲ್ಲಿ ವೇದ ಬಳಗದ ಮುಖ್ಯಸ್ಥ ಅನಂತಜೋಷಿ, ಶಿಷ್ಯೆಯರಾದ ತ್ರಿಪುರ, ಸುಮಾ ಹಾಗೂ ಅಪಾರ ಶಿಷ್ಯ ಬಳಗದವರು ಭಾಗವಹಿಸಿದ್ದರು.

ವಿದ್ಯುತ್ ಕೈಮಗ್ಗ ನೇಕಾರರ ಜನಗಣತಿ

ಮೈಸೂರು,ಜು.10–ಸರ್ಕಾರದಿಂದ ವಿದ್ಯುತ್ ಮಗ್ಗ ವಲಯಕ್ಕೆ ಇಲ್ಲಿವರೆಗೆ ಜಾರಿ ಮಾಡಿರುವ ಯೋಜನೆಗಳು ನೇಕಾರರ ಮೇಲೆ ಯಾವ ರೀತಿ ಸಾಮಾಜಿಕ ಹಾಗೂ ಆರ್ಥಿಕ ಪರಿಣಾಮಗಳನ್ನುಂಟು ಮಾಡಿದೆ. ಅಸಂಘಟಿತ ವಿದ್ಯುತ್ ಮಗ್ಗ ವಲಯವು ಎಷ್ಟು ಪ್ರಮಾಣದ ಬಟ್ಟೆ ಉತ್ಪಾದನೆ ಮಾಡುತ್ತಿದೆ ಹಾಗೂ ವಿದ್ಯುತ್ ಮಗ್ಗ ಪೂರ್ವ ಚಟುವಟಿಕೆಗಳಲ್ಲಿ ಎಷ್ಟು ನೇಕಾರರು, ಕಾರ್ಮಿಕರು ತೊಡಗಿರುತ್ತಾರೆಂದು ತಿಳಿಯಲು ವಿದ್ಯುತ್ ಮಗ್ಗಗಳ ಗಣತಿ ಅಗತ್ಯವಾಗಿದೆ. ರಾಜ್ಯದಲ್ಲಿನ ವಿದ್ಯುತ್ ಮಗ್ಗ ನೇಕಾರರ, ಮಗ್ಗ ಪೂರ್ವ ಚಟುವಟಿಕೆಗಳಾದ ರೀಲಿಂಗ್, ಟ್ವಿಸ್ಟಿಂಗ್‌ನಲ್ಲಿ ತೊಡಗಿರುವ ನೇಕಾರರ ಗಣತಿಯನ್ನು ಉತ್ತರಪ್ರದೇಶದ ಲಕ್ನೋದಲ್ಲಿನ ಮೇ. ಅಕಾಡೆಮಿ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಅವರಿಂದ ಕೈಗೊಂಡಿದ್ದು ಸದರಿ ರೀಲಿಂಗ್, ಟ್ವಿಸ್ಟಿಂಗ್ ಮತ್ತು ವಿದ್ಯುತ್ ಮಗ್ಗ ನೇಕಾರರ ಕಾರ್ಮಿಕರ ಗಣತಿ ಕಾರ್ಯವನ್ನು ಜುಲೈ 2023ರ ಮಾಹೆಯ ಅಂತ್ಯದವರೆಗೆ ಮುಂದುವರಿಸಿದೆ. ಸದರಿ ಗಣತಿ ಕಾರ್ಯದಲ್ಲಿ ವಿದ್ಯುತ್ ಮಗ್ಗ ಘಟಕ, ರೀಲಿಂಗ್ ಟ್ವಿಸ್ಟಿಂಗ್ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು ಇದರ ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಲಾಗಿದೆ. ಮಾಹಿತಿಗೆ ಜಿಪಂನಲ್ಲಿರುವ ಕೈಮಗ್ಗ ಮತ್ತು ಜವಳಿ ಇಲಾಖೆ ಉಪನಿರ್ದೇಶಕರ ಕಚೇರಿ ಅಥವಾ ದೂ.ಸಂ:0821–2441353 ಸಂಪರ್ಕಿಸಬಹುದು.

ಪುನೀತ್ ಹಾಡಿರುವ 'ಅಪರೂಪ' ಚಿತ್ರ ಜು.14ರಂದು ತೆರೆಗೆ



ಮೈಸೂರು,ಜು.10(ಪಿಎಂ)– 'ಅಪರೂಪ' ಕನ್ನಡ ಸಿನಿಮಾ ಜು.14ರಂದು ತೆರೆ ಕಾಣಲಿದೆ ಎಂದು ಸಿನಿಮಾದ ನಿರ್ದೇಶಕ ಮಹೇಶ್ ಬಾಬು ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಹಂನಿಂದ ಎದುರಾಗುವ ಸಮಸ್ಯೆಗಳ ಕುರಿತ ಕಥಾಹಂದರ ಈ ಸಿನಿಮಾದಲ್ಲಿದೆ. 2020ರಲ್ಲಿ ಚಿತ್ರದ ಚಿತ್ರೀಕರಣ ಪ್ರಾರಂಭಿಸಲಾಯಿತು. ಕೋವಿಡ್ ಹಾಗೂ ಅನೇಕ ಕಾರಣಗಳಿಗೆ ಚಿತ್ರ ಅಂತಿಮ ರೂಪಕ್ಕೆ ಬರುವುದು ತಡವಾಯಿತು ಎಂದರು.

ಈ ಸಿನಿಮಾದಲ್ಲಿ ದಿವಂಗತ ಪುನೀತ್ ರಾಜ್‌ಕುಮಾರ್ ಅವರು ಒಂದು ಹಾಡನ್ನು ಹಾಡಿರುವುದು ವಿಶೇಷ. ಬಹುತೇಕ ಬೆಂಗಳೂರಿನಲ್ಲಿ ಚಿತ್ರೀಕರಣ ಮಾಡಿದ್ದರೆ, ಉಳಿದಂತೆ ಮೈಸೂರು, ಚಿಕ್ಕಮಗಳೂರು ಹಾಗೂ ಕಾಶ್ಮೀರದಲ್ಲಿ ಚಿತ್ರೀಕರಿಸಲಾಗಿದೆ. ರಾಜ್ಯದ 100ಕ್ಕೂ ಹೆಚ್ಚು ಚಿತ್ರಮಂದಿರದಲ್ಲಿ ಸಿನಿಮಾ ಬಿಡುಗಡೆಯಾಗಲಿದೆ ಎಂದರು. ನಾಯಕ ನಟ ಸುಘೋಷ್, ನಾಯಕ ನಟಿ ಹೃತಿಕಾ ಮತ್ತಿತರರು ಸುದ್ದಿಗೋಷ್ಠಿಯಲ್ಲಿದ್ದರು.

ಅಪರಿಚಿತ ಶವ ಪತ್ತೆ

ಮೈಸೂರು, ಜು.10– ಜು.5ರಂದು ನಗರದಲ್ಲಿನ ರೈಲ್ವೆ ಗೋಡೌನ್‌ನ, ರೈಲ್ವೆ ನಿಲ್ದಾಣದ ಟ್ರ್ಯಾಕ್ ಹತ್ತಿರ ಸುಮಾರು 35ರಿಂದ 40 ವರ್ಷದ ಅಪರಿಚಿತ ಗಂಡಸು ಮೃತಪಟ್ಟಿದ್ದು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

ಸುಮಾರು 5.6 ಅಡಿ ಎತ್ತರವಿರುವ ಈ ವ್ಯಕ್ತಿಯು ಗೋಧಿ ಮೈಬಣ್ಣ, ಕೋಲು ಮುಖ ಹಾಗೂ ಸಾಧಾರಣ ಶರೀರವನ್ನು ಹೊಂದಿದ್ದಾರೆ. ತಲೆಯಲ್ಲಿ 1 1/2 ಇಂಚು ಕಪ್ಪು ಕೂದಲು ಇದ್ದು, ಗಡ್ಡ–ಮೀಸೆ ಬಿಟ್ಟಿರುತ್ತಾರೆ. ತಿಳಿ ಹಸಿರು ಬಣ್ಣದ ತುಂಬು ತೋಳಿನ ಚಿತ್ರವಿರುವ ಶರ್ಟ್ ಅನ್ನು ಧರಿಸಿದ್ದು, ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಅನ್ನು ಧರಿಸಿರುತ್ತಾರೆ. ಎಡ ಎದೆಯಲ್ಲಿ ಅವ್ವ ಹಾಗೂ ಅದರ ಕೆಳಗೆ ಕವಿತಾ ಎಂಬ ಹೆಸರಿನ ಮೇಲೆ ಮಚ್ಚೆನ ಹಚ್ಚೆ ಹಾಕಿಸಿಕೊಂಡಿದ್ದು ಬಲಗೈಯಲ್ಲಿ ಬಿಳಿ ಬಣ್ಣದ ದಾರವನ್ನು ಕಟ್ಟಿರುತ್ತಾರೆ. ಮೃತನ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ಮೈಸೂರು ರೈಲ್ವೆ ಪೊಲೀಸ್ ಠಾಣೆ ದೂ.ಸಂ. 0821–2516579 ಸಂಪರ್ಕಿಸಬಹುದು.



ಭಾನುವಾರ ಹುಟ್ಟುಹಬ್ಬ ಆಚರಿಸಿಕೊಂಡ ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಅವರನ್ನು ನಿಖಿಲ್ ಕುಮಾರಸ್ವಾಮಿ ಅಭಿಮಾನಿಗಳ ಬಳಗದ ಅಧ್ಯಕ್ಷ ಪ್ರದೀಪ್, ಕೃಷ್ಣೇಗೌಡ, ನಾಗರಾಜು ಅಭಿನಂದಿಸಿ, ಶುಭ ಕೋರಿದರು.



ಮೈಸೂರಿನ ಎಂ.ಜಿ.ಹಳ್ಳಿ ರಸ್ತೆಯ ಜಂತಗಳ್ಳಿ ನಿರ್ಮಾಣನಗರದಲ್ಲಿರುವ ಕಲ್ಪವೃಕ್ಷ ಕ್ಷೇತ್ರ ಶ್ರೀ ರಾಘವೇಂದ್ರಸ್ವಾಮಿ ಮಠದ ಆವರಣದಲ್ಲಿ ಭಾನುವಾರದಂದು ನೂತನವಾಗಿ ನಿರ್ಮಿಸಿರುವ ಶ್ರೀ ಈಶ್ವರ, ಶ್ರೀ ಅನ್ನಪೂರ್ಣೇಶ್ವರಿ, ಶೇಷದೇವರು, ಗಣಪತಿ ಹಾಗೂ ನವಗ್ರಹ ದೇವತೆಗಳ ಪ್ರತಿಷ್ಠಾಪನಾ ಮಹೋತ್ಸವ ಸೋಮವಾರ ಜರುಗಿತು.

ಜು.15, ಉಚಿತ ಮೆಗಾ ಆರೋಗ್ಯ ತಪಾಸಣಾ ಶಿಬಿರ



ಮೈಸೂರು,ಜು.10–ಸೂಫಿ ಸಂತ ಹಜ಼ರತ್ ಮೌಲಾನಾ ಮೊಹಮ್ಮದ್ ಸಲ್ಮಾನ್ ಸಾಹೇಬ್ ಮಿಸ್ಬಾಹಿ ಚಿಸ್ತಿ ಖಾದ್ರಿ, ಸಂಸ್ಥಾಪಕರು, ದಾರುಲ್ ಉಲೂಮ್ ಅಜೀಜ಼ಿಯಾ, ಮಾಂಬಳ್ಳಿ ಮತ್ತು ಅಜೀಜ಼ಿಯಾ ಎಜುಕೇಷನಲ್ ಟ್ರಸ್ಟ್, ಮೈಸೂರು ಇವರ 19ನೇ ವಾರ್ಷಿಕ ಗಂಧದ ಉರುಸ್ ಷರೀಫ್ ಅಂಗವಾಗಿ ಅಜೀಜ಼ಿಯಾ ಎಜುಕೇಷನಲ್ ಟ್ರಸ್ಟ್ ಮತ್ತು ಆಸ್ಥಾನ ಸಲ್ಮಾನಿಯ ದರ್ಗಾ ಕಮಿಟಿ ಜಂಟಿ ಆಶ್ರಯದಲ್ಲಿ ಜು.15ರಂದು ಬೆಳಗ್ಗೆ 10ರಿಂದ ಸಂಜೆ 5ರವರೆಗೆ, ಅಜೀಜ಼ಿಯಾ ಹಿರಿಯ ಪ್ರಾಥಮಿಕ, ಪ್ರೌಢಶಾಲೆ, ಸಿ.ಎ. ನಿವೇಶನ ಸಂಖ್ಯೆ 2, ಕೆ.ಹೆಚ್.ಬಿ. ಕಾಲೋನಿ, ವಾಟರ್ ಟ್ಯಾಂಕ್ ಹತ್ತಿರ, ಕಲ್ಯಾಣಗಿರಿ, ಮೈಸೂರು ಇಲ್ಲಿ ಉಚಿತ ಮೆಗಾ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ತಪಾಸಣಾ ಶಿಬಿರದಲ್ಲಿ ಜನರಲ್ ಫಿಸಿಷಿಯನ್, ಜನರಲ್ ಲ್ಯಾಪರೋಸ್ಕೋಪಿಕ್ & ಲೇಸರ್ ಸರ್ಜನ್, ಆರ್ಥೋಪೆಡಿಕ್ ಸರ್ಜನ್, ಪ್ರಸೂತಿ & ಸ್ತ್ರೀರೋಗ ತಜ್ಞರು, ಫರ್ಟಿಲಿಟಿ ತಜ್ಞರು, ಮಕ್ಕಳ ತಜ್ಞರು ಲಭ್ಯವಿರುತ್ತಾರೆ. ಹೆಚ್ಚಿನ ವಿವರಗಳಿಗೆ ಮೊ.ಸಂ 9620153213, ದೂ.ಸಂ. 0821–2457786 ಸಂಪರ್ಕಿಸಿ.



ರೋಟರಿ ಮೈಸೂರು ಉತ್ತರ 2023–24ರ ಸಾಲಿನ ನೂತನ ತಂಡದ ಪದಾಧಿಕಾರಿಗಳ ಪದಗ್ರಹಣ ನಡೆಯಿತು. ಈ ವೇಳೆ ರಾಜು (ಕಾರ್ಯದರ್ಶಿ), ಎಂ.ಕೆ.ಶ್ರೀಧರ್ (ಅಧ್ಯಕ್ಷ), ಎಂ.ಕೆ.ನಂಜಯ್ಯ (ಸಹಾಯಕ ಗವರ್ನರ್), ಪಿಡಿಜಿ ನಾಗೇಶ್, ಜಗದೀಶ್ (ನಿರ್ಗಮಿತ ಅಧ್ಯಕ್ಷ), ಲೋಕನಾಥ್ (ನಿರ್ಗಮಿತ ಕಾರ್ಯದರ್ಶಿ), ರಾಜಶೇಖರ ಕದಂಬ, ಹೆಚ್.ಎಸ್.ಪ್ರಕಾಶ್, ಎಂ.ಜೆ.ಸ್ವಾಮಿ, ವೀರರಾಜೇಂದ್ರ, ಪ್ರಭಾಕರ್, ನರಸೀಗೌಡ, ಕೆಂಪೇಗೌಡ, ಪುಟ್ಟಬಸಪ್ಪ, ಎಂ.ರಾಜು, ವಿರೂಪಾಕ್ಷ, ಶಿವಕುಮಾರ್ ಇದ್ದಾರೆ.

ರಾಜಸ್ಥಾನ ಮೂಲದ ವ್ಯಕ್ತಿ ಸೆರೆ: 2 ಲಕ್ಷ ಮೌಲ್ಯದ ಮಾದಕ ವಸ್ತು ವಶ

ಮೈಸೂರು,ಜು.10(ಆರ್‌ಕೆ)– ರಾಜಸ್ಥಾನ ಮೂಲದ ವ್ಯಕ್ತಿಯನ್ನು ಬಂಧಿಸಿರುವ ಸೆನ್ ಠಾಣೆ ಪೊಲೀಸರು, 2 ಲಕ್ಷ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.


ಜು.7ರಂದು ಮಧ್ಯಾಹ್ನ 1 ಗಂಟೆಯಲ್ಲಿ ನಜರ್‌ಬಾದ್ ಸರ್ಕಾರಿ ಅತಿಥಿ ಗೃಹದ ರಸ್ತೆಯಲ್ಲಿ ದೇವರಾಜ ಉಪ ವಿಭಾಗದ ಎಸಿಪಿ ಶಾಂತಮಲ್ಲಪ್ಪ, ಸಿಇಎನ್ ಠಾಣೆ ಅಧಿಕಾರಿಗಳಿದ್ದ ವಾಹನ ಕಂಡು ಓಡಿ ಹೋಗಲು ಯತ್ನಿಸಿದಾಗ, ಬೆನ್ನತ್ತಿ ಆತನನ್ನು ಹಿಡಿದಿದ್ದರು.

ಠಾಣೆಗೆ ಕರೆತಂದು ವಿಚಾರಣೆ ನಡೆಸಿದಾಗ ರಾಜಸ್ಥಾನ ಮೂಲದ ಆ ವ್ಯಕ್ತಿ ಬಳಿ 2 ಲಕ್ಷ ರೂ. ಮೌಲ್ಯದ 1 ಗ್ರಾಂ 28 ಮಿಲಿ ಎಂಡಿಎಂಎ ಮಾದಕ ವಸ್ತು ಹಾಗೂ 85 ಗ್ರಾಂ 28 ಮಿಲಿ ಅಫೀಮು ಇರುವುದು ಪತ್ತೆಯಾಯಿತು. ಪ್ರಕರಣ ದಾಖಲಿಸಿಕೊಂಡು ಆತನನ್ನು ಬಂಧಿಸಿದ ಪೊಲೀಸರು ಮಾದಕ ವಸ್ತುಗಳನ್ನು ವಶಪಡಿಸಿಕೊಂಡರು.

ಡಿಸಿಪಿ ಎಂ.ಮುತ್ತುರಾಜ್ ಮಾರ್ಗದರ್ಶನದಂತೆ ಎಸಿಪಿ ಶಾಂತಮಲ್ಲಪ್ಪ ನೇತೃತ್ವದಲ್ಲಿ ಸಿಇಎನ್. ಠಾಣೆ ಇನ್ಸ್‌ಪೆಕ್ಟರ್ ಎನ್.ಜಯಕುಮಾರ್, ಸಬ್‌ಇನ್ಸ್‌ಪೆಕ್ಟರ್‌ಗಳಾದ ಎನ್.ಅನಿಲ್‌ಕುಮಾರ್, ಸಿದ್ದೇಶ್ ಹಾಗೂ ಸಿಬ್ಬಂದಿಗಳು ಪತ್ತೆ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

ನಿಧನ

ಎಸ್.ಸೋಮಶೇಖರ್



ಮೈಸೂರು, ಜು. 10–ಮೈಸೂರಿನ ರಾಘವೇಂದ್ರನಗರದ ನ್ಯೂಸ್ ಪೇಪರ್ ಏಜೆಂಟ್ ಎಸ್.ಸೋಮಶೇಖರ್ (47) ಜು.7ರಂದು ನಿಧನರಾದರು. ಮೃತರು ತಂದೆ, ತಾಯಿ, ಅಣ್ಣ, ತಂಗಿ, ಮಗ, ಮಗಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಜು.7ರಂದು ಚಾಮುಂಡಿಬೆಟ್ಟದತಪ್ಪಲಿನ ರುದ್ರ ಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಬಲಿಗಾಗಿ ಕಾಯುತ್ತಿವೆ ರಸ್ತೆಯ ಹಾಳಾದ ಮ್ಯಾನ್‌ಹೋಲ್

● ಬಿ.ಎನ್.ರಸ್ತೆ ಹಳ್ಳದಕೇರಿ ಜಂಕ್ಷನ್ ಸಮೀಪ ಬಾಯ್ತೆರೆದಿವೆ ● ಗುಂಡಿ ತಪ್ಪಿಸಲು ಹೋಗಿ ಅಪಘಾತಕ್ಕೀಡಾದ ನಾಲ್ಕೈದು ಬೈಕ್‌ಗಳು



ಮೈಸೂರು, ಜು. 10 (ಎಂಟಿವೈ)– ಮೈಸೂರು–ನೀಲಗಿರಿ ರಸ್ತೆಯಲ್ಲಿ ಗ್ರಾಮಾಂತರ ಬಸ್ ನಿಲ್ದಾಣದ ಸಮೀಪ ಹಳ್ಳದಕೇರಿ ಜಂಕ್ಷನ್ ಮುಖ್ಯ ರಸ್ತೆಯ ಮಧ್ಯಭಾಗದಲ್ಲೇ ಒಳಚರಂಡಿಯ ಮ್ಯಾನ್‌ಹೋಲ್ ಬಾಯಿ ತೆರೆದಿದ್ದು, ಅನಾಹುತ ಸಂಭವಿಸುವ ಮುನ್ನವೇ ದುರಸ್ತಿಪಡಿಸುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

ಹಾರ್ಡಿಂಜ್ ವೃತ್ತದಿಂದ ಸಬರ್ಬನ್ ಬಸ್ ನಿಲ್ದಾಣಕ್ಕೆ ಹೋಗುವ ರಸ್ತೆಯ ಮಧ್ಯಭಾಗದಲ್ಲೇ ಕಳೆದ 3–4 ದಿನದಿಂದ ಮ್ಯಾನ್‌ಹೋಲ್‌ನ ಮುಚ್ಚಳ ಮುರಿದು ಬಾಯ್ತೆರೆದು ಬಲಿಗಾಗಿ ಕಾಯುತ್ತಿರುವಂತೆ ಭಾಸವಾಗುತ್ತಿದೆ. ಪ್ರತಿದಿನ ನೂರಾರು ಬಸ್ ಸೇರಿದಂತೆ ಅಪಾರ ಸಂಖ್ಯೆಯ ವಾಹನಗಳು ಸಂಚರಿಸುವ ಈ ರಸ್ತೆಯಲ್ಲಿ ಒಳಚರಂಡಿ ಮ್ಯಾನ್‌ಹೋಲ್ ಮುಚ್ಚಳ ಸರಿ ಮಾಡದಿರುವುದು ಟೀಕೆಗೆ ಗುರಿಯಾಗಿದೆ.

ಹೊಂಡದಂತೆ ಬಾಯ್ತೆರೆದು ಇರುವ ಮ್ಯಾನ್‌ಹೋಲ್ ಗುಂಡಿಯ ಬಾಯಿಯನ್ನು ಕಂಡ ದ್ವಿಚಕ್ರ ವಾಹನ ಸವಾರರು ಗುಂಡಿ ತಪ್ಪಿಸಲು ಹೋಗಿ, ಕೆಳಕ್ಕೆ ಬಿದ್ದಿದ್ದಾರೆ. ಬೆಳಗ್ಗಿನಿಂದ ಮಧ್ಯಾಹ್ನದವರೆಗೆ ಐದಾರು ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯ ಮಾಡಿಕೊಂಡ ಹಿನ್ನೆಲೆಯಲ್ಲಿ ಸ್ಥಳೀಯರು ಬಾಯ್ತೆರೆದಿರುವ ಮ್ಯಾನ್‌ಹೋಲ್ ಗುಂಡಿಯ ಸುತ್ತ ಕಲ್ಲನ್ನು ಇಟ್ಟು ವಾಹನ ಸವಾರರ ಗಮನ ಸೆಳೆಯುವ ಪ್ರಯತ್ನ ಮಾಡಿದ್ದಾರೆ. ಆದರೆ, ರಾತ್ರಿ ವೇಳೆ ರಸ್ತೆಯ ಮೇಲೆ ಇಟ್ಟಿರುವ ಕಲ್ಲುಗಳು ವಾಹನ ಸವಾರರಿಗೆ ಕಾಣಿಸದೆ ಅಪಘಾತ ಸಂಭವಿಸುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಕೂಡಲೇ ಮ್ಯಾನ್‌ಹೋಲ್ ಗುಂಡಿ ಸರಿಪಡಿಸುವಂತೆ ಸ್ಥಳೀಯರು ಮನವಿ ಮಾಡಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

11.7.2023 ಮಂಗಳವಾರ, ಮಳೆ ನಕ್ಷತ್ರ: ಪುನರ್ವಸು 06.07.2023ರಿಂದ 19.07.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ, ತಿಥಿ: ನವಮಿ, ನಕ್ಷತ್ರ: ಅಶ್ವಿನಿ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

■ **ಭಾವಸಾರ ಕ್ಷತ್ರಿಯ ಸಂಘ :** 27ನೇ ವರ್ಷದ ಶ್ರೀ ಚಾಮುಂಡೇಶ್ವರಿ ಅಮ್ಮನವರ ಪೂಜಾ ಮಹೋತ್ಸವ, ಶ್ರೀ ಚಾಮುಂಡೇಶ್ವರಿ ಅಮ್ಮನವರ ಕಳಸ ಸ್ಥಾಪನೆ, ಕುಂಕುಮಾರ್ಚನೆ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ಎಲ್‌ಐಜಿ 88, ಬನ್ನಿಮಂಟಪ, ಬೆಳಗ್ಗೆ 11 ರಿಂದ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಮೂತ್ರ ವಿಕಾರಗಳ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 10 ರಿಂದ.

■ **ಬಸವ ಮಾರ್ಗ ಫೌಂಡೇಷನ್ :** ಉಚಿತ ಮದ್ಯವರ್ಜನ ಶಿಬಿರ, ಸ್ಥಳ: ನಂ. 86/1, ಶ್ರೀಮತಿ ಶ್ರೀ ಸೋನಿಕರಿಗೌಡರ ಫಾರಂ, ಶ್ರೀರಾಂಪುರ ವರ್ತುಲ ರಸ್ತೆ, ಗೊರೂರು ಗ್ರಾಮ, ಬೆಳಗ್ಗೆ 10ರಿಂದ.

■ **ಮೈಸೂರು ವಿಶ್ವವಿದ್ಯಾನಿಲಯ, ಯುಜಿಸಿ–ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ :** 50ನೇ ಕನ್ನಡ ರಿಫ್ರೆಶರ್ ಕೋರ್ಸ್, ಉದ್ಘಾಟನೆ : ಹಂಪಿ ಕನ್ನಡ ವಿಶ್ವವಿದ್ಯಾಲಯ ನಿವೃತ್ತ ಕುಲಪತಿ ಪ್ರೊ. ಎ. ಮುರಿಗೆಪ್ಪ, ಅಧ್ಯಕ್ಷತೆ : ಯುಜಿಸಿ–ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರದ ನಿರ್ದೇಶಕಿ ಪ್ರೊ. ಎಸ್.ಎಸ್. ಮಾಲಿನಿ, ಉಪಸ್ಥಿತರು : ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕ ಪ್ರೊ. ವಿಜಯಕುಮಾರಿ ಎಸ್. ಕರಿಕಲ್, ಸ್ಥಳ: ಯುಜಿಸಿ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 11.30ಕ್ಕೆ.

■ **ಮೈಸೂರು ಕನ್ನಡ ವೇದಿಕೆ :** ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತ್ಯೋತ್ಸವ, ನಾಲ್ವಡಿ ಪ್ರಶಸ್ತಿ ಪ್ರದಾನ ಸಮಾರಂಭ, ಉದ್ಘಾಟನೆ: ಸಹಾಯಕ ಪೊಲೀಸ್ ಆಯುಕ್ತ ಗಂಗಾಧರಸ್ವಾಮಿ, ಪ್ರಶಸ್ತಿ ಪ್ರದಾನ: ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ವಿವೇಕಾನಂದ, ಮುಖ್ಯ ಅತಿಥಿಗಳು: ಸಮಾಜ ಸೇವಕ ಡಾ.ಶ್ರೀಷಾ ಭಟ್, ಪ್ರಸೂತಿ ತಜ್ಞೆ ಡಾ.ರೇಖಾ ಅರುಣ್, ಅಧ್ಯಕ್ಷತೆ: ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಎಸ್. ಬಾಲಕೃಷ್ಣ, ಪ್ರಾಸ್ತಾವಿಕ ನುಡಿ: ನಾಲಾಬೀದಿ ರವಿ, ಸ್ಥಳ: ನಮನ ಕಲಾ ಮಂಟಪ, ಬೆಳಗ್ಗೆ 11.30ಕ್ಕೆ.

■ **ಲಿಂಗಾಯತಗೌಡ ಮಹಾಸಭಾ :** ಶ್ರೀ ಚಿದಾನಂದ ಸ್ವಾಮಿಗಳಿಗೆ ವಂದನಾ ಕಾರ್ಯಕ್ರಮ ಹಾಗೂ ಮೈಸೂರು ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ, ಸಾನ್ನಿಧ್ಯ : ಶ್ರೀ ಹೊಸಮಠದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಅಧ್ಯಕ್ಷತೆ : ಮಹಾಸಭಾ ರಾಜ್ಯಾಧ್ಯಕ್ಷ ಆಲನಹಳ್ಳಿ ಪುಟ್ಟಸ್ವಾಮಿ, ಮುಖ್ಯ ಭಾಷಣಕಾರರು : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಡಾ. ಎಸ್. ಶಿವರಾಜಪ್ಪ, ಸ್ಥಳ: ಶ್ರೀ ನಟರಾಜ ಸಭಾ ಭವನ, ಹೊಸಮಠ, ಸಂಜೆ 4ಕ್ಕೆ

■ **ದೇಸಿರಂಗ ಸಾಂಸ್ಕೃತಿಕ ಸಂಸ್ಥೆ, ಕನ್ನಡ–ಸಂಸ್ಕೃತಿ ನಿರ್ದೇಶನಾಲಯ:** ರಂಗ ಮತ್ತು ನೃತ್ಯ ತರಬೇತಿ ಶಿಬಿರದ ಸಮಾರೋಪ ಸಮಾರಂಭ, ನೃತ್ಯಗಳ ಉದ್ಘಾಟನೆ: ಚಿತ್ರನಟ ಮಂಡ್ಯ ರಮೇಶ್, ಸಮಾರೋಪ ನುಡಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಅಧ್ಯಕ್ಷತೆ: ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಕನ್ನಡ ವಿಭಾಗದ ಮುಖ್ಯಸ್ಥ ಡಾ.ಗೋವಿಂದೇಗೌಡ, ಶಿಬಿರದ ನಿರ್ದೇಶಕ ಕೃಷ್ಣ ಜನಮನ, ಸ್ಥಳ: ಕಿರುರಂಗ ಮಂದಿರ, ಕಲಾಮಂದಿರದ ಆವರಣ, ಸಂಜೆ 6ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಶ್ರದ್ಧೆಯ ಶಿಲ್ಪ–ಮೈಸೂರು ಸುತ್ತಲಿನ ದೇಗುಲಗಳ ಪರಿಚಯ, ಪ್ರಸ್ತುತಿ–ಡಾ. ಟಿ.ಎಸ್.ಗೋಪಾಲ್, 6.40 ಪದ ಸಂಸ್ಕೃತಿ, ಪ್ರಸ್ತುತಿ–ಡಾ.ಕೆ.ಎಲ್. ಪ್ರಸನ್ನಾಕ್ಷಿ, 7.15 ಕಾದಂಬರಿ ವಿಹಾರ–ನಾ ಕಸ್ತೂರಿಯವರ ರಂಗನಾಯಕಿ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ–ಉಮೇಶ್.ಎಸ್.ಎಸ್., 8.30 ಪಂಪ ಪ್ರಶಸ್ತಿ ಪುರಸ್ಕೃತ, ಸಾಹಿತಿ ಡಾ.ಸಿ.ಪಿ.ಕೆ. ಅವರೊಂದಿಗೆ ಸಂದರ್ಶನ, ಸಂದರ್ಶಕರು–ಡಾ.ಮೈಸೂರು ಉಮೇಶ್, 9.05 ವಸುದೈವ ಕುಟುಂಬಕಂ–ಭಾರತ ಜಿ20 ಶೃಂಗಸಭೆಯ ಅಧ್ಯಕ್ಷತೆ ವಹಿಸಿದ ಸಂದರ್ಭದಲ್ಲಿ ವಿಶೇಷ ಸರಣಿ ಕಾರ್ಯಕ್ರಮ, 10.00 ಎಂ.ಜೆ.ಶ್ರೀನಿವಾಸ ಅಯ್ಯಂಗಾರ್–ವೀಣಾ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.00 ವನಿತಾ ವಿಹಾರ, 12.30 ದೇವರನಾಮ–ಆರ್.ಗಿರೀಶ್, 12.45 ಹೊಸ ಉದ್ಯೋಗಗಳಿಗಾಗಿ Start Upಗಳು–ಮೈಸೂರಿನ ಶಿವಶಂಕರ ಅವರೊಡನೆ ಸಂವಾದ. ನಡೆಸಿಕೊಡುವವರು ದಿವಾಕರ ಹೆಗಡೆ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳುನ್ನು ಕುರಿತ ಕಾರ್ಯಕ್ರಮ, 1.20ಭಾವಗೀತೆಗಳು–ಜಮುನಾ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಡಾ.ಬಿ.ದೇವೇಂದ್ರಪ್ಪ–ಜಲತರಂಗ ವಾದನ, 4.00 ಕಥಾ ಕಾಲಕ್ಷೇಪ–ಸತ್ಯವಾನ್ ಸಾವಿತ್ರಿ–ವಿದ್ವಾನ್ ಗುರುರಾಜುಲು ನಾಯ್ಡು, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.55 ಕೃಷಿರಂಗ–ಕಿಸಾನ್‌ವಾಣಿ, ತೋಟಗಾರಿಕಾ ಬೆಳೆಗಳ ನಿಖರ ಬೇಸಾಯ ತಾಂತ್ರಿಕತೆಗಳನ್ನು ಕುರಿತು ಎಂ.ಎಸ್.ರಾಜು ಅವರೊಂದಿಗೆ ಸಂದರ್ಶನ, 9.30 ಕೆ.ಪಿ.ಉಪಾಧ್ಯಾಯ–ವೇಣುವಾದನ, 10.00 ಗಮಕ ವ್ಯಾಖ್ಯಾನ, ವಾಚನ–ಕೆ.ಆರ್ ಸತ್ಯಲಕ್ಷ್ಮಿ, ವ್ಯಾಖ್ಯಾನ– ಮಂಜುಳಾ ನಾಗರಾಜ್, 10.30 ಸವಿನೆನಪು

ಚಾಮುಂಡೇಶ್ವರಿ ಕ್ಷೇತ್ರದ ಕೊಳಗೇರಿ ವಸತಿ ಪ್ರದೇಶಗಳಿಗೆ ಮೂಲಸೌಕರ್ಯ ಕಲ್ಪಿಸಿ

ವಿಧಾನಸಭೆ ಅಧಿವೇಶನದಲ್ಲಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಸರ್ಕಾರಕ್ಕೆ ಮನವಿ



ಮೈಸೂರು,ಜು.10(ಪಿಎಂ)–ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲಾ ಕೊಳಗೇರಿ ವಸತಿ ಪ್ರದೇಶಗಳಿಗೆ ಸಮರ್ಪಕ ಮೂಲ ಸೌಲಭ್ಯಗಳನ್ನು ಒದಗಿಸುವಂತೆ ಸರ್ಕಾರಕ್ಕೆ ಕ್ಷೇತ್ರದ ಶಾಸಕರೂ ಆದ ಮಾಜಿ ಸಚಿವ ಜಿ.ಟಿ.ದೇವೇಗೌಡ ಮನವಿ ಮಾಡಿದರು. ವಿಧಾನಸಭೆ ಅಧಿವೇಶನದ ಪ್ರಶ್ನೋತ್ತರ ಕಲಾಪದಲ್ಲಿ ಸೋಮವಾರ ಮಾತನಾಡಿದ ಜಿ.ಟಿ.ದೇವೇಗೌಡರು, ನೀರಾವರಿ ಸಚಿವರಾಗಿದ್ದ ದಿವಂಗತ ನಜೀರ್ ಸಾಬ್ ಅವರು ಮರಣ ಹೊಂದುವ ಮುನ್ನ ನನ್ನ ಪ್ರಜೆಗಳು ಸುತ್ತಲು ಇದ್ದಾರೆ. ಅವರಿಗೆ ಕುಡಿಯಲು ನೀರು ಕೊಟ್ಟೆ, ಆದರೆ ಸೂರು ಕೊಟ್ಟಿಲ್ಲ ಎಂದು ಪರಿತಪಿಸುತ್ತಿದ್ದರು ಎಂದು ಸ್ಮರಿಸಿದರು.

ನಿರ್ಗತಿಕರಿಗೆ ಸೂರು ಕಲ್ಪಿಸುವಂತಹ ಮಹತ್ತರ ಖಾತೆಯ ಜವಾಬ್ದಾರಿಯನ್ನು ಮುಖ್ಯಮಂತ್ರಿಗಳು ನಿಮಗೆ (ವಸತಿ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್) ನೀಡಿದ್ದು, ಬಡವರು, ನಿರ್ಗತಿಕರಿಗೆ ಸೂರು ಒದಗಿಸಿಕೊಡಿ. ಆ ಮೂಲಕ ಅವರ ಶ್ರೇಯೋಭಿವೃದ್ಧಿಗೆ ಕ್ರಮ ವಹಿಸಬೇಕೆಂದು ಜಿಟಿಡಿ ವಿನಂತಿಸಿದರು.

ನನ್ನ ಕ್ಷೇತ್ರ ವ್ಯಾಪ್ತಿಯ ಹಂಚ್ಯಾ-ಸಾತಗಳ್ಳಿ, ಮಂಡಕಳ್ಳಿ, ರೂಪನಗರ (ಬೋಗಾದಿ), ಸಾತಗಳ್ಳಿ (ವಿಟಿಯು ಹಿಂಭಾಗ), ಕುಪ್ಪಲೂರು, ರಾಜೀವ್‌ನಗರ, ಏಕಲವ್ಯ ನಗರ ಹಾಗೂ ಕೆಸರೆಯಲ್ಲಿ ಒಟ್ಟು 8 ಕೊಳಗೇರಿ ವಸತಿ ಪ್ರದೇಶಗಳನ್ನು ನಿರ್ಮಿಸಲಾಗಿದೆ. ಇಲ್ಲಿ 3,904 ಮನೆಗಳಲ್ಲಿ ಸುಮಾರು 12,752 ಮಂದಿ ವಾಸ ಮಾಡುತ್ತಿದ್ದಾರೆ. ಆದರೆ ಇಲ್ಲಿನ ನಿವಾಸಿಗಳು ಸಮರ್ಪಕ ಮೂಲ ಸೌಕರ್ಯಗಳಿಲ್ಲದೇ ಪರಿತಪಿಸುತ್ತಿದ್ದಾರೆ ಎಂದರು.

ಈ ಪ್ರದೇಶಗಳಲ್ಲಿ ಸಮರ್ಪಕವಾಗಿ ಕುಡಿಯುವ ನೀರು ಪೂರೈಸಬೇಕು. ರಸ್ತೆ, ಚರಂಡಿ, ಯುಜಿಡಿ ಮತ್ತು ನೀರಿನ ಟ್ಯಾಂಕ್ ನಿರ್ಮಾಣಕ್ಕೆ ಕ್ರಮ ವಹಿಸಬೇಕು. ಅಲ್ಲದೆ, ವಿದ್ಯುತ್ ದೀಪಗಳ ಅಳವಡಿಕೆ ಸೇರಿದಂತೆ ಎಲ್ಲಾ ಮೂಲಸೌಕರ್ಯಗಳನ್ನು ಕಲ್ಪಿಸಬೇಕೆಂದು ಸಚಿವರಲ್ಲಿ ಮನವಿ ಮಾಡಿದರು.

ವಿದ್ಯುತ್ ಶುಲ್ಕ ಪಾವತಿಸಿ: ಈ ವಸತಿ ಪ್ರದೇಶಗಳಲ್ಲಿ ವಿದ್ಯುತ್ ಶುಲ್ಕ ಪಾವತಿಸದ ಹಿನ್ನೆಲೆಯಲ್ಲಿ ಸಂಪರ್ಕ ಕಡಿತಗೊಳಿಸಲಾಗಿದೆ. ಇದರಿಂದ ಇಲ್ಲಿನ ನಿವಾಸಿಗಳು ಕತ್ತಲಲ್ಲಿ ಕಾಲದೂಡುವಂತಾಗಿದೆ. ಹಾಗಾಗಿ ತುರ್ತಾಗಿ ವಿದ್ಯುತ್ ಶುಲ್ಕ ಪಾವತಿಸಲು ಕ್ರಮ ಕೈಗೊಳ್ಳುವಂತೆ ಶಾಸಕರು ಕೋರಿದರು. ಈಗಾಗಲೇ ರೂಪನಗರ (ಬೋಗಾದಿ) ಹಾಗೂ ಕುಪ್ಪಲೂರು ಕೊಳಗೇರಿ ವಸತಿ ಪ್ರದೇಶಗಳನ್ನು ಅಭಿವೃದ್ಧಿಪಡಿಸಿ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರ ಮಾಡಲಾಗಿದೆ. ಅಂತೆಯೇ ಇನ್ನುಳಿದ 6 ವಸತಿ ಬಡಾವಣೆಗಳನ್ನು ಅಭಿವೃದ್ಧಿಪಡಿಸಿ ಹಸ್ತಾಂತರಿಸಲು ಕ್ರಮ ಕೈಗೊಳ್ಳಬೇಕೆಂದು ವಿನಂತಿಸಿದರು.

ಚಾಮುಂಡೇಶ್ವರಿ ಕ್ಷೇತ್ರದ 8 ಕೊಳಚೆ ಪ್ರದೇಶಗಳಿಗೆ ಮೂಲಸೌಕರ್ಯ



ಬೆಂಗಳೂರು, ಜು.10– ಮೈಸೂರಿನ ಚಾಮುಂಡೇಶ್ವರಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬಿಎಸ್‌ಯುಪಿ ಯೋಜನೆಯಡಿಯಲ್ಲಿ 3904 ಮನೆ ನಿರ್ಮಿಸಿರುವ 8 ವಸತಿ ಪ್ರದೇಶದಲ್ಲಿ ಕುಡಿಯುವ ನೀರು, ಒಳಚರಂಡಿ, ವಿದ್ಯುತ್ ಸಂಪರ್ಕ ಸೇರಿ ಮೂಲಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ವಸತಿ ಸಚಿವ ಜಮೀರ್ ಅಹಮದ್‌ಖಾನ್ ಭರವಸೆ ನೀಡಿದ್ದಾರೆ.

ವಿಧಾನಸಭೆಯಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಜಿ.ಟಿ.ದೇವೇಗೌಡರ ಪ್ರಶ್ನೆಗೆ ಉತ್ತರಿಸಿದ ಅವರು, ಹಂಚ್ಯಾ-ಸಾತಗಳ್ಳಿ, ಮಂಡಕಳ್ಳಿ, ರೂಪಾನಗರ, ಕುಪ್ಪಲೂರು, ರಾಜೀವ್‌ನಗರ, ಏಕಲವ್ಯನಗರ, ಕೆಸರೆ ಸೇರಿ 8 ಕಡೆ 3,904 ಮನೆ ನಿರ್ಮಿಸಿದ್ದು 12,752 ಜನರು ವಾಸ ಮಾಡುತ್ತಿದ್ದಾರೆ. ಕುಡಿಯುವ ನೀರು ಸೇರಿ ಮೂಲಸೌಕರ್ಯ ಕೊರತೆ ಇದೆ. ಇದನ್ನು ಪರಿಹರಿಸಲಾಗುವುದು ಎಂದು ಸಚಿವ ಜಮೀರ್ ಅಹಮದ್ ತಿಳಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಮಂಜೂರಾಗಿ, ಬಿಜೆಪಿ ಸರ್ಕಾರದಲ್ಲಿ ಅನುದಾನ ಸಿಗದೆ ಕಾಮಗಾರಿ ಪೂರ್ಣಗೊಳ್ಳದ ಶಾದಿ ಮಹಲ್-ಸಮುದಾಯ ಭವನಕ್ಕೆ ಈ ಬಾರಿಯ ಬಜೆಟ್‌ನಲ್ಲಿ ಹಣಕಾಸು ನೆರವು ಒದಗಿಸಲಾಗಿದೆ.

ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ಕ್ಷೇತ್ರದಲ್ಲಿ ಜಾಮೀಯಾ ಮಸೀದಿ ವತಿಯಿಂದ ನಿರ್ಮಾಣ ಮಾಡುತ್ತಿರುವ ಶಾದಿ ಮಹಲ್ ಕಟ್ಟಡಕ್ಕೆ 50 ಲಕ್ಷ ರೂ. ಸೇರಿದಂತೆ 126 ಪ್ರಸ್ತಾವನೆಗಳು ಇದ್ದು ಈ ವರ್ಷದ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 54 ಕೋಟಿ ರೂ. ನೀಡಿದ್ದು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಲಕ್ಷ ಮನೆ ವಸತಿ ಯೋಜನೆಗೆ ಮೀಸಲಾದ ಸ್ಥಳದಲ್ಲಿ ಮೂಲಸೌಕರ್ಯಕ್ಕೆ ಆಗ್ರಹ

ಬೆಂಗಳೂರು, ಜು.10(ಕೆಎಂಶಿ)– ಒಂದು ಲಕ್ಷ ಮನೆಗಳ ನಿರ್ಮಾಣದ ವಸತಿ ಯೋಜನೆಗೆ ಬೆಂಗಳೂರಿನಲ್ಲಿ ಗುರುತಿಸಲಾದ 8 ಜಾಗಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕೆಂದು ಶಾಸಕ ಎಸ್.ಟಿ.ಸೋಮಶೇಖರ್ ವಿಧಾನಸಭೆಯಲ್ಲಿ ಒತ್ತಾಯಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಮಾತನಾಡಿದ ಅವರು, ಈ ಹಿಂದೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿದ್ದಾಗ 1 ಲಕ್ಷ ವಸತಿ ಯೋಜನೆಯನ್ನು ಘೋಷಿಸಿದ್ದರು. ಬಳಿಕ ಅದನ್ನು 50 ಸಾವಿರಕ್ಕೆ ಮಿತಿಗೊಳಿಸಲಾಗಿದೆ ಎಂದರು.

ಇದನ್ನು ತಕ್ಷಣವೇ ವಸತಿ ಸಚಿವ ಜಮೀರ್ ಅಹಮದ್ ಅಲ್ಲಗಳೆದರು. 1 ಲಕ್ಷ ಮನೆ ನಿರ್ಮಾಣ ಮಾಡುವ ಯೋಜನೆ ಚಾಲ್ತಿಯಲ್ಲಿದೆ ಎಂದು ಸ್ಪಷ್ಟಪಡಿಸಿದರು. ಎಸ್.ಟಿ.ಸೋಮಶೇಖರ್ ಮಾತನಾಡಿ, ಯಶವಂತಪುರ ಕ್ಷೇತ್ರದಲ್ಲಿ ಈ ಯೋಜನೆಗಾಗಿ 100 ಎಕರೆಗೂ ಹೆಚ್ಚು ಭೂಮಿಯನ್ನು ಒದಗಿಸಲಾಗಿದೆ.



ಆದರೆ ಅಲ್ಲಿ ಅಗತ್ಯ ಮೂಲಸೌಕರ್ಯಗಳಿಲ್ಲ. ಜನರು ವಾಸಿಸುವ ಸ್ಥಳದಲ್ಲಿ ಎಲ್ಲಾ ರೀತಿಯ ಸೌಲಭ್ಯಗಳು ಲಭ್ಯವಿರಬೇಕು. ಸಚಿವರು ಮುಖ್ಯಮಂತ್ರಿಗಳಿಗೆ ಪರಮಾಪ್ತರಾಗಿದ್ದು, ಮುಖ್ಯಮಂತ್ರಿಗಳ ಮೇಲೆ ಒತ್ತಡ ಹೇರಿ 1 ಲಕ್ಷ ವಸತಿ ಯೋಜನೆ ಜಾರಿಗೊಳ್ಳುತ್ತಿರುವ 8 ಸ್ಥಳಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಅನುದಾನ ಕೊಡಬೇಕು ಎಂದು ಸಚಿವ ಜಮೀರ್ ಅಹಮದ್ ಅವರಲ್ಲಿ ಮನವಿ ಮಾಡಿದರು.

ಇದಕ್ಕೆ ಉತ್ತರ ನೀಡಿದ ಸಚಿವ ಜಮೀರ್ ಅಹಮದ್, ವಸತಿ ಇಲಾಖೆಯಿಂದ ಸದರಿ ಸ್ಥಳಗಳಿಗೆ ರಸ್ತೆ ನಿರ್ಮಾಣ ಮಾಡಲು ಅವಕಾಶ ಇದೆ. ಉಳಿದ ಸೌಲಭ್ಯಗಳನ್ನು ನಗರಾಭಿವೃದ್ಧಿ, ಪಂಚಾಯತ್ ರಾಜ್, ಲೋಕೋಪಯೋಗಿ ಇಲಾಖೆಗಳು ಕಲ್ಪಿಸಬೇಕಿದೆ. ನಮ್ಮ ಇಲಾಖೆ ವ್ಯಾಪ್ತಿಗೆ ಸೀಮಿತವಾಗಿ ಸೌಲಭ್ಯ ಕಲ್ಪಿಸಲಾಗುವುದು ಎಂದರು.

ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್‌ವೇನಲ್ಲಿ ಅತೀ ವೇಗ ಚಾಲನೆ

ಎರಡು ದಿನದಲ್ಲಿ 490 ಪ್ರಕರಣ ದಾಖಲು





ಬೆಂಗಳೂರು: ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್‌ವೇನಲ್ಲಿ ಅಪಘಾತಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿರುವ ಪೊಲೀಸರು ಶರವೇಗದಲ್ಲಿ ಸಂಚರಿಸುವ ವಾಹನಗಳ ಮೇಲೆ ದಂಡಾಸ್ತ್ರ ಪ್ರಯೋಗ ಮಾಡುತ್ತಿದ್ದು, ಕೇವಲ 2 ದಿನಗಳಲ್ಲಿ 490 ಪ್ರಕರಣಗಳನ್ನು ದಾಖಲಿಸಿದ್ದಾರೆ.

ಎಕ್ಸ್‌ಪ್ರೆಸ್‌ವೇನಲ್ಲಿ ವಿಶೇಷ ಕಾರ್ಯಾಚರಣೆಗೆ ಇಳಿದಿರುವ ಪೊಲೀಸರು ಮೊದಲ ದಿನವಾದ ಗುರುವಾರ 44 ವಾಹನ ಚಾಲಕರ ವಿರುದ್ಧ ಪ್ರಕರಣ ದಾಖಲಿಸಿದ್ದರು. 2ನೇ ದಿನವಾದ ಶುಕ್ರವಾರ 446 ಪ್ರಕರಣಗಳನ್ನು ದಾಖಲು ಮಾಡಿ ದಂಡ ವಸೂಲಿ ಮಾಡಿದ್ದಾರೆ. ಇದರಲ್ಲಿ ಓವರ್ ಸ್ಪೀಡ್ 174, ಲೇನ್ ಡಿಸಿಪ್ಲೀನ್ ಉಲ್ಲಂಘನೆ ಮಾಡಿದ್ದಕ್ಕಾಗಿ 137, ಸೀಟ್ ಬೆಲ್ಟ್ ಧರಿಸದ ಕಾರಣಕ್ಕೆ 81, ಹೆಲ್ಮೆಟ್ ಧರಿಸದ ಕಾರಣ 47 ಪ್ರಕರಣ ಹಾಗೂ ಇತರೆ 51 ಪ್ರಕರಣ ಸೇರಿದಂತೆ ಒಟ್ಟಾರೆ 490 ಪ್ರಕರಣಗಳು ಸೇರಿವೆ.

ರಾಮನಗರ ಪೊಲೀಸರು ರೇಡಾರ್ ಗನ್‌ಗಳೊಂದಿಗೆ ಹೆದ್ದಾರಿಯಲ್ಲಿ ವಾಹನಗಳ ವೇಗ ತಪಾಸಣೆಯಲ್ಲಿ ತೊಡಗಿದ್ದು,



ಅತಿವೇಗ ಮತ್ತು ಅಜಾಗರೂಕತೆಯಿಂದ ಅಡ್ಡಾ-ದಿಡ್ಡಿಯಾಗಿ ವಾಹನ ಚಾಲನೆ ಮಾಡುವವರು, ಸೀಟ್ ಬೆಲ್ಟ್ ಧರಿಸದಿರುವುದು ಸೇರಿದಂತೆ ಸುರಕ್ಷತಾ ಕ್ರಮಗಳ ಬಗ್ಗೆ ನಿಗಾ ವಹಿಸಿದ್ದಾರೆ. ಅನುಮತಿಸುವ ಮಿತಿಗಿಂತ ಹೆಚ್ಚಿನ ವೇಗದಲ್ಲಿ ವಾಹನ ಚಲಾಯಿಸುವವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ.

ಕಳೆದ ಮಾರ್ಚ್‌ನಲ್ಲಿ ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ ಲೋಕಾರ್ಪಣೆಗೊಂಡ ನಂತರ 243 ಅಪಘಾತ ಪ್ರಕರಣಗಳು ಸಂಭವಿಸಿವೆ. ವರದಿಗಳ ಪ್ರಕಾರ, ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ 58 ಮಂದಿ, ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ 64 ಮಂದಿ ಸೇರಿ ಒಟ್ಟು 122 ಜನರು ಸಾವನ್ನಪ್ಪಿರುವ ಬಗ್ಗೆ ವರದಿಯಾಗಿತ್ತು.

ಹೆದ್ದಾರಿಯಲ್ಲಿ ಅಪಘಾತಗಳು ಹೆಚ್ಚಳವಾದ ಹಿನ್ನೆಲೆಯಲ್ಲಿ ಸಂಚಾರ ಹಾಗೂ ರಸ್ತೆ ಸುರಕ್ಷತಾ ವಿಭಾಗದ ಎಡಿಜಿಪಿ ಅಲೋಕ್ ಕುಮಾರ್ ಅಪಘಾತ ಸ್ಥಳಗಳನ್ನು ಪರಿಶೀಲನೆ ನಡೆಸಿದ್ದರು. ಅನಂತರ ಮೇಜರ್ ಸರ್ಜರಿ ಕೈಗೊಳ್ಳಲಾಗಿದ್ದು, ಎಕ್ಸ್‌ಪ್ರೆಸ್ ವೇನಲ್ಲಿ ವಾಹನಗಳ ವೇಗ ನಿಯಂತ್ರಣಕ್ಕೆ ರೇಡಾರ್ ಗನ್ ಬಳಕೆ ಮಾಡುವುದಾಗಿ ಹೇಳಿದ್ದರು.

ಹೆದ್ದಾರಿಯಲ್ಲಿ ಸಂಚರಿಸುವ ವಾಹನಗಳಿಗೆ 100 ಕಿ.ಮೀ.ಗರಿಷ್ಠ ವೇಗ ಮಿತಿ ನಿಗದಿಪಡಿಸಲಾಗಿತ್ತು. ಆದರೆ, ವಾಹನ ಚಾಲಕರು 120ರಿಂದ 160 ಕಿಮೀ ವೇಗದವರೆಗೆ ಚಾಲನೆ ಮಾಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರಾಮನಗರ ವ್ಯಾಪ್ತಿಯ ಹೆದ್ದಾರಿಯಲ್ಲಿ ಪೊಲೀಸರು ಸ್ಪೀಡ್ ರೇಡಾರ್ ಗನ್ ಮೂಲಕ ಕಾರ್ಯಾಚರಣೆಗಿಳಿದಿದ್ದಾರೆ. ಈ ರೇಡಾರ್ ಗನ್‌ನಲ್ಲಿ ನಿಗದಿತ ವೇಗಕ್ಕಿಂತ ಹೆಚ್ಚಿನ ವೇಗದಲ್ಲಿ ಸಂಚರಿಸುವ ವಾಹನಗಳ ವಿವರವನ್ನು ಚಿತ್ರ ಸಮೇತ ಕ್ಯಾಮರಾದಲ್ಲಿ ಸೆರೆಯಾಗಲಿದೆ. ಇದರ ಆಧಾರದ ಮೇಲೆ ಪೊಲೀಸರು ಹೆದ್ದಾರಿಯಲ್ಲಿ ಅಳವಡಿಸಿರುವ ಬ್ಯಾರಿಕೇಡ್‌ಗಳ ಸಹಾಯದಿಂದ ಅಂತಹ ವಾಹನವನ್ನು ತಡೆದು ದಂಡ ವಿಧಿಸುತ್ತಿದ್ದಾರೆ.

ಸರಣಿ ಹತ್ಯೆಯ ಸತ್ಯ ಅರಿಯಲು ಬಿಜೆಪಿ ಎರಡು ತಂಡ ರಚನೆ

ಮೈಸೂರಿನ ತಿ.ನರಸೀಪುರಕ್ಕೆ ಇಂದು ಭೇಟಿ

ಮೈಸೂರು, ಜು.10(ಬಿಎಲ್‌ಯು)– ಮೈಸೂರು ಸೇರಿದಂತೆ ಕರ್ನಾಟಕದ ಸರಣಿ ಹತ್ಯೆಗಳ ಸತ್ಯಾಸತ್ಯತೆ ಅರಿಯಲು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರು ಬಿಜೆಪಿಯ 11 ಜನರ ಎರಡು ತಂಡ ರಚನೆ ಮಾಡಿದ್ದಾರೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಅಶ್ವತ್ಥ ನಾರಾಯಣ ತಿಳಿಸಿದ್ದಾರೆ.

ಹತ್ಯೆಗಳ ಸತ್ಯಾಸತ್ಯತೆ ಪರೀಶೀಲನೆಗೆ ಈ ತಂಡ ಮೈಸೂರು ಹಾಗೂ ಬೆಳಗಾವಿಗೆ ನಾಳೆ ಭೇಟಿ ನೀಡಲಿದೆ ಎಂದು ಅವರು ಪ್ರಕಟಣೆಯಲ್ಲಿ ಹೇಳಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಅಶ್ವತ್ಥ್ ನಾರಾಯಣ್, ಶಾಸಕರಾದ ಮಹೇಶ್ ಟೆಂಗಿನಕಾಯಿ, ಅಭಯ್ ಪಾಟೀಲ್, ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಸಂಸದರಾದ ಮಂಗಳಾ ಸುರೇಶ್ ಅಂಗಡಿ, ವಿಧಾನ ಪರಿಷತ್ ಮಾಜಿ ಸದಸ್ಯ ಮಹಾಂತೇಶ್ ಕವಟಗಿಮಠ, ಬೆಳಗಾವಿ ನಗರಾಧ್ಯಕ್ಷ ಅನಿಲ್ ಬೆನಕೆ, ಜಿಲ್ಲಾಧ್ಯಕ್ಷ ಸಂಜಯ್ ಪಾಟೀಲ್, ಚಿಕ್ಕೋಡಿ ಜಿಲ್ಲಾಧ್ಯಕ್ಷ ಡಾ.ರಾಜೇಶ್ ನೇರ್ಲಿ ಹಾಗೂ ಬಿಜೆಪಿ ರಾಜ್ಯ ವಕ್ತಾರ ಎಂ.ಬಿ.ಜಿರಲಿ ಸತ್ಯ ಪರಿಶೀಲನಾ ಸಮಿತಿಯಲ್ಲಿ ಇರುತ್ತಾರೆ ಎಂದು ಅಶ್ವತ್ಥ್ ನಾರಾಯಣ ತಿಳಿಸಿದ್ದಾರೆ.

ಈ ತಂಡ ಬೆಳಗಾವಿಯ ಚಿಕ್ಕೋಡಿಯ ಜೈನ ಮುನಿ ಹತ್ಯೆ ಸ್ಥಳಕ್ಕೆ ಒಂದು ತಂಡ ಭೇಟಿ ನೀಡಿದರೆ, ಮೈಸೂರಿನ ತಿ.ನರಸೀಪುರದ ಹಿಂದೂ ಕಾರ್ಯಕರ್ತ ವೇಣುಗೋಪಾಲ್ ಮನೆಗೆ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ, ಸಂಸದ ಪ್ರತಾಪ್ ಸಿಂಹ, ಶಾಸಕರಾದ ಡಾ.ಸಿ.ಎನ್. ಅಶ್ವತ್ಥ್, ಶ್ರೀವತ್ಸ, ಮಾಜಿ ಶಾಸಕರಾದ ಎನ್.ಮಹೇಶ್, ಪ್ರೀತಮ್‌ಗೌಡ, ವಿಧಾನ ಪರಿಷತ್ ಮಾಜಿ ಸದಸ್ಯ ಮಲ್ಲಿಕಾರ್ಜುನ, ಮುಖಂಡರಾದ ಅಪ್ಪಣ್ಣ, ಮೈ.ವಿ. ರವಿಶಂಕರ್, ಶ್ರೀಮತಿ ಮಂಗಳಾ ಸೋಮಶೇಖರ್ ತಂಡ ಭೇಟಿ ನೀಡಲಿದೆ.

ರಾಜ್ಯದಲ್ಲಿ ಹೊಸ ತಾಲೂಕು ರಚನೆಗೆ ಸೂಕ್ತ ಮಾನದಂಡ

ಇನ್ನು ಮುಂದೆ ಕಟ್ಟುನಿಟ್ಟಾಗಿ ಪಾಲಿಸಬೇಕು



ಬೆಂಗಳೂರು, ಜು.10(ಕೆಎಂಶಿ)– ರಾಜ್ಯದಲ್ಲಿ ಹೊಸ ತಾಲೂಕುಗಳ ರಚನೆಗೆ ಮುಂದಿನ ದಿನಗಳಲ್ಲಿ ಸೂಕ್ತ ಮಾನದಂಡಗಳನ್ನು ರೂಪಿಸಲಾಗುವುದು ಮತ್ತು ಅವುಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡುವುದಾಗಿ ಕಂದಾಯ ಸಚಿವ ಕೃಷ್ಣ ಭೈರೇಗೌಡ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ರಘುಮೂರ್ತಿ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, 2018ರಿಂದ ಈವರೆಗೆ 63 ಹೊಸ ತಾಲೂಕುಗಳನ್ನು ರಚಿಸಲಾಗಿದೆ. ಅವುಗಳಲ್ಲಿ ಬಹುತೇಕ ಕಡೆ ಕಟ್ಟಡಗಳಿಲ್ಲ. ಆಡಳಿತಾತ್ಮಕ ಪ್ರಕ್ರಿಯೆ ಶುರುವಾಗಿಲ್ಲ. ನಿರ್ದಿಷ್ಟ ಮಾನದಂಡಗಳನ್ನು ಅನುಸರಿಸದೆ ಹೊಸ ತಾಲೂಕುಗಳನ್ನು ರಚಿಸಲಾಗಿದೆ ಎಂದು ಹೇಳಿದರು.

ಎಂ.ಬಿ.ಪಾಟೀಲ್ ಅವರ ಸಮಿತಿ ವೈಜ್ಞಾನಿಕ ಅಧ್ಯಯನ ವರದಿಯನ್ನು ನೀಡಿದೆ. ಮುಂದಿನ ದಿನಗಳಲ್ಲಿ ಅವುಗಳನ್ನು ಪಾಲನೆ ಮಾಡಿಯೇ ಹೊಸ ತಾಲೂಕು ರಚಿಸಲಾಗುವುದು ಎಂದು ಹೇಳಿದರು.

ಇದಕ್ಕೂ ಮುನ್ನ ರಘುಮೂರ್ತಿಯವರು ಚಳ್ಳಕೆರೆ ತಾಲೂಕಿನ ಪರಶುರಾಮ ಹೋಬಳಿಯನ್ನು ಹೊಸ ತಾಲೂಕನ್ನಾಗಿ ರಚನೆ ಮಾಡಬೇಕು. ತಾವು 3 ಬಾರಿ ಶಾಸಕರಾಗಿದ್ದು, ಹಲವಾರು ಸಂದರ್ಭದಲ್ಲಿ ಈ ಸದನದಲ್ಲೇ ವಿಷಯ ಪ್ರಸ್ತಾಪಿಸಿದ್ದೇನೆ. ಆದರೆ ಈವರೆಗೂ ಜಿಲ್ಲಾಧಿಕಾರಿಯಿಂದ ತಾಲೂಕು ರಚನೆಗೆ ಪ್ರಸ್ತಾವನೆ ಬಂದಿಲ್ಲ ಎಂದು ಸಚಿವರು ಉತ್ತರ ನೀಡಿದ್ದಾರೆ. ಬಹುಶಃ ಇದು ಮಾಹಿತಿ ಕೊರತೆ ಇರಬಹುದು. 2028ರ ವೇಳೆಗೆ ಪರಶುರಾಮಪುರ ಹೋಬಳಿಯನ್ನು ತಾಲೂಕನ್ನಾಗಿ ರಚನೆ ಮಾಡದಿದ್ದರೆ ತಾವು ರಾಜಕೀಯ ನಿವೃತ್ತಿ ಪಡೆಯುವುದಾಗಿ ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಕ್ಷೇತ್ರದ ಜನತೆಗೆ ಮಾತು ನೀಡಿದ್ದೇನೆ. ಸಚಿವರು ಇದನ್ನು ಗಮನದಲ್ಲಿಟ್ಟುಕೊಂಡು ತಾಲೂಕು ರಚನೆ ಮಾಡಿಕೊಡಬೇಕೆಂದು ಒತ್ತಾಯಿಸಿದರು. ವಿವಿಧ ರಾಜಕೀಯ ಕಾರಣಕ್ಕಾಗಿ ಈ ಹೋಬಳಿ ತಾಲೂಕು ರಚನೆಯಿಂದ ಕೈಬಿಟ್ಟು ಹೋಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವಿಧಾನಸೌಧದಲ್ಲಿ ಭದ್ರತೆ ಪರಿಶೀಲನೆ ವೇಳೆ ಮಹಿಳೆ ಬ್ಯಾಗ್‌ನಲ್ಲಿ ಚಾಕು ಪತ್ತೆ

ಬೆಂಗಳೂರು: ವಿಧಾನಸೌಧದಲ್ಲಿ ಇತ್ತೀಚೆಗೆ ನಡೆದಿದ್ದ ಭದ್ರತಾ ಲೋಪ ಹಿನ್ನೆಲೆಯಲ್ಲಿ ವಿಧಾನಸೌಧಕ್ಕೆ ಒದಗಿಸಲಾಗಿದ್ದ ಬಿಗಿಭದ್ರತೆಯನ್ನು ಮತ್ತಷ್ಟು ಹೆಚ್ಚಿಸಲಾಗಿದೆ. ವಿಧಾನಸೌಧಕ್ಕೆ ಬರುವ ಪ್ರತಿಯೊಬ್ಬರನ್ನು ತೀವ್ರ ತಪಾಸಣೆಗೊಳಪಡಿಸಿ ಅವರನ್ನು ಒಳಗೆ ಕಳುಹಿಸಲಾಗುತ್ತಿದೆ.

ಸೋಮವಾರ ವಿಧಾನಸೌಧದ ಪೂರ್ವ ಬಾಗಿಲಿನ ಮೂಲಕ ಒಳಪ್ರವೇಶಿಸಲು ಮುಂದಾದ ಮಹಿಳೆಯೊಬ್ಬರ ವ್ಯಾನಿಟಿ ಬ್ಯಾಗ್ ಅನ್ನು ಬ್ಯಾಗೇಜ್ ಮೆಷಿನ್‌ನಲ್ಲಿ



ಸ್ಕ್ಯಾನಿಂಗ್‌ಗೆ ಒಳಪಡಿಸಲಾಗಿತ್ತು. ಬ್ಯಾಗ್ ಒಳಗೆ ಹೋಗುತ್ತಿದ್ದಂತೆ, ಅದರಲ್ಲಿ ಚಾಕು ಇರುವುದನ್ನು ಸ್ಕ್ಯಾನಿಂಗ್ ಸ್ಕ್ರೀನ್‌ನಲ್ಲಿ ಭದ್ರತಾ ಸಿಬ್ಬಂದಿ ವೀಕ್ಷಿಸಿದ್ದಾರೆ. ಕೂಡಲೇ ಆ ಬ್ಯಾಗ್ ಅನ್ನು ಹೊರಗೆಳೆದು ಅದರಲ್ಲಿದ್ದ ವಸ್ತುಗಳನ್ನು ಹೊರಹಾಕಿ ಚಾಕುವನ್ನು ವಶಪಡಿಸಿಕೊಳ್ಳಲಾಗಿದೆ. ಇದೇ ವೇಳೆ ಮಹಿಳೆಯನ್ನೂ ಸಹ ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸಲಾಗಿದೆ. ಮಹಿಳೆಯ ಕುರಿತ ವಿವರಗಳು ಬಹಿರಂಗವಾಗಿಲ್ಲ. ಆದರೆ, ಕೆಲವು ಮೂಲಗಳು ಆಕೆಯು ವಿಧಾನಸೌಧದ ಮಹಿಳಾ ಸಿಬ್ಬಂದಿ ಎಂದು ಮಾಹಿತಿ ನೀಡಿವೆ.

ವಿಧಾನಸಭೆ ಪ್ರವೇಶಿಸಿದ್ದ ಅನಾಮಿಕ ಪ್ರಕರಣ

ಭದ್ರತಾ ದೃಷ್ಟಿಯಿಂದ ಅತ್ಯಾಧುನಿಕ ವ್ಯವಸ್ಥೆ ಜಾರಿ



ಬೆಂಗಳೂರು, ಜು.10(ಕೆಎಂಶಿ)– ವಿಧಾನಸಭೆಯ ಸಭಾಂಗಣದೊಳಗೆ ಶಾಸಕರಲ್ಲದ ವ್ಯಕ್ತಿ ಅನಧಿಕೃತವಾಗಿ ಪ್ರವೇಶಿಸಿರುವುದು ನಮ್ಮೆಲ್ಲರಿಗೂ ಪಾಠವಾಗಿದ್ದು, ಕಣ್ಣು ತೆರೆಸಿದೆ. ವಿಧಾನಸೌಧ ರಾಜಭವನ, ಶಾಸಕರ ಭವನ ಸೇರಿದಂತೆ ಸೂಕ್ಷ್ಮ ಪ್ರದೇಶಗಳ ಭದ್ರತೆಗೆ ಅತ್ಯಾಧುನಿಕ ತಂತ್ರಜ್ಞಾನ ಆಧರಿಸಿದ ವ್ಯವಸ್ಥೆ ರೂಪಿಸುವುದಾಗಿ ಸಭಾಧ್ಯಕ್ಷ ಯುಟಿ ಖಾದರ್ ವಿಧಾನಸಭೆಗೆ ತಿಳಿಸಿದ್ದಾರೆ.

ಕಲಾಪದಲ್ಲಿ ಸ್ವಯಂಪ್ರೇರಿತ ಹೇಳಿಕೆ ನೀಡಿದ ಅವರು, ಚಿತ್ರದುರ್ಗದ ತಿಪ್ಪೇರುದ್ರಪ್ಪ ಎಂಬ 76 ವರ್ಷದ ವ್ಯಕ್ತಿ ಶುಕ್ರವಾರ ಸದನದ ಒಳಗೆ ಬಂದು ಶಾಸಕಿ ಕರೆಮ್ಮ ಅವರ ಜಾಗದಲ್ಲಿ ಆಸೀನರಾಗಿದ್ದರು. ತಮ್ಮನ್ನು ತಾವು ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ಎಂದು ಪರಿಚಯಿಸಿಕೊಂಡಿದ್ದರು. ಪ್ರಾಥಮಿಕ ವಿಚಾರಣೆಯ ವೇಳೆ ಅವರು ಶಾಸಕರಲ್ಲ ಎಂದು ಖಚಿತವಾಗಿದೆ. ಮಾರ್ಷಲ್‌ಗಳ ಮೂಲಕ ಅವರನ್ನು ವಿಧಾನಸೌಧದ ಪೊಲೀಸ್ ಠಾಣೆಗೆ ಒಪ್ಪಿಸಲಾಗಿದ್ದು, ಪ್ರಕರಣ ದಾಖಲಾಗಿದೆ. ವ್ಯಕ್ತಿಯನ್ನು ಬಂಧಿಸಿ, ವಿಚಾರಣೆ ನಡೆಯುತ್ತಿದೆ ಎಂದು ಹೇಳಿದರು.

ಭದ್ರತೆ ವಿಷಯಕ್ಕೆ ಅತ್ಯಾಧುನಿಕ ತಂತ್ರಜ್ಞಾನ ಬಳಸಿ ಕ್ರಮ ಕೈಗೊಳ್ಳಲಾಗುವುದು. ಶಾಸಕರು ಸಚಿವರು, ಮಾಧ್ಯಮದವರು ತಮ್ಮ ಗುರುತಿನ ಚೀಟಿಯನ್ನು ನೀಡಬೇಕು. ಪ್ರತಿಷ್ಠೆಯ ಸಲುವಾಗಿ ಅನುಚಿತವಾಗಿ ವರ್ತಿಸದೆ ಭದ್ರತಾ ಸಿಬ್ಬಂದಿಯೊಂದಿಗೆ ಸಹಕರಿಸಬೇಕೆಂದು ಸಲಹೆ ನೀಡಿದರು.

ನಾಲ್ಕು ವರ್ಷದ ಹಿಂದೆ ನೀಡಿದಂತಹ ಕೀ ಬಟನ್‌ವುಳ್ಳ ಮೊಬೈಲ್ ಬೇಡ!

ಅಂಗನವಾಡಿ ಕಾರ್ಯಕರ್ತೆಯರಿಂದ ಮೊಬೈಲ್ ವಾಪಸಾತಿ ಚಳವಳಿ



ಮೈಸೂರು, ಜು10(ಬಿಎಲ್‌ಯು)– ತಮ್ಮ ಬೇಡಿಕೆ ಈಡೇರಿಸದ ಸರ್ಕಾರದ ವಿರುದ್ಧ ಹೋರಾಟ ಆರಂಭಿಸಿರುವ ಅಂಗನವಾಡಿ ಕಾರ್ಯಕರ್ತೆಯರು ಮೊಬೈಲ್ ವಾಪಸಾತಿ ಚಳವಳಿ ನಡೆಸಿದರು.

ಮೈಸೂರಿನ ವಿಜಯನಗರದ ಕೃಷ್ಣದೇವರಾಯ ವೃತ್ತದ ಬಳಿಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮುಂದೆ ಅಂಗನವಾಡಿ ಕಾರ್ಯಕರ್ತೆಯರು ಪ್ರತಿಭಟನೆ ನಡೆಸಿದರು.

ಸಮೀಕ್ಷೆ ಸೇರಿದಂತೆ ನಾನಾ ಹತ್ತು ಹಲವು ಕೆಲಸ ಕಾರ್ಯಗಳನ್ನು ನಿರ್ವಹಿಸಲು ಸರ್ಕಾರ ಈಗ ನೀಡಿರುವ ನೋಕಿಯಾ ಕೀ ಬಟನ್‌ವುಳ್ಳ ಮೊಬೈಲ್‌ಗಳು ಸಮರ್ಪಕವಾಗಿಲ್ಲ. 4 ವರ್ಷಗಳಿಂದ ನಿರಂತರವಾಗಿ ಬಳಸಿದ್ದರಿಂದ ಅವುಗಳ ಸಾಮರ್ಥ್ಯ ಕುಗ್ಗಿದೆ. ಇನ್ನು ಸಮರ್ಪಕವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗಿಲ್ಲ ಎಂದು ಪ್ರತಿಭಟನಾಕಾರರು ಹೇಳಿದರು.

ಈ ಹಿನ್ನೆಲೆಯಲ್ಲಿ ಮೊಬೈಲ್ ಬದಲಿಗೆ ಟ್ಯಾಬ್‌ಗಳನ್ನು ನೀಡುವಂತೆ ಆಗ್ರಹಿಸಿ, ಮೊಬೈಲ್ ವಾಪಸಾತಿ ಚಳವಳಿ ನಡೆಸಿದರು. ಆದರೆ ಮೊಬೈಲ್ ಫೋನ್‌ಗಳನ್ನು ಪಡೆಯಲು ಸಿಡಿಪಿಓ ತಿಮ್ಮಯ್ಯ ನಿರಾಕರಿಸಿದರು. ನಮಗೆ ಯಾವುದೇ ಆದೇಶ ಇಲ್ಲದ ಕಾರಣ ಪಡೆಯುವುದಿಲ್ಲ ಎಂದು ಹೇಳಿದರು.

ಇದರಿಂದ ಆಕ್ರೋಶಗೊಂಡ ಅಂಗನವಾಡಿ ಕಾರ್ಯಕರ್ತೆಯರು, ಕೂಡಲೇ ಸರ್ಕಾರದ ಗಮನಕ್ಕೆ ತಂದು ಟ್ಯಾಬ್ ಕೊಡಿಸಿ, ಇಲ್ಲವೆಂದರೆ ಕೆಲಸ ನಿರ್ವಹಿಸುವುದಿಲ್ಲ ಎಂದು ಎಚ್ಚರಿಸಿದರು.

ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕರ ಸಂಯುಕ್ತ ಸಂಘರ್ಷ ಸಮಿತಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ತಾಲೂಕು ಅಧ್ಯಕ್ಷೆ ಲತಾ, ಗೌರಮ್ಮ, ಪಂಕಜ ಸೇರಿದಂತೆ ಹಲವರು ಭಾಗವಹಿಸಿದ್ದರು.

ಡಾ.ಅಂಬೇಡ್ಕರ್ ಭವನದ ಕಾಮಗಾರಿ ಪರಿಶೀಲನೆ

● ಸಮಾಜ ಕಲ್ಯಾಣ ಇಲಾಖೆ ಆಯುಕ್ತ ಡಾ.ರಾಕೇಶ್‌ಕುಮಾರ್ ● ಅವಶ್ಯಕತೆಯಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ತೀರ್ಮಾನ ● ಶೀಘ್ರವಾಗಿ ಸಾರ್ವಜನಿಕರ ಉಪಯೋಗಕ್ಕೆ ಭವನ ಸಮರ್ಪಿಸಲು ಚಿಂತನೆ

ಮೈಸೂರು,ಜು.10(ಎಂಟಿವೈ)–ದಶಕಕ್ಕಿಂತಲೂ ಸುದೀರ್ಘ ಅವಧಿಯಿಂದಲೂ ನನೆಗುದಿಗೆ ಬಿದ್ದಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನದ ಕಾಮಗಾರಿ ಪೂರ್ಣಗೊಳಿಸಲು ಕಾಲ ಸನ್ನಿಹಿತವಾದಂತೆ ಕಂಡುಬರುತ್ತಿದ್ದು, ಅಧಿಕಾರಿಗಳೊಂದಿಗೆ ಸಮಾಜ ಕಲ್ಯಾಣ ಇಲಾಖೆ ಆಯುಕ್ತ ಡಾ.ರಾಕೇಶ್‌ಕುಮಾರ್ ಅಂಬೇಡ್ಕರ್ ಭವನದ ಕಾಮಗಾರಿಯನ್ನು ಪರಿಶೀಲಿಸಿದರು.

ಮೈಸೂರಿನ ದೇವರಾಜ ಮೊಹಲ್ಲಾದ ನಲ್ಲಪ್ಪ ಪೊಲೀಸ್ ಠಾಣೆ ಸಮೀಪದ ಜಾಗದಲ್ಲಿ ನಿರ್ಮಿಸುತ್ತಿರುವ ಡಾ.ಅಂಬೇಡ್ಕರ್ ಭವನದ ಕಾಮಗಾರಿ ಸ್ಥಗಿತಗೊಂಡಿದ್ದು, ಕಾಮಗಾರಿ ಪೂರ್ಣಗೊಳಿಸಬೇಕು ಎಂಬ ಕೂಗು ಕೇಳಿಬರುತ್ತಲೇ ಇತ್ತು. ಕಾಮಗಾರಿ ಪೂರ್ಣಗೊಳಿಸಲು 20 ಕೋಟಿ ರೂ. ಅವಶ್ಯಕತೆಯಿದೆ ಎಂದು ಅಂದಾಜಿಸಲಾಗಿದೆ. ಅಂಬೇಡ್ಕರ್ ಭವನದ ಕಾಮಗಾರಿ ಪೂರ್ಣಗೊಳಿಸಲು ಸಿಎಂ ಸಿದ್ದರಾಮಯ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಮಹದೇವಪ್ಪ ನೀಡಿದ ಸೂಚನೆ ಮೇರೆಗೆ ಅಧಿಕಾರಿಗಳು ಕಟ್ಟಡದ ಕಾಮಗಾರಿ ಕುರಿತು ಪರಿಶೀಲನೆ ನಡೆಸಿ, ಕಾಮಗಾರಿ ಪಟ್ಟಿ ಹಾಗೂ ಅಂದಾಜು ಪಟ್ಟಿ ತಯಾರಿಸಲು ಕ್ರಮ ಕೈಗೊಳ್ಳಲಾಗಿದೆ. ಅನುದಾನಕ್ಕಾಗಿಯೂ ಪ್ರಸ್ತಾವನೆ ಸಲ್ಲಿಸಲಾಗಿದೆ.

ಮುಖ್ಯಮಂತ್ರಿಯಾಗಿ 2ನೇ ಬಾರಿಗೆ ಅಧಿಕಾರ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಮೈಸೂರಿಗೆ ಆಗಮಿಸಿ ಜೂ.10ರಂದು ಪ್ರಗತಿ ಪರಿಶೀಲನಾ ಸಭೆ ನಡೆಸಿದ್ದ ಸಿಎಂ ಸಿದ್ದರಾಮಯ್ಯ ಅವರು ಅಂಬೇಡ್ಕರ್ ಭವನದ ಕಾಮಗಾರಿ ಕುರಿತು ಮಾಹಿತಿ ಸಂಗ್ರಹಿಸಿದ್ದರು. ಅದೇ ದಿನ ಡಿಸಿ ಡಾ.ಕೆ.ವಿ.ರಾಜೇಂದ್ರ, ಮುಡಾ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್, ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಅಂಬೇಡ್ಕರ್ ಭವನದ ಕಾಮಗಾರಿ ಪರಿಶೀಲಿಸಿದ ಅಂದಾಜು ಪಟ್ಟಿ ತಯಾರಿಸಿದ್ದರು.





ಆದಷ್ಟು ಬೇಗ ಕಾಮಗಾರಿ ಪೂರ್ಣಗೊಳಿಸಲಾಗುವುದು

ಪರಿಶೀಲನೆ ಬಳಿಕ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಸಮಾಜ ಕಲ್ಯಾಣ ಇಲಾಖೆಯ ಆಯುಕ್ತ ಡಾ.ರಾಕೇಶ್‌ಕುಮಾರ್, ಮೈಸೂರಲ್ಲಿ ನಿರ್ಮಿಸುತ್ತಿರುವ ಡಾ.ಅಂಬೇಡ್ಕರ್ ಭವನದ ಮುಂದುವರೆದ ಕಾಮಗಾರಿಯನ್ನು ಶೀಘ್ರದಲ್ಲಿ ಪೂರ್ಣಗೊಳಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರು ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳೊಂದಿಗೆ ಕಟ್ಟಡದ ಕಾಮಗಾರಿ ಪರಿಶೀಲನೆ ನಡೆಸಿ, ಮಾಹಿತಿ ಪಡೆಯಲಾಗಿದೆ. ಹೆಚ್ಚುವರಿ ಕಾಮಗಾರಿ ಪೂರ್ಣಗೊಳಿಸಲು ಅಂದಾಜು ಪಟ್ಟಿ ಸಲ್ಲಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ಆದಷ್ಟು ಬೇಗ ಕಾಮಗಾರಿ ಪೂರ್ಣಗೊಳಿಸಿ, ಅಂಬೇಡ್ಕರ್ ಭವನವನ್ನು ಸಾರ್ವಜನಿಕರ ಉಪಯೋಗಕ್ಕೆ ಸಮರ್ಪಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಇದೀಗ ಸಮಾಜ ಕಲ್ಯಾಣ ಇಲಾಖೆ ಆಯುಕ್ತ ಡಾ.ರಾಕೇಶ್‌ಕುಮಾರ್ ಅವರು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತರೆಡ್ಡಿ, ಮುಡಾ ಆಯುಕ್ತ ಜಿ.ಟಿ.ದಿನೇಶ್ ಕುಮಾರ್, ಲೋಕೋಪಯೋಗಿ ಇಲಾಖೆ ಅಧಿಕಾರಿಗಳೊಂದಿಗೆ ಡಾ.ಅಂಬೇಡ್ಕರ್ ಭವನದ ಕಾಮಗಾರಿ ವೀಕ್ಷಿಸಿದರು. ಈ ವೇಳೆ ಮುಂದುವರೆಸಬಹುದಾದ ಕಾಮಗಾರಿಗಳ ಬಗ್ಗೆ ಮಾಹಿತಿ ಪಡೆದರು. ಅನವಶ್ಯಕವಾದ ಕಾಮಗಾರಿ ಕೈಬಿಟ್ಟು, ಅಗತ್ಯವಿರುವ ಕಾಮಗಾರಿ ನಡೆಸುವುದಕ್ಕೆ ಸೂಚನೆ ಹಾಗೂ ಸಲಹೆ ನೀಡಿದರು.

ಸಚಿವರು ಈಗಾಗಲೇ ಅಂಬೇಡ್ಕರ್ ಭವನದ ಬಾಕಿ ಕಾಮಗಾರಿಯನ್ನು ಮುಡಾ ಹಾಗೂ ಮಹಾನಗರ ಪಾಲಿಕೆ ವತಿಯಿಂದ ಅನುದಾನದ ಹಂಚಿಕೆ (ಶೇರಿಂಗ್) ಪದ್ಧತಿಯಲ್ಲಿ ಕಟ್ಟಡ ಕಾಮಗಾರಿ ಪೂರ್ಣಗೊಳಿಸಲು ಸಲಹೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಪರಿಶೀಲನೆ ಮಾಡಿ ಮಾಹಿತಿ ಕಲೆ ಹಾಕಲಾಗಿದೆ ಎಂದರು.

ಪರಿಶೀಲನೆ ವೇಳೆ ಅವಶ್ಯಕತೆಯಿರುವ ಕಾಮಗಾರಿಯನ್ನು ಮುಗಿಸಲು ಆದ್ಯತೆ ನೀಡಲಾಗುವುದು. ಇನ್ನು ಏನೇನು ಕಾಮಗಾರಿ ಮಾಡಬೇಕು ಎಂದು ಪರಿಶೀಲಿಸಲಾಗುತ್ತದೆ. ವಸ್ತುಪ್ರದರ್ಶನ, ಮ್ಯೂಸಿಯಂ, ಸ್ಮಾರಕ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕಾಗಿದೆ. ಇದಕ್ಕಾಗಿ ಚೀಫ್ ಆರ್ಕಿಟೆಕ್ ಅವರಿಂದ ಪರಿಶೀಲನೆ ನಡೆಸಲು ಕೋರಲಾಗಿದೆ. ಸುಮಾರು 2 ಎಕರೆ ಜಾಗದಲ್ಲಿ ಬಹುತೇಕ ಸ್ಥಳವನ್ನು ಕಟ್ಟಡಕ್ಕೆ ಬಳಸಲಾಗಿದೆ. ಕಾರ್ಯಕ್ರಮ ನಡೆಯುವ ವೇಳೆ ಎಕೋ ಹೊಡೆಯದಂತೆ ಏನೆಲ್ಲಾ ಕ್ರಮ ಕೈಗೊಳ್ಳಬೇಕು ಎಂದು ತಜ್ಞರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುತ್ತದೆ. ಒಟ್ಟಾರೆ ಡಾ.ಬಿ.ಆರ್.ಅಂಬೇಡ್ಕರ್ ಅವರ ಹೆಸರಿನ ಘನತೆ ಎತ್ತಿ ಹಿಡಿಯುವಂತೆ ಭವನ ನಿರ್ಮಾಣ ಮಾಡಲಾಗುತ್ತದೆ ಎಂದು ವಿವರಿಸಿದರು.

ನಕ್ಕರೆ ಅದೇ ಸ್ವರ್ಗ

ಗುಂಡ : ಬೊಗಳೋ ನಾಯಿ ಕಚ್ಚೋದಿಲ್ಲ ಯಾಕೆ?

ಸಂತು : ಯಾಕೆಂದರೆ, ಒಂದೇ ಸಮಯದಲ್ಲಿ ಎರಡು ಕೆಲಸ ಮಾಡೋಕೆ ಆಗೋದಿಲ್ಲ ಅದಕ್ಕೆ !

ಮೈಸೂರು ಮಿತ್ರ

ಮಂಗಳವಾರ, 11 ಜುಲೈ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಅಸಮಾನ್ಯ ವ್ಯಕ್ತಿಗಳು ಐಡಿಯಾಗಳ ಬಗ್ಗೆ ಚರ್ಚಿಸುತ್ತಾರೆ. ಸಾಮಾನ್ಯ ವ್ಯಕ್ತಿಗಳು ಸಂದರ್ಭಗಳ ಬಗ್ಗೆ ಚರ್ಚಿಸುತ್ತಾರೆ. ದುರ್ಬಲರು ಮಾತ್ರ ವ್ಯಕ್ತಿಯ ಅವಗುಣಗಳ ಬಗ್ಗೆ ಮಾತನಾಡುತ್ತಾರೆ –ಸಾಕ್ರಟಿಸ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಅಪ್ಪನಂತಹ ನಂಟನಿಲ್ಲ, ಸೊಪ್ಪಿನಂತಹ ಊಟವಿಲ್ಲ

ನಿಮ್ಮ ಪತ್ರಗಳು

ಜೈನ ಮುನಿಗಳ ಹತ್ಯೆ ಖಂಡನಾರ್ಹ



ಮಾನ್ಯರೆ,

ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲೂಕಿನ ಹಿರೇಕೋಡಿಯ ನಂದಿ ಪರ್ವತ ಜೈನ ಆಶ್ರಮದ ಮುನಿಗಳಾಗಿದ್ದ ಆಚಾರ್ಯ ಶ್ರೀ 108 ಕಾಮಕುಮಾರ ನಂದಿ ಮಹಾರಾಜರನ್ನು ದುಷ್ಕರ್ಮಿಗಳು ಅತ್ಯಂತ ಬರ್ಬರ ರೀತಿಯಲ್ಲಿ ಕೊಲೆ ಮಾಡಿರುವುದು ತೀರಾ ಖಂಡನಾರ್ಹ ಸಂಗತಿ. ಸರ್ವಸಂಗ ಪರಿತ್ಯಾಗಿಗಳಾದ ಶ್ರೀಗಳ ಹತ್ಯೆಯ ವಿರುದ್ದ ಈಗಾಗಲೇ ರಾಜ್ಯಾದ್ಯಂತ ಉಗ್ರಪ್ರತಿಭಟನೆ ಪ್ರಾರಂಭವಾಗಿದೆ. ಜೈನ ಮುನಿಗಳದ್ದು ಅತ್ಯಂತ ಕಠಿಣ ರೀತಿಯ ಬದುಕು. ಮೈಮೇಲೆ ಬಟ್ಟೆ ಇಲ್ಲದೇ ಪಥ್ಯಾಹಾರಗಳನ್ನು ಮಾತ್ರ ಸೇವಿಸುತ್ತಾ, ಕಠಿಣವಾದ ನೇಮ ನಿಷ್ಟೆ ಹಾಗೂ ವ್ರತಗಳಿಂದ ಅವರ ಬದುಕು ಪಾವನವಾಗಿರುತ್ತದೆ. ಸಮಾಜದ ಒಳಿತಿಗಾಗಿ, ಮನುಕುಲದ ಉದ್ದಾರಕ್ಕಾಗಿ ನಿರಂತರವಾಗಿ ಶ್ರಮಿಸುತ್ತಿದ್ದ ನಂದಿ ಮಹಾರಾಜ ಮುನಿಗಳ ದೇಹವನ್ನು ತುಂಡು ತುಂಡಾಗಿ ಕತ್ತರಿಸಿ ಕೊಳವಿ ಬಾವಿಯಲ್ಲಿ ಎಸೆದು ಹೋಗಿರುವುದು ಅತ್ಯಂತ ಅನಾಗರಿಕ ಹಾಗೂ ಅಮಾನವೀಯ ಕೃತ್ಯವಾಗಿದೆ. ಹಣಕಾಸಿನ ವಿಚಾರಕ್ಕೆ ಸಂಬಂಧಿಸಿದಂತೆ ಅವರನ್ನು ಕೊಲ್ಲಲಾಗಿದೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ಹರಿದಾಡುತ್ತಿದೆ. ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕೆಂದು ಶಾಸಕರಾದ ಅಭಯ್ ಪಾಟೀಲ್ ಈಗಾಗಲೇ ಒತ್ತಾಯಿಸಿದ್ದಾರೆ. ಮತ್ತೊಂದೆಡೆ, ಮತ್ತೊರ್ವ ಜೈನ ಮುನಿಗಳಾದ ಹುಬ್ಬಳ್ಳಿಯ ನವಗ್ರಹ ತೀರ್ಥ ಕ್ಷೇತ್ರದ ಜೈನಮುನಿ ಗುಣಧರ ನಂದಿ ಮಹಾರಾಜರೂ ಸಹ ಕೃತ್ಯವನ್ನು ಖಂಡಿಸಿ, ಸೂಕ್ತ ತನಿಖೆಗೆ ಒತ್ತಾಯಿಸಿದ್ದಾರೆ. ರಾಜ್ಯ ಸರ್ಕಾರ ಈ ಪ್ರಕರಣವನ್ನು ಸೂಕ್ತ ತನಿಖೆಗೆ ಒಳಪಡಿಸಿ, ತಪ್ಪಿತಸ್ತರನ್ನು ಬಂಧಿಸಿ, ಭವಿಷ್ಯದಲ್ಲಿ ಇಂತಹ ಪೈಶಾಚಿಕ ಕೃತ್ಯಗಳು ಸಂಭವಿಸದಂತೆ ಎಚ್ಚರಿಕೆ ವಹಿಸಬೇಕಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಮಾದರಿ ಕುವೆಂಪುನಗರ ಗ್ರಂಥಾಲಯ



ಮಾನ್ಯರೆ,

ಇತ್ತೀಚೆಗೆ ಮೈಸೂರಿನ ಕುವೆಂಪುನಗರ ಡಬಲ್ ರೋಡ್‌ನಲ್ಲಿರುವ ಸಾರ್ವಜನಿಕ ಕೇಂದ್ರ ಗ್ರಂಥಾಲಯಕ್ಕೆ ಹೋಗಿದ್ದೆ. ಈ ಗ್ರಂಥಾಲಯದ ತುಂಬೆಲ್ಲಾ ಇದ್ದ ಓದುಗರನ್ನು ಕಂಡು ಆಶ್ಚರ್ಯವಾಯಿತು.

ವಿಶಾಲವಾದ ಈ ಗ್ರಂಥಾಲಯದ ಒಂದು ಭಾಗ ವಿದ್ಯಾರ್ಥಿಗಳು ಕುಳಿತುಕೊಂಡು ಓದಲು ಮೀಸಲಾಗಿದೆ. ಮತ್ತೊಂದು ಭಾಗ ಸಾರ್ವಜನಿಕರು ದಿನಪತ್ರಿಕೆ ಮತ್ತು ನಿಯತಕಾಲಿಕೆಗಳನ್ನು ಓದಲು ವ್ಯವಸ್ಥೆ ಮಾಡಲಾಗಿದೆ. ಇಲ್ಲಿನ ಸಿಬ್ಬಂದಿ ಒಬ್ಬರನ್ನು ವಿಚಾರಿಸಿದಾಗ ಇಲ್ಲಿಗೆ ಪ್ರತಿದಿನ 500ಕ್ಕೂ ಹೆಚ್ಚು ಜನರು ಭೇಟಿ ನೀಡುತ್ತಾರೆ. ಅದರಲ್ಲಿ ಅರ್ಧಕ್ಕೂ ಹೆಚ್ಚಿನವರು ವಿದ್ಯಾರ್ಥಿಗಳು ಎಂದರು.

ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ತಯಾರಿ ನಡೆಸಲು ಕೆಲವು ವಿದ್ಯಾರ್ಥಿಗಳು ಬೆಳಗ್ಗೆ 10 ಗಂಟೆಗೆ ಬಂದರೆ, ರಾತ್ರಿ 7.30 ರ ತನಕವೂ ಇಲ್ಲೇ ಅಭ್ಯಾಸ ಮಾಡುತ್ತಾರೆ ಎಂದರು.

ಈ ಗ್ರಂಥಾಲಯ ಪ್ರಶಾಂತವಾದ ಜಾಗದಲ್ಲಿ ಇರುವುದು, ಹೆಂಗಸರು ಮತ್ತು ಗಂಡಸರಿಗೆ ಪ್ರತ್ಯೇಕವಾಗಿ ಶೌಚಾಲಯದ ವ್ಯವಸ್ಥೆ ಮತ್ತು ನೂರಾರು ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಇರುವುದು ಓದುಗರಿಗೆ ಅನುಕೂಲವಾಗಿದೆ. ಇಲ್ಲಿಗೆ ಕನ್ನಡ ಮತ್ತು ಇಂಗ್ಲೀಷ್ ಭಾಷೆಯ ಎಲ್ಲಾ ದಿನ ಪತ್ರಿಕೆಗಳನ್ನು ಎರಡು ಸೆಟ್ ಬರುವುದರಿಂದ ಎಷ್ಟೇ ಓದುಗರು ಬಂದರೂ ತೊಂದರೆ ಇಲ್ಲ ಎನ್ನುತ್ತಾರೆ ಇಲ್ಲಿನ ಸಿಬ್ಬಂದಿ.

ಬಹುಶಃ ಮೈಸೂರು ನಗರದಲ್ಲಿ ಅತೀ ಹೆಚ್ಚು ಓದುಗರು ಬರುವ ಗ್ರಂಥಾಲಯ ಇದಾಗಿರಬಹುದು. ನಾವು– ನೀವು ಪ್ರತಿ ವರ್ಷ ಮನೆ ಕಂದಾಯ ಕಟ್ಟುವಾಗ, ಗ್ರಂಥಾಲಯದ ತೆರಿಗೆಯನ್ನೂ ಕಟ್ಟಿರುತ್ತೇವೆ. ಮೈಸೂರು ನಗರದ ಎಲ್ಲಾ ಸಾರ್ವಜನಿಕರು ಗ್ರಂಥಾಲಯದ ಉಪಯೋಗವನ್ನು ಈ ರೀತಿಯಲ್ಲಿ ಸದುಪಯೋಗ ಪಡಿಸಿಕೊಳ್ಳುವಂತಾಗಬೇಕು. ಇದು ಬೇರೆ ಗ್ರಂಥಾಲಯಗಳಿಗೆ ಮಾದರಿಯಂತಿದೆ. ಈ ಗ್ರಂಥಾಲಯವನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಒಂದು ಥ್ಯಾಂಕ್ಸ್ ಹೇಳಬೇಕು.

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು.

ಅಕ್ಕಿಗಾಗಿ ಹಕ್ಕಿನ ಹೋರಾಟ

ಮಾನ್ಯರೆ,

ರೈತರು ಕಷ್ಟ ಪಟ್ಟು ಬೆಳೆದ–ಉಗ್ರಾಣದಲ್ಲಿ ದಾಸ್ತಾನಿರುವ ಅಕ್ಕಿಯನ್ನು ಜನರ ಮತಗಳಿಂದ ಗೆದ್ದು, ಸಾರ್ವಜನಿಕರ ತೆರಿಗೆ ಹಣದಿಂದಲೇ ನಿರ್ವಹಣೆ ಆಗುತ್ತಿರುವ ಎರಡು ಸರ್ಕಾರಗಳು ಸಹಕಾರಯುತವಾಗಿ ಹಂಚಿಕೊಂಡು ತಿನ್ನಲು ಸಾಧ್ಯವಾಗದೆ ಬೀದಿಯಲ್ಲಿ ಜಗಳವಾಡುವ ಮಟ್ಟಕ್ಕೆ ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಗೆ ದುರ್ಗತಿ ಬಂತೇ ಅಥವಾ ತಂದರೇ. ಎಲ್ಲರೂ ಗಮನಿಸಬೇಕಾದ ಅಂಶವೆಂದರೆ, ನರೇಂದ್ರ ಮೋದಿಯವರು ಅಣಬೆ ಸೂಪ್ ಕುಡಿಯುತ್ತಾರೆ. ಸಿದ್ದರಾಮಯ್ಯನವರು ನಾಟಿ ಕೋಳಿ ತಿನ್ನುತ್ತಾರೆ. ಈ ಉಗ್ರಾಣದ ಸಂಗ್ರಹದ ಅಕ್ಕಿಯನ್ನು ತಿನ್ನುವವರು ಬಡಜೀವಿಗಳು ಅಂದರೆ ನಾವುಗಳು. ಜಗಳ ಮಾಡುವವರು ಅವರು. ಇದೇ ಪ್ರಜಾಪ್ರಭುತ್ವ.

–ಅಂಕರಾಜು ಎನ್, ಹೊಸಮಾಲಂಗಿ, ಕೊಳ್ಳೇಗಾಲ

ಅಹಿಂಸಾವಾದಿಯನ್ನು ಹಿಂಸಿಸಿ ಕೊಂದ ಕ್ರೂರಿಗಳಿಗೆ ಶಿಕ್ಷೆ ಬೇಗ ಜಾರಿಯಾಗಲಿ

ಮಾನ್ಯರೆ,

ಜೀವಿಗಳಿಗಲ್ಲದೇ, ನಿರ್ಜೀವಿಗಳಿಗೂ ಕೇಡು ಮಾಡದೇ ಅಹಿಂಸೆಯನ್ನು ತಮ್ಮ ಧರ್ಮದ ಪ್ರಮುಖ ತತ್ವವನ್ನಾಗಿ ಆಳವಡಿಸಿಕೊಂಡು ಅಹಿಂಸಾತ್ಮಕ ಬದುಕನ್ನು ತಮ್ಮ ಜೀವಿತದುದ್ದಕ್ಕೂ ಪಾಲನೆ ಮಾಡುವ ಜೈನ ಧರ್ಮದ ಒಬ್ಬ ಜೈನ ಮುನಿಯನ್ನು ಭೀಕರವಾಗಿ ಹತ್ಯೆ ಮಾಡಿರುವುದು ನಿಜಕ್ಕೂ ಮಾನವ ಕುಲಕ್ಕೆ ಅವಮಾನ.

ಬೆಳಗಾವಿ ಜಿಲ್ಲೆಯ ಚಿಕ್ಕೋಡಿಯ ನಂದಿಪರ್ವತ ಆಶ್ರಮದ ಜೈನ ಮುನಿಯಾದ ಕಾಮಕುಮಾರ ನಂದಿ ಮಹಾರಾಜ ಮುನಿಯನ್ನು ವಿದ್ಯುತ್ ಶಾಕ್ ನೀಡಿ ಕೊಲೆ ಮಾಡಿ ಅವರ ದೇಹವನ್ನು ತುಂಡು ತುಂಡಾಗಿ ಕತ್ತರಿಸಿ ಬೀಸಾಡಿರುವುದು ಎಂದಿಗೂ ಮಾನವ ಜಗತ್ತು ಕ್ಷಮಿಸಲಾರದ ಕೃತ್ಯವಾಗಿದೆ. ಈ ಜೈನ ಮುನಿಯ ಹತ್ಯೆ ಕೃತ್ಯದಲ್ಲಿ ಭಾಗಿಯಾದ ಕೊಲೆ ಪಾತಕಿಗಳಿಗೆ ನಿಷ್ಪಕ್ಷಪಾತ ತನಿಖೆ ನಡೆಸಿ ಅದಷ್ಟು ಬೇಗ ಕಠಿಣ ಶಿಕ್ಷೆ ಜಾರಿ ಮಾಡಿ. ಇಂತಹ ಕೃತ್ಯ ಎಸಗುವವರಿಗೆ ಎಚ್ಚರಿಕೆ ಸಂದೇಶವಾಗಿ, ಕಾಮಕುಮಾರ ನಂದಿ ಮಹಾರಾಜ ಜೈನ ಮುನಿಗಳ ಆತ್ಮಕ್ಕೆ ಶಾಂತಿ ಸಿಗುವಂತಾಗಲಿ.

–ಪವನ್ ಜಯರಾಂ, ಸಿದ್ದಯ್ಯನಪುರ, ಚಾ. ನಗರ

ಬಹುಮುಖಿ



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ : 94815 33167

ಜನಸಂಖ್ಯೆ ಹಿತಕಾರಿ; ಮೀರಿದರೆ ಆಘಾತಕಾರಿ



ಜುಲೈ 11, 'ವಿಶ್ವ ಜನಸಂಖ್ಯಾ ದಿನ'. ತನ್ನಿಮಿತ್ತ ಈ ಲೇಖನ

> ಜಗತ್ತಿನ ಜನಸಂಖ್ಯೆ ಎಷ್ಟು ವೇಗವಾಗಿ ಹೆಚ್ಚುತ್ತಿದೆಯೋ ಅಷ್ಟೇ ವೇಗದಲ್ಲಿ ಎಲ್ಲ ಸಮಸ್ಯೆಗಳೂ ಆಕ್ಟೋಪಸ್ ರೀತಿ ಜಗತ್ತನ್ನು ಆಕ್ರಮಿಸುತ್ತಿವೆ. ಅದರಲ್ಲೂ ನಮ್ಮ ಭಾರತ ದೇಶದಂತಹ ಅಭಿವೃದ್ಧಿಶೀಲ ರಾಷ್ಟ್ರಗಳಲ್ಲಿ ವರ್ಷ ವರ್ಷವೂ ಜನಸಂಖ್ಯೆ ಬೆಟ್ಟದಂತೆ ಬೆಳೆಯುತ್ತಿದ್ದು ಇದರಿಂದಾಗಿ ದೇಶದ ಅಭಿವೃದ್ಧಿಗೆ ಅಡ್ಡ ಆಗುವಂತಹ ಅನೇಕ ಸಮಸ್ಯೆಗಳು ಉಲ್ಬಣಗೊಳ್ಳುತ್ತಿವೆ. ಒಂದು ರೀತಿಯಲ್ಲಿ ಯಾವುದೇ ದೇಶಕ್ಕಾದರೂ ಜನಸಂಖ್ಯೆಯೇ ಸಂಪತ್ತು. ಆದರದು ಅತೀ ಆದರೆ ಅದೇ ದೇಶಕ್ಕೆ ಆಪತ್ತು. ಅತಿಯಾದರೆ ಅಮೃತ ಕೂಡ ವಿಷವಾಗುತ್ತದೆಂಬ ಮಾತು ಇಲ್ಲಿ ಹೆಚ್ಚು ಪ್ರಸ್ತುತವಾಗುತ್ತದೆ.

ಜನರಿದ್ದರೇನೇ ಎಲ್ಲ
ಜನರಿಲ್ಲದಿರೆ ಏನಿಲ್ಲ
ಜನಮಿತಿ ಮೀರಿದಂತೆಲ್ಲ
ಜನಾಪಾಯ ತಪ್ಪಿದ್ದಲ್ಲ!

ಕ್ರಿಸ್ತಶಕ ಆರಂಭದ ಕಾಲದಲ್ಲಿ ಜಗತ್ತಿನ ಜನಸಂಖ್ಯೆ ಇದ್ದದ್ದು ಕೇವಲ 30 ಕೋಟಿ. ಅದೇ 1804ರಲ್ಲಿ ಜಗತ್ತಿನ ಜನಸಂಖ್ಯೆ 1 ಬಿಲಿಯನ್. ಹಲವು ಸಾಂಕ್ರಾಮಿಕ ರೋಗ ರುಜಿನಗಳಿಂದ, ಸಾಮೂಹಿಕ ಸಾವುಗಳಿಂದಾಗಿ 20ನೇ ಶತಮಾನದವರೆಗೆ ಈ ಸಂಖ್ಯೆಯಲ್ಲೇನೂ ಹೆಚ್ಚು ಬದಲಾವಣೆಯಾಗಲಿಲ್ಲ. ಆದರೆ 1927ರಲ್ಲಿ ಜಗತ್ತಿನ ಜನಸಂಖ್ಯೆ 2 ಬಿಲಿಯನ್‌ಗೆ ಏರಿತು. ಇದು 1987ರಲ್ಲಿ 5 ಬಿಲಿಯನ್ ತಲುಪಿ 1999 ಅಕ್ಟೋಬರ್ 12ರಂದು 6 ಬಿಲಿಯನ್ ಆಗಿತ್ತು. ಆದರೀಗ ಜಗತ್ತಿನ ಜನಸಂಖ್ಯೆ ಎಷ್ಟು ಎಂಬುದು ನಿಮಗೆ ಗೊತ್ತೆ. 2011 ಅಕ್ಟೋಬರ್ 26ರಂದು ವಿಶ್ವ ಜನಸಂಖ್ಯೆಯ ಜನಸಂಖ್ಯಾನಿಧಿ (UNFPA - United Nations population) ಬಿಡುಗಡೆ ಮಾಡಿರುವ ವರದಿಯ ಪ್ರಕಾರ ವಿಶ್ವದ ಜನಸಂಖ್ಯೆ ಬರೋಬ್ಬರಿ 7 ಬಿಲಿಯನ್! ಒಂದು ಬಿಲಿಯನ್ ಎಂದರೆ ನೂರು ಕೋಟಿ. 1ರ ಮುಂದೆ ಒಂಬತ್ತು ಸೊನ್ನೆಗಳು 1000000000. ಏಳು ಬಿಲಿಯನ್ ಎಂದರೆ 7ರ ಮುಂದೆ ಒಂಬತ್ತು ಸೊನ್ನೆಗಳು 7000000000, ಏಳು ನೂರು ಕೋಟಿ! ಜಗತ್ತಿನ ಜನಸಂಖ್ಯೆ 2011 ವರದಿಯನ್ನು ಬರ್ಲಿನ್, ಕ್ಯಾನ್‌ಬೆರಾ, ಹೇಗ್, ಲಂಡನ್, ಮಾಸ್ಕೊ, ರೋಮ್, ಸ್ಟಾಕ್ ಹೋಮ್, ಟೋಕಿಯೋ, ವಾಷಿಂಗ್ಟನ್ ಸೇರಿದಂತೆ ಜಗತ್ತಿನ 120 ರಾಜಧಾನಿಗಳಲ್ಲಿ ಬಿಡುಗಡೆ ಮಾಡಲಾಗಿದ್ದು, ಈ ವರದಿಯು ಅರೆಬಿಕ್, ಚೀನಿ, ಇಂಗ್ಲೀಷ್, ಫ್ರೆಂಚ್, ರಷ್ಯನ್ ಮತ್ತು ಸ್ಪಾನಿಷ್ ಭಾಷೆಗಳಲ್ಲಿ ಲಭ್ಯವಿದೆ.

ವಿಶ್ವದ ಜನಸಂಖ್ಯೆ ಏಳು ನೂರು ಕೋಟಿ ಎಂದರೇನು ಸಾಮಾನ್ಯವೆ ಇದರಿಂದ ಮುಂದೆ ಬಂದೊದಗಬಹುದಾದ ಸಂಕಷ್ಟದ ದಿನಗಳನ್ನು ಊಹಿಸಲೂ ಆಗದಷ್ಟು ಆತಂಕ ಜಗತ್ತಿಗಿದೆ. ಹಾಗಾಗಿ ಜಾಗತಿಕ ಮಟ್ಟದಲ್ಲಿ ಜನಸಂಖ್ಯೆ ಏರುವಿಕೆಯನ್ನು ನಿಯಂತ್ರಿಸಲು ಹಾಗೂ ಜಗತ್ತಿನ ಜನಭರಿತ ಸ್ವರೂಪದ ಬಗ್ಗೆ ಜನಜಾಗೃತಿ ಮೂಡಿಸಲು ವಿಶ್ವಸಂಸ್ಥೆಯ ಜನಸಂಖ್ಯಾನಿಧಿಯು (UNFPA) ಜಗತ್ತಿನಾದ್ಯಂತ ಜನಸಂಖ್ಯೆ ಸಮಸ್ಯೆ ಕುರಿತು ಪ್ರತಿ ವರ್ಷ ಮಾಹಿತಿ ನೀಡಲು ಬಹಳ ಹಿಂದಿನಿಂದಲೂ ಪ್ರಯತ್ನಿಸುತ್ತಿದೆ. ಈ ಹಿನ್ನೆಲೆಯಲ್ಲಿ ಇಸವಿ 1974 ಅನ್ನು 'ವಿಶ್ವ ಜನಸಂಖ್ಯಾ ವರ್ಷ' ಎಂದು ವಿಶ್ವಸಂಸ್ಥೆ ಘೋಷಿಸಿತ್ತು. ಹಾಗೆಯೇ 1987ರಲ್ಲಿ ಜಗತ್ತಿನ ಜನಸಂಖ್ಯೆ 500 ಕೋಟಿ ಮುಟ್ಟಿದ ದಿನದಂದು ವಿಶ್ವಸಂಸ್ಥೆ 'ವಿಶ್ವ ಜನಸಂಖ್ಯಾ ದಿನ' ಎಂದು ಘೋಷಿಸಿ ಪ್ರತಿವರ್ಷ ಆಚರಿಸಲಾಗುತ್ತಿದೆ.

ಅದರಂತೆ ಜುಲೈ ಹನ್ನೊಂದು ವಿಶ್ವ ಜನಸಂಖ್ಯಾ ದಿನ. ಕನಿಷ್ಟ ಈ ದಿನವಾದರೂ ಜನಸಂಖ್ಯಾ ಸ್ಫೋಟದ ಪರಿಣಾಮದ ಬಗ್ಗೆ ಪ್ರತಿಯೊಬ್ಬರೂ ಚಿಂತಿಸುವ ಅವಶ್ಯಕತೆ ಖಂಡಿತ ಇದೆ. ಅದಕ್ಕಾಗಿಯೇ ಈ ದಿನವನ್ನು ಗೊತ್ತು ಮಾಡಲಾಗಿದೆ. ಆದರೆ ಇದರ ಬಗ್ಗೆ ಆಳವಾಗಿ ಇಳಿದು, ಇದು ಏರಿ ನಿಂತಿರುವ ಎತ್ತರವನ್ನು ಕತ್ತೆತ್ತಿ ನೋಡಿದರೆ ಗಾಬರಿಯಾಗುತ್ತದೆ. ಮುಂದಿನ ದಿನಗಳಲ್ಲಿ ಮಾನವ ಕೋಟಿಗೆ ಜನಸಂಖ್ಯಾ ಸ್ಫೋಟದಿಂದ ಬಂದೊದಗಬಹುದಾದ ವಿಪತ್ತುಗಳ ಸರಮಾಲೆಗಳನ್ನು ಊಹಿಸಿಕೊಂಡರೆ ಸಾಕು ಒಂದು ಕ್ಷಣ ಎದೆಬಡಿತವೇ ನಿಂತಂತಾಗುತ್ತದೆ!

ಪ್ರಳಯ ಪ್ರಳಯವೆಂದು ಬೊಬ್ಬೆಯಿಡುತ್ತಿರುವ ಮಂದಿಗೆ ಇನ್ನೂ ಗೊತ್ತಿಲ್ಲ; ಎಲ್ಲ ಪ್ರಳಯಕ್ಕಿಂತಲೂ ಅಪಾಯಕಾರಿಯಾದ ಜನಸಂಖ್ಯಾ ಸ್ಫೋಟದ ಪ್ರಳಯವೊಂದಿದೆಯೆಂದು. ಇದು ಅಗತ್ಯ ಮೀರಿ ಸ್ಫೋಟಗೊಂಡರೆ ಜಗತ್ತು ಉಳಿದೀತೆ. ಭೂಮಿಯ ಮೇಲೆ ಜನ ಬದುಕಲಾದೀತೆ. ಅನ್ನವಿರಲಿ, ಗಾಳಿ, ನೀರು, ನೆರಳು ಯಾವುದೂ ಕೈಗೆಟುಕದಾಗುತ್ತದೆ. ಒಂದು ಪಕ್ಷ ಎಟುಕಿದರೂ ಅರೆ ಹೊಟ್ಟೆ ಅರೆ ಉಸಿರು, ಅರೆ ಗುಟುಕು, ಅರೆ ವಾಸವಾಗಿ ಸೆರೆವಾಸಕ್ಕಿಂತಲೂ ಮಾನವಕುಲ ಕಷ್ಟ ಪಡಬೇಕಾಗುತ್ತದೆ. ಏಕೆಂದರೆ ಬಿಲ್ಲಿನಿಂದ ಬಿಟ್ಟ ಬಾಣದಂತೆ ಶರವೇಗದಲ್ಲಿ ಇಂದು ದಿನದಿಂದ ದಿನಕ್ಕೆ ಜಗತ್ತಿನ ಜನಸಂಖ್ಯೆ ಏರುತ್ತಿದೆ. ಬಹುಶಃ ಇದೇ ಪ್ರಳಯದ ಮುನ್ಸೂಚನೆ ಇರಬಹುದೇನೋ? ಮಿತಿ ಮೀರಿ ಜನಸಂಖ್ಯೆ ಸ್ಫೋಟಗೊಂಡರೆ ಮುಗಿಯಿತು, ಜಗತ್ತಿಗೆ ಯಾವ ಬಾಂಬನ್ನೂ ಹಾಕಲೇಬೇಕಾಗಿಲ್ಲ. ಯಾವ ಚಂಡ ಮಾರುತವೂ ಅಪ್ಪಳಿಸಬೇಕಾಗಿಲ್ಲ. ಜನಸಂಖ್ಯಾ ಸ್ಫೋಟವೊಂದೇ ಎಲ್ಲಾ ವಿನಾಶಕ್ಕೂ ನಾಂದಿಯಾಡಿಬಿಡುತ್ತದೆ. ಇದಕ್ಕಿಂತ ಪ್ರಳಯಬೇಕೆ.

ಜಗತ್ತಿನ ಜನಸಂಖ್ಯೆ ಎಷ್ಟು ವೇಗವಾಗಿ ಹೆಚ್ಚುತ್ತಿದೆಯೋ ಅಷ್ಟೇ ವೇಗದಲ್ಲಿ ಎಲ್ಲ ಸಮಸ್ಯೆಗಳೂ ಆಕ್ಟೋಪಸ್ ರೀತಿ ಜಗತ್ತನ್ನು ಆಕ್ರಮಿಸುತ್ತಿವೆ. ಅದರಲ್ಲೂ ನಮ್ಮ ಭಾರತ ದೇಶದಂತಹ ಅಭಿವೃದ್ಧಿಶೀಲ ರಾಷ್ಟ್ರಗಳಲ್ಲಿ ವರ್ಷ ವರ್ಷವೂ ಜನಸಂಖ್ಯೆ ಬೆಟ್ಟದಂತೆ ಬೆಳೆಯುತ್ತಿದ್ದು ಇದರಿಂದಾಗಿ ದೇಶದ ಅಭಿವೃದ್ಧಿಗೆ ಅಡ್ಡ ಆಗುವಂತಹ ಅನೇಕ ಸಮಸ್ಯೆಗಳು ಉಲ್ಬಣಗೊಳ್ಳುತ್ತಿವೆ. ಒಂದು ರೀತಿಯಲ್ಲಿ ಯಾವುದೇ ದೇಶಕ್ಕಾದರೂ ಜನಸಂಖ್ಯೆಯೇ ಸಂಪತ್ತು. ಆದರದು ಅತೀ ಆದರೆ ಅದೇ ದೇಶಕ್ಕೆ ಆಪತ್ತು. ಅತಿಯಾದರೆ ಅಮೃತ ಕೂಡ ವಿಷವಾಗುತ್ತದೆಂಬ ಮಾತು ಇಲ್ಲಿ ಹೆಚ್ಚು ಪ್ರಸ್ತುತವಾಗುತ್ತದೆ. ಜನಸಂಖ್ಯೆ ನಮ್ಮಲ್ಲಿ ಎಷ್ಟು ಬೇಗ ಹೆಚ್ಚುತ್ತಾ ಹೋಗುತ್ತಿದೆ ಅಂದರೆ ನಮ್ಮ ದೇಶದ ಜನಸಂಖ್ಯೆ 1901ರಲ್ಲಿ 23.84 ಕೋಟಿ ಇದ್ದದ್ದು, 1921ರಲ್ಲಿ 25.13 ಕೋಟಿ, 1931ರಲ್ಲಿ 27.89 ಕೋಟಿ, 1951ರಲ್ಲಿ 36.10 ಕೋಟಿ, 1961ರಲ್ಲಿ 43.92 ಕೋಟಿ, 1971ರಲ್ಲಿ 54.82 ಕೋಟಿ, 1981ರಲ್ಲಿ 58.38 ಕೋಟಿ, 1991ರಲ್ಲಿ 84.82 ಕೋಟಿಯಾಗಿದ್ದು 2001ರ ಜನಗಣತಿಯ ಪ್ರಕಾರ ನಮ್ಮ ದೇಶದ ಜನಸಂಖ್ಯೆ 102 ಕೋಟಿ. ಆದರೀಗ ಅದು 2011ರ ಜನಗಣತಿಯ ಪ್ರಕಾರ 121 ಕೋಟಿ. ಹತ್ತು ವರ್ಷದಲ್ಲಿಯೇ ತುಸು ಹೆಚ್ಚು ಕಡಿಮೆ ಇಪ್ಪತ್ತು ಕೋಟಿಯಷ್ಟು ಹೆಚ್ಚಿದರೆ ಬರಲಿರುವ ದಶಕಗಳಲ್ಲಿ ಜನಸಂಖ್ಯೆ ಯಾವ ಪ್ರಮಾಣದಲ್ಲಿ ಹೆಚ್ಚಬಹುದೆಂಬುದರ ಅರಿವು ಯಾರಿಗಾದರೂ ಅರ್ಥವಾಗುತ್ತದೆ. ಹಾಗೆಯೇ ಭಾರತಕ್ಕಿಂತಲೂ ಜನಸಂಖ್ಯೆ ಹೆಚ್ಚಳದಲ್ಲಿ ಹಲವು ಹೆಜ್ಜೆ ಮುಂದೆ ಇದ್ದು, ವಿಶ್ವದಲ್ಲೇ ನಂಬರ್ ಒನ್ ಸ್ಥಾನಗಳಿಸಿರುವ ಚೀನಾ ದೇಶದ ಜನಸಂಖ್ಯೆಯ ಏರಿಕೆಯ ವೇಗ ಊಹಿಸಲಸದಳವೇ ಸರಿ! ಒಂದು ಅಚ್ಚರಿಯ ವಿಷಯವೆಂದರೆ 2050ಕ್ಕೆ ಭಾರತದ ಜನಸಂಖ್ಯೆ ಚೀನಾದೇಶವನ್ನು ಹಿಂದೆ ತಳ್ಳಿ ವಿಶ್ವದಲ್ಲಿಯೇ ನಂಬರ್ ಒನ್ ಸ್ಥಾನ ಗಳಿಸಿದ್ದ ಚೀನಾವನ್ನು ಭಾರತ ಹಿಂದಿಕ್ಕಿದೆ.

2050ರ ಹೊತ್ತಿಗೆ ವಿಶ್ವಜನ ಸಂಖ್ಯೆಯೂ ಏರಿಕೆಯಾಗಿ ಈಗಿರುವ 700 ಕೋಟಿ ಜನಸಂಖ್ಯೆಗೆ 3.5 ಶತಕೋಟಿ ಜನ ಸೇರುತ್ತಾರೆಂದೂ ಅಂದಾಜಿಸಲಾಗಿದೆ. ಅಲ್ಲಿಗೆ ಪ್ರಪಂಚದ ಜನಸಂಖ್ಯೆ 1000 ಕೋಟಿ ಮೀರುತ್ತದೆ. ಇದರಿಂದಾಗಿ ಜನಜೀವನದ ಮೂಲಭೂತ ಸೌಲಭ್ಯಗಳು ಸೇರಿದಂತೆ ಎಲ್ಲದರ ಮೇಲೂ ಹೊಡೆತ ಬೀಳಲಿದ್ದು ಜೀವನಾಧಾರವೂ ಅತಿಮುಖ್ಯವೂ ಆದ ಜಲಮೂಲಕ್ಕೆ ಸ್ವಲ್ಪ ಹೆಚ್ಚಿನ ಹೊಡೆತವೇ ಬೀಳುತ್ತದೆ. ಏಕೆಂದರೆ ಜನಸಂಖ್ಯಾ ಪ್ರವಾಹ ಏರುತ್ತಿದೆ ಎಂದರೆ ನೀರಿನ ಬಳಕೆ ಹೆಚ್ಚುತ್ತಿದೆ ಎಂದೇ ಅರ್ಥ. ಇದು ಜಲಮೂಲದ ಮೇಲಿನಷ್ಟೇ ನೈಸರ್ಗಿಕ ವ್ಯವಸ್ಥೆಯ ಮೇಲೂ ತೀವ್ರ ಪರಿಣಾಮ ಬೀರುತ್ತದೆ. ನೀರನ್ನು ಮಾನವನು ನೇರವಾಗಿ ಬಳಕೆ ಮಾಡುತ್ತಿರು ವುದರಿಂದ ಮತ್ತು ಬೇಸಾಯಕ್ಕಾಗಿ ಅಂತರ್ಜಲವನ್ನು ದುಡಿಸಿಕೊಳ್ಳುತ್ತಿರುವುದರಿಂದ ಜನಸಂಖ್ಯಾ ಸ್ಫೋಟದಿಂದ ವಿಶ್ವದ ಮುಖ್ಯ ಜಲಕುಹರ (ನೀರ್ಪೊಟರೆ)ಗಳು ಜನಸಂಖ್ಯಾ ಏರಿಕೆಯ ವೇಗದಲ್ಲೇ ಕ್ರಮೇಣ ಬತ್ತಿಹೋಗುತ್ತವೆ. ಸದ್ಯಕ್ಕೆ ಜಗತ್ತಿನಾದ್ಯಂತ ಲಕ್ಷಾಂತರ ಪಂಪುಗಳು ಅಂತರ್ಜಲ ಎತ್ತುವ ಕಾರ್ಯದಲ್ಲಿ ತೊಡಗಿವೆ. ಜನಸಂಖ್ಯಾ ದೈತ್ಯ ದೇಶಗಳೆಂದೇ ಹೆಸರಾಗಿರುವ ಚೀನಾ ಮತ್ತು ಭಾರತದಂಥ ದೇಶಗಳಲ್ಲಿ ತಡೆಯಲ ಸಾಧ್ಯವಾದ ವೇಗದಲ್ಲಿ ಅಂತರ್ಜಲವನ್ನು ತೆಗೆದು ನೀರಾವರಿಗಾಗಿ ಬಳಸಲಾಗುತ್ತಿದೆ. ಮೆಕ್ಸಿಕೊ ನಗರ, ಬ್ಯಾಂಕಾಕ್, ಮನಿಲಾ, ಬೀಜಿಂಗ್, ಮದ್ರಾಸ್ ಮತ್ತು ಶಾಂಘೈ ಇವುಗಳೆಲ್ಲ 10 ರಿಂದ 50 ಮೀಟರ್ ಜಲಕುಹರ ಬತ್ತುವಿಕೆ ಯಿಂದ ಬಳಲುತ್ತಿರುವ ಪಟ್ಟಣಗಳು. ಇದಕ್ಕೆ ಕಾರಣವೇ ಜನಸಂಖ್ಯಾ ಸ್ಫೋಟ.

ಇಂದು ಜನಸಂಖ್ಯಾ ಹೆಚ್ಚಳದ ವೇಗ ವಿಶ್ವವನ್ನೇ ಕಾಡುತ್ತಿದ್ದು ಇದನ್ನು ಕಡಿಮೆಗೊಳಿಸುವಲ್ಲಿ ಎಲ್ಲ ದೇಶಗಳಲ್ಲೂ ವಿಶ್ವಪ್ರಯತ್ನವೇ ನಡೆಯುತ್ತಿದೆ. ಅದರಲ್ಲೂ ವಿಶೇಷವಾಗಿ ಚೀನಾ ಮತ್ತು ಭಾರತ ಎಂಬೆರೆಡು ಜನಸಂಖ್ಯಾ ದೈತ್ಯ ದೇಶಗಳಲ್ಲಿ ಜನಸಂಖ್ಯೆಯ ಬಳುವಳಿಯಾದ ಬಡತನ ತಗ್ಗಿಸುವ ಪ್ರಕ್ರಿಯೆ ಭರದಿಂದ ಸಾಗಿದ್ದು ಇದರೊಡನೆ ಜನಸಂಖ್ಯೆ ನಿಯಂತ್ರಿಸುವ ಕಾರ್ಯವೂ ಅಷ್ಟೇ ವೇಗವಾಗಿ ನಡೆಯುತ್ತಿದೆ. ಈ ಕಾರ್ಯಕ್ಕೆ ವಿಶ್ವವೇ ಬೇಡುತ್ತಿದೆ ಪ್ರತಿಯೊಬ್ಬ ಪ್ರಜೆಯ ಸಹಕಾರವನ್ನು. ನಾವಿದನ್ನು ನೀಡುತ್ತೇವೆಂಬ ಪ್ರತಿಜ್ಞೆಯನ್ನು ಇಂದೇ ಮಾಡಬೇಕಾಗಿದೆ.

ಜನಸಂಖ್ಯಾ ಸ್ಫೋಟವು ನೇರವಾಗಿ ದೇಶದ ಆರ್ಥಿಕತೆಯ ಮೇಲೆ ತುಂಬಾ ಪರಿಣಾಮ ಬೀರುತ್ತದೆ. ಜನರಿಗೆ ಸರಿಯಾದ ಸೌಲಭ್ಯಗಳನ್ನು ಕಲ್ಪಿಸಲು ಸಾಧ್ಯವಾಗದ ಪರಿಸ್ಥಿತಿ ತಲೆದೋರಬಹುದು. ಆದ್ದರಿಂದ ಪ್ರಜ್ಞಾವಂತ ನಾಗರಿಕರೆಲ್ಲರೂ ಜನಸಂಖ್ಯೆ ಏರಿಕೆಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಚಿಂತಿಸಬೇಕಾಗಿದೆ.



ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ ನಡೆದ ಡಾ. ಮೃತ್ಯುಂಜಯಪ್ಪ ಆದರ್ಶ ವೈದ್ಯ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಂವಹನ ಪ್ರಕಾಶಕರು ಪ್ರಕಟಿಸಿರುವ ಪ್ರಸನ್ನಮೂರ್ತಿ ಗುರುವಿನಪುರ ಅವರ ಕಥಾಸಂಕಲನ "ತೆಂಕಣ ಸೀಮೆಯ ಕಥೆಗಳು" ಕೃತಿಯನ್ನು ಲೋಕಸಭಾ ಸದಸ್ಯರಾದ ಶ್ರೀಮತಿ ಸುಮಲತಾ ಅಂಬರೀಶ್ ಲೋಕಾರ್ಪಣೆ ಮಾಡಿದರು. ಈ ವೇಳೆ ಲೇಖಕರಾದ ಪ್ರಸನ್ನಮೂರ್ತಿ ಗುರುವಿನಪುರ, ಪ್ರಕಾಶಕ ಡಿ.ಎನ್. ಲೋಕಪ್ಪ, ವಿಧಾನಪರಿಷತ್ ಸದಸ್ಯ ಕೆ.ಎಸ್. ನವೀನ್, ಪ್ರಶಸ್ತಿ ಪುರಸ್ಕೃತರಾದ ಡಾ. ಶಾಲಿನಿ ನಲ್ವಾಡ್, ಶಾರದಾ ಶಿವಲಿಂಗಸ್ವಾಮಿ, ಶ್ರೀಮತಿ ಸುಧಾ ಮೃತ್ಯುಂಜಯಪ್ಪ, ಡಾ. ಎಚ್. ಬಸವನಗೌಡಪ್ಪ, ಮ.ಗು. ಸದಾನಂದಯ್ಯ, ಹೆಳವರಹುಂಡಿ ಸಿದ್ದಪ್ಪ ಉಪಸ್ಥಿತರಿದ್ದಾರೆ.

ಪಿಎಸ್‌ಐ ನೇಮಕಾತಿ ಹಗರಣ: ಹೈಕೋರ್ಟ್‌ಗೆ ವರದಿ ಸಲ್ಲಿಕೆ

ಬೆಂಗಳೂರು: ಪೊಲೀಸ್ ಸಬ್ ಇನ್‌ಸ್ಪೆಕ್ಟರ್‌ಗಳ (ಪಿಎಸ್‌ಐ) ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಆರೋಪಿಗಳ ವಿರುದ್ಧ ಯಾವ್ಯಾವ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿವೆ ಮತ್ತು ಅವುಗಳ ಸ್ಥಿತಿಗತಿ ಏನಿದೆ ಎಂಬುದರ ಕುರಿತಂತೆ ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸಿದೆ.

ಕಳಂಕಿತ ಮತ್ತು ಕಳಂಕರಹಿತ ಅಭ್ಯರ್ಥಿಗಳನ್ನು ಪ್ರತ್ಯೇಕಿಸಿ, ನೇಮಕಾತಿ ಆದೇಶ ನೀಡಲು ಸರ್ಕಾರಕ್ಕೆ ನಿರ್ದೇಶಿಸಬೇಕು' ಎಂದು ಕೋರಿ ಆಯ್ಕೆಯಾದ ನೂರಕ್ಕೂ ಹೆಚ್ಚು ಅಭ್ಯರ್ಥಿಗಳು ಸಲ್ಲಿಸಿರುವ ಅರ್ಜಿಗಳನ್ನು, ನ್ಯಾಯಮೂರ್ತಿ ಜಿ.ನರೇಂದರ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಹೆಚ್ಚುವರಿ ಅಡ್ವೋಕೇಟ್ ಜನರಲ್ ರೂಬೆನ್ ಜಾಕಬ್, ಪರೀಕ್ಷೆಯಲ್ಲಿ ಆಯ್ಕೆಯಾಗಿರುವ ಮತ್ತು ಯಾವುದೇ ಆರೋಪಕ್ಕೆ ಗುರಿಯಾಗದೇ ಇರುವ ಅಭ್ಯರ್ಥಿಗಳಿಗೆ ಮತ್ತೊಂದು ಪರೀಕ್ಷೆ ನಡೆಸದಿರಲು ಸರ್ಕಾರ ಕೈಗೊಂಡಿರುವ ನಿರ್ಧಾರಕ್ಕೆ ಸಂಬಂಧಿಸಿದ ಮಾಹಿತಿಯನ್ನು ನ್ಯಾಯಪೀಠಕ್ಕೆ ಒದಗಿಸಿದರು.

ವಿದ್ಯಾರ್ಥಿಗಳ ಏಕಾಗ್ರತೆಗೆ ವಚನ ಸಾಹಿತ್ಯ ಸಹಕಾರಿ



ನರಸೀಪುರ, ಜು. 10– ವಿದ್ಯಾರ್ಥಿಗಳ ಏಕಾಗ್ರತೆಗೆ ವಚನ ಸಾಹಿತ್ಯ ಸಹಕಾರಿಯಾಗಿದೆ ಎಂದು ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕಿ ರೂಪ ಕುಮಾರಸ್ವಾಮಿ ಹೇಳಿದರು.

ಶರಣು ವಿಶ್ವವಚನ ಫೌಂಡೇಷನ್ ವತಿಯಿಂದ ಕೊಪ್ಪದ ಲಲಿತಾ ಮತ್ತು ರುದ್ರಪ್ಪನವರ ದತ್ತಿ ಅಂಗವಾಗಿ ನರಸೀಪುರ ತಾ. ಬೆನಕನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ 67ನೇ ಶಾಲೆಗಳೆಡೆಗೆ ವಚನಗಳ ನಡಿಗೆ ಹಾಗೂ ಮಂಜುಳಾ ಶಿವಪ್ರಸಾದ್ ದಾಸೋಹದ ಅಂಗವಾಗಿ ನೋಟ್ ಬುಕ್ ಮತ್ತು ಲೇಖನ ಸಾಮಗ್ರಿ ವಿತರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅತ್ತಲಿತ್ತ ಹೋಗದಂತೆ ಹೆಳವನ ಮಾಡಯ್ಯ ತಂದೆ, ಮತ್ತೊಂದ ಕೇಳದಂತೆ ಕಿವುಡನ ಮಾಡಯ್ಯ ತಂದೆ ಎಂಬ ಬಸವಣ್ಣನವರ ವಚನ ವಿದ್ಯಾರ್ಥಿಗಳಲ್ಲಿ ಏಕಾಗ್ರತೆ ಜೊತೆಗೆ ಆತ್ಮವಿಶ್ವಾಸ ಮೂಡಿಸಲು ಸಹಕಾರಿಯಾಗಿದೆ.

ವಚನ ಸಾಹಿತ್ಯದಲ್ಲಿರುವ ವಚನಗಳನ್ನು ಓದಿ ಅದರಂತೆ ನಡೆದರೆ ಶಿಕ್ಷಕರು ಮತ್ತು ಪೋಷಕರ ಬಗ್ಗೆ ಗೌರವ ಭಾವನೆಯನ್ನು ಹೊಂದಿ ಉತ್ತಮ ವಿದ್ಯಾರ್ಥಿಗಳಾಗಿ ರೂಪುಗೊಳ್ಳಲು ಸಾಧ್ಯ ಎಂದರು. ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿದ ನಿವೃತ್ತ ಪ್ರಾಂಶುಪಾಲೆ ಮಂಜುಳ ಶಿವಪ್ರಸಾದ್ ಗುರು ಶಿಷ್ಯರ ನಡುವಿನ ಬಾಂಧವ್ಯ ಗಟ್ಟಿಯಾದಾಗ ಅದು ಜೀವನ ಪರ್ಯಂತ ಇರುತ್ತದೆ. ಉತ್ತಮ ಮೌಲ್ಯಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಂಡು ಪಠ್ಯ ಮತ್ತು ಪಠ್ಯೇತರ ಚಟುವಟಿಕೆ ಎರಡರಲ್ಲೂ ಆಸಕ್ತಿಯನ್ನು ಹೊಂದಬೇಕು ಎಂದರು.

ನಂತರ 20 ವಿದ್ಯಾರ್ಥಿಗಳು ವಚನ ವಾಚನ ಮಾಡಿದರು. 115 ವಿದ್ಯಾರ್ಥಿಗಳಿಗೆ ನೋಟ್‌ಬುಕ್, ಲೇಖನ ಸಾಮಗ್ರಿ, ವಚನ ಪುಸ್ತಕ ಮತ್ತು ವಚನ ದೀವಿಗೆ ಪ್ರಮಾಣಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಸೋಮಾನಿ ಡಿ.ಎಡ್ ಕಾಲೇಜಿನ ಉಪನ್ಯಾಸಕಿ ಹೇಮಲತಾ, ಬಾದಾಮಿ ತಾ. ಗೋವನಕೊಪ್ಪ ಪ್ರೌಢಶಾಲೆಯ ಎಸ್.ವೈ ಪಾಟೀಲ್, ಶಾಲಾ ಮುಖ್ಯಶಿಕ್ಷಕ ಪಿ.ಎನ್ ವೆಂಕಟರಾಜು ಶಿಕ್ಷಕರಾದ ಬಿ.ಎಸ್ ಭಾಗ್ಯ, ಎಂ.ಎನ್ ನಾಗವೀಣ, ಎಂ. ಕುಸುಮ ಮತ್ತು ಎಸ್ ವಿಜಯಕುಮಾರ್ ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರಿನ ವಿವಿಧೆಡೆ ವಿಜೃಂಭಣೆಯ ಚಾಮುಂಡೇಶ್ವರಿ ವರ್ಧಂತಿ

ಮೈಸೂರು,ಜು.10(ಎಂಟಿವೈ)– ಮೈಸೂರಿನ ವಿವಿಧೆಡೆ ಸೋಮವಾರ ನಾಡ ದೇವಿ ಚಾಮುಂಡೇಶ್ವರಿಯ ವರ್ಧಂತಿ ಮಹೋತ್ಸವವನ್ನು ಅರ್ಥಪೂರ್ಣವಾಗಿ ವಿಜೃಂಭಣೆಯಿಂದ ನೆರವೇರಿಸಲಾಯಿತು.

ಮೈಸೂರಿನ ವಿವಿಧ ಬಡಾವಣೆಗಳಲ್ಲಿರುವ ಚಾಮುಂಡೇಶ್ವರಿ ದೇವಾಲಯದಲ್ಲೂ ವಿಶೇಷ ಪೂಜಾ ಕಾರ್ಯ ಜರುಗಿಸಿದರೆ, ವಿವಿಧ ಸಂಘ ಸಂಸ್ಥೆಗಳ ವತಿಯಿಂದಲೂ ಚಾಮುಂಡೇಶ್ವರಿ ದೇವಿಯ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಅನ್ನಸಂತರ್ಪಣೆ ಏರ್ಪಡಿಸುವ ಮೂಲಕ ಭಕ್ತಿ ಪಸರಿಸಿದರು. ಬಹುತೇಕ ಎಲ್ಲಾ ಬಡಾವಣೆಗಳಲ್ಲೂ ನಾಡದೇವಿಯ ಫೋಟೋ ಪ್ರತಿಷ್ಠಾಪಿಸಿ ಅಲಂಕಾರ ಮಾಡಿ ಪೂಜೆ ನಡೆಸಿದ್ದು ಗಮನ ಸೆಳೆಯಿತು.

ಕುವೆಂಪುನಗರ, ದೇವರಾಜ ಮೊಹಲ್ಲಾ, ನಂಜುಮಳಿಗೆ, ಚಾಮುಂಡಿಪುರಂ, ಕುರುಬಾರಹಳ್ಳಿ, ಸಿದ್ಧಾರ್ಥನಗರ, ಜನತಾ ನಗರ, ಟಿ.ಕೆ.ಲೇಔಟ್, ಪಡುವಾರಹಳ್ಳಿ, ಕೆ.ಜಿ.ಕೊಪ್ಪಲು, ಹೆಬ್ಬಾಳು, ಕುಂಬಾರ ಕೊಪ್ಪಲು, ವಿದ್ಯಾನಗರ, ಇಟ್ಟಿಗೆಗೂಡು, ತಿಲಕ್‌ನಗರ, ಲಷ್ಕರ್‌ಮೊಹಲ್ಲಾ, ಶಾರದಾ ದೇವಿನಗರ, ಚಾಮರಾಜ ಮೊಹಲ್ಲಾ, ವಾಣಿ ವಿಲಾಸ ರಸ್ತೆ, ಒಂಟಿಕೊಪ್ಪಲು, ಯಾದವಗಿರಿ, ನಜರ್‌ಬಾದ್, ಗಾಯತ್ರಿ ಪುರಂ ಸೇರಿದಂತೆ ಇನ್ನಿತರ ಕಡೆಗಳಲ್ಲಿರುವ ಚಾಮುಂಡೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅನ್ನಸಂತರ್ಪಣೆ ಮಾಡಲಾಯಿತು.

ಪ್ರಸಾದದೊಂದಿಗೆ ಗಿಡ ವಿತರಣೆ: ಮೈಸೂರಿನ ವಿದ್ಯಾರಣ್ಯಪುರಂನಲ್ಲಿ ಅಲ್ಟ್ರಾ ರೇಡಿಯಂಸ್ ನೆರವಿನೊಂದಿಗೆ ಜ್ಞಾನ ಸಮುದ್ರ ಸೇವಾ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ವರ್ಧಂತಿ ಮಹೋತ್ಸವ ವಿಭಿನ್ನವಾಗಿ ಆಚರಿಸಲಾಯಿತು. ಭಕ್ತಿಯೊಂದಿಗೆ ಪರಿಸರ ಕಾಳಜಿ ಮೂಡಿಸಲಾಯಿತು. ಚಾಮುಂಡೇಶ್ವರಿ ದೇವಿಯ ಭಾವಚಿತ್ರಕ್ಕೆ ವಿಶೇಷ ಅಲಂಕಾರ ಮಾಡಿ, ಪೂಜೆ ಸಲ್ಲಿಸಲಾಯಿತು.

ಬಳಿಕ ನೂರಾರು ಮಂದಿಗೆ ಪ್ರಸಾದ ವಿತರಣೆ ಮಾಡಲಾಯಿತು. ಇದೇ ವೇಳೆ ಬೂತಾಳೆ ಪಿಚ್ ಮೈದಾನದ ಸುತ್ತಲೂ 20ಕ್ಕೂ ಹೆಚ್ಚು ಗಿಡ ನೆಟ್ಟು, ಟ್ರೀಗಾರ್ಡ್ ಅಳವಡಿಸಲಾಯಿತು. ಬಳಿಕ ಪ್ರಸಾದ ಸ್ವೀಕರಿಸಲು ಬಂದ ಆಸಕ್ತ 100 ಮಂದಿಗೆ ಹೊಂಗೆ, ಕಾಡು ಬಾದಾಮಿ, ಬೇವು ಸೇರಿದಂತೆ ಪರಿಸರಕ್ಕೆ ಪೂರಕವಾದ ವಿವಿಧ ತಳಿಯ ಗಿಡಗಳನ್ನು ಉಚಿತವಾಗಿ ವಿತರಿಸಲಾಯಿತು. ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸಲು ವಿವಿಧ ಘೋಷಣೆಯುಳ್ಳ ಫಲಕ ಅಳವಡಿಸಲಾಗಿತ್ತು. ಈ ಸಂದರ್ಭದಲ್ಲಿ ಜ್ಞಾನ ಸಮುದ್ರ ಸೇವಾ ಟ್ರಸ್ಟ್ ಅಧ್ಯಕ್ಷ ರಾಮ ಪ್ರಸಾದ್, ಉಪಾಧ್ಯಕ್ಷ ಆರ್.ಸಂಜಯ್, ಖಜಾಂಚಿ ಸೋಮಶೇಖರ್, ಸುರೇಶ್ ರಾವ್, ಕಾಂತರಾಜು ಹಾಗೂ ಇನ್ನಿತರರು ಉಪಸ್ಥಿತರಿದ್ದು, ವರ್ಧಂತಿ ಮಹೋತ್ಸವ ಆಚರಿಸಿದರು.

ದೇವಾಲಯಗಳಲ್ಲೂ ರಷ್: ವರ್ಧಂತಿ ಹಿನ್ನೆಲೆಯಲ್ಲಿ ವಿಜಯನಗರದ ಯೋಗಾ ನರಸಿಂಹಸ್ವಾಮಿ ದೇವಾಲಯ, ಸಪ್ತ ಮಾತೃಕೆ ದೇವಾಲಯ, ಚಾಮರಾಜ ಮೊಹಲ್ಲಾದ ಕುರುಬರ ಶ್ರೀರಾಮ ಮಂದಿರ, ಸರಸ್ವತಿಪುರಂ ಬಂದಂತಮ್ಮ ದೇವಾಲಯ ಸೇರಿದಂತೆ ಇನ್ನಿತರ ಕಡೆಗಳಲ್ಲೂ ವಿಶೇಷ ಪೂಜೆಯನ್ನು ದೇವಿಗೆ ಸಲ್ಲಿಸಲಾಯಿತು. ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಜೀವಧಾರ ರಕ್ತ ನಿಧಿ ಕೇಂದ್ರದ ಮುಂಭಾಗ ಚಾಮುಂಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ನಂತರ ಭಕ್ತಾದಿಗಳಿಗೆ ಪ್ರಸಾದ ವಿತರಿಸಲಾಯಿತು. ಜೀವಧಾರ ಸನ್ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಮುತ್ತಣ್ಣ, ಸೂರಜ್, ಸದಾಶಿವ್, ಚಂದ್ರು, ಕೇಬಲ್ ವಿಜಿ ಇನ್ನಿತರರು ಹಾಜರಿದ್ದರು. ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘ, ಪ್ರಜ್ಞಾವಂತ ನಾಗರಿಕ ವೇದಿಕೆ ವತಿಯಿಂದ ಚಾಮುಂಡಿ ಬೆಟ್ಟದಲ್ಲಿ ಭಕ್ತಾದಿಗಳಿಗೆ ಲಡ್ಡು ವಿತರಿಸಲಾಯಿತು. ಬನ್ನಿಮಂಟಪದಲ್ಲಿರುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಘಟಕ–1ರಲ್ಲಿ ಚಾಮುಂಡೇಶ್ವರಿ ವರ್ಧಂತಿ ಆಚರಿಸಲಾಯಿತು. ಈ ವೇಳೆ ಘಟಕ–1ರ ವ್ಯವಸ್ಥಾಪಕ ಮಹದೇವಪ್ರಸಾದ್, ಹೆಚ್.ಬಿ. ರಾಜು, ಪ್ರಭಾಕರ್, ಸಿಬ್ಬಂದಿ ಇದ್ದರು.



ಮೈಸೂರಿನ ಬನ್ನಿಮಂಟಪದಲ್ಲಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಘಟಕ–1ರಲ್ಲಿ ಸೋಮವಾರ ನಾಡಿನ ಅಧಿದೇವತೆ ಚಾಮುಂಡೇಶ್ವರಿ ಅಮ್ಮನವರ ಹುಟ್ಟುಹಬ್ಬವನ್ನು ಆಚರಿಸಲಾಯಿತು.ಈ ಸಂದರ್ಭದಲ್ಲಿ ಘಟಕ–1ರ ವ್ಯವಸ್ಥಾಪಕ ಮಹದೇವ ಪ್ರಸಾದ್, ಹೆಚ್.ಬಿ.ರಾಜು, ಪ್ರಭಾಕರ್ ಎಲ್ಲಾ ಸಿಬ್ಬಂದಿ ವರ್ಗದವರು ಭಾಗಿಯಾಗಿದ್ದರು.



ಮೈಸೂರಿನ ಹೆಬ್ಬಾಳು ಬಡಾವಣೆಯ ಸೂರ್ಯ ಬೇಕರಿ ವೃತ್ತದಲ್ಲಿ ಶ್ರೀ ಚಾಮುಂಡೇಶ್ವರಿ ಹಬ್ಬದ ಅಂಗವಾಗಿ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿಯಲ್ಲಿ ಸಂಸದ ಪ್ರತಾಪ ಸಿಂಹ ಸೆಮಿ ಫೈನಲ್‌ಗೆ ಚಾಲನೆ ನೀಡಿದರು. ಈ ವೇಳೆ ಚಾಮುಂಡೇಶ್ವರಿ ಯುವಕ ಬಳಗದ ವತಿಯಿಂದ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ಯುವಮೋರ್ಚಾ ನಗರಾಧ್ಯಕ್ಷ ಎಂ.ಜೆ.ಕಿರಣ್‌ಗೌಡ, ಯಂಗ್ ಸ್ಟಾರ್ ತಂಡದ ಅನಿಲ್‌ಕುಮಾರ್, ನಗರಪಾಲಿಕೆ ಮಾಜಿ ಸದಸ್ಯ ಶಿವಣ್ಣ, ಆಟೋ ಸತೀಶ್ ಪದಾಧಿಕಾರಿಗಳಾದ ಮಧು, ರಘುಗೌಡ, ವಿಜಯ್‌ಕುಮಾರ್, ಜಿಮ್ ಬಾಬು , ನಂದನ್, ರವಿ, ಕುಮಾರ್ ಇನ್ನಿತರಿದ್ದಾರೆ.



ಮೈಸೂರಿನ ವಿದ್ಯಾರಣ್ಯಪುರಂನಲ್ಲಿ ಅಲ್ಟ್ರಾ ರೇಡಿಯಂಸ್ ನೆರವಿನೊಂದಿಗೆ ಜ್ಞಾನ ಸಮುದ್ರ ಸೇವಾ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ವರ್ಧಂತಿ ಮಹೋತ್ಸವದಲ್ಲಿ ವಿವಿಧ ತಳಿಯ ಗಿಡಗಳನ್ನು ಉಚಿತವಾಗಿ ವಿತರಿಸಲಾಯಿತು.



ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘ, ಪ್ರಜ್ಞಾವಂತ ನಾಗರಿಕ ವೇದಿಕೆ ವತಿಯಿಂದ ಚಾಮುಂಡಿಬೆಟ್ಟದಲ್ಲಿ ಲಡ್ಡು ವಿತರಿಸಲಾಯಿತು.



ರಾಮಾನುಜ ರಸ್ತೆಯಲ್ಲಿ ಶ್ರೀ ಸಾಯಿ ಟ್ರಸ್ಟ್ ವತಿಯಿಂದ ಆಯೋಜಿಸಲಾಗಿದ್ದ ಚಾಮುಂಡೇಶ್ವರಿ ವರ್ಧಂತಿ ಸ್ಥಳಕ್ಕೆ ಕೃಷ್ಣರಾಜ ಕ್ಷೇತ್ರ ಶಾಸಕ ಟಿ.ಎಸ್.ಶ್ರೀವತ್ಸ ಭೇಟಿ ನೀಡಿ, ನಾಡದೇವಿಗೆ ನಮನ ಸಲ್ಲಿಸಿ, ಭಕ್ತಾದಿಗಳಿಗೆ ಪ್ರಸಾದ ವಿತರಣೆ ಮಾಡಿದರು. ಈ ಸಂದರ್ಭ ಟ್ರಸ್ಟ್ ಅಧ್ಯಕ್ಷ ಜಯಣ್ಣ, ನಗರಪಾಲಿಕೆ ಸದಸ್ಯ ಬಿ.ವಿ ಮಂಜುನಾಥ್, ಮೈಸೂರು ನಗರ ಬಿಜೆಪಿ ಹಿಂದುಳಿದ ವರ್ಗದ ಅಧ್ಯಕ್ಷ ಜೋಗಿ ಮಂಜು, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್ ಮತ್ತಿತರರಿದ್ದರು.



ಚಾಮುಂಡೇಶ್ವರಿ ವರ್ಧಂತಿ ಪ್ರಯುಕ್ತ ಕಿಡಗಣ್ಣಮ್ಮನ ಬಡಾವಣೆಯ ವಿಘ್ನೇಶ್ವರ ಕನ್ನಡ ಯುವಕರ ಸಂಘದ ವತಿಯಿಂದ ಪ್ರಸಾದ ವಿನಿಯೋಗ ನಡೆಯಿತು. ಈ ವೇಳೆ ಕಾರ್ಪೋರೇಟರ್ ಕೆ.ವಿ.ಶ್ರೀಧರ್, ಸಂಘದ ಸದಸ್ಯರಾದ ಸಂತೋಷ್, ರವಿ, ಕಾರ್ತಿಕ್, ವಿಕಾಸ್, ರಘು, ಹೇಮಂತ್, ಭರತ್, ಸುರೇಶ್ ಇನ್ನಿತರರಿದ್ದರು.



ಹೆಬ್ಬಾಳ್ ಮಾದೇಗೌಡ ಸರ್ಕಲ್ ಬಳಿ ಚಾಮುಂಡೇಶ್ವರಿ ವರ್ಧಂತಿ ಆಚರಿಸಿ, ಅನ್ನಸಂತರ್ಪಣೆ ನೆರವೇರಿಸಲಾಯಿತು. ಈ ವೇಳೆ ಬೋರೇಗೌಡ, ಎಂ.ಆರ್. ರವಿಕುಮಾರ್, (ಡೆಲ್ಲಿ) ಲೋಚನ್, ನಾಗರಾಜ್, ಹರೀಶ್, ರಾಮಣ್ಣ, ಶಿವಸ್ವಾಮಿ, ಮಂಜಣ್ಣ, ದಿವಾಕರ, ಪ್ರಭು, ಗಣೇಶ್ ಮತ್ತಿತರರಿದ್ದರು.



ಮೈಸೂರಿನ ಕಾಳಿದಾಸ ರಸ್ತೆಯಲ್ಲಿ ಇರುವ ಚೌಪಟ್ಟಿ ಬಳಿ ಚಾಮುಂಡೇಶ್ವರಿ ಅಮ್ಮನವರ ವರ್ಧಂತಿ ವಿಜೃಂಭಣೆಯಿಂದ ನಡೆಯಿತು. ಈ ವೇಳೆ ಬಿಜೆಪಿ ಹಿರಿಯ ಮುಖಂಡ ಹಾಗೂ ಮಾಜಿ ಸನೆಟ್ ಸದಸ್ಯರಾದ ಎಸ್.ಜಯಪ್ರಕಾಶ್ (ಜೆಪಿ) ಸಾರ್ವಜನಿಕರಿಗೆ ಪ್ರಸಾದ ವಿತರಿಸಿದರು.



ನ್ಯೂ ಸಯ್ಯಾಜಿರಾವ್ ರಸ್ತೆಯ ಜೀವಧಾರ ರಕ್ತನಿಧಿ ಕೇಂದ್ರದ ಬಳಿ ಚಾಮುಂಡೇಶ್ವರಿ ವರ್ಧಂತಿ ಪ್ರಯುಕ್ತ ವಿಶೇಷ ಪೂಜೆ ಸಲ್ಲಿಸಿ, ಭಕ್ತಾದಿಗಳಿಗೆ ಪ್ರಸಾದ ವಿತರಿಸಲಾಯಿತು. ಈ ಸಂದರ್ಭದಲ್ಲಿ ಜೀವಧಾರ ಸನ್ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಮುತ್ತಣ್ಣ, ಸೂರಜ್, ಸದಾಶಿವ್, ಚಂದ್ರು, ಕೇಬಲ್ ವಿಜಿ ಹಾಗೂ ಮೊಹಲ್ಲಾ ನಿವಾಸಿಗಳು ಉಪಸ್ಥಿತರಿದ್ದರು.

ಜೈನ ಮುನಿ ಹತ್ಯೆ ಪ್ರಕರಣ

ಸಿಬಿಐ ತನಿಖೆಗೆ ವಹಿಸುವ ಅಗತ್ಯವಿಲ್ಲ



ಹುಬ್ಬಳ್ಳಿ: ಜೈನಮುನಿ ಕಾಮಕುಮಾರ ನಂದಿ ಮಹಾರಾಜರ ಬರ್ಬರ ಹತ್ಯೆ ಆರೋಪಿಗಳ ವಿರುದ್ಧ ಪೊಲೀಸರು ಕ್ರಮ ಕೈಗೊಳ್ಳಲಿದ್ದಾರೆ. ಮುಂದಿನ ದಿನದಲ್ಲಿ ಇಂತಹ ಕೃತ್ಯ ಮರುಕಳಿಸದಂತೆ ನೋಡಿಕೊಳ್ಳಲಾಗುತ್ತದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಇಂದಿಲ್ಲಿ ಭರವಸೆ ನೀಡಿದ್ದಾರೆ.

ಹುಬ್ಬಳ್ಳಿಯ ವರೂರಿನ ಜೈನಮುನಿ ಗುಣಧರನಂದಿ ಮಹಾರಾಜ್ ಸ್ವಾಮೀಜಿಗಳ ಭೇಟಿ ಮಾಡಿದ ಬಳಿಕ ಮಾತನಾಡಿದ ಅವರು, ಜೈನ ಮುನಿಗಳ ಹತ್ಯೆ ಪ್ರಕರಣದಲ್ಲಿ ಯಾರೂ ರಾಜಕೀಯ, ತಾರತಮ್ಯ ಮಾಡುವುದಿಲ್ಲ. ಜೈನಮುನಿ ಹತ್ಯೆ ಆರೋಪಿಗಳನ್ನು ಈಗಾಗಲೇ ಪೊಲೀಸರು ಬಂಧಿಸಿದ್ದಾರೆ. ನಮ್ಮ ಇಲಾಖೆ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ಮುಂದಿನ ದಿನದಲ್ಲಿ ಇಂತಹ ಕೃತ್ಯ ಮರುಕಳಿಸದಂತೆ ಎಚ್ಚರ ವಹಿಸಲಾಗುವುದು ಎಂದರು.

ಅಪರಾಧಿಗಳ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆ ಇದೆ. ಇದು ಸ್ವಾಭಾವಿಕ ಪದ್ಧತಿ, ಇದರಲ್ಲಿ ತಾರತಮ್ಯ ಪ್ರಶ್ನೆ ಇಲ್ಲ. ಘಟನೆ ಆದ ಮೇಲೆ ಆರೋಪಿಗಳನ್ನು ಬಂಧಿಸಲಾಗಿದೆ. ವರೂರಲ್ಲಿ ಜೈನ ಮುನಿಗಳು ಉಪವಾಸ ಕೂಳಿತಿದ್ದಾರೆ. ಅವರ ಬೇಡಿಕೆಗಳನ್ನು ಆಲಿಸಲಾಗುವುದು ಎಂದು ತಿಳಿಸಿದರು.

ನಮ್ಮ ಗೃಹ ಇಲಾಖೆ ಸಮರ್ಥವಾಗಿದೆ. ಆರೋಪಿಗಳು ಪೊಲೀಸರ ವಶದಲ್ಲಿದ್ದು ತನಿಖೆ ಶುರುವಾಗಿದೆ. ಪ್ರಕರಣವನ್ನು ಸಿಬಿಐಗೆ ನೀಡುವ ಅಗತ್ಯ ಇಲ್ಲ. ಗೃಹ ಇಲಾಖೆಯೇ ಸಮರ್ಥವಾಗಿದೆ. ನಮ್ಮ ಇಲಾಖೆಯ ತನಿಖೆ ಮುಗಿದ ಬಳಿಕ ಸತ್ಯಾಸತ್ಯತೆ ಗೊತ್ತಾಗಲಿದೆ. ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಆಗಲಿದೆ ಎಂದರು. ಸುಮ್ಮನೆ ನಮ್ಮ ವಿರುದ್ಧ ಅಪವಾದ ಹೊರಿಸುವ ಬಿಜೆಪಿಗೆ ವಿರೋಧ ಪಕ್ಷದ ನಾಯಕನನ್ನು ಆಯ್ಕೆ ಮಾಡಲು ಆಗುತ್ತಿಲ್ಲ. ಅವರಲ್ಲಿ ಆಂತರಿಕ ಒಳಜಗಳ ಇದೆ. ಅವರಿಗೆ ಎಷ್ಟರ ಮಟ್ಟಿಗೆ ಜವಾಬ್ದಾರಿ ಇದೆ ಎಂಬುದನ್ನು ರಾಜ್ಯದ ಜನ ಗಮನಿಸುತ್ತಿದ್ದಾರೆ ಎಂದು ಹೇಳಿದರು.

ಗುರುವಿನಿಂದ ಕಲಿತ ಜ್ಞಾನ ಕಸಿಯಲು ಸಾಧ್ಯವಿಲ್ಲ: ನಾಗಮ್ಮ



ಮೈಸೂರು, ಜು.10 (ಎಸ್‌ಪಿಎನ್)– ಶಿಕ್ಷಣ ಯಾರ ಸ್ವತ್ತಲ್ಲ. ಗುರುವಿನಿಂದ ಕಲಿತ ಜ್ಞಾನವನ್ನು ಯಾರೂ ಕಸಿಯಲು ಸಾಧ್ಯವಿಲ್ಲ ಎಂದು ಡಿಡಿಪಿಯು ಪಿ.ನಾಗಮ್ಮ ಅಭಿಪ್ರಾಯಪಟ್ಟರು.

ಮೈಸೂರು ಸತ್ಯಸಾಯಿ ಶಿಕ್ಷಣ ಸಂಸ್ಥೆ ಆವರಣದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಹಾಗೂ ನಿವೃತ್ತ ಉಪನ್ಯಾಸಕರ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು. ಪ್ರತಿಭಾವಂತ ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸ್ವಾಭಿಮಾನವನ್ನು ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳು ತಾವು ಓದಿದ ವಿದ್ಯಾಸಂಸ್ಥೆಗೆ, ಗುರು ಹಿರಿಯರಿಗೆ, ಪೋಷಕರಿಗೆ ಅತೀ ಹೆಚ್ಚು ಅಂಕಗಳಿಸುವ ಮೂಲಕ ಕೀರ್ತಿ ತಂದು ಕೊಟ್ಟಿದ್ದಾರೆ ಎಂದು ತಿಳಿಸಿದರು.

ಹಿರಿಯ ಲೇಖಕ, ನಿವೃತ್ತ ಪ್ರಾಂಶುಪಾಲ ಪ್ರೊ.ಕಾಡ್ನೂರು ಶಿವೇಗೌಡ ಮಾತನಾಡಿ, ಪ್ರತಿಯೊಬ್ಬರು ನಿವೃತ್ತಿ ಹೊಂದುವುದು ಸಹಜ ಕ್ರಿಯೆ. ಮುಂದಿನ ಜೀವನವನ್ನು ಸಮಾಜಮುಖಿಯಾಗಿ ಕೆಲಸ ಮಾಡುವುದನ್ನ ರೂಢಿಸಿಕೊಳ್ಳಬೇಕು. ಇವೆಲ್ಲಾ ಕಾರ್ಯಗಳು ನಮ್ಮ ಸದೃಢವಾದ ಮನಸ್ಸಿನಿಂದ ಮಾತ್ರ ಸಾಧ್ಯ ಎಂದರು.

ಪ್ರಾಂಶುಪಾಲರಾದ ಪ್ರಕಾಶ್, ಸುರೇಶ್, ಜಯಪಾಲ್, ಕಾಡ್ನೂರು ಶಿವೇಗೌಡ, ರವೀಂದ್ರ, ರಮೇಶ, ನೀಲಕಂಠ, ಮಂಜುನಾಥ, ಪರಮೇಶ್, ಶಿವಯೋಗಿ ಕಾಲೇಜಿನ ಪ್ರಾಂಶುಪಾಲರಾದ ಉಮಾರಾಣಿ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಮೈಸೂರು ಜಿಲ್ಲಾ ಪ್ರಾಂಶುಪಾಲರ ಸಂಘದ ಸಂಘದ ಅಧ್ಯಕ್ಷ ಚೆಲುವಯ್ಯ, ಗಂಗಾಧರ, ಸಂಘದ ಖಜಾಂಚಿ ಡಾ. ಸಿದ್ದರಾಜು, ಉಪಾಧ್ಯಕ್ಷ ಸತ್ಯಪ್ರಸಾದ್, ಕಾರ್ಯದರ್ಶಿ ಸೋಮಶೇಖರ್, ಚಂದ್ರಶೇಖರ್, ಸುದೀಪ್, ವಿಜೇಂದ್ರ ಕುಮಾರ್, ಡಾ ರಮಾನಂದ, ಅಶೋಕ್ ಕುಮಾರ್, ಎಸ್. ಬಾಲಸುಬ್ರಹ್ಮಣ್ಯ, ಶಿಕ್ಷಣ ಸಂಸ್ಥೆಯ ಉಪ ಪ್ರಾಚಾರ್ಯ ಪ್ರದೀಪ್, ಡಿಡಿಪಿಯು ಕಚೇರಿಯ ಸರ್ಕಾರಿ ನೌಕರರ ಸಂಘದ ಪ್ರತಿನಿಧಿ ಮುಕುಂದ, ಸಂತೋಷ್ ಸಭೆಯಲ್ಲಿ ಉಪಸ್ಥಿತರಿದ್ದರು. ಡಾ. ರಮಾನಂದ ನಿರೂಪಿಸಿದರು. ವಿಜೇಂದ್ರ ಕುಮಾರ್ ವಂದನಾರ್ಪಣೆ ಮಾಡಿದರು.

ಕಾಂಗ್ರೆಸ್ ಸರ್ಕಾರ ಬಂದ್ಮೇಲೆ ಪಾಕಿಸ್ತಾನ ಬಾವುಟ ಹಾರಾಡ್ತಿದೆ: ಯತ್ನಾಳ್ ಕಿಡಿ

ರಾಜ್ಯದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ



ಬೆಂಗಳೂರು, ಜು.10– ಕಾಂಗ್ರೆಸ್ ಸರ್ಕಾರ ಬಂದ ಬಳಿಕ ರಾಜ್ಯದಲ್ಲಿ ಪಾಕಿಸ್ತಾನದ ಧ್ವಜ ಹಾರಾಡುತ್ತಿದೆ. ಹಿಂದೂಗಳ ಹತ್ಯೆ ನಡೆಯುತ್ತಿದ್ದು, ರಾಜ್ಯದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸೋಮವಾರ ಕಿಡಿಕಾರಿದ್ದಾರೆ. ವಿಧಾನಸಭೆಯಲ್ಲಿ ಮಾತನಾಡಿದ ಅವರು, ಈ ಸರ್ಕಾರ ಬಂದ್ಮೇಲೆ ಹಿಂದೂಗಳ ಕೊಲೆ ನಡೆಯುತ್ತಿದೆ. ಟಿ.ನರಸೀಪುರದಲ್ಲಿ ಹನುಮ ಜಯಂತಿ ವಿಚಾರದಲ್ಲಿ ಯುವ ಬ್ರಿಗೇಡ್ ಯುವಕನ ಕೊಲೆ ಆಗಿದೆ. ಈ ಸರ್ಕಾರ ಬಂದ್ಮೇಲೆ ಪಾಕಿಸ್ತಾನ ಬಾವುಟ ಹಾರಾಡ್ತಿದೆ ಎಂದಾಗ ಕಾಂಗ್ರೆಸ್ ಶಾಸಕರು ಆಕ್ರೋಶ ಹೊರ ಹಾಕಿದ್ದಾರೆ. ಜೈನ ಮುನಿಗಳ ಬಗ್ಗೆ ಮಾತಾಡಿ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಜೈನ ಮುನಿಗಳು ಎಲ್ಲವನ್ನೂ ತ್ಯಾಗ ಮಾಡ್ತಾರೆ ಇಂತಹವರ ಹತ್ಯೆಯಿಂದ ರಾಜ್ಯದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಕರ್ನಾಟಕ ರಾಜ್ಯಕ್ಕೆ ಮುನಿಗಳ ಹತ್ಯೆ ಕಳಂಕವಾಗಿದೆ. ಈ ಹತ್ಯೆ ಹಿಂದೆ ಹಲವು ಅನುಮಾನಗಳಿದ್ದಾವೆ. ಬೆಂಗಳೂರಿನಿಂದ ಪೊಲೀಸರ ಮೇಲೆ ಏನ್ ಒತ್ತಡ ಬಂದಿದೇಯೋ..!?. ಪೊಲೀಸರ ಮೇಲೆ ಒತ್ತಡ ಬರುತ್ತೆ. ಬೆಳಗ್ಗೆ ಚೆನ್ನಾಗಿ ಇರುತ್ತಾರೆ, ರಾತ್ರಿ ಒಳಗಾಗಿ ಪೊಲೀಸರು ಬದಲಾಗ್ತಾರೆ ಎಂದು ಯತ್ನಾಳ್ ಹೇಳಿದರು.

ಹಸನ್ ಎಂಬ ಹೆಸರನ್ನು ಏಕೆ ಬಹಿರಂಗಪಡಿಸಿಲ್ಲ ಎಂದು ಪ್ರಶ್ನಿಸಿದ ಶಾಸಕರು, ರಾಜ್ಯದ ಪೊಲೀಸರ ಮೇಲೆ ಭರವಸೆ ಇಲ್ಲ. ಸಿಬಿಐ ತನಿಖೆಗೆ ಈ ಕೇಸ್ ಕೊಡಬೇಕು. ಒಂದು ಕೋಮಿನ ತೃಪ್ತಿಪಡಿಸುವ ಕೆಲಸ ಆಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಂದು ಸಂತಾಪವನ್ನು ಕೂಡ ಹೇಳಲಿಲ್ಲ. ಬೇರೆ ಯಾರಾದರೂ ಸತ್ತಿದ್ರೆ ಸಂತಾಪ ಸೂಚಿಸುತ್ತಿದ್ದರು ಎಂದು ಯತ್ನಾಳ್ ವಾಗ್ದಾಳಿ ನಡೆಸಿದರು.

ರಷ್ಯಾದಿಂದ 14 ಚದರ ಕಿ.ಮೀ. ಪ್ರದೇಶ ಮರುವಶಕ್ಕೆ ಪಡೆದ ಉಕ್ರೇನ್

ಕೀವ್ (ಉಕ್ರೇನ್): ರಷ್ಯಾ ಅತಿಕ್ರಮಣ ಮಾಡಿದ್ದ 14 ಚದರ ಕಿಲೋ ಮೀಟರ್ ಪ್ರದೇಶವನ್ನು ಮರುವಶಕ್ಕೆ ಪಡೆಯಲಾಗಿದೆ ಎಂದು ಉಕ್ರೇನ್ ತಿಳಿಸಿದೆ. ಕಳೆದವಾರ ಉಕ್ರೇನ್ ಸೇನಾ ಪಡೆಯು ಬಖ್‌ಮತ್ ಸೆಕ್ಟರ್‌ನಲ್ಲಿ 4 ಚದರ ಕಿಲೋಮೀಟರ್ ಪ್ರದೇಶ ಸೇರಿದಂತೆ ಹತ್ತಕ್ಕೂ ಹೆಚ್ಚು ಚದರ ಕಿಲೋಮೀಟರ್ ಪ್ರದೇಶವನ್ನು ರಷ್ಯಾದ ಅತಿಕ್ರಮಣದಿಂದ ಸ್ವತಂತ್ರಗೊಳಿಸಿದೆ ಎಂದು ಸೇನಾ ವಕ್ತಾರ ಆಯಂಡ್ರಿಯ್ ಕೊವಲ್‌ಯೊಯ್ ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ. ರಷ್ಯಾ ಪಡೆಗಳು ಮೇನಲ್ಲಿ ವಶಕ್ಕೆ ಪಡೆದಿದ್ದ ಬಖ್‌ಮತ್ ಪ್ರದೇಶದಲ್ಲಿ ಉಭಯ ದೇಶಗಳ ಸೇನಾಪಡೆಗಳ ಮಧ್ಯೆ ತೀವ್ರ ಹೋರಾಟ ನಡೆದಿತ್ತು ಎಂದೂ ತಿಳಿಸಿದ್ದಾರೆ. ಇದರೊಂದಿಗೆ ಉಕ್ರೇನ್ ಕಳೆದ ತಿಂಗಳಿಂದ ಈಚೆಗೆ 193 ಚ.ಕಿ.ಮೀ. ಪ್ರದೇಶವನ್ನು ಮರುವಶಕ್ಕೆ ಪಡೆದಂತಾಗಿದೆ. ದಕ್ಷಿಣ ಉಕ್ರೇನ್‌ನಲ್ಲಿನ ಶಾಲೆಯೊಂದರ ಮೇಲೆ ರಷ್ಯಾ ವಾಯುದಾಳಿ ನಡೆಸಿದ್ದು, ಮೂವರು ಮಹಿಳೆಯರು ಸೇರಿದಂತೆ ನಾಲ್ವರು ಮೃತಪಟ್ಟಿದ್ದಾರೆ. 11ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.

ಕಾಡುಹಂದಿ ಸುಡುತ್ತಿದ್ದ ಇಬ್ಬರ ಬಂಧನ

ಮೈಸೂರು, ಜು.10(ಎಸ್‌ಬಿಡಿ)– ಮಾಂಸಕ್ಕಾಗಿ ಕಾಡುಹಂದಿ ಸುಡುತ್ತಿದ್ದ ಕೇರಳ ರಾಜ್ಯದ ಇಬ್ಬರನ್ನು ಅರಣ್ಯ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ.

ಕೇರಳದ ವೈಯ್ನಾಡು ಜಿಲ್ಲೆಯ ಎಂ.ವಿ. ಥಾಮಸ್ ಹಾಗೂ ಶಿಜು ಜಾಕೋಬ್ ಬಂಧಿತರು. ಇವರು ಬಂಡೀಪುರ ಹುಲಿ ಯೋಜನೆ, ಗುಂಡ್ಲುಪೇಟೆ ಉಪ ವಿಭಾಗ, ಮದ್ದೂರು ವಲಯದ ಚೆನ್ನಮಲ್ಲಿಪುರ ಗ್ರಾಮದ ಜಾಕೋಬ್ ಫಾರಂನಲ್ಲಿ ರುಂಡರಹಿತ ಕಾಡುಹಂದಿ ಕಳೇಬರವನ್ನು ಸುಡುವಾಗ ಸಿಕ್ಕಿ ಬಿದ್ದಿದ್ದಾರೆ.

ಚೆನ್ನಮಲ್ಲಿಪುರ ಗ್ರಾಮದ ಬಸಪ್ಪ ಉರುಫ್ ದೊಡ್ಡಬಸಪ್ಪ ಅವರ ಜಮೀನಿನಲ್ಲಿ ಅಕ್ರಮವಾಗಿ ವಿದ್ಯುತ್ ಸಂಪರ್ಕ ಕಲ್ಪಿಸಿರುವ ತಂತಿಗೆ ಸಿಲುಕಿ ಸಾವನ್ನಪ್ಪಿದ ಕಾಡುಹಂದಿಯನ್ನು ಮಾಂಸಕ್ಕಾಗಿ ನಮಗೆ ನೀಡಿದರೆಂದು ಬಂಧಿತರು ವಿಚಾರಣೆ ವೇಳೆ ತಿಳಿಸಿದ್ದಾರೆ. ಥಾಮಸ್ ಹಾಗೂ ಶಿಜು ಜಾಕೋಬ್‌ನನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದು, ಮತ್ತೋರ್ವ ಆರೋಪಿ ಬಸಪ್ಪ ಬಂಧನಕ್ಕೆ ಕ್ರಮ ಕೈಗೊಳ್ಳಲಾಗಿದೆ. ಈತನ ವಿರುದ್ಧ ಭಾರತೀಯ ವಿದ್ಯುತ್ ಕಾಯಿದೆ 2003ರ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಳ್ಳಲು ಗುಂಡ್ಲುಪೇಟೆ ಪೊಲೀಸ್ ಠಾಣೆಗೆ ದೂರು ವರ್ಗಾಯಿಸಲಾಗಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ದೇಶದ ಹಿಂದೂ–ಮುಸ್ಲಿಂ ವಿಭಜನೆ ತಡೆಗೆ ಏಕರೂಪ ನಾಗರಿಕ ಸಂಹಿತೆ ಅವಶ್ಯ

- ಪ್ರಜ್ಞಾ ಪ್ರವಾಹದ ರಾಷ್ಟ್ರೀಯ ಸಂಯೋಜಕ ಜೆ. ನಂದಕುಮಾರ್ ಅಭಿಮತ
- ಮೊದಲಿಂದ ಏಕರೂಪ ನಾಗರಿಕ ಸಂಹಿತೆ ಜಾರಿಯಲ್ಲಿತ್ತು; ಬ್ರಿಟಿಷರ ಒಡೆದು ಆಳುವ ನೀತಿಯಿಂದ ಶರಿಯಾತ್ ಜಾರಿ ಮೂಲಕ ಒಡಕು ತಂದರು

ಮೈಸೂರು, ಜು.10(ಎಂಕೆ)– ದೇಶದಲ್ಲಿ ಹಿಂದೂ–ಮುಸ್ಲಿಂ ವಿಭಜನೆಯಾಗದಿರಲು ಏಕರೂಪ ನಾಗರಿಕ ಸಂಹಿತೆ ಅನುಷ್ಠಾನ ಅತ್ಯಗತ್ಯವಾಗಿದೆ ಎಂದು ಪ್ರಜ್ಞಾ ಪ್ರವಾಹದ ರಾಷ್ಟ್ರೀಯ ಸಂಯೋಜಕ ಜೆ.ನಂದಕುಮಾರ್ ಹೇಳಿದರು.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಸಭಾಗಣದಲ್ಲಿ 'ಪ್ರಜ್ಞಾ ಪ್ರವಾಹ' ನಗರ ಘಟಕವು ಸೋಮವಾರ ಆಯೋಜಿಸಿದ್ದ 'ಭಾರತಕ್ಕೆ ಏಕರೂಪ ನಾಗರಿಕ ಸಂಹಿತೆ ಏಕೆ ಬೇಕು' ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಸಮಾನತೆ ಮತ್ತು ಸ್ವಾತಂತ್ರ್ಯವನ್ನು ಸಾರುವ ಹಿಂದುತ್ವದ ಆಶಯವೂ ಏಕರೂಪ ನಾಗರಿಕ ಸಂಹಿತೆ ಅನುಷ್ಠಾನದಿಂದ ಬಲಗೊಳ್ಳಲಿದೆ ಎಂದು ಹೇಳಿದರು.

ಭಾರತದಲ್ಲಿ ಅನಾದಿಕಾಲದಿಂದಲೂ ಏಕರೂಪ ನಾಗರಿಕ ಸಂಹಿತೆ ಜಾರಿಯಲ್ಲಿತ್ತು. ಹಿಂದೂ–ಮುಸ್ಲಿಮರು ಸಮಾನರಂತೆ ಜೀವನ ಸಾಗಿಸುತ್ತಿದ್ದರು. ಆದರೆ ಒಡೆದು ಆಳುವ ನೀತಿ(ಡಿವೈಡ್ ಅಂಡ್ ರೂಲ್) ಅನುಸರಿಸಿದ ಬ್ರಿಟಿಷರು, 1937ರಲ್ಲಿ ಶರಿಯಾತ್ ಲಾ ಜಾರಿಗೆ ತರುವ ಮೂಲಕ ಹಿಂದೂ–ಮುಸ್ಲಿಮರ ನಡುವೆ ಒಡಕು ತಂದರು. ಸ್ವಾತಂತ್ರ್ಯ ನಂತರ ಡಾ.ಬಿ.ಆರ್.ಅಂಬೇಡ್ಕರ್ ಅವರು ದೇಶದಲ್ಲಿ ಎಲ್ಲರಿಗೂ ಒಂದೇ ರೀತಿಯ ಕಾನೂನು ಇರಬೇಕು ಎಂದು ಪ್ರತಿಪಾದಿಸಿದ್ದರು. ಆದರೆ ಪಟ್ಟಭದ್ರ ಹಿತಾಸಕ್ತಿಗಳು ಹಿಂದೂ–ಮುಸ್ಲಿಮರ ನಡುವೆ ಕಂದಕ ಸೃಷ್ಟಿಸಿದ್ದಾರೆ ಎಂದು ದೂರಿದರು.

ದೇಶದಲ್ಲಿ ತ್ರಿವಳಿ ತಲಾಕ್ ಬ್ಯಾನ್ ಮಾಡಿದ್ದರೂ, ಏಕರೂಪ ನಾಗರಿಕ ಸಂಹಿತೆ ಜಾರಿಯಲ್ಲಿ ಇಲ್ಲದಿರುವುದರಿಂದ ಮುಸ್ಲಿಂ ಕಾನೂನಿನ ಪ್ರಕಾರ ವಿಚ್ಛೇದನ ಪಡೆದ ಮಹಿಳೆಗೆ ಮೂರು ತಿಂಗಳು ಮಾತ್ರ ಜೀವನಾಂಶ ಕೊಡಲು ಅವಕಾಶ ಮಾಡಿಕೊಡಲಾಗಿದೆ. ಏಕರೂಪ ನಾಗರಿಕ ಸಂಹಿತೆ ಜಾರಿಯಾದಲ್ಲಿ ಹಿಂದೂ ಕಾನೂನಿನ ಪ್ರಕಾರ ವಿಚ್ಛೇದಿತ ಮಹಿಳೆಗೆ ಜೀವನಾಂಶ ನೀಡುವಂತೆಯೇ ಮುಸ್ಲಿಂ ಮಹಿಳೆಯರಿಗೆ ನೀಡಬೇಕಾಗುತ್ತದೆ. ಇದರಿಂದಾಗಿ ದೇಶದಲ್ಲಿನ ಸುಮಾರು ಶೇ.68ರಷ್ಟು ಮುಸ್ಲಿಂ ಮಹಿಳೆಯರು ಏಕರೂಪ ನಾಗರಿಕ ಸಂಹಿತೆ ಜಾರಿಗೆ ಬೆಂಬಲ ನೀಡಿದ್ದಾರೆ. ಹಾಗೆಯೇ ಸಂವಿಧಾನದ ರಾಜ್ಯ ನಿರ್ದೇಶಕ ತತ್ವಗಳ ಆರ್ಟಿಕಲ್ 44 ಕೂಡ ಸಂಹಿತೆ ಅಳವಡಿಸಿಕೊಳ್ಳಲು ಪ್ರಯತ್ನಿಸಬೇಕು ಎಂಬ ಸಲಹೆಯನ್ನು ನೀಡುತ್ತದೆ ಎಂದರು.

ದೇಶದಲ್ಲಿ ಹಿಂದೂ–ಮುಸ್ಲಿಮರ ಒಗ್ಗಟ್ಟನ್ನು ಕಂಡಿದ್ದ ಬ್ರಿಟಿಷರು ಕೈಗೊಂಡ ನಿರ್ಧಾರವೇ ಶರಿಯಾತ್ ಕಾಯ್ದೆ ಜಾರಿ ಮತ್ತು ಮುಸ್ಲಿಂ ಲೀಗ್ ಬೆಳೆಸುವುದಾಗಿತ್ತು. ಅದಕ್ಕೆ ಕಮ್ಯುನಿಷ್ಟೀಕರಣಗೊಂಡ ಕಾಂಗ್ರೆಸ್‌ನ ನೆಹರೂ ಅವರನ್ನು ಬಳಸಿಕೊಂಡರು. ಕಮ್ಯೂನಿಷ್ಟರೂ ಅದಕ್ಕೆ ನೀರೆರೆದರು ಎಂದು ಹರಿಹಾಯ್ದರಲ್ಲದೆ ಹಿಂದುತ್ವದ ಇತಿಹಾಸದಲ್ಲಿ ತಪ್ಪನ್ನು ತಿದ್ದಿಕೊಳ್ಳುವ ವ್ಯವಸ್ಥೆಯಿತ್ತು. ಸಮಾನತೆ, ನ್ಯಾಯದತ್ತ ಸಾಗುತ್ತಿದ್ದೆವು. ಶರಿಯಾತ್ ಕಾಯ್ದೆ ಬರುವ ಮೊದಲು ಭಾರತದ ಮುಸ್ಲಿಮರೂ ಹಿಂದೂ ಕಾನೂನುಗಳನ್ನೆ ಅನುಸರಿಸುತ್ತಿದ್ದರು, ಕಾನೂನು ಧರ್ಮದ ಭಾಗವೂ ಆಗಿರಲಿಲ್ಲ ಎಂದರು.

ಮುಸ್ಲಿಂ ರಾಷ್ಟ್ರಗಳಲ್ಲಿ ಜಾರಿ: ಸೌದಿ ಅರೇಬಿಯಾ, ಲೆಬನಾನ್, ಇಂಡೋನೇಶಿಯಾ ಸೇರಿದಂತೆ ವಿಶ್ವದಲ್ಲಿನ ಬಹುತೇಕ ಮುಸ್ಲಿಂ ರಾಷ್ಟ್ರಗಳು ಏಕರೂಪ ನಾಗರಿಕ ಸಂಹಿತೆಯ ಮಾದರಿ ಕಾನೂನು ಜಾರಿಯಲ್ಲಿದೆ. ಬಹುಪತ್ನಿತ್ವಕ್ಕೆ ನ್ಯಾಯಾಲಯದ ಅನುಮತಿಯನ್ನು ಕಡ್ಡಾಯಗೊಳಿಸಲಾಗಿದೆ ಎಂದು ತಿಳಿಸಿದರು.

ದೇಶದಲ್ಲಿ ಏಕರೂಪ ನಾಗರಿಕ ಸಂಹಿತೆ ಜಾರಿಯಿಂದ ಮಹಿಳೆಯರಿಗೆ ಅನುಕೂಲವಾಗಲಿದ್ದು, ಆಸ್ತಿ ಹಕ್ಕು ಪಡೆಯುವಲ್ಲಿ ಸಫಲರಾಗಲಿದ್ದಾರೆ. ಎಲ್ಲಾ ಧರ್ಮಿಯರಿಗೂ ಸಮಾನ ಅವಕಾಶಗಳು ಲಭ್ಯವಾಗಲಿವೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಏಕರೂಪ ನಾಗರಿಕ ಸಂಹಿತೆ ಜಾರಿಗೆ ತರುವ ಉದ್ದೇಶದಿಂದ ಆನ್‌ಲೈನ್ ಮೂಲಕ ದೇಶದ ಜನರ ಅಭಿಪ್ರಾಯ ಸಂಗ್ರಹಕ್ಕೆ ಮುಂದಾಗಿದ್ದು, ಪ್ರತಿಯೊಬ್ಬರು ಬೆಂಬಲಿಸಬೇಕು ಎಂದು ಕರೆ ನೀಡಿದರು. ಪ್ರಜ್ಞಾ ಪ್ರವಾಹದ ರಾಷ್ಟ್ರೀಯ ಸಹ ಸಂಯೋಜಕರಾದ ರಘುನಂದನ್, ಶ್ರೀಕಾಂತ್ ಕಟ್ಟರೆ, ಮೈಸೂರು ವಿಭಾಗದ ಸಂಚಾಲಕ ಡಾ.ಹನುಮಂತಾಚಾರ್ ಜೋಶಿ, ಮೈಸೂರು ರೋಟರಿ ಅಧ್ಯಕ್ಷ ಅರುಣ್ ಬೆಳವಾಡಿ ಉಪಸ್ಥಿತರಿದ್ದರು.



ಮೈಸೂರಿನ ರೋಟರಿ ಸಭಾಗಣದಲ್ಲಿ ಆಯೋಜಿಸಿದ್ದ 'ಭಾರತಕ್ಕೆ ಏಕರೂಪ ನಾಗರಿಕ ಸಂಹಿತೆ ಏಕೆ ಬೇಕು' ವಿಚಾರ ಸಂಕಿರಣದಲ್ಲಿ ಪ್ರಜ್ಞಾ ಪ್ರವಾಹದ ರಾಷ್ಟ್ರೀಯ ಸಂಯೋಜಕ ಜೆ.ನಂದಕುಮಾರ್ ಮಾತನಾಡಿದರು.



ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಬೆಂಗಳೂರಿನ ಸದಾಶಿವನಗರ ನಿವಾಸಕ್ಕೆ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಭೇಟಿ ನೀಡಿ ಮಂಡ್ಯ ಜಿಲ್ಲೆಯ ಬೆಳವಣಿಗೆ, ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ, ಮಳೆ, ಕೃಷಿ ಸಂಬಂಧಿತ ಚಟುವಟಿಕೆಗಳ ಬಗ್ಗೆ ಅವರ ಜತೆ ಚರ್ಚೆ ನಡೆಸಿದರು. ಈ ವೇಳೆ ಎಂಎಲ್‌ಸಿ ದಿನೇಶ್ ಗೂಳಿಗೌಡ ಉಪಸ್ಥಿತರಿದ್ದರು.

ಸಂಚಾರಿ ನಿಯಮ ಉಲ್ಲಂಘನೆ: ಶೇ.50 ದಂಡ ವಿನಾಯಿತಿ

ಮಂಡ್ಯ, ಜು.10– ಸಾರಿಗೆ ಮತ್ತು ರಸ್ತೆ ಸುರಕ್ಷತಾ ಇಲಾಖೆ ವಾಹನ ಸವಾರರಿಗೆ ದಂಡ ಪಾವತಿಯಲ್ಲಿ ಶೇ.50ರಷ್ಟು ವಿನಾಯಿತಿ ಘೋಷಿಸಿ ಆದೇಶ ಹೊರಡಿಸಿದೆ.

ಸೆ.9ರೊಳಗೆ ದಂಡ ಪಾವತಿಸುವವರಿಗೆ ಶೇ.50ರಷ್ಟು ರಿಯಾಯಿತಿ ಸಿಗಲಿದ್ದು, ಫೆ.11ರವರೆಗೆ ದಾಖಲಾದ ಪ್ರಕರಣಗಳಿಗೆ ಈ ರಿಯಾಯಿತಿ ಅನ್ವಯಿಸಲಿದೆ. ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್ ಮೂಲಕ ವಿಧಿಸಿದ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿ ಸರ್ಕಾರವು ಜು.5 ರಂದು ಆದೇಶ ಹೊರಡಿಸಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಾಣಿ ಎ.ಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಾಂಡವಪುರದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಪ್ರತಿಭಟನೆ



ಪಾಂಡವಪುರ, ಜು.10– ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡಿರುವ ಮೊಬೈಲ್ ಕಳಪೆ ಗುಣಮಟ್ಟದಿಂದ ಕೂಡಿದೆ ಎಂದು ಆರೋಪಿಸಿ ಅಂಗನವಾಡಿ ಕಾರ್ಯಕರ್ತೆಯರು ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಮಿನಿ ವಿಧಾನಸೌಧದ ಮುಂಭಾಗದ ಸಿಡಿಪಿಓ ಕಚೇರಿಗೆ ಮುತ್ತಿಗೆ ಹಾಕಿದ ಅಂಗನವಾಡಿ ಕಾರ್ಯಕರ್ತೆಯರು ಮೊಬೈಲ್ ತುಂಬಿದ ಮೂಟೆಗಳೊಂದಿಗೆ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಅಂಗನವಾಡಿ ಕಾರ್ಯಕರ್ತರ ಸಂಘದ ಅಧ್ಯಕ್ಷೆ ರುಕ್ಮಿಣಿ ಮಾತನಾಡಿ, ರಾಜ್ಯ ಸರ್ಕಾರ ನೀಡಿರುವ ಮೊಬೈಲ್ ಕಳಪೆ ಗುಣಮಟ್ಟದಿಂದ ಕೂಡಿದೆ. ಇದರಲ್ಲಿ ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ. ಆದರೂ ಕಳೆದ 5 ವರ್ಷದಿಂದ ಕೆಲಸ ಮಾಡುತ್ತಿದ್ದೇವೆ. ಇದೇ ಮೊಬೈಲ್‌ನಲ್ಲಿ ಕುಟುಂಬ ನೋಂದಣಿ ಸರ್ವೆ, ಆರೋಗ್ಯ ಇಲಾಖೆಯ ಹಲವು ಸರ್ವೆಗಳನ್ನು ಮಾಡಿ ಅಪ್‌ಲೋಡ್ ಮಾಡಿದ್ದೇವೆ. ಆದರೆ, ಇತ್ತೀಚಿನ ದಿನಗಳಲ್ಲಿ ಈ ಮೊಬೈಲ್‌ನಲ್ಲಿ ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಈ ಮೊಬೈಲ್ ಅನ್ನು ಇಲಾಖೆಗೆ ವಾಪಸ್ ನೀಡುತ್ತಿದ್ದೇವೆ. ರಾಜ್ಯ ಸರ್ಕಾರ ಅಂಗನವಾಡಿ ಕಾರ್ಯಕರ್ತರಿಗೆ ಹೊಸ ಟ್ಯಾಬ್ ನೀಡಬೇಕು, ಇಲ್ಲವಾದರೆ ನಾವು ನಡೆಸಿದ ಸರ್ವೆಗಳನ್ನು ಅಪ್‌ಲೋಡ್ ಮಾಡಲ್ಲ. ಸರ್ಕಾರ ನಮ್ಮ ಮನವಿಗೆ ಸ್ಪಂದಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಚಂದ್ರಕಲಾ, ಸುಜಾತಾ, ಶೋಭಾ, ಮೇರಿ, ಚೈತನ್ಯ, ಹರಿಣಿ, ದೇವಮ್ಮ, ಧನಲಕ್ಷ್ಮಿ, ಹೇಮ, ಕಮಲಮ್ಮ, ಮೀನಾಕ್ಷಿ, ಶಾರದಮ್ಮ ಸೇರಿದಂತೆ ಹಲವರಿದ್ದರು.

ನಿರಾಸೆ ಬಜೆಟ್ ಮಂಡಿಸಿ ಮಂಡ್ಯ ಜನರಿಗೆ ವಂಚನೆ

● 6 ಮಂದಿ ಕಾಂಗ್ರೆಸ್ ಶಾಸಕರನ್ನು ಕೊಟ್ಟರೂ ಬಜೆಟ್‌ನಲ್ಲಿ ಜಿಲ್ಲೆಗೆ ಅನ್ಯಾಯ ● ಯಕಶ್ಚಿತ್ ಚಲುವರಾಯಸ್ವಾಮಿಯನ್ನು ಶಾಸಕ, ಎಂಪಿ, ಮಂತ್ರಿ ಮಾಡಿದ್ದು ಜೆಡಿಎಸ್ ● ಕಾಂಗ್ರೆಸ್ ವಿರುದ್ಧ ರವೀಂದ್ರ, ಸುರೇಶ್‌ಗೌಡ ಸೇರಿದಂತೆ ದಳಪತಿಗಳ ಗುಡುಗು



ಮಂಡ್ಯ, ಜು.10– ಓರ್ವ ಕಾಂಗ್ರೆಸ್ ಬೆಂಬಲಿತ ಸೇರಿದಂತೆ ಜಿಲ್ಲೆಯಿಂದ 6 ಮಂದಿ ಕಾಂಗ್ರೆಸ್ ಶಾಸಕರನ್ನು ಆಯ್ಕೆ ಮಾಡಿ ಕಳುಹಿಸಿದರೂ ನಿರಾಸೆ ಬಜೆಟ್ ಮಂಡಿಸುವ ಮೂಲಕ ಕಾಂಗ್ರೆಸ್ ಸರ್ಕಾರ ಮಂಡ್ಯ ಜಿಲ್ಲೆ ಜನರಿಗೆ ವಂಚಿಸಿದೆ ಎಂದು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಕಿಡಿಕಾರಿದರು.

ಸೋಮವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಿಂದ ಈ ಬಾರಿ ಘಟಾನುಘಟಿ ನಾಯಕರು ವಿಧಾನಸಭೆ ಪ್ರವೇಶಿಸಿದ್ದಾರೆ. ಗೆದ್ದ ಆರಂಭದಲ್ಲಿ ಜಿಲ್ಲೆ ಅಭಿವೃದ್ಧಿ ಮಾಡುವುದಾಗಿ ಘೋಷಿಸಿದ್ದರು. ಆದರೆ ಬಜೆಟ್‌ನಲ್ಲಿ ಜಿಲ್ಲೆಗೆ ಒಂದೇ ಒಂದು ಜನಪ್ರಿಯ ಯೋಜನೆ, ಅನುದಾನ ತರಲು ವಿಫಲರಾಗಿರುವ ಇವರು, ರಾಜ್ಯ ಕಾಂಗ್ರೆಸ್ ನಾಯಕರ ಕೈಗೊಂಬೆಗಳಾಗಿದ್ದಾರೆ ಎಂದು ಟೀಕಿಸಿದರು.

ಮುಖ್ಯಮಂತ್ರಿಗಳ ಬಳಿ ಮಾತನಾಡಿ ಜಿಲ್ಲೆಯ ಅಭಿವೃದ್ಧಿಗೆ ಹಣ ತರುವ ತಾಕತ್ತು, ಯೋಗ್ಯತೆ ಜಿಲ್ಲೆಯ ಕಾಂಗ್ರೆಸ್ ಶಾಸಕರಿಗಿಲ್ಲ. ಸದನದಲ್ಲಿ ತಮ್ಮ ನಾಯಕರನ್ನು ಮೆಚ್ಚಿಸುವ ಸಲುವಾಗಿ ನಮ್ಮ ನಾಯಕರ ಬಗ್ಗೆ ಮಾತನಾಡುತ್ತಾ ಕಾಲಹರಣ ಮಾಡುತ್ತಿದ್ದಾರೆ. ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ತಮ್ಮ ಅವಧಿಯಲ್ಲಿ ಮಂಡ್ಯಕ್ಕೆ ಕೊಟ್ಟಿದ್ದ ಭರಪೂರ ಯೋಜನೆಗಳು ಬಿಜೆಪಿ ಸರ್ಕಾರದಲ್ಲಿ ವಾಪಸ್ಸಾಯಿತು. ಆ ಯೋಜನೆಗಳನ್ನು ಪ್ರಸ್ತುತ ಇರುವ ಶಾಸಕರಿಗೆ ವಾಪಸ್ ತರುವ ಯೋಗ್ಯತೆ ಇಲ್ಲ. ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಸಿಎಂ ಮಾಡುವ ಶಕ್ತಿ ಇರುವ ಮಹಾನ್ ನಾಯಕನೊಬ್ಬ ಜಿಲ್ಲೆಗೆ ಘೋಷಣೆಯಾಗಿದ್ದ ಗ್ರಾಮಾ ಕೇರ್ ಯೋಜನೆಯನ್ನು ಮೈಸೂರಿಗೆ ಧಾರೆ ಎಳೆದಿದ್ದೆ ಅವರ ಸಾಧನೆ ಎಂದು ಚಲುವರಾಯಸ್ವಾಮಿ ಹೆಸರೇಳದೇ ವ್ಯಂಗ್ಯವಾಡಿದರು.

ಈಗಾಗಲೇ 6 ಮಂದಿ ಶಾಸಕರನ್ನು ಗೆಲ್ಲಿಸಿದ್ದಕ್ಕೆ ಮಂಡ್ಯ ಜಿಲ್ಲೆ ಜನ ಪಶ್ಚಾತ್ತಾಪ ಪಡುತ್ತಿದ್ದಾರೆ. ತಾವೇ ಶಾಶ್ವತ ಶಾಸಕರು ಎಂದು ತಮ್ಮ ಹೆಗಲನ್ನು ತಾವೇ ತಟ್ಟಿಕೊಳ್ಳುತ್ತಿದ್ದಾರೆ. ಬಹುಶಃ 5 ವರ್ಷದ ಬಳಿಕ ಮತ್ತೆ ಚುನಾವಣೆ ಬರುತ್ತದೆ ಎಂಬುದನ್ನು ಮರೆತಿರುವ ನೂತನ ಶಾಸಕರಿಗೆ ಕನಿಷ್ಠ 6 ತಿಂಗಳು ಕಾಲಾವಕಾಶ ಕೊಡಬೇಕೆಂಬ ಇಚ್ಛೆ ಇತ್ತಾದರೂ ಬಜೆಟ್‌ನಲ್ಲಿ ಜಿಲ್ಲೆಯ ಜನಕ್ಕೆ ಅನ್ಯಾಯವಾದ ಪರಿಣಾಮ ಸಾರ್ವಜನಿಕರ ಪರವಾಗಿ ನಾವು ಸರ್ಕಾರವನ್ನು ಪ್ರಶ್ನಿಸಬೇಕಾದ ಅನಿವಾರ್ಯತೆ ಬಂದಿದೆ ಎಂದು ತಿಳಿಸಿದರು.

ಚಲುವರಾಯಸ್ವಾಮಿ ತಮ್ಮ ಯೋಗ್ಯತೆಗೆ ತಕ್ಕಂತೆ ಮಾತನಾಡಲಿ. ಹೆಚ್.ಡಿ.ದೇವೇಗೌಡರ ಮಗ ಎನ್ನುವ ಕಾರಣಕ್ಕೆ ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದು, ಜೆಡಿಎಸ್ ಅಭ್ಯರ್ಥಿ ಎನ್ನುವ ಕಾರಣಕ್ಕೆ ಚಲುವರಾಯಸ್ವಾಮಿ ಸಹ ಶಾಸಕರಾಗಿದ್ದು, ಚಲುವರಾಯಸ್ವಾಮಿ ಅವರನ್ನು ಜೆಡಿಎಸ್ ಪಕ್ಷ ಟಾಪ್ 2 ನಾಯಕನನ್ನಾಗಿ ಬಿಂಬಿಸಿದ್ದಕ್ಕೆ ಕಾಂಗ್ರೆಸ್‌ಗೆ ಹೋಗಿ ಮಂತ್ರಿಯಾಗಿರುವುದು. ಬೆಳೆದಿದ್ದನ್ನು ಮರೆಯಬಾರದೆಂದು ಹೇಳಿದರು.

ಈ ಹಿಂದೆ ನಮ್ಮ ಅವಧಿಯಲ್ಲಿ ಜಿಲ್ಲೆಯಲ್ಲಿ ಚಾಲನೆಗೊಂಡಿದ್ದ ಅಭಿವೃದ್ಧಿ ಕೆಲಸಗಳು ಪುನರಾರಂಭವಾಗಬೇಕು. ಅಭಿವೃದ್ಧಿ ಕೆಲಸಗಳನ್ನು ಶೀಘ್ರ ಆರಂಭಿಸಿ, ನನೆಗುದಿಗೆ ಬಿದ್ದಿರುವ ಯೋಜನೆಗಳನ್ನು ಕಾರ್ಯರೂಪಕ್ಕೆ ತರದಿದ್ದರೆ ಕಾಂಗ್ರೆಸ್ ವಿರುದ್ಧ ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸರ್ಕಾರದಿಂದ ವಿಪಕ್ಷ ಶಾಸಕರಿಗೆ ಅವಮಾನ: ಹೆಚ್.ಟಿ.ಮಂಜು

ಮಂಡ್ಯ, ಜು.10– ಜಿಲ್ಲೆಯ 6 ತಾಲೂಕಿನಲ್ಲಿ ಶಾಸಕರ ತಾಳಕ್ಕೆ ತಕ್ಕಂತೆ ಉನ್ನತ ಅಧಿಕಾರಿಗಳು ಕುಣಿಯುತ್ತಾ, ನೌಕರರು ಮತ್ತು ಸಿಬ್ಬಂದಿಗಳನ್ನು ಮನಬಂದಂತೆ ವರ್ಗಾವಣೆ ಮಾಡುತ್ತಿದ್ದಾರೆ. ಆದರೆ ಕೆ.ಆರ್.ಪೇಟೆಯಲ್ಲಿ ನನ್ನ ಮಾತಿಗೆ ಕಿಮ್ಮತ್ತು ನೀಡದೇ, ಜಿಲ್ಲಾ ಉಸ್ತುವಾರಿ ಸಚಿವರ ಆಣತಿ ಹಾಗೂ ಪರಾಜಿತ ಕಾಂಗ್ರೆಸ್ ಅಭ್ಯರ್ಥಿ ಮಾತಿಗೆ ಮನ್ನಣೆ ನೀಡುತ್ತಿದ್ದಾರೆ. ಇದರಿಂದ ಕಾಂಗ್ರೆಸ್ ಸರ್ಕಾರ ಹಾಗೂ ಅಧಿಕಾರಿಗಳು ವಿಪಕ್ಷ ಶಾಸಕರಿಗೆ ಅಪಮಾನ ಮಾಡುತ್ತಿದ್ದಾರೆ ಎಂದು ಶಾಸಕ ಹೆಚ್.ಟಿ.ಮಂಜು ದೂರಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಧಿಕಾರಿಗಳು ಶಾಸಕರ ಮಾತಿಗೆ ಕವಡೆ ಕಾಸಿನ ಕಿಮ್ಮತ್ತನ್ನು ಕೊಡುತ್ತಿಲ್ಲ. ಇದು ಹೀಗೆ ಮುಂದುವರೆದರೆ ಅಧಿವೇಶನದಲ್ಲಿ ಈ ಬಗ್ಗೆ ಮಾತನಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಇದೇ ವೇಳೆ ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ಡಿ.ರಮೇಶ್ ಮಾತನಾಡಿದರು.

ಪುಟ್ಟೇಗೌಡರ ಮನೆ ಅಡುಗೆ ಭಟ್ಟನನ್ನು ಬೆಳೆಸಿದ್ದು ಜೆಡಿಎಸ್: ಮಾಜಿ ಶಾಸಕ ಕೆ.ಸುರೇಶ್‌ಗೌಡ ಮಾತನಾಡಿ, ಮಾಜಿ ಶಾಸಕ ಸಿ.ಎಸ್.ಪುಟ್ಟೇಗೌಡರ ಮನೆಯಲ್ಲಿ ಅಡುಗೆ ಭಟ್ಟನಾಗಿದ್ದ ಎನ್.ಚಲುವರಾಯಸ್ವಾಮಿಯನ್ನು ರಾಜಕಾರಣಕ್ಕೆ ಕರೆ ತಂದಿದ್ದು ಹೆಚ್.ಡಿ.ದೇವೇಗೌಡರು. ಚಲುವರಾಯಸ್ವಾಮಿಗೆ ಗುತ್ತಿಗೆ ಕೆಲಸ ಕೊಟ್ಟು, ಜಿಪಂ ಸದಸ್ಯನಾಗಿ ಮಾಡಿ, ಮಂತ್ರಿ, ಶಾಸಕ, ಸಂಸದರನ್ನಾಗಿ ಮಾಡಿ, ದೊಡ್ಡ ಮಟ್ಟದಲ್ಲಿ ಬೆಳೆಸಿದ್ದರ ಹಿಂದೆ ದೇವೇಗೌಡ ಹಾಗೂ ಕುಮಾರಸ್ವಾಮಿ ಕೊಡುಗೆ ಇದೆ ಎಂದರು.

ನಾಗಮಂಗಲದಲ್ಲಿ ದ್ವೇಷದ ರಾಜಕಾರಣ ನಡೆಯುತ್ತಿದ್ದು, ನನ್ನ ಅವಧಿಯಲ್ಲಿ ತಂದ ಅನೇಕ ಯೋಜನೆಗಳನ್ನು ಚಲುವರಾಯಸ್ವಾಮಿ ಕೈ ಬಿಟ್ಟಿದ್ದಾರೆ. ಇವರಿಗೆ ಅಭಿವೃದ್ಧಿಗಿಂತ ದ್ವೇಷವೇ ಮುಖ್ಯವಾಗಿದೆ. ಜಲಧಾರೆಯಂತಹ ನೀರಾವರಿ ಯೋಜನೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ. ನಾಗಮಂಗಲದಲ್ಲಿ ಮಿನಿ ಕ್ಯಾಬಿನೆಟ್ ಇದ್ದು, ಸಿಎಂ, ಡಿಸಿಎಂ, ಗೃಹ, ನೀರಾವರಿ ಮಂತ್ರಿಗಳಿದ್ದು, ಅವರೇ ಇಡೀ ಕ್ಷೇತ್ರ ಹಾಗೂ ಜಿಲ್ಲೆಯನ್ನು ಹತೋಟಿಯಲ್ಲಿಟ್ಟುಕೊಂಡಿದ್ದಾರೆ ಎಂದು ದೂರಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕ ಹೆಚ್.ಟಿ.ಮಂಜು, ಮಾಜಿ ಶಾಸಕರಾದ ಡಾ.ಕೆ.ಅನ್ನದಾನಿ, ಕೆ.ಟಿ.ಶ್ರೀಕಂಠೇಗೌಡ, ಮನ್‌ಮುಲ್ ಮಾಜಿ ಅಧ್ಯಕ್ಷ ಬಿ.ಆರ್.ರಾಮಚಂದ್ರ, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್ ಉಪಸ್ಥಿತರಿದ್ದರು.

ಕಾರ್ಮಿಕರನ್ನು ಕೆಲಸದಿಂದ ತೆಗೆದಿರುವುದನ್ನು ಖಂಡಿಸಿ ಪ್ರತಿಭಟನೆ



ಶ್ರೀರಂಗಪಟ್ಟಣ, ಜು.10– ತಾಲೂಕಿನ ಕೆಆರ್‌ಎಸ್‌ನ ಬೃಂದಾವನದಲ್ಲಿ ಕೆಲಸ ನಿರ್ವಹಿಸುತ್ತಿದ್ದ 6 ಮಂದಿ ಕಾರ್ಮಿಕರನ್ನು ಏಕಾಏಕಿ ಕೆಲಸದಿಂದ ತೆಗೆದು ಹಾಕಿರುವ ಕ್ರಮ ಖಂಡಿಸಿ ನೂರಾರು ಕಾರ್ಮಿಕರು ಹಾಗೂ ಗ್ರಾಮಸ್ಥರು ಕಾವೇರಿ ನಿರಾವರಿ ನಿಗಮದ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಕಳೆದ 15 ವರ್ಷಗಳಿಂದ ಬೃಂದಾವನದ ವಿವಿಧ ಭಾಗದಲ್ಲಿ ಗುತ್ತಿಗೆ ನೌಕರರಾಗಿ ಕೆಲಸ ಮಾಡುತ್ತಿದ್ದ ಕಾರ್ಮಿಕರನ್ನು ಯಾವುದೇ ನೋಟಿಸ್ ನೀಡದೆ ಏಕಾಏಕಿ ತೆಗೆದು ಹಾಕಲಾಗಿದೆ. ಇದಕ್ಕೆ ಅಧಿಕಾರಿಗಳು ಸೂಕ್ತ ಕಾರಣ ನೀಡಬೇಕು ಎಂದು ಅಧಿಕಾರಿಗಳ ವಿರುದ್ಧ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಕೂಡಲೇ ಕೆಲಸದಿಂದ ತೆಗೆದುಹಾಕಿರುವ ನೌಕರರನ್ನು ಮತ್ತೆ ಕೆಲಸಕ್ಕೆ ತೆಗೆದುಕೊಳ್ಳಬೇಕು. ಜೊತೆಗೆ ಬಾಕಿ ಉಳಿದಿರುವ 6 ತಿಂಗಳ ವೇತನ ನೀಡಬೇಕು. ಇಲ್ಲದಿದ್ದರೆ ಸ್ಥಳದಲ್ಲೇ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ನೌಕರರು ಎಚ್ಚರಿಕೆ ನೀಡಿದರು.

ಗ್ರಾಪಂ ಅಧ್ಯಕ್ಷ ನರಸಿಂಹ ಮಾತನಾಡಿ, ಕಳೆದ ಚುನಾವಣೆಯಲ್ಲಿ ಒಂದು ಪಕ್ಷದ ಪರ ಕೆಲಸ ಮಾಡಿದ್ದಾರೆ ಎಂಬ ಕಾರಣಕ್ಕೆ 6 ಮಂದಿ ನೌಕರರನ್ನು ಏಕಾಏಕಿ ತೆಗೆದುಹಾಕಿದ್ದಾರೆ. ಈ ಹಿಂದೆ ಉತ್ತಮವಾಗಿ ಕೆಲಸ ಮಾಡಿದ್ದಾರೆ ಎನ್ನುತ್ತಿದ್ದ ಅಧಿಕಾರಿಗಳೇ ಇದೀಗ ಕೆಲಸ ಸರಿಯಾಗಿ ಮಾಡಿಲ್ಲ ಎನ್ನುತ್ತಿದ್ದಾರೆ. ಹೀಗಾಗಿ ಮತ್ತೆ ಅವರನ್ನು ಕೆಲಸಕ್ಕೆ ತೆಗೆದುಕೊಳ್ಳದಿದ್ದರೆ ಉಗ್ರ ಹೋರಾಟ ಕೈಗೊಳ್ಳಲಾಗುವುದು ಎಂದರು. ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಕಾರ್ಯಪಾಲಕ ಅಭಿಯಂತರ ರಾಮಮೂರ್ತಿ ಹಾಗೂ ಅಧೀಕ್ಷಕ ಅಭಿಯಂತರ ಆನಂದ್, ಇಲಾಖೆಯಿಂದ ಯಾವುದೇ ನೌಕರರನ್ನು ನೇಮಕ ಮಾಡಿಕೊಂಡಿಲ್ಲ. ಬದಲಾಗಿ ಗುತ್ತಿಗೆದಾರನ ಮೂಲಕ ಕೆಲಸಕ್ಕೆ ತೆಗೆದುಕೊಳ್ಳಲಾಗಿದೆ. ಈ ಸಮಸ್ಯೆ ಗುತ್ತಿಗೆದಾರನಿಗೆ ಸೇರಿದ್ದು. ಅಲ್ಲದೇ ಸ್ಥಳೀಯ ಇಂಜಿನಿಯರ್ ಸಹ ಈ 6 ಕಾರ್ಮಿಕರು ಸರಿಯಾಗಿ ಕರ್ತವ್ಯ ನಿರ್ವಹಿಸುತ್ತಿಲ್ಲ ಎಂದು ಗುತ್ತಿಗೆದಾರನಿಗೆ ದೂರು ನೀಡಿದ್ದಾರೆ. ಈ ಸಂಬಂಧ ಕಾರ್ಮಿಕರು ಹಾಗೂ ಗುತ್ತಿಗೆದಾರರೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಅಧ್ಯಕ್ಷ ನಾಗೇಂದ್ರ ಕುಮಾರ್, ಮಾಜಿ ಉಪಾಧ್ಯಕ್ಷ ಮಂಜುನಾಥ್, ಸದಸ್ಯರಾದ ರವಿಕುಮಾರ್, ಪಾಪಣ್ಣ, ಮೂರ್ತಿ, ಹುಲಿಕೆರೆ ಗ್ರಾಪಂ ಸದಸ್ಯ ಮಂಜುನಾಥ್, ಬಂಗಾರಪ್ಪ, ಮುಖಂಡರಾದ ಮಹದೇವು, ವಿಷಕಂಠ, ಪ್ರಕಾಶ್, ರಾಜು, ಮಂಜು ಸೇರಿದಂತೆ ಇತರರಿದ್ದರು.



ಶ್ರೀ ಚಾಮುಂಡೇಶ್ವರಿ ವರ್ಧಂತಿ ಉತ್ಸವದಲ್ಲಿ ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್, ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ತ್ರಿಶಿಕಾಕುಮಾರಿ ಒಡೆಯರ್ ಹಾಗೂ ಸಚಿವ ರಾಮಲಿಂಗಾರೆಡ್ಡಿ, ಜಿಪಂ ಮಾಜಿ ಸದಸ್ಯರೂ ಆದ ರಾಜ್ಯಪತ್ತಿನ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಲಲಿತಾ ಜಿ.ಟಿ.ದೇವೇಗೌಡ ಭಾಗವಹಿಸಿದ್ದರು.

ಅಸಂಖ್ಯಾತ ಭಕ್ತರಿಗೆ ದೇವಿಯ ದರ್ಶನ ಭಾಗ್ಯ

ಒಂದನೇ ಪುಟದಿಂದ

ಬ್ಯಾಂಡ್, ಬಿರುದು, ಬಾವಲಿ, ಛತ್ರಿ, ಚಾಮರದೊಂದಿಗೆ ದೇವಾಲಯದ ಸುತ್ತಲೂ ನಾಡದೇವಿ ಚಾಮುಂಡೇಶ್ವರಿ ಉತ್ಸವಮೂರ್ತಿ ಚಿನ್ನದ ಪಲ್ಲಕ್ಕಿ ಸಾಗಿತು. ರಸ್ತೆಯ ಎರಡೂ ಬದಿಯಲ್ಲಿ ನಿಂತಿದ್ದ ಅಸಂಖ್ಯಾತ ಭಕ್ತರು ನಾಡದೇವಿಗೆ ಜೈಕಾರ ಹಾಕುತ್ತಾ ಕೈ ಮುಗಿದು ಭಕ್ತಿಪೂರ್ವಕವಾಗಿ ನಮಿಸಿದರು.

ಜನ ಜಂಗುಳಿ ನಿಯಂತ್ರಣಕ್ಕೆ ಕ್ರಮ: ಚಾಮುಂಡೇಶ್ವರಿ ದೇವಾಲಯವನ್ನು ಬೆಳಗ್ಗೆ 8 ಗಂಟೆಗೆ ತೆರೆಯಲಾಯಿತು. ಆಷಾಢ ಮಾಸದ ವಿಶೇಷ ಪೂಜಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಮುಂಜಾನೆ 3 ಗಂಟೆಗೆ ಬೆಟ್ಟಕ್ಕೆ ಭಕ್ತರು ಆಗಮಿಸಲಾರಂಭಿಸಿದ್ದರು. ಮುಂಜಾನೆ 5.30 ದೇವಾಲಯ ಪ್ರವೇಶಕ್ಕೆ ಅವಕಾಶ ನೀಡಲಾಗುತ್ತಿತ್ತು. ಆದರೆ, ವರ್ಧಂತಿ ಹಿನ್ನಲೆಯಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರಬಹುದೆಂಬ ಮುಂದಾಲೋಚನೆಯಿಂದ ಬೆಳಗ್ಗೆ 8 ಗಂಟೆವರೆಗೂ ಬಸ್ ವ್ಯವಸ್ಥೆ ನಿರ್ಬಂಧಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಬೆಟ್ಟದಲ್ಲಿ ಜನಜಂಗುಳಿ ಹೆಚ್ಚಾಗದಂತೆ ಕ್ರಮ ಕೈಗೊಂಡಿದ್ದರೂ, ನಿರೀಕ್ಷೆಗಿಂತ ಹೆಚ್ಚಿನ ಭಕ್ತರು ಬೆಟ್ಟದಲ್ಲಿ ಇಷ್ಟೊತ್ತಿಗಾಗಲೇ ಜಮಾಯಿಸಿದ್ದರು.

ಶಿಫಾರಸು ಪತ್ರವುಳ್ಳವರ ದಂಡು: ಈ ಬಾರಿ ವರ್ಧಂತಿ ಹಾಗೂ ಆಷಾಢ ಮಾಸದ ಶುಕ್ರವಾರದ ವಿಶೇಷ ಪೂಜಾ ಮಹೋತ್ಸವದಂದು ವಿಐಪಿ ಪಾಸ್ ನೀಡದಿರಲು ನಿರ್ಧರಿಸಲಾಗಿತ್ತಾದರೂ, ಶಾಸಕರ, ಸಚಿವರ ಕಚೇರಿಯಿಂದ ಶಿಫಾರಸ್ಸು ಪತ್ರ ತಂದವರ ಸಂಖ್ಯೆ ಹೆಚ್ಚಾಗಿತ್ತು. ಬೆಟ್ಟಕ್ಕೆ ಖಾಸಗಿ ವಾಹನಗಳ ಪ್ರವೇಶ ನಿರ್ಬಂಧಿಸಲಾಗಿತ್ತು. ಶಿಫಾರಸು ಪತ್ರ ತಂದವರ ವಾಹನಗಳ ಬೆಟ್ಟಕ್ಕೆ ಬಿಡುವ ವಿಷಯದಲ್ಲಿ ಇಕ್ಕಟ್ಟಿಗೀಡಾದರು. ಕೆಲವರು ಪೊಲೀಸರೊಂದಿಗೆ ಮಾತಿನ ಚಕಮಕಿ ನಡೆಸಿ, ಬೆಟ್ಟಕ್ಕೆ ತಮ್ಮದೇ ವಾಹನದಲ್ಲಿ ತೆರಳುತ್ತಿದ್ದ ದೃಶ್ಯ ಕಂಡು ಬಂದಿತು.

ಉಚಿತ ಬಸ್ ಸೇವೆ: ಖಾಸಗಿ ವಾಹನಗಳಲ್ಲಿ ಬರುವ ಭಕ್ತರು ಹಾಗೂ ಪ್ರವಾಸಿಗರು ತಮ್ಮ ವಾಹನವನ್ನು ಲಲಿತಮಹಲ್ ಪ್ಯಾಲೆಸ್ ಮೈದಾನದಲ್ಲಿ ನಿಲ್ಲಿಸಿ ಉಚಿತ ಬಸ್‌ನಲ್ಲಿ ಬೆಟ್ಟಕ್ಕೆ ತೆರಳುತ್ತಿದ್ದರು. ನಗರ ಸಾರಿಗೆ ಬಸ್ ನಿಲ್ದಾಣದಿಂದಲೂ ಹೆಚ್ಚುವರಿ ಬಸ್ ವ್ಯವಸ್ಥೆ ಮಾಡಲಾಗಿತ್ತು. ಬಹುತೇಕ ಎಲ್ಲಾ ಬಸ್‌ಗಳಲ್ಲೂ ಮಹಿಳಾ ಭಕ್ತರ ಸಂಖ್ಯೆ ಹೆಚ್ಚಾಗಿದ್ದರು.

ದರ್ಬಾರ್ ಉತ್ಸವದೊಂದಿಗೆ ತೆರೆ: ಚಾಮುಂಡೇಶ್ವರಿಯ ವರ್ಧಂತಿ ಮಹೋತ್ಸವದ ಹಿನ್ನೆಲೆಯಲ್ಲಿ ರಾತ್ರಿ 8.30ಕ್ಕೆ ನಾಡದೇವಿಗೆ ಉತ್ಸವ ಫಲಪೂಜೆ ನಡೆಸಲಾಯಿತು. 8.45ಕ್ಕೆ ದರ್ಬಾರ್ ಉತ್ಸವ ನೆರವೇರಿಸಲಾಯಿತು. ರಾತ್ರಿವರೆಗೂ ಬೆಟ್ಟದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದರು.

> **ಮಹಾಲಕ್ಷ್ಮೀ ಅಲಂಕಾರ**
> ಆಷಾಢ ಮಾಸದ ಕೃಷ್ಣ ಪಕ್ಷದ ಅಷ್ಟಮಿಯ ರೇವತಿ ನಕ್ಷತ್ರದ ದಿನದಂದು ಚಾಮುಂಡೇಶ್ವರಿ ಅಮ್ಮನವರ ವರ್ಧಂತಿ ಮಹೋತ್ಸವ ಆಚರಿಸಲಾಗುತ್ತಿದೆ. ಇಂದು ಸಂಪ್ರದಾಯದಂತೆ ವಿವಿಧ ವಿಶೇಷ ಪೂಜಾ ಕಾರ್ಯ ನೆರವೇರಿಸಲಾಗಿದೆ. ಉತ್ತಮ ಮಳೆ, ಬೆಳೆಯಾಗಲಿ, ನಾಡಿಗೆ ಒಳಿತಾಗಲೆಂದು ದೇವಿಯಲ್ಲಿ ಪಾರ್ಥಿಸಲಾಗಿದೆ. – ಡಾ.ಎನ್.ಶಶಿಶೇಖರ್ ದೀಕ್ಷಿತ್, ಪ್ರಧಾನ ಆಗಮಿಕ

ಒಂದನೇ ಪುಟದಿಂದ

ಸ್ಪರ್ಧೆಗಿಳಿಸಲು ಗಂಭೀರ ಚಿಂತನೆ

ಗುಲ್ಬರ್ಗದಲ್ಲಿ ನಿಂತರೂ ಖರ್ಗೆ ಅವರು ಲೋಕಸಭೆ ಪ್ರವೇಶ ಮಾಡುವ ವಿಶ್ವಾಸವಿದೆ. ಆದರೆ, ಕೋಲಾರದಲ್ಲಿ ಸ್ಪರ್ಧೆ ಮಾಡಿದರೆ ಗೆಲುವಿನ ದಡ ತಲುಪುವುದು ಸುಲಭ. ಅಲ್ಲದೆ, ಹಳೇ ಮೈಸೂರು ಭಾಗದ ಕ್ಷೇತ್ರ ಗಳ ಮೇಲೆ ಹೆಚ್ಚು ಪ್ರಭಾವ ಉಂಟಾಗಿ ಇತರೆ ಅಭ್ಯರ್ಥಿಗಳಿಗೂ ಅನುಕೂಲವಾಗಲಿದೆ ಎಂಬ ಲೆಕ್ಕಾಚಾರ ಹಾಕಲಾಗಿದೆ.

ಲೋಕಸಭೆ ಚುನಾವಣೆಗೆ ಹತ್ತು ತಿಂಗಳಿಗೂ ಮುನ್ನವೇ ಕೆಪಿಸಿಸಿ ಚುನಾವಣಾ ಸಿದ್ಧತೆ ಆರಂಭಿಸಿದ್ದು, ಇದೇ ಸಂದರ್ಭದಲ್ಲಿ ಸಂಭವನೀಯ ಅಭ್ಯರ್ಥಿಗಳ ಪಟ್ಟಿ ಸಿದ್ಧಪಡಿಸಿದೆ.

ಕಳೆದ ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನಾಯಕತ್ವದಲ್ಲಿ ಲೋಕಸಭಾ ಚುನಾವಣೆ ಮತ್ತು ಅಭ್ಯರ್ಥಿಗಳ ಆಯ್ಕೆಗೆ ಸಂಬಂಧಿಸಿದಂತೆ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಬಹುತೇಕ ಕ್ಷೇತ್ರಗಳಿಗೆ ಸಂಭವನೀಯ ಅಭ್ಯರ್ಥಿಗಳನ್ನು ಅಂತಿಮಗೊಳಿಸಲಾಗಿದೆ. ವಿಧಾನಸಭಾ ಚುನಾವಣೆಯಲ್ಲಿ ಪಕ್ಷಕ್ಕೆ ದೊರೆತಿರುವ ಮತಗಳ ಆಧಾರದ ಮೇಲೆ 28 ಕ್ಷೇತ್ರಗಳ ಪೈಕಿ 20 ಕ್ಷೇತ್ರಗಳಲ್ಲಿ ಗೆಲ್ಲುವ ಪಣ ತೊಟ್ಟಿದ್ದಾರೆ.

ಇಷ್ಟು ಕ್ಷೇತ್ರಗಳನ್ನು ಗೆಲ್ಲಲು ಏನೇನು ತಂತ್ರಗಾರಿಕೆ ಮಾಡಬೇಕು ಎಂಬುದಕ್ಕೆ ಚುನಾವಣಾ ಚಾಣಾಕ್ಷ ಸುನೀಲ್ ಕನ್ನೋಗ್ಲ್ ಅವರಿಂದ ಮಾಹಿತಿ ಕೇಳಿದ್ದಾರೆ.

ಸಂಸದ ಡಿ.ಕೆ.ಸುರೇಶ್ ಅವರು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಉತ್ಸುಕತೆ ತೋರದೆ ಇರುವ ಪರಿಣಾಮವಾಗಿ ಬೆಂಗಳೂರು ಗ್ರಾಮಾಂತರದ ಜತೆಗೆ ಬೆಂಗಳೂರು ದಕ್ಷಿಣ ಕ್ಷೇತ್ರದಿಂದಲೂ ಸ್ಪರ್ಧೆ ಮಾಡಲು ಅವಕಾಶ ನೀಡಲಾಗುತ್ತದೆ ಎಂಬುದು ಕಾಂಗ್ರೆಸ್ ಮೂಲಗಳ ಹೇಳಿಕೆ. ಹಾಸನ ಲೋಕಸಭಾ ಕ್ಷೇತ್ರವನ್ನು ದೇವೇಗೌಡರ ಕುಟುಂಬದಿಂದ ಕಸಿದುಕೊಳ್ಳಲು ಮಾಜಿ ಸಚಿವ, ದಿವಂಗತ ಪುಟ್ಟಸ್ವಾಮಿಗೌಡ ಅವರ ಮೊಮ್ಮಗ ಶ್ರೇಯಸ್ ಪಟೇಲ್ ಅವರನ್ನು ಕಣಕ್ಕಿಳಿಸಲು ಲೆಕ್ಕಾಚಾರ ಹಾಕಲಾಗಿದೆ.

ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಿಂದ ನಿವೃತ್ತ ಪೊಲೀಸ್ ಅಧಿಕಾರಿ, ಬಿಜೆಪಿ ಮುಖಂಡ ಕೆ.ಸಿ.ರಾಮಮೂರ್ತಿ ಅವರನ್ನು ಕಣಕ್ಕಿಳಿಸುವ ಯೋಚನೆ ಕಾಂಗ್ರೆಸ್ ನಾಯಕರಲ್ಲಿದ್ದು, ಅದಕ್ಕೂ ಮುನ್ನ ಅವರನ್ನು ಬಿಜೆಪಿ ಪಾಳಯದಿಂದ ಕಾಂಗ್ರೆಸ್ ಪಾಳಯಕ್ಕೆ ಸೆಳೆಯಲು ತೀರ್ಮಾನಿಸಲಾಗಿದೆ.

ಕೆ.ಸಿ.ರಾಮಮೂರ್ತಿ ಅವರಿಗೆ ಬೆಂಗಳೂರು ಉತ್ತರ ಇಲ್ಲವೇ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಸಲು ಯೋಚನೆ ಮಾಡಲಾಗಿದೆ.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಿಂದ ಎಂ.ಎಸ್.ರಾಮಯ್ಯ ವೈದ್ಯಕೀಯ ಕಾಲೇಜಿನ ನಿರ್ದೇಶಕ, ರಾಜ್ಯ ಯುವ ಕಾಂಗ್ರೆಸ್‌ನ ಮಾಜಿ ಅಧ್ಯಕ್ಷ ರಕ್ಷಾ ರಾಮಯ್ಯ ಅವರನ್ನು ಕಣಕ್ಕಿಳಿಸಲು ಪಕ್ಷದ ನಾಯಕರು ತೀರ್ಮಾನ ಮಾಡಿದ್ದಾರೆ. ಮುಂದಿನ ಲೋಕಸಭಾ ಚುನಾವಣೆಯಲ್ಲಿ ದಿಲ್ಲಿ ಗದ್ದುಗೆಯ ಮೇಲೆ ಕಾಂಗ್ರೆಸ್ ನೇತೃತ್ವದ ಯುಪಿಎ ಮೈತ್ರಿಕೂಟ ಅಧಿಕಾರಕ್ಕೆ ಬರಬೇಕು ಎಂಬ ಪ್ರಯತ್ನ ನಡೆದಿದ್ದು, ಈ ಪ್ರಯತ್ನಕ್ಕೆ ದೊಡ್ಡ ಮಟ್ಟದ ಬೆಂಬಲ ನೀಡಲು ಕನಿಷ್ಠ ಇಪ್ಪತ್ತು ಸ್ಥಾನಗಳನ್ನು ಗೆಲ್ಲಲೇಬೇಕು ಎಂದು ರಾಜ್ಯ ಕಾಂಗ್ರೆಸ್ ನಾಯಕರು ನಿರ್ಧರಿಸಿದ್ದಾರೆ. ಕಳೆದ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ಜತೆ ಮೈತ್ರಿ ಮಾಡಿಕೊಂಡ ಕಾರಣ ಉಭಯ ಪಕ್ಷಗಳು ತಲಾ ಒಂದೊಂದು ಕ್ಷೇತ್ರಕ್ಕೆ ತೃಪ್ತಿಪಟ್ಟುಕೊಳ್ಳಬೇಕಾಯಿತು. ಬಿಜೆಪಿ 25 ಕ್ಷೇತ್ರಗಳಲ್ಲಿ ಜಯಗಳಿಸಲು ನಮ್ಮ ಮೈತ್ರಿಯೇ ಕಾರಣ. ಮೈತ್ರಿ ಇಲ್ಲದಿದ್ದರೆ ಕನಿಷ್ಠ 9 ಕ್ಷೇತ್ರಗಳಲ್ಲಿ ಗೆಲುವು ಸಾಧಿಸುತ್ತಿದ್ದೆವು. ಈ ಬಾರಿ ರಾಜ್ಯದ ಜನತೆ ನಮ್ಮ ಕೈ ಹಿಡಿಯಲಿದ್ದಾರೆ. ಮಿಗಿಲಾಗಿ ಬಿಜೆಪಿ ಆಡಳಿತದಿಂದ ಮತದಾರರು ಬೇಸತ್ತಿರುವ ಲಾಭವನ್ನು ಪಡೆದುಕೊಳ್ಳಬೇಕು ಎಂಬ ತೀರ್ಮಾನಕ್ಕೆ ಸಭೆ ಬಂದಿದೆ.

'ಅನ್ನ ಭಾಗ್ಯ' ಯೋಜನೆಗೆ 10 ವರ್ಷ

ಬೆಂಗಳೂರು: ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾದ 'ಅನ್ನ ಭಾಗ್ಯ' ಜಾರಿಯಾಗಿ ಇಂದಿಗೆ 10 ವರ್ಷ ಕಳೆದಿದೆ. ಈ ಹಿನ್ನೆಲೆಯಲ್ಲಿ ಇಂದಿನಿಂದ ಪ್ರತಿ ವ್ಯಕ್ತಿಗೆ ತಲಾ 5 ಕೆ.ಜಿ ಅಕ್ಕಿ ಹಾಗೂ ರೂ. 170 ನೀಡಲು ರಾಜ್ಯ ಸರ್ಕಾರ ನಿರ್ಧರಿಸಿದೆ. 'ಹಸಿವಿನ ಬೇನೆ ನಾಡಿನ ಬಡಜನರನ್ನು ಬಾಧಿಸದಿರಲಿ ಎಂಬ ಸದುದ್ದೇಶದೊಂದಿಗೆ ನಾವು ಇಂದಿನಿಂದ 'ಅನ್ನ ಭಾಗ್ಯ' ಯೋಜನೆಯಡಿ ಬಡಕುಟುಂಬದ ಪ್ರತಿ ವ್ಯಕ್ತಿಗೆ ತಲಾ 5 ಕೆ.ಜಿ ಅಕ್ಕಿ ಹಾಗೂ ರೂ. 170 ನೀಡಲಿದ್ದೇವೆ. ಹೆಚ್ಚುವರಿ 5 ಕೆ.ಜಿ ಅಕ್ಕಿಯ ಬದಲಿಗೆ ನೀಡುವ ಹಣವನ್ನು ಆಹಾರ ಪದಾರ್ಥಗಳ ಖರೀದಿಗೆ ಮಾತ್ರ ಬಳಕೆ ಮಾಡಬೇಕೆಂದು ನಾಡಬಾಂಧವರಲ್ಲಿ ಮನವಿ ಮಾಡುತ್ತೇನೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. 'ನಾನು ನನ್ನ ಬದುಕಿನಲ್ಲಿ ಅನುಭವಿಸಿದ ಹಸಿವು, ಬಡತನದ ಅನುಭವದಿಂದಲೇ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಮರುಗಳಿಗೆಯಲ್ಲಿಯೇ 'ಅನ್ನ ಭಾಗ್ಯ' ಯೋಜನೆಯನ್ನು ಜಾರಿಗೆ ತರುವ ನಿರ್ಧಾರ ಕೈಗೊಂಡಿದ್ದೆ.

ಕರ್ನಾಟಕದ ಯಾರೊಬ್ಬರೂ ಹಸಿದು ಮಲಗಬಾರದು ಎಂಬ ಸದಾಶಯದೊಂದಿಗೆ ಬಡ ಕುಟುಂಬಗಳಿಗೆ ತಲಾ 5 ಕೆ.ಜಿ ಆಹಾರಧಾನ್ಯವನ್ನು ವಿತರಣೆ ಮಾಡುವ ಯೋಜನೆಯನ್ನು ಜುಲೈ 10, 2013 ರಂದು ಜಾರಿಗೊಳಿಸಿ, ನಾಡಿನ ಹಸಿದವರಿಗೆ ನೆಮ್ಮದಿಯ ಅನ್ನ ನೀಡಿದ್ದೆ. ನಮ್ಮ ಈ ಯೋಜನೆಯನ್ನು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದ ಹಲವು ಆರ್ಥಿಕ– ಸಾಮಾಜಿಕ ಸಂಸ್ಥೆಗಳು ಮತ್ತು ಸರ್ಕಾರಗಳು ಶ್ಲಾಘಿಸಿವೆ ಎಂದು ಹೇಳಲು ಹೆಮ್ಮೆಯೆನ್ನಿಸುತ್ತದೆ. ನಾಡಿನ ಜನತೆ ವಿಶ್ವಾಸವಿರಿಸಿ ನೀಡಿದ್ದ ರಾಜಕೀಯ ಅಧಿಕಾರವನ್ನು ಕರ್ನಾಟಕವನ್ನು ಹಸಿವು ಮುಕ್ತಗೊಳಿಸಲು ಸದ್ಬಳಕೆ ಮಾಡಿಕೊಂಡ ಸಂತೃಪ್ತಿ ನನ್ನದು ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಎಫ್‌ಸಿಐ ಅಕ್ಕಿಯ ಇ– ಹರಾಜಿಗೆ ನೀರಸ ಪ್ರತಿಕ್ರಿಯೆ

ನವದೆಹಲಿ: ಭಾರತೀಯ ಆಹಾರ ನಿಗಮವು (ಎಫ್‌ಸಿಐ) ಕರ್ನಾಟಕ ಸರ್ಕಾರದ 'ಅನ್ನ ಭಾಗ್ಯ ಯೋಜನೆ'ಗಾಗಿ ಅಕ್ಕಿ ಮಾರಾಟ ಮಾಡಲು ನಿರಾಕರಿಸಿದ ಬೆನ್ನಲ್ಲೇ ನಡೆಸಿರುವ ಇ–ಹರಾಜು ಪ್ರಕ್ರಿಯೆಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ನಿಗಮವು ಒಟ್ಟು 3.86 ಲಕ್ಷ ಟನ್ ಅಕ್ಕಿ ಮಾರಾಟಕ್ಕಾಗಿ ಹರಾಜು ಪ್ರಕ್ರಿಯೆ ನಡೆಸಿದರೂ ಬಿಡ್ಡಿಂಗ್ ಸ್ವೀಕರಿಸಿರುವುದು 170 ಟನ್ ಅಕ್ಕಿಗೆ ಮಾತ್ರ.

ಬಿಪಿಎಲ್ ಹಾಗೂ ಅಂತ್ಯೋದಯ ಕುಟುಂಬಗಳ ಪ್ರತಿ ಸದಸ್ಯರಿಗೆ ತಲಾ 10 ಕೆ.ಜಿ. ಅಕ್ಕಿ ನೀಡಲು ತಿಂಗಳಿಗೆ 2.28 ಲಕ್ಷ ಟನ್ ಅಕ್ಕಿ ಪೂರೈಕೆ ಮಾಡುವಂತೆ ಕರ್ನಾಟಕ ಸರ್ಕಾರವು ನಿಗಮಕ್ಕೆ ಮನವಿ ಮಾಡಿತ್ತು. ಆರಂಭದಲ್ಲಿ ಅಕ್ಕಿ ನೀಡಲು ಒಪ್ಪಿದ್ದ ನಿಗಮವು, ಬಳಿಕ ನಿರಾಕರಿಸಿತ್ತು. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಕ್ಕಿ ಒದಗಿಸುವಂತೆ ಮನವಿ ಮಾಡಿದ್ದರು. ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪಿಯೂಷ್ ಗೋಯಲ್ ಅವರನ್ನು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಎರಡು ಸಲ ಭೇಟಿ ಮಾಡಿ ಯೋಜನೆಗೆ ಸಹಕಾರ ನೀಡುವಂತೆ ಕೋರಿದ್ದರು. ರಾಜ್ಯದ ಒತ್ತಡಕ್ಕೆ ಉಭಯ ಸಚಿವರು ಮಣಿದಿರಲಿಲ್ಲ. ಮುಕ್ತ ಮಾರುಕಟ್ಟೆಯಲ್ಲಿ ಅಕ್ಕಿ ಖರೀದಿ ಮಾಡುವಂತೆ ಸಲಹೆ ನೀಡಿ 'ಕೈ' ತೊಳೆದುಕೊಂಡಿದ್ದರು. ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಿಗೆ ಅಕ್ಕಿ ಮಾರುವುದನ್ನು ಸ್ಥಗಿತಗೊಳಿಸಿದ ನಂತರ 'ದೇಶೀಯ ಮುಕ್ತ ಮಾರುಕಟ್ಟೆ ಮಾರಾಟ ಯೋಜನೆ (ಒಎಂಎಸ್‌ಎಸ್‌ಡಿ)' ಅಡಿಯಲ್ಲಿ ಇ–ಹರಾಜು ನಡೆಸುವಂತೆ ನಿಗಮಕ್ಕೆ ಕೇಂದ್ರ ಸರ್ಕಾರ ಸೂಚಿಸಿತ್ತು. ಈ ಹರಾಜಿನಲ್ಲಿ ರಾಜ್ಯ ಸರ್ಕಾರಗಳು ಭಾಗವಹಿಸಲು ಅವಕಾಶ ಇಲ್ಲ. ಇಲ್ಲಿ ವ್ಯಾಪಾರಿಗಳು ಮಾತ್ರ ಭಾಗವಹಿಸಬಹುದು. ಪ್ರತಿ ಕೆ.ಜಿ. ಅಕ್ಕಿಗೆ ರೂ. 31.75 ದರ ನಿಗದಿಪಡಿಸಲಾಗಿತ್ತು. ಆದರೆ, ಅಕ್ಕಿ ಖರೀದಿ ಮಾಡಲು ವ್ಯಾಪಾರಿಗಳು ಹೆಚ್ಚಿನ ಆಸಕ್ತಿ ತೋರಿಲ್ಲ.

ಸರ್ಕಾರಿ ಶಾಲಾ ಶಿಕ್ಷಕರಿಗೆ ಡ್ರೆಸ್ ಕೋಡ್

ಚರ್ಚಿಸಿ ತೀರ್ಮಾನ: ಮಧು ಬಂಗಾರಪ್ಪ


ಬೆಂಗಳೂರು: ಸರ್ಕಾರಿ ಶಾಲಾ ಶಿಕ್ಷಕರಿಗೆ ಡ್ರೆಸ್ ಕೋಡ್ ಜಾರಿಗೆ ತರುವ ಬಗ್ಗೆ ಚರ್ಚೆ ಮಾಡಿ ಮುಂದಿನ ತೀರ್ಮಾನ ತೆಗೆದುಕೊಳ್ಳುವುದಾಗಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ವಿಧಾನಪರಿಷತ್ ಪ್ರಶ್ನೋತ್ತರ ಕಲಾಪದ ಅವಧಿಯಲ್ಲಿ ಕಾಂಗ್ರೆಸ್‌ನ ಮಂಜುನಾಥ್ ಭಂಡಾರಿ ಪ್ರಶ್ನೆ ಕೇಳಿದರು.



ಸರ್ಕಾರಿ ಶಾಲೆಗಳ ಶಿಕ್ಷಕರಿಗೆ ಡ್ರೆಸ್ ಕೋಡ್ ಜಾರಿ ಮಾಡಲು ಸರ್ಕಾರ ಕ್ರಮವಹಿಸ ಬೇಕು. ಸರ್ಕಾರಿ ಶಾಲೆಗಳಲ್ಲಿ ಸಂಗೀತ ಮತ್ತು ಚಿತ್ರಕಲೆ ಶಿಕ್ಷಕರಲ್ಲಿ 1200 ಹುದ್ದೆ ಖಾಲಿ ಇದೆ. ಇವುಗಳನ್ನು ತುಂಬ ಬೇಕು. ಹೈಸ್ಕೂಲ್‌ನಲ್ಲಿ ಕ್ಲರ್ಕ್ ಹುದ್ದೆ ಖಾಲಿ ಇರೋದ್ರಿಂದ ಮುಖ್ಯ ಶಿಕ್ಷಕರಿಗೆ ಒತ್ತಡ ಹೆಚ್ಚಾಗುತ್ತಿದೆ. ಹೀಗಾಗಿ ಖಾಲಿ ಇರೋ ಕ್ಲರ್ಕ್ ಹುದ್ದೆ ಭರ್ತಿ ಮಾಡಬೇಕು ಎಂದು ಮಂಜುನಾಥ ಭಂಡಾರಿ ಒತ್ತಾಯ ಮಾಡಿದರು.

ಇದಕ್ಕೆ ಉತ್ತರ ನೀಡಿದ ಸಚಿವ ಮಧು ಬಂಗಾರಪ್ಪ, ಶಾಲಾ ಶಿಕ್ಷಕರಿಗೆ ಡ್ರೆಸ್‌ಕೋಡ್ ಜಾರಿ ಮಾಡುವ ಬಗ್ಗೆ ಚರ್ಚೆ ಮಾಡಿ ತೀರ್ಮಾನ ಮಾಡ್ತೀವಿ ಎಂದು ತಿಳಿಸಿದರು. ಈಗಾಗಲೇ ಶಾಲೆಗಳಿಗೆ ಸಮವಸ್ತ್ರ 83% ತಲುಪಿದೆ ಉಳಿದ ಸಮವಸ್ತ್ರ ಬೇಗ ತಲುಪಿಸುತ್ತೇವೆ. ಖಾಲಿ ಇರೋ ವಿಶೇಷ ಶಿಕ್ಷಕರ ಹುದ್ದೆ ಭರ್ತಿ ಮಾಡ್ತೀವಿ. ಸಂಗೀತ ಮತ್ತು ಚಿತ್ರಕಲೆ ಶಿಕ್ಷಕರ ನೇಮಕಕ್ಕೆ ಹಣಕಾಸು ಇಲಾಖೆ ಜೊತೆ ಚರ್ಚೆ ಮಾಡಿ ಕ್ರಮ ತೆಗೆದುಕೊಳ್ತೀವಿ. ಹೈಸ್ಕೂಲ್‌ನಲ್ಲಿ ಕ್ಲರ್ಕ್ ಪೋಸ್ಟ್ ಕೊಡಲಾಗಿದೆ. ಖಾಲಿ ಇರೋ ಕ್ಲರ್ಕ್ ಪೋಸ್ಟ್ ಬೇಗ ತುಂಬಲು ಕ್ರಮವಹಿಸುತ್ತೇವೆ ಎಂದರು.

ಕೆನಡಾ ಓಪನ್ ಬ್ಯಾಡ್ಮಿಂಟನ್: ಚಾಂಪಿಯನ್ ಆದ ಭಾರತದ ಲಕ್ಷ್ಯ ಸೇನ್



ಟೊರೆಂಟೊ: ಕೆನಡಾ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್ ಷಿಪ್ ಫೈನಲ್‌ನಲ್ಲಿ ಭಾರತದ ಲಕ್ಷ್ಯ ಸೇನ್ ಅವರು ಚೀನಾದ ಬಲಿಷ್ಠ ಲೀ ಶಿ ಫೆಂಗ್‌ರನ್ನು ಮಣಿಸಿ ಪ್ರಶಸ್ತಿಗೆ ಮುತ್ತಿಟ್ಟಿದ್ದಾರೆ.

ಚೀನಾದ ಲಿ ಶಿ ಫೆಂಗ್ ಅವರನ್ನು 18–21, 20–22 ನೇರ ಸೆಟ್‌ಗಳ ಅಂತರದಲ್ಲಿ ಸೋಲಿಸುವ ಮೂಲಕ ಭಾರತದ ಲಕ್ಷ್ಯ ಸೇನ್ ಕ್ಯಾಲ್ಗೇರಿಯಲ್ಲಿ ನಡೆದ ಕೆನಡಾ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್ ಪಟ್ಟ ಮುಡಿಗೇರಿಸಿಕೊಂಡಿದ್ದಾರೆ. ಈ ಮೂಲಕ ಭಾರತದ ಸ್ಟಾರ್ ಆಟಗಾರ ಅತ್ಯುತ್ತಮ ಪ್ರದರ್ಶನ ನೀಡಿದ ಲಕ್ಷ್ಯ ಸೇನ್ ವರ್ಷದ ಮೊದಲ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ.

ಕಳೆದ ರಾತ್ರಿ ಕೆನಡಾ ಓಪನ್ ಫೈನಲ್ ಪಂದ್ಯದಲ್ಲಿ ಆಲ್ ಇಂಗ್ಲೆಂಡ್ ಚಾಂಪಿಯನ್ ಚೀನಾದ ಲಿ ಶಿ ಫೆಂಗ್ ಅವರನ್ನು ನೇರ ಸೆಟ್‌ಗಳಲ್ಲಿ ಸೋಲಿಸುವ ಮೂಲಕ ಭಾರತದ ಸ್ಟಾರ್ ಷಟ್ಲರ್ ಲಕ್ಷ್ಯ ಸೇನ್ ಎಲ್ಲರನ್ನು ಚಕಿತಗೊಳಿಸಿದ್ದಾರೆ.

ಮೊದಲ ಸೆಟ್ ಅನ್ನು 21–18 ರಿಂದ ಗೆದ್ದುಕೊಂಡ ಅವರು 2ನೇ ಸೆಟ್‌ನಲ್ಲಿ 10ನೇ ಶ್ರೇಯಾಂಕದ ಶಿ ಫೆಂಗ್ ಹೋರಾಟ ನೀಡಿದರಾದರೂ ಗೆಲುವು ಸಾಧಿಸಲು ಸಾಧ್ಯವಾಗಲಿಲ್ಲ. ಎರಡನೇ ಸೆಟ್‌ನಲ್ಲಿ 16–20 ರಿಂದ ಹಿನ್ನಡೆ ಸಾಧಿಸಿದ್ದ ಲಕ್ಷ್ಯ ಸೇನ್ ಛಲ ಬಿಡದೆ ಸತತ ಆರು ಪಾಯಿಂಟ್‌ಗಳನ್ನು ಗೆದ್ದು ಅಂತಿಮವಾಗಿ ಪ್ರಶಸ್ತಿಯನ್ನು ತನ್ನತ್ತ ಸೆಳೆದರು. ಕಳೆದ ವರ್ಷ ಇಂಡಿಯಾ ಓಪನ್ ಪ್ರಶಸ್ತಿ ಗೆದ್ದಿದ್ದ ಸೇನ್‌ಗೆ ಇದು ಎರಡನೇ ಅಂತರರಾಷ್ಟ್ರೀಯ ಪ್ರಶಸ್ತಿಯಾಗಿದೆ.

ಆಶಾ ಕಾರ್ಯಕರ್ತೆಯರ ವೇತನ ಹೆಚ್ಚಳ ಸಾಧ್ಯವಿಲ್ಲ: ದಿನೇಶ್ ಗುಂಡೂರಾವ್

ಬೆಂಗಳೂರು: ಆಶಾ ಕಾರ್ಯಕರ್ತೆಯರ ಸಂಬಳ ಹೆಚ್ಚಳ ಮಾಡುವ ಪ್ರಸ್ತಾಪ ಸರ್ಕಾರದ ಮುಂದೆ ಇಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ವಿಧಾನಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ JDSನ ತಿಪ್ಪೇಸ್ವಾಮಿ, ಆಶಾ ಕಾರ್ಯಕರ್ತೆಯರ ಸಂಬಳ ಜಾಸ್ತಿ ಮಾಡಬೇಕು. ಅವರಿಗೂ ಪಿಂಚಣಿ ಕೊಡಬೇಕು. ಹೊಸ ಸ್ಮಾರ್ಟ್‌ಫೋನ್‌ಗಳನ್ನು ನೀಡಬೇಕು ಎಂದು ಆಗ್ರಹಿಸಿದರು.



ಇದಕ್ಕೆ ಉತ್ತರ ನೀಡಿದ ಸಚಿವ ದಿನೇಶ್ ಗುಂಡೂರಾವ್, ಆಶಾ ಕಾರ್ಯಕರ್ತೆಯರ ಸಂಬಳ ಹೆಚ್ಚಳ ಮಾಡುವ ಪ್ರಸ್ತಾಪ ಸರ್ಕಾರದ ಮುಂದೆ ಇಲ್ಲ. ರಾಜ್ಯ ಸರ್ಕಾರದಿಂದ ಈಗಾಗಲೇ 5 ಸಾವಿರ ಗೌರವ ಧನ ನೀಡಲಾಗುತ್ತಿದೆ. ಕೇಂದ್ರದಿಂದ 5–8 ಸಾವಿರ ಗೌರವ ಧನ ಸಿಗುತ್ತಿದೆ. ಒಟ್ಟಾರೆ 10–13 ಸಾವಿರ ಗೌರವ ಧನ ಸಿಗುತ್ತಿದೆ. ಸದ್ಯ ಅವರ ಗೌರವ ಧನ ಹೆಚ್ಚಳ ಸಾಧ್ಯವಿಲ್ಲ ಎಂದು ಹೇಳಿದರು.

ಆಶಾ ಕಾರ್ಯಕರ್ತೆಯರಿಗೆ ಪಿಂಚಣಿ ವ್ಯವಸ್ಥೆ ಸಾಧ್ಯವಿಲ್ಲ. ಅವರು ಸರ್ಕಾರಿ ಉದ್ಯೋಗಿಗಳು ಆಗಿದ್ದರೆ ಸಿಗುತ್ತಿತ್ತು. ನಿಯಮದ ಪ್ರಕಾರ ಅವರಿಗೆ ಪಿಂಚಣಿ ಕೊಡಲು ಸಾಧ್ಯ ವಿಲ್ಲ. ಆಶಾ ಕಾರ್ಯಕರ್ತೆಯರು ಗ್ಯಾರಂಟಿ ಯೋಜನೆಗೆ ಅರ್ಜಿ ಹಾಕಬಹುದು. ಸರ್ಕಾರ ಅದಕ್ಕೆ ಅವಕಾಶ ಕೊಟ್ಟಿದೆ. ಹೀಗಾಗಿ ಪರೋಕ್ಷವಾಗಿ ಅವರಿಗೆ ಅನುಕೂಲ ಆಗಿದೆ. ಸದ್ಯ ಗೌರವ ಧನ ಹೆಚ್ಚಳ ಮಾಡಲು ಸಾಧ್ಯವಿಲ್ಲ ಎಂದು ಸ್ಪಷ್ಟನೆ ನೀಡಿದ ಅವರು, ಸ್ಮಾರ್ಟ್ ಫೋನ್ ಕೊಡೋ ಬಗ್ಗೆ ಚಿಂತನೆ ಮಾಡ್ತೀವಿ ಎಂದು ತಿಳಿಸಿದರು.

ಪ್ರಿಯಾಂಕಾ ಗಾಂಧಿ ಹೇಳಿದ್ದೇನು: 2023ರ ವಿಧಾನಸಭಾ ಚುನಾವಣಾ ಪ್ರಚಾರದ ವೇಳೆ ಬೆಳಗಾವಿಯ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ, ಅಂಗನವಾಡಿ ಕಾರ್ಯಕರ್ತೆಯರಿಗೆ 15 ಸಾವಿರ ರೂ. ವರೆಗೆ ವೇತನ ಹೆಚ್ಚಿಸಲಾಗುವುದು. ಜೊತೆಗೆ ಆಶಾ ಕಾರ್ಯಕರ್ತೆಯರಿಗೆ 8 ಸಾವಿರ ರೂ. ವೇತನ ಹೆಚ್ಚಳ ಮಾಡಲಾಗುವುದು ಎಂದು ಘೋಷಣೆ ಮಾಡಿದ್ದರು.

ಪ್ರತಿಕೂಲ ಹವಾಮಾನ: ಅಮರನಾಥ ಯಾತ್ರೆ ಮತ್ತೆ ಸ್ಥಗಿತ

ಜಮ್ಮು: ನಿರಂತರ ಮಳೆ ಮತ್ತು ಪ್ರತಿಕೂಲ ಹವಾಮಾನದಿಂದಾಗಿ ಭಾನುವಾರ ಪುನರಾರಂಭಗೊಂಡಿದ್ದ ಅಮರನಾಥ ಯಾತ್ರೆಯನ್ನು ಸೋಮವಾರ ಮತ್ತೆ ಸ್ಥಗಿತಗೊಳಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಭಗವತಿ ಕ್ಯಾಂಪ್‌ನಲ್ಲಿ 6 ಸಾವಿರಕ್ಕೂ ಹೆಚ್ಚು ಯಾತ್ರಾರ್ಥಿಗಳು ಹಾಗೂ ಚಂದೆರಕೋಟ್ ಕ್ಯಾಂಪ್‌ನಲ್ಲಿ 5 ಸಾವಿರ ಯಾತ್ರಿಕರು ಸಿಲುಕಿಕೊಂಡಿದ್ದಾರೆ.

ಹೊಸದಾಗಿ ಯಾವುದೇ ತಂಡಗಳಿಗೆ ಜಮ್ಮು ಕಾಶ್ಮೀರದ ಕ್ಯಾಂಪ್‌ಗಳಿಗೆ ಬರಲು ಅವಕಾಶ ನೀಡಲಾಗುತ್ತಿಲ್ಲ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಈ ನಡುವೆ ಭಾನುವಾರ ಅಮರನಾಥ ಯಾತ್ರೆ ಪುನರಾರಂಭಗೊಂಡಿದ್ದ ಹಿನ್ನೆಲೆಯಲ್ಲಿ ಒಟ್ಟು 90 ಸಾವಿರಕ್ಕೂ ಹೆಚ್ಚು ಯಾತ್ರಾರ್ಥಿಗಳು ಅಮರನಾಥದ ಗುಹಾ ದೇಗುಲದಲ್ಲಿ ಪೂಜೆ ಸಲ್ಲಿಸಿದ್ದಾರೆ. 40 ಸಾವಿರಕ್ಕೂ ಹೆಚ್ಚು ಭಕ್ತರು ಶನಿವಾರ ಯಾತ್ರೆಯನ್ನು ಸ್ಥಗಿತಗೊಳಿಸುವ ಮೊದಲು ಏಳು ತಂಡಗಳಲ್ಲಿ ಜಮ್ಮುವಿನಿಂದ ಕಾಶ್ಮೀರಕ್ಕೆ ತೆರಳಿದ್ದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಚೀನಾ ಶಿಶುವಿಹಾರದಲ್ಲಿ ಚಾಕು ಇರಿತ: 3 ಮಕ್ಕಳು ಸೇರಿದಂತೆ ಆರು ಮಂದಿ ಸಾವು

ಬೀಜಿಂಗ್: ಇಂದು ಬೆಳಗ್ಗೆ ಶಿಶುವಿಹಾರದಲ್ಲಿ ನಡೆದ ದಾಳಿಯಲ್ಲಿ 3 ಮಕ್ಕಳು ಸೇರಿದಂತೆ ಆರು ಜನರು ಮೃತಪಟ್ಟಿರುವ ಘಟನೆ ಚೀನಾದ ಆಗ್ನೇಯ ಗುವಾಂಗ್ ಡಾಂಗ್ ಪ್ರಾಂತ್ಯದಲ್ಲಿ ನಡೆದಿದೆ ಎಂದು ಬಿಬಿಸಿ ನ್ಯೂಸ್ ವರದಿ ಮಾಡಿದೆ.

ಲಿಯಾಂಜಿಯಾಂಗ್ ಕೌಂಟಿಯ ಪೊಲೀಸರ ಹೇಳಿಕೆಯಂತೆ ಇದೊಂದು ಉದ್ದೇಶಪೂರ್ವಕ ಹಲ್ಲೆ ಎಂದು ಹೇಳಿದ್ದು ಘಟನೆಗೆ ಸಂಬಂಧಿಸಿ ಓರ್ವನನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ.

ಬಲಿಪಶುಗಳಲ್ಲಿ ಒಬ್ಬ ಶಿಕ್ಷಕ, ಇಬ್ಬರು ಪೋಷಕರು ಮತ್ತು ಮೂವರು ವಿದ್ಯಾರ್ಥಿಗಳು ಸೇರಿದ್ದಾರೆ ಎಂದು ಸರ್ಕಾರಿ ಅಧಿಕಾರಿಯನ್ನು ಉಲ್ಲೇಖಿಸಿ ಸುದ್ದಿ ಸಂಸ್ಥೆ AFP ವರದಿ ಮಾಡಿದೆ. ದಾಳಿಯಲ್ಲಿ ಒಬ್ಬ ವ್ಯಕ್ತಿಯೂ ಗಾಯಗೊಂಡಿದ್ದಾರೆ. ದಾಳಿಯು ಬೆಳಗ್ಗೆ 7:40 ಕ್ಕೆ ನಡೆದಿದ್ದು, ಇದಾದ ಕೆಲವೇ ನಿಮಿಷಗಳ ನಂತರ ಶಂಕಿತನನ್ನು ಬಂಧಿಸಲಾಗಿದೆ ಎನ್ನಲಾಗಿದೆ. ಮೃತಪಟ್ಟವರಲ್ಲಿ ಓರ್ವ ಶಿಕ್ಷಕ, ಇಬ್ಬರು ಪೋಷಕರು ಮತ್ತು ಮೂವರು ವಿದ್ಯಾರ್ಥಿಗಳು ಸೇರಿದ್ದಾರೆ. ಓರ್ವನನ್ನು ಬಂಧಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಪೊಲೀಸರು ಇದನ್ನು ಉದ್ದೇಶಪೂರ್ವಕ ಹಲ್ಲೆ ಎಂದು ಕರೆದಿದ್ದಾರೆ. ಯಾವುದೋ ದುರುದ್ದೇಶದಿಂದಲೇ ಹಲ್ಲೆ ನಡೆಸಲಾಗಿದೆ ಎನ್ನುವ ಮಾಹಿತಿ ನೀಡಿದ್ದಾರೆ.

ಮಾಸಾಂತ್ಯಕ್ಕೆ ಕೆಆರ್‌ಎಸ್‌ನಲ್ಲಿ ಸಂಗೀತ ಕಾರಂಜಿ, ಇನ್ನಿತರೆ ರಮ್ಯ ತಾಣಗಳು ಪ್ರವಾಸಿಗರಿಗೆ ಮುಕ್ತ







● ವಿನಯ್ ಕಾರೇಕುರ

ಶ್ರೀರಂಗಪಟ್ಟಣ, ಜು. 10– ಶ್ರೀರಂಗಪಟ್ಟಣ ತಾಲೂಕಿನ ಪ್ರಸಿದ್ಧ ಪ್ರವಾಸಿ ತಾಣವಾದ ಕೃಷ್ಣರಾಜ ಸಾಗರ ಅಣೆಕಟ್ಟೆಯ (ಕೆಆರ್‌ಎಸ್) ಬೃಂದಾವನ ಗಾರ್ಡನ್ ಮತ್ತು ವಿವಿಧ ಕಾರಂಜಿಗಳ ಆಧುನೀಕರಣ ಕಾಮಗಾರಿ ಅಂತಿಮ ಹಂತದಲ್ಲಿದ್ದು, ಈ ತಿಂಗಳಾಂತ್ಯದಲ್ಲಿ ಪ್ರವಾಸಿಗರ ವೀಕ್ಷಣೆಗೆ ಮುಕ್ತಗೊಳ್ಳಲಿವೆ.

ಕೆಆರ್‌ಎಸ್‌ನ ಬೃಂದಾವನ ಗಾರ್ಡನ್ ಮತ್ತು ಕಾರಂಜಿಗಳನ್ನು ಕಾಲಕ್ಕೆ ತಕ್ಕಂತೆ ಆಗಿಂದಾಗ್ಗೆ ಆಧುನೀಕರಣಗೊಳಿಸುವ ಮೂಲಕ ಪ್ರವಾಸಿಗರನ್ನು ಆಕರ್ಷಿಸಲಾಗುತ್ತಿದೆ. ಈಗಾಗಲೇ ಕೆಆರ್‌ಎಸ್‌ಗೆ ಕರ್ನಾಟಕ ಮಾತ್ರವಲ್ಲದೇ ದೇಶ–ವಿದೇಶದಿಂದ ಪ್ರವಾಸಿಗರು ಆಗಮಿಸುತ್ತಿದ್ದು, ಇಂದಿನ ಸೌಂದರ್ಯಕ್ಕೆ ಮಾರುಹೋಗಿದ್ದಾರೆ. ಇದೀಗ 18.8 ಕೋಟಿ ರೂ. ವೆಚ್ಚದಲ್ಲಿ ನಡೆಯುತ್ತಿರುವ ಆಧುನೀಕರಣ ಕಾಮಗಾರಿಯಿಂದ ಬೃಂದಾವನ ಮತ್ತು ಕಾರಂಜಿಗಳ ಸೌಂದರ್ಯ ಮತ್ತಷ್ಟು ಹೆಚ್ಚಲಿದ್ದು, ಪ್ರವಾಸಿಗರ ಮನಸೂರೆಗೊಳ್ಳಲಿವೆ.


1963–64ರಲ್ಲಿ ರಷ್ಯನ್ ಮಾದರಿಯಲ್ಲಿ ಕಾರಂಜಿಗಳನ್ನು ಅಭಿವೃದ್ಧಿಪಡಿಸಲಾಗಿತ್ತು. ನಂತರ ಸಣ್ಣಪುಟ್ಟ ಅಭಿವೃದ್ಧಿ ಸೇರಿದಂತೆ ಕೆ.ಆರ್.ಎಸ್.ನ ಉತ್ತರ ಮತ್ತು ದಕ್ಷಿಣ ಬೃಂದಾವನದಲ್ಲಿರುವ ಕಾರಂಜಿಗಳನ್ನು ದುರಸ್ತಿ ಮಾಡಲಾಗಿತ್ತು. 1963–64ರಲ್ಲಿ ನೃತ್ಯ ಕಾರಂಜಿಯಾಗಿ ಅಭಿವೃದ್ಧಿಪಡಿಸಲಾಗಿದ್ದ ಬೃಂದಾವನದ ಉತ್ತರ ಕಾರಂಜಿಗೆ ಸಂಗೀತ ಅಳವಡಿಸಿ, 1984ರಲ್ಲಿ ಅದನ್ನು ಸಂಗೀತ ಮತ್ತು ನೃತ್ಯಕಾರಂಜಿಯಾಗಿ ಮಾರ್ಪಡಿಸಲಾಗಿತ್ತು. ಇದಕ್ಕೆ ಬಣ್ಣಬಣ್ಣದ ವಿದ್ಯುತ್ ದೀಪಗಳನ್ನು ಅಳವಡಿಸಿದ್ದರಿಂದ ವರ್ಣರಂಜಿತವಾದ ಸಂಗೀತ ಮತ್ತು ನೃತ್ಯ ಕಾರಂಜಿಯನ್ನು ವೀಕ್ಷಿಸಲೆಂದೇ ಪ್ರವಾಸಿಗರು ಸಂಜೆ ವೇಳೆಯಲ್ಲೂ ನೆರೆದಿರುತ್ತಿದ್ದರು.

ಇದೀಗ ಈ ಕಾರಂಜಿಯನ್ನು ಲೇಸರ್ ತಂತ್ರಜ್ಞಾನದೊಂದಿಗೆ ನವೀಕರಣಗೊಳಿಸುತ್ತಿರುವುದರಿಂದ ಇದರ ಸೌಂದರ್ಯಕ್ಕೆ ಮತ್ತಷ್ಟು ಮೆರುಗು ದೊರೆತು ಪ್ರವಾಸಿಗರನ್ನು ಸೆಳೆಯುವ ನಿರೀಕ್ಷೆ ಇದೆ. ಅಲ್ಲದೇ ಸಂಗೀತಾ ನೃತ್ಯ ಕಾರಂಜಿಗೆ ಸ್ಟೀಲ್ ಮತ್ತು ಹಿತ್ತಳೆ ವಸ್ತುಗಳನ್ನು ಬಳಸಿ ಮತ್ತಷ್ಟು ಮೆರುಗು ನೀಡಲಾಗುತ್ತಿದೆ. 20 ವರ್ಷದ ನಂತರ ಆಧುನೀಕರಣಗೊಳ್ಳುತ್ತಿರುವ ಬೃಂದಾವನ ಗಾರ್ಡನ್ ಹಾಗೂ ಕಾರಂಜಿ ಕಾಮಗಾರಿಯನ್ನು ಮುಂಬೈ ಮೂಲದ ಗ್ರೀನ್ ಟೆಕ್ ಕಂಪನಿ ಗುತ್ತಿಗೆ ಪಡೆದಿದೆ.

ಇದಲ್ಲದೇ, ಉತ್ತರ ಬೃಂದಾವನದಲ್ಲಿರುವ ಕಾವೇರಿ ಕಾರಂಜಿ ಹಾಗೂ ರಷ್ಯನ್ ಕಾರಂಜಿಗಳು ಕೂಡ 16.2 ಕೋಟಿ ರೂ. ವೆಚ್ಚದಲ್ಲಿ ಆಧುನೀಕರಣಗೊಳ್ಳಲಿದ್ದು, ಅದರ ಕಾಮಗಾರಿ ಇನ್ನಷ್ಟೇ ಆರಂಭವಾಗಬೇಕಾಗಿದೆ. ಜೊತೆಗೆ 2 ಪ್ರವೇಶ ದ್ವಾರದಲ್ಲಿರುವ ಕಾರಂಜಿಗಳು ಕೂಡ ನವೀಕರಣಗೊಂಡು ಪ್ರವಾಸಿಗರನ್ನು ಆಕರ್ಷಿಸಲಿದೆ.

> "2004ರಲ್ಲಿ ಕೊನೆಯ ಬಾರಿಗೆ ಸಂಗೀತ ನೃತ್ಯ ಕಾರಂಜಿಯನ್ನು ನವೀಕರಣಗೊಳಿಸಲಾಗಿತ್ತು. ಪ್ರಸ್ತುತ ಈ ಕಾರಂಜಿಗೆ ವಯಸ್ಕರಿಗೆ 50 ರೂ. ಹಾಗೂ ಮಕ್ಕಳಿಗೆ 10 ರೂ. ಪ್ರವೇಶ ಶುಲ್ಕ ನಿಗದಿಪಡಿಸಲಾಗಿದೆ. ಬಸ್‌ಗೆ 100 ರೂ., ಕಾರ್‌ಗೆ 50 ರೂ., ದ್ವಿಚಕ್ರ ವಾಹನಕ್ಕೆ 20 ರೂ. ಪಾರ್ಕಿಂಗ್ ಶುಲ್ಕ ನಿಗದಿಪಡಿಸಲಾಗಿದೆ. ಇದೀಗ ಬೃಂದಾವನ ಗಾರ್ಡನ್ ಹಾಗೂ ಕಾರಂಜಿ ಆಧುನೀಕರಣಗೊಳಿಸಲಾಗುತ್ತಿದ್ದರೂ ಸದ್ಯಕ್ಕೆ ಶುಲ್ಕ ಹೆಚ್ಚಳ ಮಾಡುವ ಯಾವುದೇ ಪ್ರಸ್ತಾವನೆ ಇಲ್ಲ.
>
> - **ಫಾರೂಖ್ ಅಬು,** ಎಇಇ


> "ಹಲವು ವರ್ಷಗಳ ನಂತರ ಬೃಂದಾವನದ ಕಾರಂಜಿಗಳನ್ನು ನವೀಕರಿಸಲಾಗುತ್ತಿದೆ. ಇದರಿಂದ ಮತ್ತಷ್ಟು ಪ್ರವಾಸಿಗರನ್ನು ಆಕರ್ಷಿಸಬಹುದು. ಇನ್ನು ಹಲವು ಕಾರಂಜಿಗಳನ್ನು ಆಧುನೀಕರಣಗೊಳಿಸಬೇಕಾಗಿದೆ.
>
> - **ಡಾ. ನಾಗೇಂದ್ರ,** ಗ್ರಾಪಂ ಮಾಜಿ ಅಧ್ಯಕ್ಷ





ಕರ್ನಾಟಕದಲ್ಲಿ ಸಾವಿರ ಗ್ರಾಮೀಣ ನ್ಯಾಯಾಲಯ ಆರಂಭ

ಗದಗ: ಕರ್ನಾಟಕದಾದ್ಯಂತ ಸಾವಿರ ಗ್ರಾಮೀಣ ನ್ಯಾಯಾಲಯಗಳನ್ನು ಆರಂಭಿಸಲು ರಾಜ್ಯ ಸರ್ಕಾರ ಯೋಜಿಸುತ್ತಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವ ಎಚ್‌ಕೆ ಪಾಟೀಲ್ ಹೇಳಿದ್ದಾರೆ.



ಈ ನ್ಯಾಯಾಲಯಗಳು ಸಾವಿರಾರು ರೈತರು ಮತ್ತು ದಿನಗೂಲಿ ಕಾರ್ಮಿಕರಿಗೆ ಸಹಾಯ ಮಾಡುತ್ತವೆ. ಏಕೆಂದರೆ, ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿನ ನ್ಯಾಯಾಲಯಗಳಿಗೆ ಹಾಜರಾಗಲು ಮೈಲುಗಟ್ಟಲೆ ಪ್ರಯಾಣಿಸಬೇಕಾಗಿಲ್ಲ ಎಂದರು.

ಈ ನ್ಯಾಯಾಲಯಗಳು ಜಿಲ್ಲಾ ಕೋರ್ಟ್‌ಗಳು ಮತ್ತು ತಾಲೂಕು ಮಟ್ಟದ ನ್ಯಾಯಾಲಯಗಳಲ್ಲಿನ ವಿಪರೀತ ದಟ್ಟಣೆಯನ್ನು ಕಡಿಮೆ ಮಾಡುವ ನಿರೀಕ್ಷೆಯಿದೆ. ಯುಪಿಎ ಸರ್ಕಾರವು 2008ರಲ್ಲಿ ನ್ಯಾಯಾಂಗ ಪ್ರಕ್ರಿಯೆಯನ್ನು ಸಹಭಾಗಿತ್ವ, ಅಗ್ಗ ಮತ್ತು ಗ್ರಾಮೀಣ ಭಾರತಕ್ಕೆ ಪ್ರವೇಶಿಸಲು ಅನುವು ಮಾಡಿಕೊಡುವ ಗ್ರಾಮ ನ್ಯಾಯಾಲಯ ಕಾಯಿದೆಯನ್ನು ಅಂಗೀಕರಿಸಿತು. ಒಟ್ಟಾರೆಯಾಗಿ, ಯುಪಿಎ ಸರ್ಕಾರದ ಅವಧಿಯಲ್ಲಿ ಹತ್ತು ರಾಜ್ಯಗಳಲ್ಲಿ 250 ಗ್ರಾಮೀಣ ನ್ಯಾಯಾಲಯಗಳನ್ನು ಪ್ರಾರಂಭಿಸಲಾಯಿತು.

ಕರ್ನಾಟಕದ ಗ್ರಾಮೀಣ ನ್ಯಾಯಾಲಯಗಳು ನ್ಯಾಯಾಂಗ ಪ್ರಥಮ ದರ್ಜೆ ಮ್ಯಾಜಿಸ್ಟ್ರೇಟ್ ನ್ಯಾಯಾಲಯಗಳಂತೆ ಕಾರ್ಯ ನಿರ್ವಹಿಸುತ್ತವೆ. ಆದರೆ, ಪ್ರತಿ ಗ್ರಾಮಗಳಲ್ಲಿ ಮೂಲಸೌಕರ್ಯ ಸೇರಿದಂತೆ ಹಲವು ಅಡೆತಡೆಗಳು ಇರುವುದರಿಂದ ಇಂತಹ ನ್ಯಾಯಾಲಯಗಳನ್ನು ಆರಂಭಿಸುವುದು ಪ್ರಾಯೋಗಿಕವಾಗಿ ಕಷ್ಟಕರವಾಗಿದೆ ಎಂದು ಗದಗದ ಕೆಲವು ವಕೀಲರು ಅಭಿಪ್ರಾಯಪಟ್ಟಿದ್ದಾರೆ. ಅಲ್ಲದೆ, ನ್ಯಾಯಾಧೀಶರನ್ನು ನೇಮಿಸಬೇಕು ಮತ್ತು ವಕೀಲರು ಗ್ರಾಮೀಣ ಪ್ರದೇಶಗಳಿಗೆ ಹೋಗಬೇಕು. ಇದೆಲ್ಲವೂ ಸಾಕಷ್ಟು ಸಮಯ ತೆಗೆದುಕೊಳ್ಳುತ್ತದೆ ಎಂದು ಅವರು ಹೇಳಿದರು.

ವಿವಾದಗಳನ್ನು ತ್ವರಿತವಾಗಿ ಪರಿಹರಿಸಲು ಈ ಪರಿಕಲ್ಪನೆ ಸಹಾಯ: ಗದಗ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮಣಿ ಪಾಟೀಲ ಮಾತನಾಡಿ, ಈ ಪರಿಕಲ್ಪನೆಯು ಹೊಸದಾಗಿದ್ದು, ವಿವಾದಗಳನ್ನು ತ್ವರಿತವಾಗಿ ಬಗೆಹರಿಸಲು ಸಹಕಾರಿಯಾಗಲಿದೆ. ತಮ್ಮ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ಸುಲಭವಾಗಿ ಪರಿಹರಿಸುವುದರಿಂದ ಇದು ಗ್ರಾಮಸ್ಥರಿಗೆ ವರದಾನವಾಗಲಿದೆ. ನಾವು ಈ ಉಪಕ್ರಮವನ್ನು ಸ್ವಾಗತಿಸುತ್ತೇವೆ ಎಂದರು.

ರೋಣದ ರೈತ ಹಾಗೂ ಸಾಮಾಜಿಕ ಕಾರ್ಯಕರ್ತ ಮುತ್ತಣ್ಣ ಕರ್ಕಿಕಟ್ಟಿ ಮಾತನಾಡಿ, ಈಗ ನ್ಯಾಯಾಲಯದ ಪ್ರಕರಣಗಳಿಗೆ ಹಾಜರಾಗಲು ಹಲವು ಗ್ರಾಮಸ್ಥರು ರೋಣದಿಂದ ಗದಗಕ್ಕೆ 25–40 ಕಿ.ಮೀ. ಪ್ರಯಾಣಿಸಬೇಕಿದೆ. ಗ್ರಾಮೀಣ ನ್ಯಾಯಾಲಯಗಳು ಸಮಯವನ್ನು ಉಳಿಸುತ್ತವೆ ಮತ್ತು ಅನೇಕ ರೈತರು ಮತ್ತು ದಿನಗೂಲಿಗಳು ನ್ಯಾಯಾಲಯದ ವಿಚಾರಣೆಗೆ ಹಾಜರಾದ ನಂತರ ಕೆಲಸಕ್ಕೆ ಮರಳಬಹುದು' ಎಂದು ಹೇಳಿದರು.

ಎಚ್.ಕೆ. ಪಾಟೀಲ್ ಮಾತನಾಡಿ, ಈ ಉಪಕ್ರಮವು ಗ್ರಾಮ ನ್ಯಾಯಾಲಯ ಕಾಯಿದೆ 2008 ಅನ್ನು ಆಧರಿಸಿದೆ ನಾವು ಕೆಲವು ಸೃಜನಾತ್ಮಕ ನಿಯಮಗಳನ್ನು ರೂಪಿಸುತ್ತೇವೆ ಮತ್ತು ಅವು ಜೆಎಂಎಫ್‌ಸಿ ನ್ಯಾಯಾಲಯಗಳಂತೆ ಕಾರ್ಯನಿರ್ವಹಿಸುತ್ತವೆ ಮುಂದಿನ ವಾರದಲ್ಲಿ ನಾವು ಇದಕ್ಕೆ ಸಬಂಧಿಸಿದ ಎಲ್ಲಾ ವಿವರಗಳನ್ನು ನೀಡುತ್ತೇವೆ ಎಂದು ಹೇಳಿದರು.

ಕೆ.ಜಿ.ಕೊಪ್ಪಲಲ್ಲಿ ಇಂದು ಶ್ರೀ ಚಾಮುಂಡೇಶ್ವರಿ ಪೂಜಾ ಮಹೋತ್ಸವ

ಮೈಸೂರು, ಜು.10– ಮೈಸೂರಿನ ಕನ್ನೇಗೌಡನ(ಕೆಜಿ) ಕೊಪ್ಪಲಿನಲ್ಲಿ ಮಂಗಳವಾರ ಶ್ರೀ ಚಾಮುಂಡೇಶ್ವರಿ ಪೂಜಾ ಮಹೋತ್ಸವ ಜರುಗಲಿದೆ.



ಕೆ.ಜಿ.ಕೊಪ್ಪಲಿನ ದೇವರ ಕೊಳದಿಂದ ಬೆಳಗ್ಗೆ 11.30ಕ್ಕೆ 'ಕನ್ನಕರಡಿ' ಪೂಜಿಸಿಕೊಂಡು ಸರಸ್ವತಿಪುರಂ, ಕೆ.ಜಿ.ಕೊಪ್ಪಲು, ಜಯನಗರ, ಪೈಲ್ವಾನ್ ಬಸವಯ್ಯನಗರದ ಪ್ರಮುಖ ರಸ್ತೆಗಳಲ್ಲಿ ತಮಟೆ, ಓಲಗ, ಬ್ಯಾಂಡ್, ಕೀಲು ಕುದುರೆ, ಮಂಗಳ ವಾದ್ಯದೊಂದಿಗೆ ವಿಜೃಂಭಣೆಯಿಂದ ಮೆರವಣಿಗೆ ನಡೆಸಲಾಗುವುದು.

ಮೆರವಣಿಗೆ ಸಂಜೆ 5.30ರ ವೇಳೆಗೆ ಶ್ರೀ ಚಾಮುಂಡೇಶ್ವರಿ ಅಮ್ಮನವರ ದೇವಸ್ಥಾನ ತಲುಪಲಿದ್ದು, ನಂತರ ಸನ್ಮಾನ ಸಮಾರಂಭ ನೆರವೇರಲಿದೆ. ಶಾಸಕರಾದ ಕೆ.ಹರೀಶ್‌ಗೌಡ, ಟಿ.ಎಸ್.ಶ್ರೀವತ್ಸ, ಮಾಜಿ ಶಾಸಕರಾದ ಎಲ್.ನಾಗೇಂದ್ರ, ಎಂ.ಕೆ.ಸೋಮಶೇಖರ್, ಮುಡಾ ಮಾಜಿ ಅಧ್ಯಕ್ಷರಾದ ಹೆಚ್.ವಿ.ರಾಜೀವ್, ಡಿ.ಧ್ರುವಕುಮಾರ್, ಸಿ.ಬಸವೇಗೌಡ, ಮಾಜಿ ಮೇಯರ್ ಆರ್.ಲಿಂಗಪ್ಪ, ಪಾಲಿಕೆ ಸದಸ್ಯರು, ಮಾಜಿ ಸದಸ್ಯರು ಭಾಗವಹಿಸಲಿದ್ದಾರೆ.

ಜು.12ರಂದು ಬೆಳಗ್ಗೆ 10ಕ್ಕೆ ಕಾಣಿಕೆ ಸೀರೆಗಳ ಹರಾಜು ನಡೆಯಲಿದ್ದು, ಜು.14ರಂದು ವಿಶೇಷ ಪೂಜೆ ಹಾಗೂ ಭಕ್ತಾದಿಗಳಿಂದ ಭಾವಗೀತೆ ಕಾರ್ಯಕ್ರಮ ನೆರವೇರಲಿದೆ ಎಂದು ಶ್ರೀ ಚಾಮುಂಡೇಶ್ವರಿ ಸೇವಾ ಸಮಿತಿ ಪ್ರಕಟಣೆ ತಿಳಿಸಿದೆ.

ಸಿರಿಯಾದಲ್ಲಿ ಡ್ರೋನ್ ದಾಳಿಗೆ ಐಸಿಸ್ ಉಗ್ರ ಸಂಘಟನೆ ಮುಖ್ಯಸ್ಥ ಅಲ್ ಮುಹಾಜಿರ್ ಹತ

ಡಮಾಸ್ಕಸ್: ಸೇನಾಪಡೆಗಳು ನಡೆಸಿದ ಡ್ರೋನ್ ದಾಳಿಯಲ್ಲಿ ಇಸ್ಲಾಮಿಕ್ ಸ್ಟೇಟ್ ಉಗ್ರ ಸಂಘಟನೆಯ ಮುಖ್ಯಸ್ಥ ಅಲ್ ಮುಹಾಜಿರ್‌ನನ್ನು ಹೊಡೆದುರುಳಿಸಲಾಗಿದೆ ಎಂದು ಅಮೆರಿಕ ಹೇಳಿದೆ.

ಪೂರ್ವ ಭಾಗದ ಸಿರಿಯಾದಲ್ಲಿ ಅಮೆರಿಕ ಸೇನೆ ನಡೆಸಿದ ಡ್ರೋನ್ ದಾಳಿಯಲ್ಲಿ ಐಸಿಸ್ ಉಗ್ರ ಅಲ್ ಮುಹಾಜಿರ್‌ನನ್ನು ಹತ್ಯೆ ಮಾಡಲಾಗಿದ್ದು, ಕಳೆದ ಜುಲೈ 7 ರಂದು ಗುಪ್ತ ಕಾರ್ಯಾಚರಣೆಯಲ್ಲಿ ಡ್ರೋನ್ ದಾಳಿಯಲ್ಲಿ ಕುಖ್ಯಾತ ಉಗ್ರ ಹತನಾಗಿದ್ದಾನೆ. ಈ ದಾಳಿಯಲ್ಲಿ ಬೇರೆ ಯಾವುದೇ ನಾಗರಿಕರು ಗಾಯಗೊಂಡಿರುವ ಕುರಿತು ಮಾಹಿತಿ ಇಲ್ಲ ಎಂದು ಅಮೆರಿಕ ಸೆಂಟ್ರಲ್ ಕಮಾಂಡ್ ತಿಳಿಸಿದೆ.

ಜುಲೈ 7, 2023 ರಂದು ಅಮೆರಿಕ ಸೇನಾಪಡೆಯ ಒಕ್ಯೂ–9 ರೀಪರ್ ಡ್ರೋನ್ ನಡೆಸಿದ ದಾಳಿಯಲ್ಲಿ ಐಸಿಸ್ ಉಗ್ರ ಅಲ್ ಮುಹಾಜಿರ್‌ನನ್ನು ಹತ್ಯೆ ಮಾಡಲಾಗಿದೆ. ಸುಮಾರು ಎರಡು ಗಂಟೆಗಳ ಕಾಲ ಈ ಕಾರ್ಯಾಚರಣೆ ನಡೆದಿದ್ದು, ಈ ದಾಳಿಗೂ ಮುನ್ನ ರಷ್ಯಾದ ಸೇನಾ ವಿಮಾನ ಕೂಡ ಕಾರ್ಯಾಚರಣೆ ನಡೆಸಿ ತನ್ನ ಡ್ರೋನ್‌ಗೆ ಅಡ್ಡಿಪಡಿಸಿತ್ತು. ಕಳೆದ 24 ಗಂಟೆಗಳಲ್ಲಿ ರಷ್ಯಾದ ಪೈಲಟ್‌ಗಳು ನಡೆಸಿದ 2ನೇ ಅಪಾಯಕಾರಿ ನಡವಳಿಕೆ ಇದಾಗಿದೆ ಎಂದು ಅಮೆರಿಕ ಸೇನಾಧಿಕಾರಿಗಳು ತಿಳಿಸಿದ್ದಾರೆ. ಅಮೆರಿಕ ಕಳೆದ ಒಂದು ವರ್ಷದಿಂದ ಸಿರಿಯಾದಲ್ಲಿ ಶಂಕಿತ ಐಸಿಸ್ ಉಗ್ರರ ವಿರುದ್ಧ ದಾಳಿ ನಡೆಸುತ್ತಿದೆ.

ವಿವಿ ವಾಟರ್ ವರ್ಕ್ಸ್ ಸಿಬ್ಬಂದಿ ಪರ್ಸ್ ನಿಮಗೆ ಸಿಕ್ಕಿದರೆ ತಲುಪಿಸಿ

ಮೈಸೂರು, ಜು.10– ಮೈಸೂರಿನ ವಾಣಿ ವಿಲಾಸ ವಾಟರ್ ವರ್ಕ್ಸ್ ಸಿಬ್ಬಂದಿಯ ಮುಖ್ಯ ದಾಖಲೆಗಳಿದ್ದ ಪರ್ಸ್ ಕಳೆದಿರುವ ಬಗ್ಗೆ ವರದಿಯಾಗಿದೆ.

ವಾಟರ್ ವರ್ಕ್ಸ್ ಕ್ವಾಟ್ರರ್ಸ್ ನಿವಾಸಿ ಆರ್.ಮುರುಳಿಧರ್, ಜು.4ರಂದು ಮಧ್ಯಾಹ್ನ 1.30ರ ವೇಳೆಯಲ್ಲಿ ಮೆಟ್ರೋಪೋಲ್ ಮಾರ್ಗವಾಗಿ ಮಹಾರಾಜ ಕಾಲೇಜು ಕಡೆಗೆ ಬೈಕ್‌ನಲ್ಲಿ ತೆರಳುವಾಗ ಪರ್ಸ್ ಕಳೆದಿದೆ. ಎಟಿಎಂ ಕಾರ್ಡ್, 5 ಸಾವಿರ ಹಣ ಹಾಗೂ ಇನ್ನಿತರ ಮುಖ್ಯ ದಾಖಲಾತಿಗಳಿರುವ ಕಂದು ಬಣ್ಣದ ಪರ್ಸ್ ಸಿಕ್ಕಿದರೆ ಮೊ.ಸಂ.9620001468ಗೆ ಕರೆ ಮಾಡುವಂತೆ ಮನವಿ ಮಾಡಿದ್ದಾರೆ. ಈ ಸಂಬಂಧ ದೇವರಾಜ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಮಣಿಪುರ ಹಿಂಸಾಚಾರ: ಪಶ್ಚಿಮ ಕಾಂಗ್‌ಪೋಕ್ಪಿಯಲ್ಲಿ ಪೊಲೀಸ್ ಸಿಬ್ಬಂದಿ ಹತ್ಯೆ, 10 ಮಂದಿಗೆ ಗಾಯ

ಇಂಫಾಲ: ಮಣಿಪುರದ ಪಶ್ಚಿಮ ಕಾಂಗ್‌ಪೋಕ್ಪಿ ಪ್ರದೇಶದಲ್ಲಿ ರಾತ್ರೋರಾತ್ರಿ ನಡೆದ ಹಿಂಸಾತ್ಮಕ ಘರ್ಷಣೆ ನಂತರ ಸೋಮವಾರ ಒಬ್ಬ ಪೊಲೀಸ್ ಮೃತಪಟ್ಟು ಕನಿಷ್ಠ 10 ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮುಂಜಾನೆ 3 ರಿಂದ 6 ಗಂಟೆಯ ನಡುವೆ ಸ್ವಲ್ಪ ಸಮಯದ ವಿರಾಮವಿತ್ತು. ಆದರೆ, ಅದರ ನಂತರ ಫಯೆಂಗ್ ಮತ್ತು ಸಿಂಗ್ಡಾ ಗ್ರಾಮಗಳಿಂದ ವಿವೇಚನಾರಹಿತ ಗುಂಡಿನ ಸದ್ದು ಕೇಳಿಸಿತು.

ಕಾಂಗ್‌ಪೋಕ್ಪಿ ಜಿಲ್ಲೆಯ ಕಾಂಗ್‌ಚುಪ್ ಪ್ರದೇಶದ ಹಳ್ಳಿಗಳು ಮತ್ತು ಬೆಟ್ಟಗಳ ಮೇಲೆ ಗುಂಡಿನ ದಾಳಿ ನಡೆಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಸ್ಸಾಂ ರೈಫಲ್ಸ್ ಎರಡು ಹಳ್ಳಿಗಳ ನಡುವೆ ಬಫರ್ ವಲಯವನ್ನು ನಿರ್ವಹಿಸುತ್ತದೆ.

ಎರಡೂ ಕಡೆಯಿಂದ ಹೆಚ್ಚಿನ ಸಾವು ನೋವು ಸಂಭವಿಸಿರುವ ಸಾಧ್ಯತೆಯಿದ್ದು, ಗುಂಡಿನ ದಾಳಿ ಕೊನೆಗೊಂಡ ನಂತರವೇ ನಿಖರವಾದ ಚಿತ್ರಣ ತಿಳಿಯಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೇ 3ರಂದು ರಾಜ್ಯದಲ್ಲಿ ಜನಾಂಗೀಯ ಹಿಂಸಾಚಾರ ಭುಗಿಲೆದ್ದ ನಂತರ ಕನಿಷ್ಠ 150 ಜನರು ಸಾವಿಗೀಡಾಗಿದ್ದಾರೆ ಮತ್ತು ನೂರಾರು ಜನರು ಗಾಯಗೊಂಡಿದ್ದಾರೆ. ಮೇಟಿ ಸಮುದಾಯಕ್ಕೆ ಪರಿಶಿಷ್ಟ ಪಂಗಡದ (ಎಸ್‌ಟಿ) ಸ್ಥಾನಮಾನಕ್ಕಾಗಿ ಪ್ರತಿಭಟಿಸಲು ಬೆಟ್ಟದ ಜಿಲ್ಲೆಗಳಲ್ಲಿ 'ಬುಡಕಟ್ಟು ಐಕ್ಯತಾ ಮೆರವಣಿಗೆ' ಆಯೋಜಿಸಲಾಗಿತ್ತು. ಮಣಿಪುರದ ಜನಸಂಖ್ಯೆಯ ಶೇ 53ರಷ್ಟಿರುವ ಮೇಟಿ ಸಮುದಾಯದ ಜನರು ಇಂಫಾಲ್ ಕಣಿವೆಯಲ್ಲಿ ಹೆಚ್ಚಾಗಿ ವಾಸಿಸುತ್ತಿದ್ದಾರೆ. ಬುಡಕಟ್ಟು ನಾಗಾಗಳು ಮತ್ತು ಕುಕಿಗಳು ಜನಸಂಖ್ಯೆಯ ಶೇ. 40 ರಷ್ಟಿದ್ದು, ಬೆಟ್ಟದ ಜಿಲ್ಲೆಗಳಲ್ಲಿ ವಾಸಿಸುತ್ತಿದ್ದಾರೆ.

ಜೈನ ಮುನಿಗಳ ಹತ್ಯೆ, ಎಚ್ಚರಿಕೆಯ ಮಾತನಾಡಿದ ಕೋಡಿ ಮಠದ ಸ್ವಾಮೀಜಿ

ಕೋಲಾರ: ದೇಶದಲ್ಲಿ ಇನ್ನೂ ಹಲವೆಡೆ ಪ್ರಾಕೃತಿಕ ವಿಕೋಪ ಸಂಭವಿಸುವ ಲಕ್ಷಣ ಇದೆ ಜೊತೆಗೆ ಮನುಷ್ಯರು ಮೃಗದಂತೆ ವರ್ತಿಸಿ ವಿಕೋಪ ಸಂಭವಿಸಬಹುದು ಎಂದು ಕೋಡಿ ಮಠದ ಶ್ರೀಗಳು ಭವಿಷ್ಯ ನುಡಿದಿದ್ದಾರೆ.

ಕೋಲಾರದ ಲಕ್ಷ್ಮೀಸಾಗರ ಗ್ರಾಮದ ಚಾಮುಂಡೇಶ್ವರಿ ವರ್ಧಂತಿ ಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಕೋಡಿ ಮಠದ ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮೀಜಿ, ದೇಶದಲ್ಲಿ ಇನ್ನಷ್ಟು ರೋಗ ರುಜಿನ ಹೆಚ್ಚುವ ಲಕ್ಷಣಗಳಿವೆ ಎಂದು ತಿಳಿಸಿದ್ದಾರೆ.

ಜೈನ ಮುನಿಗಳ ಹತ್ಯೆ ನಡೆಯಬಾರದಿತ್ತು. ಆದರೆ ನಡೆದು ಹೋಯಿತು. ಮುಂದೆ ಆಗದಂತೆ ಎಚ್ಚರ ವಹಿಸಬೇಕು ಎಂದು ಎಚ್ಚರಿಕೆಯ ಮಾತುಗಳನ್ನಾಡಿದರು.

ಈ ಘಟನೆಯಿಂದ ಸರ್ವಸಂಗ ಪರಿತ್ಯಾಗಿಗಳಿಗೂ ಕಂಟಕ ಇದೆಯೆದು ತಿಳಿದಿದೆ. ಅಂಥವರಿಗೇ ಕಂಟಕ ಇದ್ದರೆ ಯಾರನ್ನು ತಾನೇ ಬಿಡಬಹುದು. ಮನುಷ್ಯನ ಕ್ರೌರ್ಯಕ್ಕೆ ಜೈನಮುನಿಗಳ ಕೊಲೆಯೊಂದು ಉದಾಹರಣೆ ಎಂದು ತಿಳಿಸಿದರು.

ಸದ್ಯ ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ಯಾವುದೇ ಕಂಟಕ ಇಲ್ಲ. ಈಗಷ್ಟೇ ಮಗು ಹಾಲು ಕುಡಿಯಲು ಆರಂಭಿಸಿದೆ ಮಗು ಚೆನ್ನಾಗಿ ಬೆಳೆಯಲಿ, ಯಾವ ತೊಂದರೆಯೂ ಇಲ್ಲ ಎಂದು ಅವರು ಭವಿಷ್ಯ ನುಡಿದಿದ್ದಾರೆ. ಜಾಗತಿಕ ಮಟ್ಟದಲ್ಲಿ ದುರಂತ ಆಗುವುದಿದೆ. ಜಾಗತಿಕವಾಗಿ ಮೂರು ಗಂಡಾಂತರ ಕಾದಿದ್ದು, ಒಂದೆರಡು ರಾಷ್ಟ್ರಗಳು ಮುಚ್ಚಿ ಹೋಗಲಿವೆ. ಜನರ ಅಕಾಲಿಕ ಮೃತ್ಯು ಆಗುವ ಸೂಚನೆ ಇದೆ ಎಂದು ಅವರು ಈ ಹಿಂದೆ ತಿಳಿಸಿದ್ದರು.

ಕಾಂಗ್ರೆಸ್ ಸರ್ಕಾರ ಪೂರ್ಣಾವಧಿ ಅಧಿಕಾರ ನಡೆಸುವ ವಿಚಾರಕ್ಕ ಪ್ರತಿಕ್ರಿಯಿಸಿದ ಶ್ರೀಗಳು, ಬಾಯಿಯ ವಾಸನೆ ಮೂಗಿಗೆ ಬಡಿಯುವುದಿಲ್ಲ, ಆದರೆ ಊರಿನಲ್ಲಿನ ಎಲ್ಲಾ ವಾಸನೆ ಮೂಗಿಗೆ ಮುಟ್ಟುತ್ತೆ ಎಂದು ನಿಗೂಢ ಅರ್ಥದಲ್ಲಿ ಮಾತನಾಡಿದ್ದರು.

ಇಬ್ಬರು ಅಂತರ ಜಿಲ್ಲಾ ಕಳ್ಳಿಯರ ಬಂಧನ; 1.5 ಲಕ್ಷ ಮೌಲ್ಯದ ಚಿನ್ನಾಭರಣ ವಶ


ಕೈರುನ್


ಜೈರಾಭಿ

ಕುಶಾಲನಗರ, ಜು.10– ಚಿನ್ನಾಭರಣ ಮಳಿಗೆಗೆ ಆಗಮಿಸಿ ಆಭರಣ ಖರೀದಿಸುವ ನೆಪದಲ್ಲಿ ಅಸಲಿ ಚಿನ್ನದ ಬದಲಿಗೆ ನಕಲಿ ಚಿನ್ನವಿಟ್ಟು ಪರಾರಿಯಾಗಿದ್ದ ಇಬ್ಬರು ಮಹಿಳೆಯರನ್ನು ಕುಶಾಲನಗರ ಪಟ್ಟಣ ಪೊಲೀಸರು ಬಂಧಿಸಿದ್ದಾರೆ. ಚಿತ್ರದುರ್ಗ ಜಿಲ್ಲೆಯ ಭರಮಸಾಗರದ ಪಾಮರಹಳ್ಳಿ ಗ್ರಾಮ ನಿವಾಸಿಗಳಾದ ಕೈರುನ್(46) ಹಾಗೂ ಜೈರಾಭಿ (36) ಎಂಬವರೇ ಬಂಧಿತ ಮಹಿಳಾ ಆರೋಪಿಗಳಾಗಿದ್ದು ಇವರ ಬಳಿಯಿಂದ 22.4 ಗ್ರಾಂ ತೂಕದ ಚಿನ್ನಾಭರಣಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪಟ್ಟಣದ ರಥಬೀದಿಯಲ್ಲಿರುವ ಶೀತಲ್ ಜ್ಯುವೆಲ್ಲರಿ ಶಾಪ್‌ಗೆ ಜೂ.5 ರಂದು ಬಂದ ಇಬ್ಬರು ಬುರ್ಖಾಧಾರಿ ಮಹಿಳೆಯರು ಮತ್ತು ಒಬ್ಬ ಯುವಕ ಚಿನ್ನಾಭರಣವನ್ನು ಖರೀದಿಸುವ ನಾಟಕವಾಡಿ ಅಂಗಡಿಯವರ ಗಮನವನ್ನು ಬೇರೆಡೆ ಸೆಳೆದು ಅಸಲಿ ಚಿನ್ನಾಭರಣವನ್ನು ಎಗರಿಸಿ ಅದರ ಬದಲಿಗೆ ನಕಲಿ ಆಭರಣವನ್ನು ಇಟ್ಟು ಪರಾರಿಯಾಗಿದ್ದರು. ಸೋಮವಾರಪೇಟೆ ಉಪ ವಿಭಾಗದ ಡಿವೈಎಸ್ಪಿ ಆರ್.ವಿ.ಗಂಗಾಧರಪ್ಪ ಮತ್ತು ವೃತ್ತ ನಿರೀಕ್ಷಕ ಬಿ.ಜಿ.ಮಹೇಶ್, ಟೌನ್ ಪೊಲೀಸ್ ಠಾಣೆಯ ಐಪಿಎಸ್ ರವೀಂದ್ರ ನೇತೃತ್ವದಲ್ಲಿ ತನಿಖಾ ತಂಡ ರಚನೆ ಮಾಡಿ ಕಾರ್ಯಾಚರಣೆ ನಡೆಸಿತು. ಜು.5 ರಂದು ಮಾಲು ಸಮೇತ ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಉತ್ತಮವಾಗಿ ಕಾರ್ಯನಿರ್ವಹಿಸಿ ಯಶಸ್ವಿಯಾಗಿ ಪ್ರಕರಣವನ್ನು ಭೇದಿಸಿದ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಶ್ಲಾಘಿಸಿದ್ದಾರೆ.

ಗಾಂಜಾ ವಶ; ಮೂವರ ಬಂಧನ


ಸದ್ದಾಂಹುಸೇನ್


ಜಬೀವುಲ್ಲಾಖಾನ್


ಸುಜಯ್

ಮಡಿಕೇರಿ, ಜು.10– ಗಾಂಜಾ ಮಾರಾಟಕ್ಕೆ ಯತ್ನ ಮತ್ತು ಮನೆಯಲ್ಲಿ ಗಾಂಜಾ ಗಿಡಗಳನ್ನು ಬೆಳೆಸಿದ 2 ಪ್ರತ್ಯೇಕ ಪ್ರಕರಣಗಳಲ್ಲಿ ಒಟ್ಟು 3 ಮಂದಿ ಆರೋಪಿಗಳನ್ನು ಕೊಡಗು ಪೊಲೀಸರು ಬಂಧಿಸಿದ್ದಾರೆ.

ಮೂರ್ನಾಡುವಿನಿಂದ ಕೊಂಡಂಗೇರಿಗೆ ಹೋಗುವ ರಸ್ತೆಯಲ್ಲಿ ಇಬ್ಬರು ವ್ಯಕ್ತಿಗಳು ಮಾದಕ ವಸ್ತು ಮಾರಾಟ ಮಾಡಲು ಯತ್ನಿಸುತ್ತಿರುವ ಬಗ್ಗೆ ಮಡಿಕೇರಿ ಗ್ರಾಮಾಂತರ ಠಾಣಾ ಪೊಲೀಸರಿಗೆ ಖಚಿತ ಮಾಹಿತಿ ಲಭಿಸಿತ್ತು. ಈ ಮಾಹಿತಿ ಆಧರಿಸಿ ದಾಳಿ ನಡೆಸಿದ ಸಂದರ್ಭ ಪಂಚವಳ್ಳಿ ನಿವಾಸಿ ಸದ್ದಾಂ ಹುಸೇನ್(35) ಮತ್ತು ಜಬೀವುಲ್ಲಾ ಖಾನ್(40) ಎಂಬ ಆರೋಪಿಗಳು ಸೆರೆ ಸಿಕ್ಕಿದ್ದಾರೆ. ಆರೋಪಿಗಳನ್ನು ಪರಿಶೀಲನೆ ನಡೆಸಿದ ಸಂದರ್ಭ ಅವರ ಬಳಿ 241.4 ಗ್ರಾಂ. ಗಾಂಜಾ ಪತ್ತೆಯಾಗಿದ್ದು, ಸ್ಥಳದಲ್ಲೇ ಇಬ್ಬರನ್ನು ಬಂಧಿಸಲಾಗಿದೆ.

ಗಾಂಜಾ ಬೆಳೆಸಿದ ಭೂಪ: ಗೋಣಿಕೊಪ್ಪ ಪೊಲೀಸ್ ಠಾಣಾ ವ್ಯಾಪ್ತಿಯ ಮಾಯಮುಡಿ ಗ್ರಾಮದ ದಾಸ ಕಾಲೋನಿಯ ಮನೆಯೊಂದರಲ್ಲಿ ಗಾಂಜಾ ಗಿಡ ಬೆಳೆಸಿರುವ ಬಗ್ಗೆ ಗೋಣಿಕೊಪ್ಪ ಪೊಲೀಸರಿಗೆ ಖಚಿತ ಮಾಹಿತಿ ದೊರೆತಿತ್ತು. ಈ ಹಿನ್ನೆಲೆಯಲ್ಲಿ ಮನೆಯ ಮೇಲೆ ದಾಳಿ ನಡೆಸಿದ ಸಂದರ್ಭ 49 ಗ್ರಾಂ. ತೂಕದ ಗಾಂಜಾ ಗಿಡಗಳು ಪತ್ತೆಯಾಗಿವೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಸುಜಯ್(29) ಎಂಬಾತನನ್ನು ಬಂಧಿಸಲಾಗಿದ್ದು, ಗಾಂಜಾ ಗಿಡಗಳನ್ನು ವಶಕ್ಕೆ ಪಡೆಯಲಾಗಿದೆ. ವಿರಾಜಪೇಟೆ ಡಿವೈಎಸ್‌ಪಿ ಪಿ.ಆರ್.ಮೋಹನ್ ಕುಮಾರ್, ಗೋಣಿಕೊಪ್ಪ ವೃತ್ತ ನಿರೀಕ್ಷಕ ಗೋವಿಂದರಾಜು, ಗೋಣಿಕೊಪ್ಪ ಠಾಣಾಧಿಕಾರಿ ಕೆ.ಪಿ. ದೀಕ್ಷಿತ್ ಕುಮಾರ್ ಮತ್ತು ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿದ್ದಾರೆ.

ಕಾಡಾನೆ ಹಾವಳಿ ನಿಯಂತ್ರಣಕ್ಕೆ ಆಗ್ರಹಿಸಿ ಗ್ರಾಮಸ್ಥರಿಂದ ರಸ್ತೆ ತಡೆ





ಮಡಿಕೇರಿ, ಜು.10– ಕಾಡಾನೆಗಳ ಹಾವಳಿ ತಡೆಗಟ್ಟುವಂತೆ ಆಗ್ರಹಿಸಿ ಚೆಯ್ಯಂಡಾಣೆಯಲ್ಲಿ ಬೃಹತ್ ರಸ್ತೆತಡೆ ನಡೆಸಿ ಅರಣ್ಯ ಇಲಾಖೆ ವಿರುದ್ಧ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಚೆಯ್ಯಂಡಾಣೆ ಬಳಿಯ ನರಿಯಂದಡ ಹಾಗೂ ಕುಂಜಿಲ ಕಕ್ಕಬೆ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ನರಿಯಂದಡ, ಕೋಕೇರಿ, ಚೇಲಾವರ, ಕರಡ, ಅರಪಟ್ಟು, ಪೊದವಾಡ, ಮರಂದೋಡ ಗ್ರಾಮಸ್ಥರು ಚೆಯ್ಯಂಡಾಣೆ ಪಟ್ಟಣದಲ್ಲಿ ರಸ್ತೆ ತಡೆದು ಅರಣ್ಯ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ನಾಪೋಕ್ಲು ವಿರಾಜಪೇಟೆ ಮುಖ್ಯ ರಸ್ತೆಯಲ್ಲಿ ವಾಹನಗಳನ್ನು ತಡೆದು ಗ್ರಾಮಸ್ಥರು ಪ್ರತಿಭಟನೆ ನಡೆಸಿದರಲ್ಲದೇ, ಈ ವ್ಯಾಪ್ತಿಯಲ್ಲಿ ಕಾಡಾನೆ ಹಾವಳಿ ಮಿತಿಮೀರಿದ್ದು, ತೋಟಗಳಿಗೆ ಲಗ್ಗೆ ಇಟ್ಟು ಕೃಷಿ ಫಸಲುಗಳನ್ನು ಧ್ವಂಸಗೊಳಿಸುವುದಲ್ಲದೇ ಮನೆಗಳ ಸಮೀಪದಲ್ಲೇ ಕಾಡಾನೆಗಳು ಸಂಚರಿಸುತ್ತಿವೆ. ಸುಮಾರು 25ಕ್ಕೂ ಅಧಿಕ ಕಾಡಾನೆಗಳು ಈ ವ್ಯಾಪ್ತಿಯಲ್ಲಿ ನಿರಂತರ ದಾಳಿ ನಡೆಸುತ್ತಿದ್ದರೂ ಕಾಡಾನೆಗಳ ಹಾವಳಿ ತಡೆಗಟ್ಟುವಲ್ಲಿ ಅರಣ್ಯ ಇಲಾಖೆ ನಿರ್ಲಕ್ಷ್ಯ ವಹಿಸಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ಹೊರಗೆಡವಿದರು. ಈ ಸಂದರ್ಭ ನಾಪೋಕ್ಲು ಠಾಣಾಧಿಕಾರಿ ಮಂಜುನಾಥ್, ಮಡಿಕೇರಿ ತಾಲೂಕು ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ ಸ್ಥಳಕ್ಕೆ ಆಗಮಿಸಿ, ರಸ್ತೆ ತಡೆ ಮಾಡದಂತೆ ಗ್ರಾಮಸ್ಥರ ಮನವೊಲಿಸಲು ಪ್ರಯತ್ನಿಸಿದರು. ಅರಣ್ಯಾಧಿಕಾರಿಗಳು ಪ್ರತಿಭಟನಾ ಸ್ಥಳಕ್ಕೆ ಬರುವವರೆಗೂ ಪ್ರತಿಭಟನೆ ಮುಂದುವರೆಸುವುದಾಗಿ ಪ್ರತಿಭಟನಾಕಾರರು ಪಟ್ಟು ಹಿಡಿದ ಘಟನೆಯೂ ನಡೆಯಿತು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ವಿರಾಜಪೇಟೆ ಡಿಎಫ್‌ಒ ಶರಣ ಬಸಪ್ಪ ಮಾತನಾಡಿ, ತೋಟಗಳಲ್ಲಿ ಬೀಡುಬಿಟ್ಟ ಕಾಡಾನೆಗಳನ್ನು ಕಾಡಿಗಟ್ಟುವ ಸಂದರ್ಭ ತೋಟಗಳಿಗೆ ಹಾನಿಯಾಗುತ್ತಿದೆ. ಕಾಡಾನೆ ಸೆರೆ ಹಿಡಿಯಲು ಸರಕಾರದಿಂದ ಅನುಮತಿ ಕೋರಿದ್ದು, ಅನುಮತಿ ದೊರೆತ ತಕ್ಷಣ ತೊಂದರೆ ನೀಡುತ್ತಿರುವ ಕಾಡಾನೆ ಸೆರೆ ಹಿಡಿಯಲಾಗುವುದು ಎಂದು ಭರವಸೆ ನೀಡಿದರು.

ಮಡಿಕೇರಿ ವಲಯ ಅರಣ್ಯಾಧಿಕಾರಿ ಡಿ.ಎಫ್.ಒ ಪೂವಯ್ಯ ಮಾತನಾಡಿ, ಕಾಡಾನೆ ಹಾವಳಿ ತಡೆಗಟ್ಟುವ ನಿಟ್ಟಿನಲ್ಲಿ ಗ್ರಾಮಗಳ ವ್ಯಾಪ್ತಿಯಲ್ಲಿ ಕಾಡಾನೆಗಳನ್ನು ಕಾಡಿಗಟ್ಟುವ ಕಾರ್ಯಾಚರಣೆ ನಡೆಸಲಾಗುವುದು ಎಂದರು.

ಕಾಡಾನೆ ಹಾವಳಿ ತಡೆಗಟ್ಟುವಲ್ಲಿ ವಿಫಲವಾದಲ್ಲಿ ಆಗಸ್ಟ್ 15ರಂದು ರಸ್ತೆ ತಡೆ ನಡೆಸುವುದರೊಂದಿಗೆ ಅಹೋರಾತ್ರಿ ಧರಣಿ ಸತ್ಯಾಗ್ರಹ ನಡೆಸಲಾಗುವುದೆಂದು ಇದೇ ಸಂದರ್ಭ ಪ್ರತಿಭಟನಾಕಾರರು ಎಚ್ಚರಿಸಿದರು. ಇದೆ ಸಂದರ್ಭ ಡಿಎಫ್‌ಒ ಪೂವಯ್ಯ ಅವರಿಗೆ ಪ್ರತಿಭಟನಾಕಾರರು ಮನವಿ ಪತ್ರ ಸಲ್ಲಿಸಿದರು. ನರಿಯಂದಡ ಗ್ರಾಮಸ್ಥ ಪೋಕ್ಕುಳಂಡ್ರ ದನೋಜ್, ಮರಂದೋಡ ಗ್ರಾಮ ಪಂಚಾಯಿತಿ ಸದಸ್ಯ ಚೋಯಮಾಡಂಡ ಹರೀಶ್ ಮೊಣ್ಣಪ್ಪ, ನರಿಯಂದಡ ಗ್ರಾಮ ಪಂಚಾಯಿತಿ ಅಧ್ಯಕ್ಷ ಬಿದ್ದಂಡ ರಾಜೇಶ್ ಅಚ್ಚಯ್ಯ, ಕೋಕೇರಿ ಗ್ರಾಮದ ಜಪ್ಪು ದೇವಯ್ಯ, ಸಂಪತ್, ರಂಜು ಚಂಗಪ್ಪ, ಅನ್ನಡಿಯಂಡ ಮುದ್ದಯ್ಯ ಮತ್ತಿತರರು ಮಾತನಾಡಿದರು.

ಸುಮಾರು ಎರಡು ಗಂಟೆಗಳ ಕಾಲ ನಡೆದ ರಸ್ತೆತಡೆಯಿಂದ ನೂರಾರು ವಾಹನಗಳು ರಸ್ತೆಯಲ್ಲಿ ಸಾಲುಗಟ್ಟಿ ನಿಂತಿದ್ದವು. ಪ್ರತಿಭಟನೆಯಲ್ಲಿ ನರಿಯಂದಡ, ಕೋಕೇರಿ, ಚೇಲಾವರ, ಮರಂದೋಡ, ಕರಡ ಅರಪಟ್ಟು, ಪೊದವಾಡ ಸೇರಿದಂತೆ ಏಳು ಗ್ರಾಮಕ್ಕೆ ಒಳಪಟ್ಟ ಗ್ರಾಮಸ್ಥರು, ಎರಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಸಂಘ ಸಂಸ್ಥೆಗಳ ಪ್ರಮುಖರು, ಪಂಚಾಯಿತಿ ಸದಸ್ಯರು ಹಾಜರಿದ್ದರು.

ಲೋಕಾಯುಕ್ತರಿಂದ ದೂರು ಸ್ವೀಕಾರ

ಮಡಿಕೇರಿ, ಜು.10– ಕರ್ನಾಟಕ ಲೋಕಾಯುಕ್ತ, ಕೊಡಗು ಜಿಲ್ಲೆ ಮಡಿಕೇರಿಯ ಲೋಕಾಯುಕ್ತ ಅಧಿಕಾರಿಗಳು ಜು.12 ರಂದು ಪೊನ್ನಂಪೇಟೆ ತಹಶೀಲ್ದಾರ್ ಕಚೇರಿ ಸಭಾಂಗಣ ಮತ್ತು ಜು.17 ರಂದು ಸೋಮವಾರಪೇಟೆ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಆಯಾ ದಿನಗಳಂದು ಬೆಳಗ್ಗೆ 11 ಗಂಟೆಯಿಂದ 1 ಗಂಟೆಯವರೆಗೆ ಕರ್ನಾಟಕ ಲೋಕಾಯುಕ್ತ ಕಾಯಿದೆಯಡಿ ದೂರು ಅರ್ಜಿ ವಿತರಿಸಲಿರುವರು. ಭರ್ತಿ ಮಾಡಿದ ಮತ್ತು ನೋಟರಿಯಿಂದ ಅಫಿಡವಿಟ್ ಮಾಡಿಸಿದ ಅರ್ಜಿಗಳನ್ನು ಸ್ವೀಕರಿಸಲಾಗುವುದು.

ಸರ್ಕಾರಿ ಕಚೇರಿಗಳಲ್ಲಿ ಅಧಿಕೃತ ಕೆಲಸಗಳಲ್ಲಿ ವಿಳಂಬ ಹಾಗೂ ಇನ್ನಿತರೆ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನಿಗದಿತ ಪತ್ರದಲ್ಲಿ ನೀಡಬಹುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಕೋರಿದೆ. ಹೆಚ್ಚಿನ ವಿವರಗಳಿಗೆ ಮಡಿಕೇರಿ ಲೋಕಾಯುಕ್ತ ಪೊಲೀಸ್ ಕಚೇರಿ, ಗೌಳಿಬೀದಿ ಮಡಿಕೇರಿಯ ದೂ.ಸಂ. 08272-295297 ಅನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.

ವಿದ್ಯುತ್ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ರೈತರ ಪ್ರತಿಭಟನೆ



ಮಡಿಕೇರಿ, ಜು.10– ಕೊಡಗು ಜಿಲ್ಲೆಯಲ್ಲಿ ನಿರಂತರವಾಗಿರುವ ವಿದ್ಯುತ್ ಸಮಸ್ಯೆಯನ್ನು ಪರಿಹರಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ಕೊಡಗು ಜಿಲ್ಲಾ ಘಟಕದ ನೇತೃತ್ವದಲ್ಲಿ ಮಡಿಕೇರಿಯ ಚೆಸ್ಕಾಂ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಯಿತು.

ಚೆಸ್ಕಾಂ ವಿರುದ್ಧ ಧಿಕ್ಕಾರ ಕೂಗಿದ ಪ್ರತಿಭಟನಾಕಾರರು ತಮ್ಮ ಆಕ್ರೋಶ ಹೊರಗೆಡವಿದರು. ಏಕಾಏಕಿ ವಿದ್ಯುತ್ ಬಿಲ್ ಏರಿಕೆ ಮಾಡುವ ಮೂಲಕ ನಷ್ಟದಲ್ಲಿರುವ ರೈತರು ಮತ್ತು ಬೆಳೆಗಾರರ ನೋವಿನ ಮೇಲೆ ಬರೆ ಎಳೆಯಲಾಗುತ್ತಿದೆ. ತಕ್ಷಣವೇ ವಿದ್ಯುತ್ ಬಿಲ್ ಅನ್ನು ಇಳಿಕೆ ಮಾಡಬೇಕು. ಈ ಸಮಸ್ಯೆ ನಿವಾರಣೆಗೆ ರಾಜ್ಯ ಸರಕಾರ ಮಧ್ಯ ಪ್ರವೇಶ ಮಾಡಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ವೇಳೆ ಮಾತನಾಡಿದ ರೈತ ಸಂಘದ ಜಿಲ್ಲಾಧ್ಯಕ್ಷ ಕಾಡ್ಯಮಾಡ ಮನು ಸೋಮಯ್ಯ, ಜಿಲ್ಲೆಯಲ್ಲಿ ನಿರಂತರವಾಗಿ ವಿದ್ಯುಚ್ಛಕ್ತಿ ಸಮಸ್ಯೆ ತಲೆದೋರಿದೆ. ಕಳೆದ 20 ವರ್ಷಗಳಿಂದ ಎದುರಾಗಿರುವ ಸಮಸ್ಯೆಗೆ ಇಂದಿಗೂ ಪರಿಹಾರ ದೊರೆತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ತೋಟಗಳಲ್ಲಿ ಜಂಗಲ್ ಕ್ಲಿಯರಿಂಗ್ ಮಾಡದೇ ಇರುವುದರಿಂದ ಮರದ ಕೊಂಬೆಗಳು ವಿದ್ಯುತ್ ಲೈನ್‌ಗೆ ತಗಲುತ್ತಿವೆ. ಅದರಲ್ಲೂ ದಕ್ಷಿಣ ಕೊಡಗು ಹಾಗೂ ಸೋಮವಾರಪೇಟೆ ತಾಲೂಕಿನಲ್ಲಿ ಜಂಗಲ್ ಕ್ಲಿಯರಿಂಗ್ ಮಾಡದೇ ಇರುವುದರಿಂದ ವೋಲ್ಟೇಜ್ ಸಮಸ್ಯೆ ತಲೆದೋರಿದೆ. ಈ ಕುರಿತು ಚೆಸ್ಕಾಂ ಇಲಾಖಾಧಿಕಾರಿಗೆ ಮಾಹಿತಿ ನೀಡಿದರೂ ಕ್ರಮ ವಹಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರಧಾನ ಕಾರ್ಯದರ್ಶಿ ಸುಜಯ್ ಬೋಪಯ್ಯ ಮಾತನಾಡಿ, ತಿಂಗಳಿಗೆ ಬರುತ್ತಿರುವ ವಿದ್ಯುತ್ ಬಿಲ್ ನೋಡಿದರೆ ನಡುಕ ಹುಟ್ಟುತ್ತದೆ. ಗುಣಮಟ್ಟದ ವಿದ್ಯುತ್ ಮಾತ್ರ ಸಿಗುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಪ್ರತಿಭಟನೆಯ ಮನವಿ ಪತ್ರವನ್ನು ಚೆಸ್ಕಾಂ ಹಿರಿಯ ಅಧಿಕಾರಿಗಳು ಮತ್ತು ರಾಜ್ಯ ಸರಕಾರಕ್ಕೆ ಸಲ್ಲಿಸಲಾಯಿತು.

ರೈತ ಸಂಘದ ಪ್ರಧಾನ ಸಂಚಾಲಕರಾದ ಸುಭಾಸ್ ಸುಬ್ಬಯ್ಯ, ಖಜಾಂಚಿ ಇಟ್ಟೀರ ಸಬೀತ, ಕಾನೂನು ಸಲಹೆಗಾರರಾದ ಹೇಮಚಂದ್ರ, ವಿರಾಜಪೇಟೆ ತಾಲೂಕು ಅಧ್ಯಕ್ಷ ಭವಿ ಕುಮಾರ್, ಪೊನ್ನಂಪೇಟೆ ತಾಲೂಕು ಅಧ್ಯಕ್ಷ ಅಲೆಮಾಡ ಮಂಜುನಾಥ್, ಅಮ್ಮತ್ತಿ ಹೋಬಳಿ ಅಧ್ಯಕ್ಷ ಮಂಡೇಪಂಡ ಪ್ರವೀಣ್, ಶ್ರೀಮಂಗಲ ಹೋಬಳಿ ಅಧ್ಯಕ್ಷ ಕಂಬ ಕಾರ್ಯಪ್ಪ ಸೇರಿದಂತೆ ಐದು ತಾಲೂಕುಗಳ ರೈತ ಸಂಘದ ಪದಾಧಿಕಾರಿಗಳು, ಸದಸ್ಯರು ಹಾಜರಿದ್ದರು.

ಇಂದು ಶಿಕ್ಷಕರ ವರ್ಗಾವಣೆ ಕೌನ್ಸಿಲಿಂಗ್

ಮಡಿಕೇರಿ, ಜು.10– 2022–23ನೇ ಸಾಲಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವೃಂದದ ಕೋರಿಕೆ ವರ್ಗಾವಣೆ/ ಪರಸ್ಪರ ವರ್ಗಾವಣೆ/ಕನಿಷ್ಠ ಅವಧಿ ಮುಗಿದ ನಿರ್ದಿಷ್ಟಪಡಿಸಿದ ಮತ್ತು ತಾಂತ್ರಿಕ ಸಹಾಯಕರ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಬೇಕಿರುತ್ತದೆ. ಅದರಂತೆ ಕೊಡಗು ಜಿಲ್ಲೆಯಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವೃಂದದ ಕೋರಿಕೆ ವರ್ಗಾವಣೆ /ಪರಸ್ಪರ ವರ್ಗಾವಣೆ/ ಕನಿಷ್ಠ ಅವಧಿ ಮುಗಿದ ನಿರ್ದಿಷ್ಟಪಡಿಸಿದ ಮತ್ತು ತಾಂತ್ರಿಕ ಸಹಾಯಕರುಗಳಿಗೆ ಆನ್‌ಲೈನ್ ಕೌನ್ಸಿಲಿಂಗ್ ಜುಲೈ 11 ರ ಬೆಳಗ್ಗೆ 10 ಗಂಟೆಯಿಂದ ಜುಲೈ 17 ರವರೆಗೆ ನಡೆಯಲಿದೆ. ವೇಳಾಪಟ್ಟಿಯನುಸಾರ ಸಂಬಂಧಿಸಿದ ಶಿಕ್ಷಕರು ನಿಗದಿತ ದಿನಾಂಕದಂದು ಕೌನ್ಸಿಲಿಂಗ್‌ಗೆ ಹಾಜರಾಗುವಂತೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಸಿ.ರಂಗಧಾಮಯ್ಯ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ವಿರುದ್ಧ

ಅಂಗನವಾಡಿ ಕಾರ್ಯಕರ್ತೆಯರ ಪ್ರತಿಭಟನೆ



ಚಾಮರಾಜನಗರ, ಜು.10– ಕೇಂದ್ರ ಸರ್ಕಾರ ಅಂಗನವಾಡಿ ಕಾರ್ಯಕರ್ತೆಯರನ್ನು ನಿರ್ಲಕ್ಷ್ಯ ಮಾಡುತ್ತಿದೆ ಎಂದು ಆರೋಪಿಸಿ ಜಿಲ್ಲಾದ್ಯಂತ ಅಂಗನವಾಡಿ ಕಾರ್ಯಕರ್ತರು ಸೋಮವಾರ ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಕೊಳ್ಳೇಗಾಲ ಹಾಗೂ ಗುಂಡ್ಲುಪೇಟೆ ಸೇರಿದಂತೆ ಹಲವೆಡೆ ಅಂಗನವಾಡಿ ಕಾರ್ಯಕರ್ತರು ಪ್ರತಿಭಟನೆ ನಡೆಸಿ, ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ನಗರದಲ್ಲಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ ಚಾಮರಾಜನಗರ ತಾಲೂಕು ಸಮಿತಿ ವತಿಯಿಂದ ನಗರದ ಹೌಸಿಂಗ್ ಬೋರ್ಡ್‌ನಲ್ಲಿರುವ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಮುಂಭಾಗ ಸಮಾವೇಶಗೊಂಡು ಬೇಡಿಕೆ ಈಡೇರಿಸುವಂತೆ ಘೋಷಣೆ ಕೂಗಿದರು.

ಇದೇ ವೇಳೆ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಸಿಡಿಪಿಓ ಎಂ. ನಾಗೇಶ್ ಅವರ ಮೂಲಕ ಪ್ರಧಾನಿ ನರೇಂದ್ರಮೋದಿ ಅವರಿಗೆ ಮನವಿ ಸಲ್ಲಿಸಿ, ನೌಕರರಿಗೆ ಸರ್ಕಾರದಿಂದ ನೀಡಲಾಗಿದ್ದ ಮೊಬೈಲ್‌ಗಳನ್ನು ವಾಪಸ್ ನೀಡಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಅಂಗನವಾಡಿ ನೌಕರರ ಸಂಘದ ತಾಲೂಕು ಅಧ್ಯಕ್ಷೆ ಎ. ನಾಗಮಣಿ ಮಾತನಾಡಿ, ಇಲಾಖೆ ವತಿಯಿಂದ ನೀಡಿರುವ ಮೊಬೈಲ್‌ನಿಂದ ಯಾವುದೇ ಕೆಲಸ ಮಾಡಲು ಆಗುತ್ತಿಲ್ಲ. ಇದೊಂದು ನಿಷ್ಕ್ರಿಯಗೊಂಡಿರುವ ಮೊಬೈಲ್ ಆಗಿದೆ. ಹೀಗಾಗಿ ಹೊಸ ಮೊಬೈಲ್ ಅಥವಾ ಟ್ಯಾಬ್ ಕೊಡಿಸಬೇಕು ಎಂದು ಒತ್ತಾಯಿಸಿದರು. ರಾಜ್ಯ ಸರ್ಕಾರ ಆಯವ್ಯಯ ದಲ್ಲಿ ಹೆಚ್ಚಳ ಮಾಡಿರುವ ಒಂದು ಸಾವಿರ ಗೌರವಧನವನ್ನು ಶೀಘ್ರ ಬಿಡುಗಡೆ ಮಾಡಬೇಕು. ದೇಶದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಕನಿಷ್ಠ ವೇತನ ನಿಗದಿ ಮಾಡಬೇಕು. ಸಾಮಾಜಿಕ ಭದ್ರತೆಗಳಾದ ಇಎಸ್‌ಐ, ಪಿಎಫ್, ಪಿಂಚಣಿ, ಎಕ್ಸ್‌ಗ್ರೇಷಿಯಾ ಇತರ ಸೌಲಭ್ಯಗಳನ್ನು ಕೂಡಲೇ ನೀಡಬೇಕೆಂದು ಆಗ್ರಹಿಸಿದರು.

45 ಮತ್ತು 46ನೇ ಇಂಡಿಯನ್ ಲೇಬರ್ ಕಾನ್ಫರೆನ್ಸ್‌ಗಳ ಶಿಫಾರಸ್ಸುಗಳನ್ನು ಜಾರಿ ಮಾಡಬೇಕು. ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಗ್ರಾಚ್ಯುಟಿ ನೀಡುವ ಕುರಿತಂತೆ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪನ್ನು ಕೂಡಲೇ ಜಾರಿ ಮಾಡಬೇಕು. ಏಕರೂಪದ ಸೇವಾ ನಿಯಮಗಳನ್ನು ಸೇರಿದಂತೆ ಇನ್ನಿತರ ಬೇಡಿಕೆಗಳನ್ನು ಕೂಡಲೇ ಈಡೇರಿಸಬೇಕು ಎಂದು ನಾಗಮಣಿ ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಅಂಗನವಾಡಿ ನೌಕರರ ಸಂಘದ ತಾಲೂಕು ಕಾರ್ಯದರ್ಶಿ ಶಾಹಿದಾ ಬಾನು, ಉಪಾಧ್ಯಕ್ಷರಾದ ರೇವಮ್ಮ, ಲೀಲಾವತಿ, ಸಹ ಕಾರ್ಯದರ್ಶಿ ಸುಗುಣ, ಖಜಾಂಚಿ ಎನ್.ಎಸ್. ಗುರುಲಿಂಗಮ್ಮ, ರಾಜಮ್ಮ, ಶಾಂತಮ್ಮ, ಸುಶೀಲ, ತೊಳಸಮ್ಮ, ಜಮೀಲಾ, ನೀಲಾಂಬಿಕೆ, ಚಿಕ್ಕಮಣಿ ಇತರರು ಭಾಗವಹಿಸಿದ್ದರು.

ಜೈನಮುನಿ ಕಾಮಕುಮಾರ ನಂದಿ ಮಹಾರಾಜರಿಗೆ ಶ್ರದ್ಧಾಂಜಲಿ



ಚಾಮರಾಜನಗರ, ಜು.10– ನಗರದಲ್ಲಿ ವಿಶ್ವ ಹಿಂದೂ ಪರಿಷತ್ ಹಾಗೂ ಜೈನ ಸಮಾಜದಿಂದ ಜೈನಮುನಿ ಕಾಮಕುಮಾರ ನಂದಿ ಮಹಾರಾಜ ಸ್ವಾಮೀಜಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ನಗರದ ಶ್ರೀಚಾಮರಾಜೇಶ್ವರಸ್ವಾಮಿ ದೇವಸ್ಥಾನದ ಮುಂಭಾಗ ಸಮಾವೇಶಗೊಂಡ ಸಂಘಟನೆಯ ಮುಖಂಡರು ಹಾಗೂ ಜೈನ ಸಮುದಾಯದವರು ಸ್ವಾಮೀಜಿ ಭಾವಚಿತ್ರ ಹಿಡಿದು ಮೌನ ಪ್ರತಿಭಟನೆ ನಡೆಸಿದರು. ಚಾಮರಾಜೇಶ್ವರಸ್ವಾಮಿ ದೇವಸ್ಥಾನದ ರಸ್ತೆಗಳಲ್ಲಿ ಸಂಚರಿಸಿ, ಜೈನ ಮುನಿಗಳನ್ನು ಹತ್ಯೆ ಮಾಡಿದ ಕ್ರೂರಿಗಳಿಗೆ ಉಗ್ರ ಶಿಕ್ಷೆಯಾಗಬೇಕು. ಇಂಥ ಘಟನೆ ಮರುಕಳಿಸದಂತೆ ಸರ್ಕಾರ ಎಚ್ಚರವಹಿಸಬೇಕು ಎಂದು ಆಗ್ರಹಿಸಿದರು. ನಂತರ ದೇವಸ್ಥಾನದ ಮುಂಭಾಗದ ಪಾರ್ಕ್‌ನಲ್ಲಿ ಸಮಾವೇಶಗೊಂಡು ಸ್ವಾಮೀಜಿ ಅವರ ಭಾವಚಿತ್ರವಿಟ್ಟು ದೀಪ ಹಚ್ಚಿ, ಪುಷ್ಪ ನಮನ ಸಲ್ಲಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.

ಸಮುದಾಯದ ಮುಖಂಡ ಸುರೇಂದ್ರನಾಥ್, ಸಮಾಜದ ಅಧ್ಯಕ್ಷ ನಿರ್ಮಲ ಕುಮಾರ್ ಮಾತನಾಡಿ, ಜೈನ ಸಮಾಜದ ಮುನಿಗಳಾದ ಕಾಮಕುಮಾರ ಸ್ವಾಮೀಜಿ ಅವರನ್ನು ಹತ್ಯೆ ಮಾಡಿರುವ ಆರೋಪಿಗಳಿಗೆ ಉಗ್ರ ಶಿಕ್ಷೆಯಾಗಬೇಕು ಎಂದು ಆಗ್ರಹಿಸಿದರು. ಯಾರ ಮನಸ್ಸನ್ನು ನೋಯಿಸದ ಸ್ವಾಮಿಗಳ ಹತ್ಯೆಯ ಹಿಂದೆ ಷಡ್ಯಂತರ ಅಡಗಿದೆ. ಈ ಪ್ರಕರಣದ ಉನ್ನತ ಮಟ್ಟದ ತನಿಖೆಯಾಗಬೇಕು. ಸಮಾಜದ ಬಂಧುಗಳಿಗೆ ರಕ್ಷಣೆ ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಈ ವೇಳೆ ವಿಶ್ವಹಿಂದೂ ಪರಿಷತ್‌ನ ಮಧುಕುಮಾರ್, ಜೈನ ಸಮಾಜದ ಮಹಿಳಾ ಅಧ್ಯಕ್ಷರಾದ ಪದ್ಮಶ್ರೀ ರಮೇಶ್, ಉಪಾಧ್ಯಕ್ಷ ಸಿ.ಡಿ. ನಾಗೇಂದ್ರಯ್ಯ, ಕಾರ್ಯದರ್ಶಿ ಮಹೇಶ್‌ಕುಮಾರ್, ಜಂಟಿ ಕಾರ್ಯದರ್ಶಿ ಸಿ.ಕೆ. ಸುಭಾಶ್, ಖಜಾಂಚಿ ನಾಗರತ್ನರಾಜು, ಶ್ವೇತಾಂಬರಿ ಜೈನ ಸಮಾಜ ಅಧ್ಯಕ್ಷ ಕನ್ನಯ್‌ಲಾಲ್, ಮುಖೇಶ್, ಗಣಪತಿಲಾಲ್‌ಜೈನ್, ಪ್ರಕಾಶ್‌ಜೈನ್ ಸೇರಿದಂತೆ ಜೈನ ಸಮಾಜದ ಬಂಧುಗಳು, ಗೋರಕ್ಷ ಪ್ರಮುಖ ಶಂಕರ್ ಇತರರಿದ್ದರು.

ಜೈನ ಮುನಿಗಳ ಹಂತಕರ ವಿರುದ್ಧ ಕ್ರಮಕ್ಕೆ ಮನವಿ

ಚಾಮರಾಜನಗರ, ಜು.10– ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಹಿರೇಕೋಡಿ ಗ್ರಾಮದಲ್ಲಿ ಜೈನ ಮುನಿಗಳಾದ ಶ್ರೀ 108 ಕಾಮಕುಮಾರ ನಂದಿ ಮಹಾರಾಜ್‌ರನ್ನು ಹತ್ಯೆ ಮಾಡಿರುವ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಿ, ಜೈನ ಮುನಿಗಳಿಗೆ ಸೂಕ್ತ ರಕ್ಷಣೆ ನೀಡಬೇಕೆಂದು ಶ್ರೀ ಪಾರ್ಶ್ವನಾಥ ಜೈನ ಸಂಘ ನಗರದಲ್ಲಿ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಅಪರ ಜಿಲ್ಲಾಧಿಕಾರಿಗಳಾದ ಗೀತಾ ಹಡೇದ ಅವರ ಕಚೇರಿಗೆ ಶ್ರೀ ಪಾರ್ಶ್ವನಾಥ ಜೈನ ಸಂಘದ ಅಧ್ಯಕ್ಷ ಎಂ.ಪಿ. ನಿರ್ಮಲ ಕುಮಾರ್ ಹಾಗೂ ಪದಾಧಿಕಾರಿಗಳು ತೆರಳಿ ಮನವಿ ಸಲ್ಲಿಸಿದರು. ಜೈನ ಮುನಿಗಳು ಭಾರತದಾದ್ಯಂತ ನಿರ್ಭಯವಾಗಿ ವಿಹಾರ ಮಾಡಲು ಸರ್ಕಾರ ರಕ್ಷಣೆ ನೀಡಬೇಕು. ಜೈನ ಮುನಿಗಳು ಎಲ್ಲೇ ಸಂಚಾರ ಮಾಡಿದರೂ ಕಾಲ್ನಡಿಗೆಯಲ್ಲಿ ವಿಹಾರ ಮಾಡುತ್ತಾರೆ. ಇವರುಗಳ ರಕ್ಷಣೆ ಸಮಾಜ ಹಾಗೂ ಸರ್ಕಾರ ಕರ್ತವ್ಯವಾಗಿರುತ್ತದೆ. ಜೈನ ಮುನಿಗಳು ಸಕಲ ಪ್ರಾಣಿಗಳಿಗೂ ಹಿಂಸೆ ಬಯಸದೇ ತಮ್ಮ ಪಿಂಚದಿಂದ ಎಲ್ಲಿ ಕುಳಿತುಕೊಳ್ಳಬೇಕಾದರೂ ಶುದ್ಧಿಯನ್ನು ಮಾಡಿ ಆಚರಣೆ ಮಾಡುತ್ತಾರೆ.

ಸರ್ಕಾರದ ಪ್ರತಿನಿಧಿಗಳಾದ ತಾವು ಮುಂದೆ ಇಂಥ ಘಟನೆಗಳು ಮರುಕಳಿಸದಂತೆ ಜೈನಮುನಿಗಳಿಗೆ ಹಾಗೂ ಜೈನ ಸಮಾಜಕ್ಕೆ ರಕ್ಷಣೆಯನ್ನು ಕೊಡಿಸಬೇಕೆಂದು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಸಿ.ಬಿ. ನಾಗೇಂದ್ರಯ್ಯ, ಕಾರ್ಯದರ್ಶಿ ಸಿ.ಪಿ. ಮಹೇಶ್‌ಕುಮಾರ್, ಖಜಾಂಚಿ ಸಿ.ಎನ್. ನಾಗರತ್ನರಾವ್, ಮಾಜಿ ಅಧ್ಯಕ್ಷ ಸುರೇಶ್‌ಕುಮಾರ್, ಸತೀಶ್, ಕುನ್ನಾಯ್ಯ ಲಾಲ್ ಜೈನ್, ಗಣಪತಿಲಾಲ್, ಡಿ.ಪಿ. ಉಲ್ಲಾಸ್ ಮೊದಲಾದವರು ಇದ್ದರು.

ಮಾಜಿ ಸಂಸದ ದಿ. ಧ್ರುವನಾರಾಯಣ್ ಸ್ಮರಣಾರ್ಥ

ಧ್ರುವ ಕಪ್ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ



ಯಳಂದೂರು, ಜು.10– ತಾಲೂಕಿನ ಕೆಸ್ತೂರು ಗ್ರಾಮದಲ್ಲಿ ಮಾಜಿ ಸಂಸದ ದಿವಂಗತ ಆರ್. ಧ್ರುವನಾರಾಯಣ್ ಅಭಿಮಾನಿ ಬಳಗದಿಂದ ಇದೇ ಮೊದಲ ಬಾರಿಗೆ 'ಧ್ರುವ ಕಪ್' ಕ್ರಿಕೆಟ್ ಟೂರ್ನಮೆಂಟ್ ಆಯೋಜಿಸಲಾಗಿತ್ತು.

ಧ್ರುವನಾರಾಯಣ್ ಪುತ್ರ, ನಂಜನಗೂಡು ಶಾಸಕ ದರ್ಶನ್ ಧ್ರುವನಾರಾಯಣ್ ಅವರು ಧ್ರುವನಾರಾಯಣ್‌ರವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಬಳಿಕ ಮಾತನಾಡಿದರು. ಚಾಮರಾಜನಗರ ಜಿಲ್ಲೆ ಅಂದರೆ ನಮ್ಮ ತಂದೆಗೆ ಅಪಾರ ಪ್ರೀತಿ. ಅವರ ಪ್ರೀತಿ ಮತ್ತು ವಿಶ್ವಾಸವನ್ನು ನಾನು ಕಾಪಾಡಿಕೊಂಡು ಹೋಗುತ್ತೇನೆ. ನಿಮ್ಮೆಲ್ಲರ ಪ್ರೀತಿ, ವಿಶ್ವಾಸ ನನ್ನ ಮೇಲೆಯೂ ಇರಲಿ.

ನಮ್ಮ ತಂದೆಯ ಹೆಸರಿನಲ್ಲಿ ಇದೇ ಮೊದಲ ಬಾರಿಗೆ ಕೆಸ್ತೂರು ಗ್ರಾಮದಲ್ಲಿ ಕ್ರಿಕೆಟ್ ಟೂರ್ನಮೆಂಟ್ ಆಯೋಜಿಸಿದ್ದ ಆಯೋಜಕರಿಗೆ ಅಭಿನಂದನೆಗಳು. ನಮ್ಮ ತಂದೆಗೆ ಕ್ರಿಕೆಟ್ ಅಂದರೆ ತುಂಬಾ ಪ್ರೀತಿ. ನಮ್ಮ ಕುಟುಂಬದವರೆಲ್ಲರೂ ಕುಳಿತು ಕ್ರಿಕೆಟ್ ನೋಡಿ ಸಂತಸ ಪಡುತ್ತಿದ್ದೆವು. ನನಗೂ ಕೂಡ ಕ್ರೀಡೆ ಅಂದರೆ ಅಭಿಮಾನ. ಇಂದಿನ ಯುವಕರು ಹೆಚ್ಚು ಹೆಚ್ಚು ಕ್ರೀಡೆಯಲ್ಲಿ ಪಾಲ್ಗೊಳ್ಳಬೇಕು ಎಂದರು.

ಮಾಜಿ ಶಾಸಕ ಜಿ.ಎನ್. ನಂಜುಂಡಸ್ವಾಮಿ, ಜಿಪಂ ಮಾಜಿ ಉಪಾಧ್ಯಕ್ಷ ಜೆ. ಯೋಗೇಶ್, ಜಿಪಂ ಮಾಜಿ ಸದಸ್ಯೆ ಉಮಾವತಿ ಸಿದ್ದರಾಜು, ಜಿಲ್ಲಾ ಯೂತ್ ಕಾಂಗ್ರೆಸ್ ಕಾರ್ಯದರ್ಶಿ ವೆಂಕಟೇಶ್, ಅಂಬಳೆ ಗ್ರಾಪಂ ಸದಸ್ಯ ಅಂಬಳೆ ನವೀನ್, ಯೂತ್ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಚೇತನ್, ಗ್ರಾಪಂ ಸದಸ್ಯರಾದ ಗುರುಲಿಂಗಯ್ಯ, ಮಹೇಂದ್ರ, ಪ್ರಸಾದ್, ರಂಗಸ್ವಾಮಿ, ಆಯೋಜಕರಾದ ಮಹೇಂದ್ರ, ಪ್ರಮೋದ್, ಮಧು, ಸಚಿನ್, ಪ್ರದೀಪ್, ಕಾಂಗ್ರೆಸ್ ಮುಖಂಡರಾದ ಸಿದ್ದಯ್ಯ, ನಾಗರಾಜು, ಮಧು ಕೆಸ್ತೂರು, ರಾಮಕೃಷ್ಣ, ನಾಗಯ್ಯ, ಸಿದ್ದರಾಜು, ರಂಗಸ್ವಾಮಿ, ಕೆ. ಹೊಸೂರು ಮಹದೇವಶೆಟ್ಟಿ, ಮಹೇಶ್, ಸಂಜಯರಾಜ್, ಕಿರಣ್ ಜೆ, ಶಿವು ಸಂದೀಪ್, ಕ್ರೀಡಾಪಟುಗಳು ಹಾಗೂ ಯಜಮಾನರು ಹಾಗೂ ಅಂಬೇಡ್ಕರ್ ಯುವಕ ಸಂಘದ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಹಾಜರಿದ್ದರು.

ಇಂದು ಅಂತರ ಕಾಲೇಜು ಸ್ಪರ್ಧೆ

ಚಾಮರಾಜನಗರ, ಜು.10– ಚಾಮರಾಜನಗರ ವಿಶ್ವವಿದ್ಯಾನಿಲಯದ ಸುವರ್ಣ ಗಂಗೋತ್ರಿಯ ಕ್ಯಾಂಪಸ್‌ನಲ್ಲಿ ಅಂತರ ಕಾಲೇಜು ಸ್ಪರ್ಧೆ 'ಸುವರ್ಣ ಫೆಸ್ಟ್ 2023' ರನ್ನು ಜುಲೈ 11ರಂದು ಬೆಳಗ್ಗೆ 10 ಗಂಟೆಗೆ ಆಯೋಜಿಸಲಾಗಿದೆ.

ಚಾಮರಾಜನಗರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ.ಆರ್. ಗಂಗಾಧರ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕುಲಸಚಿವ (ಮೌಲ್ಯಮಾಪನ) ಪ್ರೊ. ಪಿ. ಮಾದೇಶ್, ಸಿ.ಡಿ.ಸಿ ಪ್ರಭಾರ ನಿರ್ದೇಶಕರಾದ ಪ್ರೊ. ಆರ್. ಮಹೇಶ್, ಪಿ.ಎಂ.ಇ.ಬಿ ಪ್ರಭಾರ ನಿರ್ದೇಶಕ ಡಾ. ವಿ.ಜಿ. ಸಿದ್ದರಾಜು ಉಪಸ್ಥಿತರಿರುವರು.

ಮಧ್ಯಾಹ್ನ 3 ಗಂಟೆಗೆ ಸುವರ್ಣ ಗಂಗೋತ್ರಿಯ ನಿಜಗುಣ ಸಭಾಂಗಣದಲ್ಲಿ ಸಮಾರೋಪ ಸಮಾರಂಭ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ಕಾಡಾನೆ ದಾಳಿಗೆ ವ್ಯಕ್ತಿ ಬಲಿ





ಹನೂರು, ಜು.10– ಕಾಡಾನೆ ದಾಳಿಗೆ ವ್ಯಕ್ತಿಯೋರ್ವ ಮೃತಪಟ್ಟಿರುವ ಘಟನೆ ಹನೂರು ತಾಲೂಕಿನ ಪಿಜಿ ಪಾಳ್ಯ ಗ್ರಾಮದಲ್ಲಿ ಜರುಗಿದೆ.

ತಾಲೂಕಿನ ಪಿಜಿ ಪಾಳ್ಯ ಗ್ರಾಮದ ಪ್ರಭುಸ್ವಾಮಿ (55) ಕಾಡಾನೆ ದಾಳಿಗೆ ಬಲಿಯಾದವರಾಗಿದ್ದು, ಪ್ರಭುಸ್ವಾಮಿ ಹಾಗೂ ಪುತ್ರ ಚಂದ್ರು ಮಲೆ ಮಹದೇಶ್ವರ ವನ್ಯಜೀವಿಧಾಮ ಪಿಜಿ ಪಾಳ್ಯ ಅರಣ್ಯ ವಲಯಕ್ಕೆ ಸೇರಿದ ಆಲದಕೆರೆ ಬಯಲು ಅರಣ್ಯ ಪ್ರದೇಶದ ಸಮೀಪ ಪೊರಕೆ ಕಡ್ಡಿ ಸಂಗ್ರಹಿಸಿ ವಾಪಸ್ ಗ್ರಾಮಕ್ಕೆ ತೆರಳುತ್ತಿದ್ದ ವೇಳೆ ಕಾಡಾನೆ ಏಕಾಏಕಿ ದಾಳಿ ನಡೆಸಿದ ಪರಿಣಾಮ ಪ್ರಭುಸ್ವಾಮಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಜೊತೆಯಲ್ಲಿದ್ದ ಪುತ್ರ ಚಂದ್ರು ಸಣ್ಣ ಪುಟ್ಟ ಗಾಯಗಳಿಂದ ಆನೆ ದಾಳಿಯಿಂದ ತಪ್ಪಿಸಿಕೊಂಡು ಪರಾರಿಯಾಗಿದ್ದಾರೆ.

ವಲಯ ಅರಣ್ಯ ಅಧಿಕಾರಿ ನದಾಫ್ ಹಾಗೂ ಅರಣ್ಯ ಇಲಾಖೆ ಸಿಬ್ಬಂದಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಮೃತದೇಹವನ್ನು ಹನೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಿ ಮೃತದೇಹವನ್ನು ವಾರಸುದಾರರಿಗೆ ಒಪ್ಪಿಸಿದ್ದಾರೆ.

ಈ ಸಂಬಂಧ ಹನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಡಾನೆ ದಾಳಿಯಿಂದ ಪಿ ಜಿ ಪಾಳ್ಯ ಗ್ರಾಮದ ಪ್ರಭುಸ್ವಾಮಿ ಎಂಬುವರು ಮೃತಪಟ್ಟಿರುವ ಬಗ್ಗೆ ಮಾಹಿತಿ ಪಡೆದುಕೊಂಡ ಮಾಜಿ ಶಾಸಕ ಆರ್ ನರೇಂದ್ರ ಹನೂರು ಪಟ್ಟಣದ ಪ್ರಾಥಮಿಕ ಆರೋಗ್ಯ ಕೇಂದ್ರದ ಶವಾಗಾರಕ್ಕೆ ಭೇಟಿ ನೀಡಿ ಅಂತಿಮ ದರ್ಶನ ಪಡೆದು ಕುಟುಂಬಸ್ಥರಿಗೆ ಸಾಂತ್ವನ ತಿಳಿಸಿದರು.

ಇದೇ ವೇಳೆ ಸ್ಥಳದಲ್ಲಿಯೇ ಇದ್ದ ವಲಯ ಅರಣ್ಯ ಅಧಿಕಾರಿ ನದಾಫ್‌ರವರಿಗೆ ಸರ್ಕಾರದಿಂದ ಬರಬೇಕಾಗಿರುವ ಪರಿಹಾರ ಹಣವನ್ನು ಆದಷ್ಟು ಶೀಘ್ರವೇ ಕೊಡಿಸುವಂತೆ ಸೂಚನೆ ನೀಡಿದರು. ಈ ವೇಳೆ ಪಟ್ಟಣ ಪಂಚಾಯಿತಿ ಸದಸ್ಯ ಗಿರೀಶ್, ಸೋಮಶೇಖರ್, ಹರೀಶ್, ಸುದೇಶ್, ಗ್ರಾಪಂ ಸದಸ್ಯ ಸಂತೋಷ್, ಮುಖಂಡರುಗಳಾದ ನಿಂಗಶೆಟ್ಟಿ, ವೆಂಕಟೇಶ್, ಮಾದೇಶ್, ರವಿ, ನಟರಾಜು ಸೇರಿದಂತೆ ಇನ್ನಿತರರು ಹಾಜರಿದ್ದರು.

ಮೈಸೂರು ಮಿತ್ರ
ಮಂಗಳವಾರ 11 ಜುಲೈ 2023

ಒಂದನೇ ಪುಟದಿಂದ

ಸಿಬಿಐ ತನಿಖೆ ಆರಂಭ

**GOVERNMENT ORDER NO. HD 39 COD 2022,
BENGALURU, DATED: 13/03/2023.**

Government of Karnataka hereby accords sanction to the Central Bureau of Investigation, under Section (6) of Delhi Special Police Establishment Act, 1946 for;

(i) Investigation by Central Bureau into alleged misappropriation of fees collected for the period 2009-10 to 2015-16 from Karnataka State Open University and its collaborative institutions spread all over India.

(ii) Identification and investigation by Central Bureau of Investigation, of persons involved in connection with the alleged misappropriation.

The concerned department officers/officials/others shall hand over data/information/records as and when required by the Central Bureau of Investigation and provide place, resources manpower and logistic support including camp office and vehicles to CBI, in case required, in connection with the case.

By Order & in the name of the
Governor of Karnataka
13/03/23
(MOHAMMED IBRAHIM)
Under Secretary to Government,
Home Department(Crimes).

ಬಂದಿರುವ ನೂರಾರು ಕೋಟಿ ರೂ. ದುರುಪಯೋಗವಾಗಿದೆ ಎಂಬುದನ್ನು ಕುಲಸಚಿವರು ಪತ್ರದಲ್ಲಿ ತಿಳಿಸಿರುವುದನ್ನು ನಮೂದಿಸಿದ್ದಾರೆ ಎಂದು ಹಬ್ಬು ಸರ್ಕಾರಕ್ಕೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ. ಅದರಂತೆ ಹಗರಣದ ತನಿಖೆಯನ್ನು ಸಿಬಿಐಗೆ ಒಪ್ಪಿಸುವಂತೆ ರಾಜ್ಯಪಾಲರು ಶಿಫಾರಸು ಮಾಡಿರುವುದರಿಂದ ತಕ್ಷಣವೇ ಕ್ರಮವಹಿಸಬೇಕೆಂದು ರಾಜ್ಯಪಾಲರ ಅಧೀನ ಕಾರ್ಯದರ್ಶಿಗಳು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದ್ದರು. ನಂತರ ರಾಜ್ಯ ಸರ್ಕಾರವು ಸಚಿವ ಸಂಪುಟದಲ್ಲಿ ವಿಷಯ ಪ್ರಸ್ತಾಪಿಸಿ, ಚರ್ಚಿಸಿ ನಿರ್ಧರಿಸಿದ ನಂತರ 2023ರ ಮಾರ್ಚ್ 13 ರಂದು ಹಗರಣದ ತನಿಖೆಯನ್ನು ಸಿಬಿಐಗೆ ಒಪ್ಪಿಸಿ ಆದೇಶ (HD 39 COD2022) ಹೊರಡಿಸಿದೆ.

1946ರ ಡೆಲ್ಲಿ ಸ್ಪೆಷಲ್ ಪೊಲೀಸ್ ಎಸ್ಟಾಬ್ಲಿಷ್‌ಮೆಂಟ್ ಕಾಯ್ದೆ ಸೆಕ್ಷನ್ (6) ರಡಿ ಸರ್ಕಾರವು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2009–10 ರಿಂದ 2015–16ರ ಅವಧಿಯಲ್ಲಿ ನಡೆದಿದೆ ಎನ್ನಲಾದ ಸುಮಾರು 250 ಕೋಟಿ ರೂ. ಅವ್ಯವಹಾರದ ತನಿಖೆಯನ್ನು ಸಿಬಿಐಗೆ ಒಪ್ಪಿಸುತ್ತಿರುವುದಾಗಿ ಆದೇಶದಲ್ಲಿ ರಾಜ್ಯ ಗೃಹ ಇಲಾಖೆ (ಅಪರಾಧಗಳು) ಅಧೀನ ಕಾರ್ಯದರ್ಶಿ ಮೊಹಮದ್ ಇಬ್ರಾಹಿಂ ಆದೇಶದಲ್ಲಿ ತಿಳಿಸಿದ್ದಾರೆ. ಸದರಿ ಅವಧಿಯಲ್ಲಿ ದೇಶಾದ್ಯಂತ ಸಹಭಾಗಿತ್ವ ಕೇಂದ್ರಗಳಿಂದ ಮುಕ್ತ ವಿವಿ ಸಂಗ್ರಹಿಸಿರುವ ಶುಲ್ಕದ ಹಣವನ್ನು ದುರ್ಬಳಕೆ ಮಾಡಿಕೊಂಡಿದ್ದಾರೆಂಬ ಗಂಭೀರ ಆರೋಪವಿರುವುದರಿಂದ ಸಿಬಿಐನಿಂದಲೇ ತನಿಖೆ ನಡೆಸಿ ಅವ್ಯವಹಾರದಲ್ಲಿ ಭಾಗಿಯಾಗಿರುವವರನ್ನು ಗುರ್ತಿಸಬೇಕು ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ. ತಕ್ಷಣವೇ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಸಿಬಿಐಗೆ ಡೇಟಾ, ದಾಖಲೆ ಪತ್ರ, ಮಾಹಿತಿಗಳನ್ನು ಹಸ್ತಾಂತರಿಸಿ ತನಿಖೆಗೆ ಸ್ಥಳಾವಕಾಶ, ಸಂಪನ್ಮೂಲಗಳ ಮ್ಯಾನ್‌ಪವರ್ ಕ್ಯಾಂಪ್ ಆಫೀಸ್, ವಾಹನದಂತೆ ಲಾಜಿಸ್ಟಿಕ್ ನೆರವು ನೀಡುವಂತೆಯೂ ಮೊಹಮದ್ ಇಬ್ರಾಹಿಂ ಆದೇಶದಲ್ಲಿ ತಿಳಿಸಿದ್ದಾರೆ.

ಅದರನ್ವಯ ಉನ್ನತ ಶಿಕ್ಷಣ ಇಲಾಖೆಯು ಅಗತ್ಯ ದಾಖಲೆಗಳನ್ನು ಸಿಬಿಐಗೆ ಒಪ್ಪಿಸಿದೆ. ಸಿಬಿಐ ಅಧಿಕಾರಿಗಳು ಈಗಾಗಲೇ ತನಿಖೆ ಕೈಗೆತ್ತಿಕೊಂಡಿದ್ದು, ಕಳೆದ 15 ದಿನಗಳ ಹಿಂದೆಯೇ ಮುಕ್ತ ವಿವಿ ಕುಲಪತಿ, ಕುಲಸಚಿವರು, ಪರೀಕ್ಷಾಂಗ ಕುಲಸಚಿವರು, ಲೆಕ್ಕಾಧಿಕಾರಿಗಳು, ಹಣಕಾಸು ಅಧಿಕಾರಿಗಳು, ಲೆಕ್ಕಪರಿಶೋಧಕರು, ಬ್ಯಾಂಕ್ ಶಾಖಾ ಮ್ಯಾನೇಜರ್‌ಗಳಿಗೆ ನೋಟೀಸ್ ಜಾರಿ ಮಾಡಿದ್ದು, 2009–10ರಿಂದ 2015–16ನೇ ಸಾಲಿನ ಸಹಭಾಗಿತ್ವ ಸಂಸ್ಥೆಗಳ ಶುಲ್ಕ ಸಂಬಂಧ ಅಗತ್ಯ ಮಾಹಿತಿ ಮತ್ತು ಪೂರಕ ದಾಖಲೆ ಒದಗಿಸುವಂತೆ ಕೇಳಿದ್ದಾರೆ.

ಜೊತೆಗೆ ಕೆಎಸ್‌ಓಯು ಜೊತೆ ಸಹಭಾಗಿತ್ವ ಮಾಡಿಕೊಂಡಿದ್ದ ಸಂಸ್ಥೆಗಳ ಮುಖ್ಯಸ್ಥರಿಗೂ ನೋಟೀಸ್ ಜಾರಿ ಮಾಡಿರುವ ಸಿಬಿಐ ಅಧಿಕಾರಿಗಳು, ವಿದ್ಯಾರ್ಥಿಗಳಿಂದ ವಿವಿಧ ಕೋರ್ಸುಗಳಿಗಾಗಿ ಸಂಗ್ರಹಿಸಿದ್ದ ಶುಲ್ಕ, ಪರೀಕ್ಷಾ ಶುಲ್ಕ ಆ ಅವಧಿಯಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿತ್ತು. ಪರೀಕ್ಷೆ ಪಡೆದವರ ಸಂಖ್ಯೆ, ಕೋರ್ಸ್ ಪಡೆದವರ ಸಂಖ್ಯೆ, ಕೋರ್ಸ್‌ವಾರು, ವಿಶ್ವವಿದ್ಯಾನಿಲಯಕ್ಕೆ ಶುಲ್ಕದ ಸ್ವರೂಪ (ಡಿಡಿ ಚೆಕ್ ಸಂಖ್ಯೆಗಳ ಸಮೇತ) ಇತ್ಯಾದಿ ಮಾಹಿತಿ ನೀಡುವಂತೆಯೂ ತಿಳಿಸಲಾಗಿದೆ.

ಹಗರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಅಗತ್ಯ ದಾಖಲೆ ಕಡತಗಳನ್ನು ವಶಪಡಿಸಿಕೊಂಡಿದ್ದು, ಮಾಹಿತಿಗಳನ್ನೂ ಕಲೆ ಹಾಕುತ್ತಿರುವ ಸಿಬಿಐ ಅಧಿಕಾರಿಗಳು, ಸದ್ಯದಲ್ಲೇ ಮೈಸೂರಿಗೆ ಬಂದು ಆ ಅವಧಿಯಲ್ಲಿ ಸೇವೆ ಸಲ್ಲಿಸುತ್ತಿದ್ದ ಅಧಿಕಾರಿಗಳು, ಸಿಬ್ಬಂದಿಗಳನ್ನು ವಿಚಾರಣೆಗೊಳಪಡಿಸುವ ಸಾಧ್ಯತೆ ಇದೆ.

ಅಕ್ಕಿಯ ಹಣ ಫಲಾನುಭವಿಗಳ ಖಾತೆಗೆ ಜಮಾ

4.42 ಕೋಟಿ ಜನರಿಗೆ ಇದರ ಲಾಭ ದೊರೆಯಲಿದೆ. ಅನ್ನಭಾಗ್ಯ ಯೋಜನೆ ಫಲಾನುಭವಿಗಳಿಗೆ ನೇರ ನಗದು ವರ್ಗಾಯಿಸುವ ಪ್ರಕ್ರಿಯೆ ನಂತರ ಮಾತನಾಡಿದ ನಾಯಕರು, ಹಣ ನೀಡುವುದು ತಾತ್ಕಾಲಿಕ. ನಮಗೆ ಅಗತ್ಯವಿರುವ ಹೆಚ್ಚುವರಿ ಆಹಾರಧಾನ್ಯ ದೊರೆತ ನಂತರ ಅಕ್ಕಿ, ರಾಗಿ, ಗೋಧಿ, ಜೋಳ ನೀಡುವುದಾಗಿ ತಿಳಿಸಿದರು.

ನಾವು ನೀಡಿರುವ ಭರವಸೆಗಳಿಗೆ ಮುಂಗಡ ಪತ್ರದಲ್ಲಿ ಹಣ ಒದಗಿಸಿ ನುಡಿದಂತೆ ನಡೆದಿದ್ದೇವೆ. ಈಗಾಗಲೇ ಮೂರು ಯೋಜನೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸಿದೆ.

ಉಳಿದ ಮನೆ ಯಜಮಾನಿಗೆ ಮಾಸಿಕ 2 ಸಾವಿರ ರೂ. ನೀಡುವ ಗೃಹಲಕ್ಷ್ಮಿ ಯೋಜನೆ ಆ.17ರಿಂದ ಜಾರಿಗೊಳ್ಳಲಿದೆ. ಇನ್ನು ನಿರುದ್ಯೋಗಿ ಪದವೀಧರರಿಗೆ ಮಾಸಿಕ ಮೂರು ಸಾವಿರ ರೂ. ನೀಡುವ ಯುವ ನಿಧಿ ಯೋಜನೆ ನವೆಂಬರ್–ಡಿಸೆಂಬರ್‌ನಲ್ಲಿ ಜಾರಿಗೆ ಬರಲಿದೆ ಎಂದರು. ಚುನಾವಣೆಗೂ ಮುನ್ನ ಗ್ಯಾರಂಟಿಗಳ ಜತೆಗೆ ನೀಡಿದ್ದ ಇತರ ಭರವಸೆಗಳಲ್ಲಿ ಬಹುಪಾಲು ಮುಂಗಡಪತ್ರದಲ್ಲೇ ಪ್ರಸ್ತಾಪಿಸಿದ್ದೇವೆ ಎಂದು ಸಿದ್ದರಾಮಯ್ಯ ತಿಳಿಸಿದರು. ಬಿಪಿಎಲ್ ಮತ್ತು ಅಂತ್ಯೋದಯ ಅನ್ನಯೋಜನೆ ಕಾರ್ಡುದಾರರ ಪೈಕಿ ಶೇ.99ರಷ್ಟು ಪಡಿತರ ಚೀಟಿಗಳು ಆಧಾರ್‌ನೊಂದಿಗೆ ಜೋಡಣೆಗೊಂಡಿವೆ. ಇದರಲ್ಲಿ ಶೇ.82ರಷ್ಟು, ಅಂದರೆ, 1.06 ಕೋಟಿ ಕಾರ್ಡುಗಳು ಬ್ಯಾಂಕ್ ಖಾತೆ ಜತೆ ಜೋಡಣೆ ಆಗಿವೆ.

ಅಂಥವರಿಗೆ ಇಂದಿನಿಂದಲೇ ನಿಗದಿಪಡಿಸಿದ ಹಣ ಸಂದಾಯವಾಗಲಿದೆ. ಇತರರು ಬ್ಯಾಂಕ್ ಖಾತೆ ಮಾಹಿತಿ ನೀಡಿ ಜೋಡಿಸಿದ ಬಳಿಕ ಅಂಥವರಿಗೂ ಹಣ ಸಂದಾಯ ಮಾಡಲಾಗುವುದು ಎಂದರು. ಕಳೆದ ಮೂರು ತಿಂಗಳು ಸತತವಾಗಿ ಯಾರು ಈ ಯೋಜನೆಯಡಿ ಅಕ್ಕಿ ಪಡೆದಿಲ್ಲವೋ ಅಂತಹವರ ಬಗ್ಗೆ ಪರಿಶೀಲನೆ ನಡೆಸಿ ಯೋಜನೆ ಮುಂದುವರೆಸಲಾಗುವುದು ಎಂದು ಹೇಳಿದರು. ಮೈಸೂರು ಮತ್ತು ಕೋಲಾರ ಜಿಲ್ಲೆಗಳ ಫಲಾನುಭವಿಗಳಿಗೆ ಮೊದಲಿಗೆ ಡಿಬಿಟಿ ಮೂಲಕ ನೇರ ಹಣ ವರ್ಗಾವಣೆ ಮಾಡಲಾಗಿದೆ. ನಾಳೆಯಿಂದ ಪ್ರತಿದಿನ ಹಂತ ಹಂತವಾಗಿ ರಾಜ್ಯದ ಸರ್ವ ಫಲಾನುಭವಿಗಳಿಗೂ ಹಣ ವರ್ಗಾವಣೆ ಆಗಲಿದೆ. ನಿತ್ಯ ನಾಲ್ಕೈದು ಜಿಲ್ಲೆಗಳ ಫಲಾನುಭವಿಗೆ ಹಣ ವರ್ಗಾವಣೆ ಆಗಲಿದ್ದು, ಈ ತಿಂಗಳ ಅಂತ್ಯದೊಳಗೆ ಎಲ್ಲ ಫಲಾನುಭವಿಗಳ ಖಾತೆಗೂ ಹಣ ವರ್ಗಾವಣೆಯಾಗಲಿ ಎಂದು ಮುಖ್ಯಮಂತ್ರಿ ತಿಳಿಸಿದರು.

23 ಲಕ್ಷ ಯೋಜನೆ ಫಲಾನುಭವಿಗಳು

ಹಲವು ಹಂತದ ಪ್ರಕ್ರಿಯೆ ಬಳಿಕ ಡಿಡಿಓಗಳು ಫಲಾನುಭವಿಗಳ ಕಡತಗಳಿಗೆ ಅನುಮೋದನೆ ನೀಡಿ, ಕೆ–2 ಸಂಸ್ಥೆ ಮುಖಾಂತರ ಮಂಜೂರಾತಿ ಆದೇಶ ಮತ್ತು ಬಿಲ್ಲನ್ನು ಸೃಜಿಸಿ ಜಿಲ್ಲಾಧಿಕಾರಿಗಳ ಅನುಮೋದನೆಗೆ ಕಳುಹಿಸುತ್ತಾರೆ. ಜಿಲ್ಲಾಧಿಕಾರಿಗಳು ಅನುಮೋದಿಸಿದ ಕಡತಗಳನ್ನು ಕೆ–2 ಯುಟಿಆರ್ ಸಂಖ್ಯೆ ಸೃಜನೆಗಾಗಿ ಆರ್‌ಬಿಐಗೆ ಕಳುಹಿಸುತ್ತಾರೆ. ಆರ್‌ಬಿಐನಿಂದ ಯುಟಿಆರ್ ಸಂಖ್ಯೆ ಸೃಜನೆಯಾಗಿ, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ(ಎಸ್‌ಬಿಐ) ಮುಖಾಂತರ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣವು ವರ್ಗಾವಣೆಯಾಗಲಿದೆ.

ಶಿವಪ್ಪ ಸ್ವಾಮೀಜಿ ಆತ್ಮಹತ್ಯೆ

ಶಿವಪ್ಪ ಸ್ವಾಮೀಜಿ ತೀವ್ರ ಆರೋಗ್ಯ ಸಮಸ್ಯೆಯಿಂದ ಜಿಗುಪ್ಸೆಗೊಂಡು ತಿ.ನರಸೀಪುರ ತಾಲೂಕಿನ ಮುಡುಕುತೊರೆ ಬಳಿ ಕಾವೇರಿ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಸೋಮವಾರ ಮುಡುಕುತೊರೆ ಕಾವೇರಿ ನದಿಯಲ್ಲಿ ಶವ ತೇಲುತ್ತಿದ್ದನ್ನು ಕಂಡ ಸಾರ್ವಜನಿಕರು ತಲಕಾಡು ಪೊಲೀಸ್ ಠಾಣೆಗೆ ವಿಷಯ ಮುಟ್ಟಿಸಿದ್ದಾರೆ. ಈ ವೇಳೆ ಸ್ಥಳಕ್ಕೆ ಭೇಟಿ ನೀಡಿದ ತಲಕಾಡು ಪೊಲೀಸರು ನದಿಯಿಂದ ಶವವನ್ನು ಹೊರತೆಗೆದು ಪರಿಶೀಲನೆ ನಡೆಸಿ, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ರವಾನಿಸಿದ್ದಾರೆ. ಈ ಸಂಬಂಧ ತಲಕಾಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕವಲಂದೆ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಾಗಿದೆ. ಮೂಲತಃ ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲೂಕಿನ ಕಲಿಯೂರು ಗ್ರಾಮದ ಶಿವಪ್ಪ ಸ್ವಾಮೀಜಿಗಳು ದೇವನೂರು ಶ್ರೀಕ್ಷೇತ್ರದಲ್ಲಿ ಕಳೆದ 4 ದಶಕಗಳಿಂದ ಭಕ್ತರಿಂದ ಧವಸ ಧಾನ್ಯ ಸಂಗ್ರಹಣೆ ಮಾಡುವ ಕಾಯಕದಲ್ಲಿ ಕಾಯಾ, ವಾಚಾ, ಮನಸಾ ತಮ್ಮನ್ನು ಸಮರ್ಪಿಸಿಕೊಂಡಿದ್ದರು ಮತ್ತು ದೇವನೂರು ಮಠದ ಶ್ರೀಮಹಾಂತ ಸ್ವಾಮೀಜಿಯವರ ಪ್ರೀತಿಗೆ ಪಾತ್ರರಾಗಿದ್ದರು. ಅಲ್ಲದೇ ಮಠಕ್ಕೆ ಬರುವ ಭಕ್ತರ ಜೊತೆಗೆ ಉತ್ತಮ ಒಡನಾಟ ಹೊಂದಿದ್ದರು ಎನ್ನಲಾಗಿದೆ.

ಮೈಸೂರು ಅರಮನೆಯಲ್ಲಿ ಆಡಿಯೋ, ವರ್ಚುವಲ್ ಗೈಡ್ ಭರಾಟೆ

ಪ್ರವಾಸಿ ಮಾರ್ಗದರ್ಶಕರಿಗೆ ಸಂಕಷ್ಟ ಕಾಲ



ಮೈಸೂರು, ಜು.10(ಬಿಎಲ್‌ಯು)– ವಿಶ್ವ ವಿಖ್ಯಾತ ಮೈಸೂರು ಅರಮನೆ ವೀಕ್ಷಣೆಗೆ ಬರುವ ದೇಶವಿದೇಶದ ಪ್ರವಾಸಿಗರಿಗೆ ಆಡಿಯೋ ಹಾಗೂ ವರ್ಚುವಲ್ ಗೈಡ್ ಉಪಯುಕ್ತವಾಗಿದೆ. ಮೈಸೂರು ರಾಜ ಮನೆತನದ ಇತಿಹಾಸ, ಅರಮನೆಯ ಗತವೈಭವ ಸೇರಿದಂತೆ ಬಹಳಷ್ಟು ಮಾಹಿತಿಗಳು ಪ್ರವಾಸಿಗರಿಗೆ ಇದರಿಂದ ಸುಲಭವಾಗಿ ದೊರೆಯುತ್ತಿದೆ. ಆದರೆ ಮೈಸೂರು ಅರಮನೆಯ ಇತಿಹಾಸವನ್ನು ಹೇಳುತ್ತಾ ಜೀವನ ಸಾಗಿಸುತ್ತಿದ್ದ ಗೈಡ್‌ಗಳು ಅಥವಾ ಪ್ರವಾಸಿ ಮಾರ್ಗದರ್ಶಿಗಳ ಹೊಟ್ಟೆಪಾಡಿಗೆ ಆಡಿಯೋ ಹಾಗೂ ವರ್ಚುವಲ್ ಗೈಡ್ ಕುತ್ತು ತಂದಿದೆ.

ವಿಶ್ವದ ತಾಂತ್ರಿಕತೆಯ ಹೊಸ ಹೊಸ ಆವಿಷ್ಕಾರಗಳಿಂದ ಮಾನವ ಆಧರಿತ ಕೆಲಸ ಕಡಿಮೆ ಆಗುತ್ತಿವೆ. ಹತ್ತು ಜನರು ಮಾಡುವ ಕೆಲಸವನ್ನು ಒಂದೇ ಒಂದು ಯಂತ್ರ ಮಾಡುತ್ತಿದೆ. ಇದರಿಂದ ಉದ್ಯೋಗಿಗಳ ಸಂಖ್ಯೆ ಕಡಿಮೆ ಆಗುತ್ತಿದ್ದು, ಬಹಳಷ್ಟು ಜನರು ಉದ್ಯೋಗದಿಂದ ವಂಚಿತರಾಗುತ್ತಿದ್ದಾರೆ. ಮೈಸೂರು ಅರಮನೆಯ ಗೈಡ್‌ಗಳ ಪರಿಸ್ಥಿತಿ ಕೂಡ ಇದೆ ಆಗಿದೆ. ಮೈಸೂರು ಅರಮನೆ ಮಂಡಳಿ ಪ್ರವಾಸಿಗರಿಗೆ ಸೌಲಭ್ಯ ಕಲ್ಪಿಸಿರುವ ಆಡಿಯೋ ಗೈಡ್ ಹಾಗೂ ವರ್ಚುವಲ್ ಗೈಡ್‌ನಿಂದ ಅಲ್ಲಿದ್ದ ಪ್ರವಾಸಿ ಮಾರ್ಗದರ್ಶಕರು ಅಥವಾ ಗೈಡ್‌ಗಳಿಗೆ ಈಗ ಹೆಚ್ಚು ಕೆಲಸವೇ ಇಲ್ಲದಂತಾಗಿದೆ.

ವಿಶ್ವ ವಿಖ್ಯಾತ ಮೈಸೂರು ಅರಮನೆಯ ಇತಿಹಾಸ ಹಾಗೂ ರಾಜರ ಕಾಲದ ಗತ ವೈಭವವನ್ನು ತಂತ್ರಜ್ಞಾನದ ಮೂಲಕ ಪ್ರವಾಸಿಗರಿಗೆ ತಿಳಿಸಲು ಮೈಸೂರು ಅರಮನೆ ಮಂಡಳಿ, ಪ್ರವಾಸಿಗರಿಗೆ ಆಡಿಯೋ ಹಾಗೂ ವರ್ಚುವಲ್ ಗೈಡ್ ಸೌಲಭ್ಯ ಕಲ್ಪಿಸಿದೆ.

ಮೈಸೂರು ಅರಮನೆಗೆ ಬರುವ ದೇಶ–ವಿದೇಶದ ಪ್ರವಾಸಿಗರು ಅಲ್ಲಿನ ಇತಿಹಾಸವನ್ನು ತಿಳಿಯಲು ಈ ಮೊದಲು ಗೈಡ್‌ಗಳನ್ನೇ ಅವಲಂಬಿಸಬೇಕಿತ್ತು. ಅವರ ಮೂಲಕ ಮಾಹಿತಿ ಪಡೆಯುತ್ತಿದ್ದರು. ಆದರೆ ಈಗ ಮೊಬೈಲ್‌ನಲ್ಲಿ ಪಿನಾಕಿನಿ ಟ್ರಾವೆಲ್ ಆಡಿಯೋ ಗೈಡ್‌ಅನ್ನು ಗೂಗಲ್ ಪ್ಲೇಸ್ಟೋರ್‌ನಿಂದ ಡೌನ್‌ಲೋಡ್ ಮಾಡಿಕೊಂಡು, ತರುವಾಯ ಇಯರ್ ಫೋನ್ ಮೂಲಕ ಅರಮನೆ ಒಳಗೆ ಸಾಗುತ್ತಿದ್ದರೆ ನೀವು ಕೇಳುವ ಎಲ್ಲಾ ಮಾಹಿತಿಗಳನ್ನು ಆಡಿಯೋ ಗೈಡ್ ವಿವರವಾಗಿ ತಿಳಿಸುತ್ತದೆ. ಪಿನಾಕಿನಿ ಸಂಸ್ಥೆಯು ಅರಮನೆ ಮಂಡಳಿಗೆ ಉಚಿತವಾಗಿ ಈ

ಪ್ರವಾಸಿಗರಿಗೆ ಪೂರ್ಣ ಮಾಹಿತಿ ಲಭ್ಯವಿಲ್ಲ



ಆಡಿಯೋ ಹಾಗೂ ವರ್ಚುವಲ್ ಗೈಡ್‌ನಿಂದ ನಮಗೆ ಶೇಕಡಾ 25 ರಷ್ಟು ಬೇಡಿಕೆ ಕಡಿಮೆಯಾಗಿದೆ. ಇದರಿಂದ ಸಹಜವಾಗಿಯೇ ಆದಾಯ ಕೂಡ ಕಡಿಮೆಯಾಗಿದೆ ಎಂದು ಮೈಸೂರು ಅರಮನೆ ಪ್ರವಾಸಿ ಮಾರ್ಗದರ್ಶಕ ರಮೇಶ್ ಅಸಮಾಧಾನ ವ್ಯಕ್ತಪಡಿಸಿದರು.

ಮೈಸೂರು ಅರಮನೆಗೆ ಬರುವ ವಿದೇಶಿಗರು ಸೇರಿದಂತೆ ಹಲವರು ಹೆಚ್ಚಾಗಿ ಆಡಿಯೋ ಗೈಡ್ ಹಾಗೂ ವರ್ಚುವಲ್ ಗೈಡ್ ಬಳಸುತ್ತಾರೆ. ಆದರೆ ಇನ್ನು ಹಲವರು ಮೈಸೂರು ಅರಮನೆಯ ಇತಿಹಾಸ ತಿಳಿಯಲು ಪ್ರವಾಸಿ ಮಾರ್ಗದರ್ಶಿಗಳನ್ನೆ ಅವಲಂಬಿಸಿದ್ದಾರೆ.

ಆಡಿಯೋ ಹಾಗೂ ವರ್ಚುವಲ್ ಗೈಡ್‌ನಲ್ಲಿರುವ ಮಾಹಿತಿ ಮಾತ್ರ ಸಿಗುತ್ತದೆ. ಅಲ್ಲಿ ಸಂವಾದಕ್ಕೆ ಆಸ್ಪದವೇ ಇರುವುದಿಲ್ಲ ಪ್ರವಾಸಿಗರಲ್ಲಿ ಏನಾದರೂ ಅನುಮಾನಗಳಿದ್ದರೆ ಪರಿಹರಿಸಲು ಅವಕಾಶ ಇರುವುದಿಲ್ಲ. ಜೊತೆಗೆ ಹೆಚ್ಚಿನ ಮಾಹಿತಿ ಬೇಕಿದ್ದರೆ ಅದೂ ಸಿಗುವುದಿಲ್ಲ.

ಆದರೆ ಪ್ರವಾಸಿ ಮಾರ್ಗದರ್ಶಿಗಳಾದ ನಾವು ಮೈಸೂರು ಅರಮನೆಯ ಇತಿಹಾಸ, ರಾಜರ ಕಾಲದ ಗತವೈಭವ ಸೇರಿದಂತೆ ಬಹಳಷ್ಟು ವಿಚಾರಗಳನ್ನು ವಿವರವಾಗಿ ತಿಳಿಸುತ್ತೇವೆ. ಪ್ರವಾಸಿಗರ ಯಾವುದೇ ಪ್ರಶ್ನೆಗಳಿದ್ದರೂ ಅದಕ್ಕೆ ಉತ್ತರ ಹೇಳಿ ಅವರ ಯಾವುದೇ ಅನುಮಾನಗಳಿದ್ದರೂ ಅದನ್ನು ಪರಿಹರಿಸುತ್ತೇವೆ. ಬಹಳ ಮುಖ್ಯವಾಗಿ ವಯಸ್ಸಾದ ಪ್ರವಾಸಿಗರು ಬಂದರೆ ಅವರನ್ನು ಜೋಪಾನವಾಗಿ ಕರೆದೊಯ್ದು ಮಾಹಿತಿ ನೀಡಿ ಜೋಪಾನವಾಗಿ ಕರೆದುಕೊಂಡು ಬರುತ್ತೇವೆ ಎಂದು ರಮೇಶ್ ತಿಳಿಸಿದರು.

ಸೌಲಭ್ಯ ಕಲ್ಪಿಸಿದೆ. ಅರಮನೆ ಪ್ರವೇಶ ದ್ವಾರದಿಂದ ನಿರ್ಗಮನದ ಸ್ಥಳದ ತನಕ 20 ವಿವಿಧ ಸ್ಥಳಗಳ ಮಾಹಿತಿಯನ್ನು ಆಡಿಯೋ ಗೈಡ್ ನೀಡಲಿದೆ. ಉದಾಹರಣೆಗೆ ದರ್ಬಾರ್ ಹಾಲ್ ಪ್ರವೇಶಿಸಿ ಅಲ್ಲಿನ ಫಲಕದಲ್ಲಿರುವ ಸಂಖ್ಯೆಯನ್ನು ಪಿನಾಕಿನಿ ಆಡಿಯೋ ಗೈಡ್‌ನಲ್ಲಿ ನಮೂದಿಸಿದರೆ ಸಾಕು ದರ್ಬಾರ್ ಹಾಲ್ ವಿವರ ಆಡಿಯೋ ಮೂಲಕ ಬಿತ್ತರಗೊಳ್ಳುತ್ತದೆ.

ವರ್ಚುವಲ್ ಗೈಡ್ ಮೂಲಕವೂ ಮೈಸೂರು ಅರಮನೆಯ ಇತಿಹಾಸ ಹಾಗೂ ರಾಜರ ಕಾಲದ ಗತವೈಭವವನ್ನು ವಿವರವಾಗಿ ತಿಳಿಯಬಹುದು. ಇಲ್ಲಿ ಆಡಿಯೋ ಜೊತೆಗೆ ವಿಡಿಯೋ ಮೂಲಕವೂ ಪ್ರವಾಸಿಗರಿಗೆ ಉಪಯುಕ್ತ ಮಾಹಿತಿ ದೊರೆಯಲಿದೆ. ಮೈಸೂರು ಅರಮನೆಯ ವೆಬ್‌ಸೈಟ್ ತೆರೆದರೆ ಅಲ್ಲಿ ಮೈಸೂರು ಪ್ಯಾಲೆಸ್ ವರ್ಚುವಲ್ ವಿಡಿಯೋ ಎಂದು ನಮೂದಿಸಿದರೆ ಸಾಕು 360 ಡಿಗ್ರಿಯಲ್ಲಿ ಮೈಸೂರು ಅರಮನೆಯ ಇತಿಹಾಸ ದೃಶ್ಯದ ಮೂಲಕ ಅನಾವರಣಗೊಳ್ಳಲಿದೆ.

ಮೈಸೂರು ಅರಮನೆಯ ಪ್ರವೇಶ ದ್ವಾರ ಸೇರಿದಂತೆ ಬಹಳಷ್ಟು ಸ್ಥಳದಲ್ಲಿ ಆಡಿಯೋ ಗೈಡ್ ಹಾಗೂ ವರ್ಚುವಲ್ ಗೈಡ್ ಬಗ್ಗೆ ಫಲಕಗಳ ಮೂಲಕ ಮಾಹಿತಿ ನೀಡಲಾಗಿದೆ. ಅಲ್ಲದೆ ಮೈಸೂರು ಅರಮನೆಯ ವೆಬ್‌ಸೈಟ್ ವಿಳಾಸವನ್ನು ಕೂಡ ನೀಡಲಾಗಿದೆ.

ಇದರಿಂದ ಮೈಸೂರು ಅರಮನೆಗೆ ಬರುವ ಬಹಳಷ್ಟು ಪ್ರವಾಸಿಗರು ಈಗ ಹೆಚ್ಚಾಗಿ ಗೈಡ್‌ಗಳನ್ನು ಅವಲಂಬಿಸಿಲ್ಲ. ಬದಲಿಗೆ ಆಡಿಯೋ ಗೈಡ್ ಹಾಗೂ ವರ್ಚುವಲ್ ಗೈಡ್‌ಗಳ ಮೊರೆ ಹೋಗುತ್ತಿದ್ದಾರೆ. ಈಗಂತೂ ಪ್ರತಿಯೊಬ್ಬರ ಬಳಿ ಮೊಬೈಲ್ ಇದ್ದೆ ಇರುತ್ತದೆ. ಈ ಹಿನ್ನೆಲೆ ಮೈಸೂರು ಅರಮನೆಯ ಇತಿಹಾಸವನ್ನು ಮೊಬೈಲ್ ಮೂಲಕ ಅರಿಯುತ್ತಿದ್ದಾರೆ.

ಇದರಿಂದ ಸಹಜವಾಗಿ ಗೈಡ್‌ಗಳಿಗೆ ಇದ್ದ ಬೇಡಿಕೆ ಈಗ ಸ್ವಲ್ಪ ಮಟ್ಟಿಗೆ ತಗ್ಗಿದೆ. ಅವರ ಆದಾಯ ಕೂಡ ಕಡಿಮೆ ಆಗಿದೆ. ಮೈಸೂರು ಅರಮನೆಯಲ್ಲಿ 20 ಗೈಡ್‌ಗಳಿದ್ದು, ಮೊದಲಿದ್ದಷ್ಟು ಆದಾಯ ಈಗ ಇಲ್ಲದಂತಾಗಿದೆ.


ಪ್ರವಾಸಿಗರಿಗೆ ಆಡಿಯೋ ಗೈಡ್ ಹಾಗೂ ವರ್ಚುವಲ್ ಗೈಡ್ ಸೌಲಭ್ಯ ಕಲ್ಪಿಸಿರುವುದು ತಪ್ಪು ಎಂದು ಹೇಳುವುದಿಲ್ಲ. ತಂತ್ರಜ್ಞಾನ ಬೆಳೆದಂತೆ ಇಂತಹ ಸವಾಲುಗಳು ನಮಗಷ್ಟೆ ಅಲ್ಲದೆ ಎಲ್ಲರಿಗೂ ಎದುರಾಗುತ್ತದೆ. ಅದನ್ನು ಎದುರಿಸಿ ನಾವು ಮುನ್ನಡೆಯಬೇಕು ಹಾಗೂ ಬದುಕಬೇಕು. ಪ್ರವಾಸಿ ಮಾರ್ಗದರ್ಶಕರಿಗೆ ಮೈಸೂರು ಅರಮನೆ ಮಂಡಳಿ 300 ರಿಂದ 400 ರೂಪಾಯಿ ಶುಲ್ಕ ನಿಗದಿ ಮಾಡಿದೆ. ಮೊದಲು ಬರುತ್ತಿದ್ದ ಆದಾಯ ಈಗ ಸ್ವಲ್ಪ ಮಟ್ಟಿಗೆ ಕಡಿಮೆ ಆಗಿದೆ. ಆದರೂ ಹೇಗೋ ಜೀವನ ಮಾಡಿಕೊಂಡು ಹೋಗುತ್ತಿದ್ದೇವೆ ಎಂದು ಪ್ರವಾಸಿ ಮಾರ್ಗದರ್ಶಕರು ಹೇಳುತ್ತಾರೆ.

ಕುವೆಂಪುನಗರದಲ್ಲಿ ಡಾ.ಶಿವಕುಮಾರ ಸ್ವಾಮೀಜಿಯವರ ಸುಂದರ ವೃತ್ತ ನಿರ್ಮಾಣ ಕಾಮಗಾರಿ ಆರಂಭ

ಪಾಲಿಕೆಯಿಂದ 1.5 ಕೋಟಿ ರೂ. ವೆಚ್ಚದಲ್ಲಿ ವೃತ್ತದ ಸೌಂದರ್ಯೀಕರಣ



ಪೆಟ್ರೋಲ್ ಬಂಕ್ ಎದುರಿನ ಡಾ.ಶಿವಕುಮಾರ ಸ್ವಾಮೀಜಿ ವೃತ್ತ ಅಭಿವೃದ್ಧಿ ಕಾಮಗಾರಿ.



ಉದ್ದೇಶಿತ ವೃತ್ತದ ವಿನ್ಯಾಸ

ಮೈಸೂರು, ಜು.10(ಆರ್‌ಕೆ)– ಮೈಸೂರಿನ ಕುವೆಂಪುನಗರ ವಿಶ್ವಮಾನವ ಜೋಡಿ ರಸ್ತೆಯಲ್ಲಿರುವ ಸಿದ್ದಗಂಗಾ ವೃತ್ತದ ಡಾ. ಶಿವಕುಮಾರ ಸ್ವಾಮೀಜಿಯವರ ಸರ್ಕಲ್ ಸೌಂದರ್ಯೀಕರಣ ಮತ್ತು ಅಭಿವೃದ್ಧಿ ಕಾಮಗಾರಿ ಆರಂಭವಾಗಿದೆ.

ಐದು ರಸ್ತೆಕೂಡುವ ಜಗದಾಂಬ ಪೆಟ್ರೋಲ್ ಬಂಕ್ ಎದುರಿನ ಈ ಸರ್ಕಲ್‌ಗೆ ಡಾ.ಶಿವಕುಮಾರ ಸ್ವಾಮೀಜಿ ಅವರ ಹೆಸರು ನಾಮಕರಣ ಮಾಡಲಾಗಿದ್ದು, ಇದೀಗ 1.5 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಮುಂದಾಗಿದೆ. ಶ್ರೀಗಳು ಸಿದ್ದಗಂಗಾ ಮಠದಲ್ಲಿ ಅಪರೂಪದ ಅನ್ನ–ಅಕ್ಷರ ದಾಸೋಹ ಹಾಗೂ ಈಗಲೂ ಇಂತಹ ಅನನ್ಯ ಸೇವೆ ಮುಂದುವರೆದಿರುವುದನ್ನು ಸಾಕ್ಷೀಕರಿಸಲು ಸೇವೆಯ ಪ್ರತಿರೂಪವನ್ನೇ ಪ್ರತಿಮೆಯಾಗಿ ಸ್ಥಾಪಿಸಲುದ್ದೇಶಿಸಲಾಗಿದೆ.

ಈ ಹಿಂದೆ ಮೇಯರ್ ಆಗಿದ್ದ ಸುನಂದಾ ಪಾಲನೇತ್ರ ಅವರು ಮಂಜೂರು ಮಾಡಿಸಿದ್ದ 24 ಕೋಟಿ ರೂ. ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ 1.5 ಕೋಟಿ ರೂ.ಗಳನ್ನು ಈ ಸರ್ಕಲ್ ಸೌಂದರ್ಯೀಕರಣ ಮತ್ತು ಅಭಿವೃದ್ಧಿಗೆ ಬಳಸಲಾಗುತ್ತಿದೆ ಎಂದು ಮೇಯರ್ ಶಿವಕುಮಾರ 'ಮೈಸೂರು ಮಿತ್ರ' ನಿಗೆ ತಿಳಿಸಿದ್ದಾರೆ.

ಪಾಲಿಕೆಯಿಂದ ಅಂದಾಜು ತಯಾರಿಸಿ ಟೆಂಡರ್ ಮೂಲಕ ವೆಂಕಟಸುಬ್ಬಯ್ಯ ಎಂಬ ಗುತ್ತಿಗೆದಾರರಿಗೆ ಕಾಮಗಾರಿ ವಹಿಸಿದ್ದು, ವಾರದ ಹಿಂದಷ್ಟೇ ಕಾರ್ಯ ಆರಂಭವಾಗಿದೆ. ಸರ್ಕಲ್ ಅಭಿವೃದ್ಧಿಪಡಿಸಿ ಮಧ್ಯದಲ್ಲಿ ಅನ್ನ ಮತ್ತು ಅಕ್ಷರ ದಾಸೋಹ ಬಿಂಬಿಸುವ ಪ್ರತಿರೂಪ ಸ್ಥಾಪಿಸಲಾಗುವುದು ಎಂದು ತಿಳಿಸಿದ್ದಾರೆ.

ವಾಹನಗಳಿಗೆ ಫ್ರೀ ಲೆಫ್ಟ್‌ಗೆ ಅನುವಾಗುವಂತೆ ಸರ್ಕಲ್ ಅಗಲೀಕರಣ ಮಾಡುವುದು, ಅನಿಕೇತನ ರಸ್ತೆ, ವಿಶ್ವಮಾನವ ಜೋಡಿ ರಸ್ತೆ, ಸೋಮಾನಿ ಕಾಲೇಜು ಕಡೆಗೆ ಹೋಗುವ ರಸ್ತೆ ಸಂಪರ್ಕ ಕಲ್ಪಿಸುವ ವೃತ್ತದ ಕಾರ್ನರ್‌ಗಳಲ್ಲಿ ಕಲ್ಲಿನಿಂದ ವಿಶೇಷ ವಿನ್ಯಾಸ ಮಾಡಲಾಗುತ್ತಿದೆ. ಮುಂಬರುವ ದಸರಾ ಮಹೋತ್ಸವದ ವೇಳೆಗೆ ಡಾ. ಶಿವಕುಮಾರ ಸ್ವಾಮೀಜಿ ವೃತ್ತವನ್ನು ಉದ್ಘಾಟಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.



ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದ ನೂತನ ನಿರ್ದೇಶಕರಾದ ಡಾ.ಸಿ.ವೆಂಕಟೇಶ್ ಅವರಿಗೆ ಮೈಸೂರು ಮೆವರಿಕ್ಸ್ ಬ್ಯಾಸ್ಕೆಟ್ ಬಾಲ್ ತಂಡದ ಆಟಗಾರರಾದ ಸಾಗರ್ ಸುರೇಶ್, ಕಾರ್ತಿಕ್‌ಗೌಡ, ಮಂಜು ಕಶ್ಯಪ್, ಕೌಶಿಕ್, ಮಂಜು, ಹೇಮಂತ್, ಜೀವನ್ ಹಾಗೂ ಪ್ರಜ್ವಲ್ ಸನ್ಮಾನಿಸಿದರು.

ಕೇರಳದ ವೈನಾಡಿನಲ್ಲಿ ತಗ್ಗಿದ ಮಳೆ ಪ್ರಮಾಣ: ಕಬಿನಿ ಜಲಾಶಯಕ್ಕೆ ಒಳ ಹರಿವು ಇಳಿಕೆ

ಮೈಸೂರು, ಜು.10(ಬಿಎಲ್‌ಯು)– ಕೇರಳದ ವೈನಾಡು ಪ್ರದೇಶದಲ್ಲಿ ಧಾರಾಕಾರ ಮಳೆ ಆಗುತ್ತಿದ್ದ ಕಾರಣ ಮೈಸೂರಿನ ಕಬಿನಿ ಜಲಾಶಯ ಇನ್ನೇನು ಭರ್ತಿಯಾಗಲಿದೆ ಎನ್ನುತ್ತಿರುವಾಗಲೇ ಮಳೆ ಪ್ರಮಾಣ ಮತ್ತೆ ಕಡಿಮೆಯಾಗಿದೆ.

ಕಬಿನಿ ಜಲಾಶಯಕ್ಕೆ ನೀರಿನ ಮೂಲವೆಂದರೆ ಅದು ಕೇರಳದ ವೈನಾಡು ಪ್ರದೇಶದ ಮಳೆ. ವಾಡಿಕೆಯಷ್ಟು ಮುಂಗಾರು ಮಳೆಯಾಗಿ ಜೂನ್ ತಿಂಗಳಲ್ಲೇ ಕಬಿನಿ ಜಲಾಶಯ ಭರ್ತಿಯಾಗಬೇಕಿತ್ತು. ಆದರೆ ಜುಲೈ ಮೊದಲ ವಾರದಿಂದ ಮಳೆ ಆರಂಭವಾಗಿದೆ. ಇದರಿಂದ ಕಳೆದ ವಾರದಿಂದ ಕಬಿನಿ ಜಲಾಶಯಕ್ಕೆ 16 ಸಾವಿರ ಕ್ಯೂಸೆಕ್ಸ್ ನೀರು ಹರಿದು ಬರುತ್ತಿತ್ತು.

ಆದರೆ ಕಳೆದ ಮೂರು ದಿನದಿಂದ ಕೇರಳದ ವೈನಾಡು ಪ್ರದೇಶದಲ್ಲಿ ಮಳೆಯ ಆರ್ಭಟ ಕಡಿಮೆಯಾಗಿದೆ. ಇದರಿಂದ ಕಬಿನಿ ಜಲಾಶಯದ ಒಳ ಹರಿವಿನ ಪ್ರಮಾಣ ಕಡಿಮೆಯಾಗಿದೆ. ಜಲಾಶಯಕ್ಕೆ ಇಂದು 3580 ಕ್ಯುಸೆಕ್ಸ್



ನೀರು ಹರಿದು ಬಂದಿದೆ.

ಕಳೆದ ಒಂದು ವಾರ ಮಳೆಯ ಆರ್ಭಟದಿಂದ ಕಬಿನಿ ಜಲಾಶಯ 8 ಅಡಿ ತುಂಬಿದೆ. ಕಬಿನಿ ಜಲಾಶಯದ ಗರಿಷ್ಠ ಮಟ್ಟ 2,284 ಅಡಿಗಳಾಗಿದ್ದು, ಇಂದಿನ ಮಟ್ಟ 2,268 ಅಡಿಗಳಾಗಿದೆ. ಜಲಾಶಯಕ್ಕೆ ನೀರಿನ ಪ್ರಮಾಣ ಕಡಿಮೆ ಬರುತ್ತಿರುವ ಕಾರಣ 800 ಕ್ಯುಸೆಕ್ಸ್ ನೀರನ್ನು ಮಾತ್ರ ಹೊರಗೆ ಬಿಡಲಾಗುತ್ತಿದೆ.

ಕೇರಳದ ವೈನಾಡು ಪ್ರದೇಶದಲ್ಲಿ ಮತ್ತೆ ಮಳೆ ಆರ್ಭಟಿಸಿ ಕಬಿನಿ ಜಲಾಶಯ ನಿಧಾನವಾಗಿ ತುಂಬಬಹುದು ಎಂಬ ನಿರೀಕ್ಷೆ ಇದೆ. ಆದರೆ ವರುಣ ದೇವ ಏನು ಮಾಡುವನೋ ಎಂದು ಕಾದು ನೋಡಬೇಕಿದೆ.

ಇಸ್ರೋ ಮಾಜಿ ಅಧ್ಯಕ್ಷ ಕಸ್ತೂರಿರಂಗನ್‌ಗೆ ಹೃದಯಾಘಾತ

ಶ್ರೀಲಂಕಾದಿಂದ ಬೆಂಗಳೂರಿಗೆ ಏರ್‌ಲಿಫ್ಟ್

ಬೆಂಗಳೂರು: ಖ್ಯಾತ ವಿಜ್ಞಾನಿ, ಭಾರತೀಯ ಬಾಹ್ಯಾಕಾಶ ಸಂಸ್ಥೆ(ಇಸ್ರೋ)ಯ ಮಾಜಿ ಅಧ್ಯಕ್ಷ ಡಾ.ಕೆ ಕಸ್ತೂರಿರಂಗನ್ ಅವರಿಗೆ ಕೊಲಂಬೊದಲ್ಲಿ ಸೋಮವಾರ ಲಘು ಹೃದಯಾಘಾತವಾಗಿದ್ದು, ಅವರನ್ನು ಬೆಂಗಳೂರಿಗೆ ಏರ್ ಲಿಫ್ಟ್ ಮಾಡಲಾಗಿದೆ.



83 ವರ್ಷದ ಕಸ್ತೂರಿರಂಗನ್ ಅವರನ್ನು ವಿಮಾನದ ಮೂಲಕ ಕೊಲಂಬೊದಿಂದ ಬೆಂಗಳೂರಿಗೆ ಕರೆತರಲಾಯಿತು. ಸಂಜೆ 5.30ಕ್ಕೆ ಎಚ್‌ಎಎಲ್ ಏರ್‌ಪೋರ್ಟ್‌ಗೆ ಆಗಮಿಸಿದ್ದು, ಝೀರೋ ಟ್ರಾಫಿಕ್ ಮೂಲಕ ನಾರಾಯಣ ಹೃದಯಾಲಯಕ್ಕೆ ಅವರನ್ನು ದಾಖಲಿಸಲಾಗಿದೆ.

ಶ್ರೀಲಂಕಾಕ್ಕೆ ತೆರಳಿದ್ದ ಸಮಯದಲ್ಲಿ ಕಸ್ತೂರಿರಂಗನ್ ಅವರಿಗೆ ಹೃದಯಾಘಾತವಾಗಿದೆ. ಸದ್ಯ ಅವರ ಆರೋಗ್ಯ ಸ್ಥಿರವಾಗಿದೆ ಎಂದು ಮೂಲಗಳು ತಿಳಿಸಿವೆ.

ಕಸ್ತೂರಿರಂಗನ್ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ನಾರಾಯಣ ಹೃದಯಾಲಯಕ್ಕೆ ಶಿಫ್ಟ್ ಮಾಡಲಾಗಿದ್ದು, ಖ್ಯಾತ ಹೃದ್ರೋಗ ತಜ್ಞ ಡಾ. ದೇವಿ ಶೆಟ್ಟಿ ಅವರು ಚಿಕಿತ್ಸೆ ನೀಡಲಿದ್ದಾರೆ.


ನೇರ ಪಾವತಿ ಪೌರಕಾರ್ಮಿಕರ ಖಾಯಂಗೆ ಒತ್ತಾಯ

● ಸಂಘಟನೆ ಬಲಪಡಿಸಲು ನೂತನ ಪದಾಧಿಕಾರಿಗಳ ಆಯ್ಕೆ ● ಗೌರವಾಧ್ಯಕ್ಷರಾಗಿ ಎಂ.ವಡಿವೇಲು ಆಯ್ಕೆ; ಪೌರಕಾರ್ಮಿಕ ಸಂಘಟನೆಯ ಎನ್.ಮಾರ ಮಾಹಿತಿ ● ಒಳಚರಂಡಿ ಕಾರ್ಮಿಕರು, ಸ್ವಚ್ಛತಾ ವಾಹನ ಚಾಲಕರ ಖಾಯಂಗೂ ಆಗ್ರಹ

ಮೈಸೂರು,ಜು.10(ಪಿಎಂ)– ಮೈಸೂರು ಮಹಾನಗರ ಪಾಲಿಕೆಯ ನೇರ ಪಾವತಿ ಪೌರಕಾರ್ಮಿಕರು, ಒಳಚರಂಡಿ ಕಾರ್ಮಿಕರು, ಸ್ವಚ್ಛತಾ ವಾಹನ ಚಾಲಕರನ್ನು ಖಾಯಂಗೊಳಿಸಬೇಕೆಂಬ ಬೇಡಿಕೆ ಸಂಬಂಧ ಸಂಘಟನೆ ಬಲಪಡಿಸಲು ಮೈಸೂರು ನಗರ ಪಾಲಿಕೆ ಖಾಯಂ ಪೌರಕಾರ್ಮಿಕರ ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾಸಂಘಕ್ಕೆ ಕೆಲ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಸಂಘದ ಉನ್ನತ ಸಮಿತಿ ಅಧ್ಯಕ್ಷ ಎನ್.ಮಾರ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮೇಲ್ಕಂಡ ಎಲ್ಲಾ ಕಾರ್ಮಿಕರನ್ನು ಖಾಯಂಗೊಳಿಸಬೇಕೆಂಬ ಬೇಡಿಕೆ ಸಂಬಂಧ ರಾಜ್ಯಮಟ್ಟದಲ್ಲಿ ಸಂಘಟನೆ ಮಾಡಲಾಗುತ್ತಿದೆ. ಅಂತೆಯೇ ನಮ್ಮ ಸಂಘದ ಕಾರ್ಯ ಚಟುವಟಿಕೆ ಚುರುಕುಗೊಳಿಸುವ ನಿಟ್ಟಿನಲ್ಲಿ ಕೆಲ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. ಆದಿದ್ರಾವಿಡ ಸಮಾಜದ ಎಂ.ವಡಿವೇಲು ಅವರನ್ನು ಗೌರವಾಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ ಎಂದರು.

ಗೌರವ ಕಾರ್ಯಾಧ್ಯಕ್ಷರಾಗಿ ಎಂ.ವಿ.



ವೆಂಕಟೇಶ್, ಉನ್ನತ ಸಮಿತಿ ಕಾರ್ಯಾಧ್ಯಕ್ಷರಾಗಿ ಡಿ.ಆರ್.ರಾಜು, ಗೌರವ ಕಾರ್ಯದರ್ಶಿಯಾಗಿ ಹನುಮಂತ, ಸಲಹೆಗಾರರಾಗಿ ಬ್ಯಾಂಕ್ ರಂಗಣ್ಣ ಅವರನ್ನು ಆಯ್ಕೆ ಮಾಡಲಾಗಿದೆ. ಇನ್ನು ಅನೇಕ ಸ್ಥಾನಗಳಿಗೆ ಹಲವು ಮುಖಂಡರನ್ನು ಆಯ್ಕೆ ಮಾಡಲಾಗಿದೆ. ಸಂಘದ ಗೌರವಾಧ್ಯಕ್ಷರಾಗಿ ಮಾಜಿ ಮೇಯರ್ ನಾರಾಯಣ ಅವರು ಕಳೆದ 25 ವರ್ಷಗಳಿಂದ ಕಾರ್ಯನಿರ್ವಹಿಸಿದರು. ಇದೀಗ ಅವರು ಪೌರಕಾರ್ಮಿಕರ ಸಂಘಟನೆಗಾಗಿ ರಾಜ್ಯಮಟ್ಟದಲ್ಲಿ ತೊಡಗಿಸಿಕೊಳ್ಳಬೇಕಿರುವ ಹಿನ್ನೆಲೆಯಲ್ಲಿ ಎಂ.ವಡಿವೇಲು ಅವರನ್ನು ಆಯ್ಕೆ ಮಾಡಿದ್ದೇವೆ ಎಂದು ಹೇಳಿದರು.

ಪೌರಕಾರ್ಮಿಕರ ಬೇಡಿಕೆಗಳನ್ನು ಈಡೇರಿಸಲು ಸಂಘ ನಿರಂತರವಾಗಿ ಹೋರಾಟ ಮಾಡಿಕೊಂಡು ಬರುತ್ತಿದೆ. ಕಳೆದ ರಾಜ್ಯ ಬಿಜೆಪಿ ಸರ್ಕಾರ ರಾಜ್ಯದಲ್ಲಿ 11,133 ಪೌರಕಾರ್ಮಿಕರ ಖಾಯಂಗೆ ಆದೇಶ ನೀಡಿತ್ತು. ಎರಡನೇ ಹಂತದಲ್ಲಿ 12 ಸಾವಿರ ಪೌರಕಾರ್ಮಿಕರ ಖಾಯಂಗೆ ತೀರ್ಮಾನಿಸಿತ್ತು. ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ನೇರ ಪಾವತಿಯಡಿ ಕೆಲಸ ಮಾಡುತ್ತಿರುವ 33 ಸಾವಿರ ಪೌರಕಾರ್ಮಿಕರಿದ್ದು, ಈ ಎಲ್ಲರನ್ನೂ ಖಾಯಂಗೊಳಿಸಬೇಕು. ಜೊತೆಗೆ ಒಳಚರಂಡಿ ಕಾರ್ಮಿಕರು ಹಾಗೂ ಸ್ವಚ್ಛತಾ ವಾಹನ ಚಾಲಕರನ್ನು ಖಾಯಂ ಮಾಡಬೇಕು ಎಂದು ಒತ್ತಾಯಿಸಿದರು.

25 ಸಾವಿರ ಪೌರಕಾರ್ಮಿಕರನ್ನು ಖಾಯಂ ಮಾಡುವುದಾಗಿ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಭರವಸೆ ನೀಡಿದೆ. ಇದನ್ನು ಈಗ ಈಡೇರಿಸಬೇಕು ಎಂದು ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸಲಾಗಿದೆ. ಈ ಸಂಬಂಧ ಚರ್ಚಿಸಲು ಪೌರಕಾರ್ಮಿಕ ಮುಖಂಡರ ಸಭೆ ಕರೆಯುವಂತೆಯೂ ಮನವಿ ಮಾಡಲಾಗಿದೆ. ನಮ್ಮ ಸಂಘದಿಂದ ಜಿಲ್ಲೆಯ ಪೌರಕಾರ್ಮಿಕರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಸಭೆ ಕರೆಯುವಂತೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

ಸಿದ್ದರಾಮಯ್ಯನವರು ತಮ್ಮ ಹಿಂದಿನ ಅವಧಿಯಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ ಪೌರಕಾರ್ಮಿಕರ ನೇಮಕಕ್ಕೆ ಇದ್ದ ಗುತ್ತಿಗೆ ಪದ್ಧತಿ ರದ್ದುಪಡಿಸಿ ನೇರ ಪಾವತಿ ವ್ಯವಸ್ಥೆ ಜಾರಿಗೆ ತಂದರು. ಆದರೆ ಈ ವ್ಯವಸ್ಥೆಯಲ್ಲಿ

> ಮೈಸೂರು ಮಹಾನಗರ ಪಾಲಿಕೆಯಲ್ಲಿ 1,560 ನೇರ ಪಾವತಿ ಪೌರಕಾರ್ಮಿಕರು, 364 ತ್ಯಾಜ್ಯ ಸಂಗ್ರಹ ಸ್ವಚ್ಛತಾ ವಾಹನ ಚಾಲಕರು ಮತ್ತು 231 ಒಳಚರಂಡಿ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಈ ಎಲ್ಲರನ್ನು ಖಾಯಂ ಮಾಡಬೇಕು ಎಂಬುದು ನಮ್ಮ ಸಂಘದ ಬೇಡಿಕೆ.
> -ಎನ್.ಮಾರ

ಪೌರಕಾರ್ಮಿಕರಿಗೆ ಯಾವುದೇ ಸಮರ್ಪಕ ಸೌಲಭ್ಯ ದೊರೆಯುತ್ತಿಲ್ಲ. ಪೌರಕಾರ್ಮಿಕರು ಮರಣ ಹೊಂದಿದರೆ ಅನುಕಂಪದ ಆಧಾರದಲ್ಲಿ ಕುಟುಂಬದ ಸದಸ್ಯರಿಗೆ ಕೆಲಸ ಸಿಗುವುದಿಲ್ಲ. ನಿವೃತ್ತಿ ನಂತರದ ಸೌಲಭ್ಯವೂ ದೊರೆಯುವುದಿಲ್ಲ. ಹಾಗಾಗಿ ಖಾಯಂ ಮಾಡಬೇಕೆಂಬುದು ನಮ್ಮ ಬೇಡಿಕೆಯಾಗಿದೆ ಎಂದು ತಿಳಿಸಿದರು.

ಸಂಘದ ಉನ್ನತ ಸಮಿತಿ ಪ್ರಧಾನ ಕಾರ್ಯದರ್ಶಿ ಟಿ.ಶ್ರೀನಿವಾಸ, ನಗರ ಅಧ್ಯಕ್ಷ ಎನ್.ಮೋಹನ್‌ಕುಮಾರ್, ಮಹಾಪ್ರಧಾನ ಕಾರ್ಯದರ್ಶಿ ಮಂಚಯ್ಯ, ನೂತನ ಪದಾಧಿಕಾರಿಗಳಾದ ಎಂ.ವಡಿವೇಲು, ಎಂ.ವಿ.ವೆಂಕಟೇಶ್, ಬ್ಯಾಂಕ್ ರಾಜಣ್ಣ ಮತ್ತಿತರರು ಗೋಷ್ಠಿಯಲ್ಲಿದ್ದರು.

ಮೈಸೂರಲ್ಲಿ ಸಂಸದೀಯ ಸ್ಥಾಯಿ ಸಮಿತಿ ಸದಸ್ಯರ ಅಧ್ಯಯನ ಪ್ರವಾಸ

ವಿವಿಧ ಇಲಾಖೆಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ





ಮೈಸೂರು, ಜು. 10 (ಆರ್‌ಕೆ)– ರಮಾದೇವಿ ನೇತೃತ್ವದ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಂಸದೀಯ ಸ್ಥಾಯಿ ಸಮಿತಿ ಸದಸ್ಯರು ಮೈಸೂರಲ್ಲಿ ಅಧ್ಯಯನ ಪ್ರವಾಸ ಕೈಗೊಂಡಿದ್ದಾರೆ.

ಮೈಸೂರಿನ ರ್‍ಯಾಡಿಸನ್ ಬ್ಲ್ಯೂ ಪ್ಲಾಜಾ ಹೋಟೆಲ್‌ನಲ್ಲಿ ಸೋಮವಾರ ಬೆಳಗ್ಗೆ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿಗಳೊಂದಿಗೆ ಅನೌಪಚಾರಿಕ ಸಭೆ ನಡೆಸಿದ ಸದಸ್ಯರು, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಅಭಿವೃದ್ಧಿಗಾಗಿ ಸರ್ಕಾರ ನೀಡಿದ ಅನುದಾನ ಬಳಕೆ ಮಾಡಿರುವ ಬಗ್ಗೆ ಮಾಹಿತಿ ಪಡೆದುಕೊಂಡರು.

ಆರ್ಥಿಕ ಸಬಲೀಕರಣ, ವಿದ್ಯಾರ್ಥಿ ವೇತನ ಮಂಜೂರಾತಿ, ಅಪಾಯಕಾರಿ ಮತ್ತು ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವವರ ಮಕ್ಕಳಿಗೆ ಕೈಗೊಂಡಿರುವ ರಕ್ಷಣಾ ಕ್ರಮಗಳು, ಹಿರಿಯ ನಾಗರಿಕರು, ಸಫಾಯಿ ಕರ್ಮಚಾರಿಗಳು, ತೃತೀಯ ಲಿಂಗಿಗಳು, ಮಾದಕ ವ್ಯಸನಿಗಳಿಗೆ ಪುನರ್ವಸತಿ ಕಲ್ಪಿಸಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ದೀನ ದಯಾಳ್ ದಿವ್ಯಾಂಗರ ಪುನರ್ವಸತಿ ಯೋಜನಾ, ಜಿಲ್ಲಾ ಅಂಗವಿಕಲರ ಪುನರ್ ವಸತಿ ಕೇಂದ್ರ ಸ್ಥಾಪನೆ, ಕೌಶಲ್ಯಾಭಿವೃದ್ಧಿ ಯೋಜನೆ ಹಾಗೂ ವಿಕಲಚೇತನರ ಕಲ್ಯಾಣಕ್ಕಾಗಿ ಕೈಗೊಂಡಿರುವ ಕ್ರಮಗಳ ಬಗ್ಗೆ ಸಂಬಂಧ ಪಟ್ಟ ಇಲಾಖೆ, ಸಿಬ್ಬಂದಿಗಳು ಸಂಸದೀಯ ಸ್ಥಾಯಿ ಸಮಿತಿ ಸದಸ್ಯರಿಗೆ ಮಾಹಿತಿ ಒದಗಿಸಿದರು. ಕಳೆದ 3 ವರ್ಷಗಳಿಂದೀಚೆಗೆ ಅನುಷ್ಠಾನಗೊಳಿಸಿರುವ ಯೋಜನೆಗಳು, ಸರ್ಕಾರದಿಂದ ಬಿಡುಗಡೆಯಾದ ಅನುದಾನ, ಖರ್ಚು ಮಾಡಿರುವ ಹಣ, ಫಲಾನುಭವಿಗಳು ಉದ್ದೇಶಿತ ಯೋಜನೆ ಮೂಲಕ ಆರ್ಥಿಕ ಸಬಲೀಕರಣಗೊಂಡಿದ್ದಾರೆಯೇ ಎಂಬುದರ ಬಗ್ಗೆ ಇಲಾಖೆ ಹಾಗೂ ಸಿಬ್ಬಂದಿ ಪಿಪಿಟಿ ಮೂಲಕ ಮಾಹಿತಿ ನೀಡಲಾಯಿತು.

ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಅವರು ರ್‍ಯಾಡಿಸನ್ ಬ್ಲ್ಯೂ ಪ್ಲಾಜಾ ಹೋಟೆಲ್‌ಗೆ ತೆರಳಿ ಸಮಿತಿ ಅಧ್ಯಕ್ಷೆ ರಮಾದೇವಿ ಅವರನ್ನು ಪುಷ್ಪಗುಚ್ಛ ನೀಡಿ ಆತ್ಮೀಯವಾಗಿ ಬರಮಾಡಿಕೊಂಡರು. ಮೈಸೂರು ಮಹಾನಗರ ಪಾಲಿಕೆ ಕಮಿಷನರ್ ಜಿ. ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ. ಗಾಯತ್ರಿ ಅವರು ಈ ಸಂದರ್ಭ ಉಪಸ್ಥಿತರಿದ್ದರು.

ಸಮಿತಿ ಸದಸ್ಯರಾದ ಸಂಗೀತ ಅಜಾದ್, ಬೋಳನಾಥ, ಪ್ರಮೀಳಾ ಬಿಸೋಯಿ, ಚಿತ್ತರ ಸಿಂಗ್ ದರ್ಬಾರ್, ಸಂಜೀತಾಕೌ, ಅಕ್ಷಯ್‌ಬಾರಲಾಲ್, ಸುಮಿತ್ರ ಬಲ್ಮಿಕ್, ರೆಮಿಲಾಬೆನ್, ಎನ್. ಚಂದ್ರಶೇಖರನ್, ನವಂತ ಮೊಹಂತಾ, ನಾರಾಯಣ್ ಕೊರಗಪ್ಪ, ರಾಮ್‌ಜಿ, ಅನಿತಾ ಭಟ್, ಕ್ರಿಶೇಂದ್ರ ಕುಮಾರ್, ಜ್ಯೋತಿ ಕಪೂರ್, ಮಾರ್ಷಲ್ ಟಿಟ್ಟೋ ಹಾಯೋಕಿಪ್ ರೆಕಾಂಗ್ ಅವರು ಸಭೆಯಲ್ಲಿ ಪಾಲ್ಗೊಂಡಿದ್ದರು.

ಎಸ್.ಸುಮನ ಜನರಲ್ ಎಲೆಕ್ಟ್ರಿಕ್ ಹೆಲ್ತ್ ಕೇರ್ ಪ್ರೋಗ್ರಾಮಿಂಗ್ ಚಾಲೆಂಜ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ



ಮೈಸೂರು, ಜು. 10–ನಗರದ ವಿದ್ಯಾವರ್ಧಕ ತಾಂತ್ರಿಕ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ವಿಭಾಗದ ವಿದ್ಯಾರ್ಥಿನಿ ಎಸ್.ಸುಮನ, ಜನರಲ್ ಎಲೆಕ್ಟ್ರಿಕ್ (ಜಿಇ) ಕಂಪನಿಯು ನಡೆಸುವ ದೇಶದ ಪ್ರತಿಷ್ಠಿತ ಸ್ಪರ್ಧೆಗಳಲ್ಲಿ ಒಂದಾದ "ಜನರಲ್ ಎಲೆಕ್ಟ್ರಿಕ್ ಹೆಲ್ತ್ ಕೇರ್ ಪ್ರೋಗ್ರಾಮಿಂಗ್ ಚಾಲೆಂಜ್" ನಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ.

ದೇಶದ ವಿವಿಧ ಐಐಟಿ ಮತ್ತು ವಿಶ್ವವಿದ್ಯಾನಿಲಯಗಳಿಂದ ಸುಮಾರು 50 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅತ್ಯಂತ ಕ್ಲಿಷ್ಟಕರ ಸುತ್ತುಗಳಲ್ಲಿ ನಮ್ಮ ವಿದ್ಯಾರ್ಥಿನಿ ತಮ್ಮ ನವೀನ ವಿಧಾನಗಳು ಹಾಗೂ ಸಮಸ್ಯೆ ಪರಿಹರಿಸುವ ಕೌಶಲ್ಯ ಸಾಮರ್ಥ್ಯವನ್ನು ಓರೆಗಚ್ಚಿ ಈ ಸ್ಪರ್ಧೆಯಲ್ಲಿ ಮೊದಲಿಗರಾಗಿದ್ದಾರೆ ಎಂದು ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥೆ ಪ್ರೊ.ಎಂ.ಆರ್.ಪೂಜಾ ವಿದ್ಯಾರ್ಥಿನಿ ಬಗ್ಗೆ ಮೆಚ್ಚುಗೆಯ ಮಾತನಾಡಿದರು.

ಈ ವೇಳೆ ಡಾ. ಶೋಭಾ ಶಂಕರ್, ಪ್ರಾಂಶುಪಾಲ ಡಾ. ಬಿ. ಸದಾಶಿವೇಗೌಡ, ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪ ಗೌಡ, ಕಾರ್ಯದರ್ಶಿ ಪಿ. ವಿಶ್ವನಾಥ್, ತರಬೇತಿ ಮತ್ತು ನಿಯೋಜನೆ ಮುಖ್ಯಸ್ಥರಾದ ಡಾ.ರಶ್ಮಿ, ಡಾ.ವಿರವಿಕುಮಾರ್ ಮತ್ತಿತರರು ಹಾಜರಿದ್ದರು.

ಅಭ್ಯುದಯ ಮೈಸೂರು ವತಿಯಿಂದ ಮಕ್ಕಳಿಗೆ ಬ್ಯಾಗ್, ಪುಸ್ತಕ ವಿತರಣೆ



ಮೈಸೂರು, ಜು. 10– ಅಭ್ಯುದಯ ಮೈಸೂರು ವತಿಯಿಂದ ಮೈಸೂರಿನ ವಿವಿಧ ಪ್ರದೇಶಗಳ 10 ಉಚಿತ ಕಲಿಕಾ ಕೇಂದ್ರದ 250 ಮಕ್ಕಳಿಗೆ ಬ್ಯಾಗ್ ಮತ್ತು ಪುಸ್ತಕಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಎಸ್‌ಡಿಎಂ ಐಎಂಡಿ ನಿರ್ದೇಶಕ ಲೆಫ್ಟಿನೆಂಟ್ ಕರ್ನಲ್ ಎಸ್.ಎನ್.ಪ್ರಸಾದ್ ಮತ್ತು ಗ್ಲೋಬ್‌ಟೆಕ್‌ನ ಸಂಸ್ಥಾಪಕ ಜಿ ವೆಂಕಟೇಶ್, ಡಾ ಚಂದ್ರಶೇಖರ್, ಸಾಮಾಜಿಕ ಸುಧಾರಕ ವಾಮನ್ ಜೀ, ಡೆಕ್ಕನ್ ಹೆರಾಲ್ಡ್‌ನ ಮಾಜಿ ಸಂಸ್ಥಾಪಕ ಬಿ.ಎಸ್.ಅರುಣ್ ಮತ್ತಿತರರು ಉಪಸ್ಥಿತರಿದ್ದರು. ಅಭ್ಯುದಯದ ಮುಖ್ಯ ಕಾರ್ಯದರ್ಶಿ ಲಕ್ಷ್ಮೀನಾರಾಯಣ ಜಿ, ಕಾರ್ಯಕಾರಿ ತಂಡದ ಸದಸ್ಯ ವೇಣುಗೋಪಾಲ್ ಜಿ ಮತ್ತು ಸಂಜೀವ್ ಕೌಶಿಕ್ ಜಿ, ಅಭ್ಯುದಯ ಸ್ವಯಂಸೇವಕ ಲಕ್ಷ್ಮೀನಾರಾಯಣ ನಾಯಕ್ ಜಿ, ಸ್ವಯಂಸೇವಕ ಬಾಲಕೃಷ್ಣ ಜಿ, 250ಕ್ಕೂ ಹೆಚ್ಚು ಮಕ್ಕಳು ಮತ್ತು ಪೋಷಕರು ಸೇರಿ 400 ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಇದು ಕೇಶವ ಕೃಪಾ ಸಂವರ್ಧನ ಸಮಿತಿಯ ಯೋಜನೆಯಾಗಿದ್ದು, ಸ್ವಯಂಸೇವಾ ಸಂಸ್ಥೆಯಾಗಿದೆ. ಕರ್ನಾಟಕದಾದ್ಯಂತ 3200 ಮಕ್ಕಳಿಗೆ 160 ಉಚಿತ ಕಲಿಕಾ ಕೇಂದ್ರಗಳನ್ನು ನಡೆಸುತ್ತಿದೆ. ಅಭ್ಯುದಯ ಭಾರತದಾದ್ಯಂತ 5000 ಮಕ್ಕಳಿಗೆ ಪುಸ್ತಕಗಳನ್ನು ಒದಗಿ ಸುತ್ತದೆ. ಭಾರತದಾದ್ಯಂತ 41 ಉಚಿತ ವಿಜ್ಞಾನ ಪ್ರಯೋಗಾಲಯವನ್ನು ಸ್ಥಾಪಿಸಿದೆ. ಇದರ ಮೈಸೂರು ಉಸ್ತುವಾರಿ ಫಣೀಂದ್ರ ಬೆಳ್ಳೂರು, ಯೋಜನಾ ಸಂಯೋಜಕ ಮನೀಶ್, ಸ್ಟೆಮ್ ಸಂಯೋಜಕ ಮುರಳಿ,ಹಿರಿಯ ಶಿಕ್ಷಕಿಯರು ಮೇಘನಾ ಮತ್ತು ಸಿಂಧು ಉಪಸ್ಥಿತರಿದ್ದರು.

ಅಕ್ಕನ ಬಳಗ ಶಾಲೆಯಲ್ಲಿ ಮಕ್ಕಳಿಗೆ ಸಮವಸ್ತ್ರ, ಪುಸ್ತಕ ವಿತರಣೆ



ಮೈಸೂರು, ಜು. 10– ಸರ್ಕಾರಿ ಶಾಲೆ ಎಂದು ಯಾರೂ ಮೂಗು ಮುರಿಯಬಾರದು. ಸರ್ ಎಂ.ವಿಶ್ವೇಶ್ವರಯ್ಯ, ಅಬ್ದುಲ್ ಕಲಾಂರಂತಹ ಮೇಧಾವಿಗಳು ಸರ್ಕಾರಿ ಶಾಲೆಯಲ್ಲೇ ಕಲಿತವರಾಗಿದ್ದಾರೆ ಎಂದು ಎಸ್.ಕೆ.ಫೌಂಡೇಶನ್ ಅಧ್ಯಕ್ಷ ಸಂತೋಷ್ ಕಿರಾಳು ಹೇಳಿದರು. ಮೈಸೂರಿನ ತ್ಯಾಗರಾಜ ರಸ್ತೆಯಲ್ಲಿರುವ ಅಕ್ಕನ ಬಳಗ ಶಾಲೆಯಲ್ಲಿ ಚಾಮುಂಡೇಶ್ವರಿ ವರ್ಧಂತಿ ಅಂಗವಾಗಿ ಎಸ್‌ಕೆ ಫೌಂಡೇಶನ್ (ಕಿರಾಳು) ವತಿಯಿಂದ ಮಕ್ಕಳಿಗೆ ಸಮವಸ್ತ್ರ ಹಾಗೂ ಪುಸ್ತಕ ವಿತರಣಾ ಮತ್ತು ಶಾಲೆಯ ಹಿರಿಯ ಶಿಕ್ಷಕರನ್ನು ಸನ್ಮಾನಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆ ಎಂಬ ಕೀಳರಿಮೆ ಇಟ್ಟುಕೊಳ್ಳಬಾರದು. ಇಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ ಎಂದರು.

ಇದೇ ವೇಳೆ ಶಾಲೆಯ ಹಿರಿಯ ಶಿಕ್ಷಕರಾದ ಶಿವಯ್ಯ, ನಾಗರತ್ನ, ಶಿಲ್ಪ, ಪುಷ್ಪಲತಾ, ನಾಗಮ್ಮ, ಮಮತಾ, ಅವರನ್ನು ಸನ್ಮಾನಿಸಲಾಯಿತು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಪ್ರಚಾರ ಸಮಿತಿ ಅಧ್ಯಕ್ಷ ಕಾಡನಹಳ್ಳಿ ಡಿ.ಸ್ವಾಮಿ ಗೌಡ, ಶಾಲೆಯ ಹಳೆಯ ವಿದ್ಯಾರ್ಥಿ ರಾಮಾನುಜಂ, ಸಮಾಜ ಸೇವಕರಾದ ಪ್ರದೀಪ್ ಸಿಂಗ್, ಹರೀಶ್ ನಾಯ್ಡು ಯುವ ಮುಖಂಡರಾದ ಶಿವು (ಕಿರಾಳು,) ಹಾಗೂ ಶಾಲೆಯ ಮುಖ್ಯ ಶಿಕ್ಷಕರಾದ ಸುಗುಣಾವತಿ, ಇನ್ನಿತರರು ಭಾಗವಹಿಸಿದ್ದರು.



ಮೂರನೇ ಆಷಾಢ ಶುಕ್ರವಾರದ ಅಂಗವಾಗಿ ಆದಿದ್ರಾವಿಡ ತಮಟೆ ಮತ್ತು ನಗಾರಿ ಸಾಂಸ್ಕೃತಿಕ ಕಲಾವೃಂದ ಏರ್ಪಡಿಸಿದ್ದ ಜಾನಪದ ಕಲಾತಂಡಗಳ ಮೆರವಣಿಗೆಯು ಮೈಸೂರಿನ ರಾಜಕುಮಾರ್ ರಸ್ತೆಯಿಂದ ಅಂಬೇಡ್ಕರ್ ನಗರದವರೆಗೆ ನಡೆಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಾಯೋಜಕತ್ವದಲ್ಲಿ ನಡೆದ ಮೆರವಣಿಗೆಯ ನೇತೃತ್ವವನ್ನು ಕಲಾವೃಂದದ ಅಧ್ಯಕ್ಷ ಸಿ.ಮಂಜುನಾಥ್ ವಹಿಸಿದ್ದರು.



ಮೈಸೂರಿನ ಮಹಾಜನ ಕಾಲೇಜು ಮತ್ತು ಕನ್ನಡ ವಿಭಾಗದ ವತಿಯಿಂದ ಇತ್ತೀಚೆಗಷ್ಟೆ ನಿವೃತ್ತರಾದ ಡಾ. ಲಕ್ಷ್ಮೀಗೌಡರನ್ನು ಸನ್ಮಾನಿಸಲಾಯಿತು. ಈ ವೇಳೆ ಕನ್ನಡ ವಿಭಾಗದ ಮುಖ್ಯಸ್ಥ ಡಾ. ಎಚ್.ಆರ್. ತಿಮ್ಮೇಗೌಡ, ಪ್ರಾಂಶುಪಾಲೆ ಡಾ. ಬಿ. ಆರ್. ಜಯಕುಮಾರಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಶೈಕ್ಷಣಿಕ ಸಲಹೆಗಾರ ಡಾ. ಎಸ್.ಆರ್. ರಮೇಶ್, ಶೈಕ್ಷಣಿಕ ಡೀನ್ ಡಾ. ಎಚ್. ಶ್ರೀಧರ, ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ನೃಪತುಂಗ ಕನ್ನಡ ಶಾಲೆಯಲ್ಲಿ ಪ್ರಯೋಗದ ಮೂಲಕ ವಿಜ್ಞಾನದ ಕಲಿಕೆ

ಮೈಸೂರು, ಜು. 10–ಮೈಸೂರು ನಗರದಲ್ಲಿ ಮೊಟ್ಟಮೊದಲ ಬಾರಿಗೆ ಶಾಲಾ



ಮಟ್ಟದ ವಿಜ್ಞಾನವನ್ನು ಸಂಪೂರ್ಣವಾಗಿ ಮಕ್ಕಳು ತಾವೇ ಪ್ರಯೋಗ ಮಾಡಿ ಕಲಿಯುವ ಹೊಸ ಕ್ರಮವನ್ನು ನೃಪತುಂಗ ಕನ್ನಡ ಶಾಲೆಯು ಈ ವರ್ಷದಿಂದ ಪ್ರಾರಂಭಿಸುತ್ತಿದೆ. ಬೆಂಗಳೂರಿನ 'ಪ್ರಯೋಗ' ಸಂಸ್ಥೆಯ ಸಹಯೋಗದಲ್ಲಿ ನೃಪತುಂಗ ಕನ್ನಡ ಶಾಲೆಯು ಪ್ರಸಕ್ತ ವರ್ಷ 6ನೇ ತರಗತಿಯಿಂದ ಈ ಕಾರ್ಯಕ್ರಮವನ್ನು ಪ್ರಾರಂಭಿಸಲಿದೆ. ತದನಂತರ ಪ್ರತಿ ವರ್ಷ ಒಂದೊಂದು ತರಗತಿಯಂತೆ ಹೆಚ್ಚಿಸಿಕೊಂಡು 10ನೇ ತರಗತಿವರೆಗೆ ಈ ಕಾರ್ಯಕ್ರಮವನ್ನು ವಿಸ್ತರಿಸಲಾಗುತ್ತದೆ. ಪ್ರಸ್ತುತ ಬಹುತೇಕ ಶಾಲೆಗಳಲ್ಲಿ ವಿಜ್ಞಾನವನ್ನು ಪ್ರಧಾನವಾಗಿ ಪಾಠ ಬೋಧನೆ ಮೂಲಕ ಕಲಿಸಲಾಗುತ್ತಿದೆ. ಇದಕ್ಕಾಗಿ ಶಾಲೆಯಲ್ಲಿ ಪ್ರತ್ಯೇಕ ಪ್ರಯೋಗ ಶಾಲೆಯನ್ನು ಸ್ಥಾಪಿಸಲಿದ್ದು ಅದಕ್ಕೆ ಬೇಕಾದ ಎಲ್ಲ ತರಬೇತಿ ಮತ್ತು ಉಪಕರಣಗಳನ್ನು ಬೆಂಗಳೂರಿನ ಪ್ರಯೋಗ ಸಂಸ್ಥೆ ಪ್ರಾಯೋಜಿಸಲಿದೆ. ಈ ಸಂಬಂಧ ನೃಪತುಂಗ ಕನ್ನಡ ಶಾಲೆಯ ಪರವಾಗಿ ಕನ್ನಡ ವಿಕಾಸ ಶೈಕ್ಷಣಿಕ ಸಾಮಾಜಿಕ ಸಾಂಸ್ಕೃತಿಕ ಸಂಸ್ಥೆಯ ಉಪಾಧ್ಯಕ್ಷ ಸ.ರ.ಸುದರ್ಶನ ಮತ್ತು ಪ್ರಯೋಗ ಸಂಸ್ಥೆಯ ಮ್ಯಾನೇಜಿಂಗ್ ಡೈರೆಕ್ಟರ್ ಹೆಚ್.ಎಸ್.ನಾಗರಾಜ್ 'ಒಪ್ಪಂದ ಪತ್ರ' ವನ್ನು ಇತ್ತೀಚೆಗೆ ವಿನಿಮಯ ಮಾಡಿಕೊಂಡರು. ಈ ಸಂದರ್ಭದಲ್ಲಿ ಪ್ರಯೋಗ ಸಂಸ್ಥೆಯ ಶೈಕ್ಷಣಿಕ ತಜ್ಞರಾದ ಪ್ರಾಧ್ಯಾಪಕ ನಾಗಭೂಷಣ್ ಮತ್ತು ಶಂಕರ್ ಹಾಜರಿದ್ದರು.

ಇಂದಿನಿಂದ ಶಿಕ್ಷಕರ ಕೋರಿಕೆ ವರ್ಗಾವಣೆ ಕೌನ್ಸಿಲಿಂಗ್

ಮೈಸೂರು,ಜು.10– ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಜು.11ರಿಂದ 15 ರವರೆಗೆ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದ ಕೋರಿಕೆ ವರ್ಗಾವಣೆ ಹಾಗೂ ಜು.13 ಮತ್ತು 14 ರಂದು ಪ್ರೌಢಶಾಲಾ ಸಹ ಶಿಕ್ಷಕರು ಹಾಗೂ ತತ್ಸಮಾನ ವೃಂದ ಶಿಕ್ಷಕರ ಕೋರಿಕೆ ವರ್ಗಾವಣೆ ಕೌನ್ಸಿಲಿಂಗ್ ಹಮ್ಮಿಕೊಳ್ಳಲಾಗಿದೆ. ಕೌನ್ಸಿಲಿಂಗ್ ಕಾರ್ಯವನ್ನು ಉಪನಿರ್ದೇಶಕರ ಕಚೇರಿಯ ಆವರಣದಲ್ಲಿ ಪ್ರತಿ ದಿವಸ ಬೆಳಗ್ಗೆ 9 ಗಂಟೆಯಿಂದ ನಡೆಸಲಾಗುವುದು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಹೆಚ್.ಕೆ. ಪಾಂಡು ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಯಲ್ಲೂ ತೊಡಗಬೇಕು: ಡಾ.ಎಸ್.ಪಿ.ಉಮಾದೇವಿ



ಮೈಸೂರು, ಜು.10(ಜಿಎ)–ಕಲೆ ಮತ್ತು ಸಾಹಿತ್ಯದಿಂದ ದೂರವಾದವರು ಯಂತ್ರ ಮಾನವರಾಗುತ್ತಾರೆ ಎಂದು ಸಾಹಿತಿ ಡಾ. ಎಸ್.ಪಿ.ಉಮಾದೇವಿ ಅಭಿಪ್ರಾಯಪಟ್ಟರು.

ಜೆಎಸ್‌ಎಸ್ ಮಹಾವಿದ್ಯಾಪೀಠ, ಸರಸ್ವತಿ ಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜು ವತಿಯಿಂದ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಯುವ ಕವಿಗೋಷ್ಠಿಯಲ್ಲಿ ಮಾತನಾಡಿದರು.

ವ್ಯಕ್ತಿತ್ವ ವಿಕಸನ ಹಾಗೂ ಜ್ಞಾನವೃದ್ಧಿಗೆ ಕಲೆ, ಸಾಹಿತ್ಯ ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಪಠ್ಯಕ್ಕೆ ಮಾತ್ರ ತಮ್ಮನ್ನು ಸೀಮಿತಗೊಳಿಸಿಕೊಳ್ಳದೆ ಪಠ್ಯೇತರ ಚಟುವಟಿಕೆಗಳಲ್ಲೂ ತೊಡಗಿಸಿಕೊಳ್ಳಬೇಕು. ಕಲೆ, ಸಾಹಿತ್ಯ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಗುರುತಿಸಿಕೊಳ್ಳಬೇಕು. ಕಲೆ ಮತ್ತು ಸಾಹಿತ್ಯದಿಂದ ದೂರವಾದವರು ಯಂತ್ರ ಮಾನವರಾಗುತ್ತಾರೆ ಎಂದರು.

ಎಲ್ಲರನ್ನೂ ತನ್ನೆಡೆಗೆ ಸೆಳೆಯುವ ಶಕ್ತಿಯನ್ನು ಭಾರತೀಯ ಸಂಸ್ಕೃತಿ ಹೊಂದಿದೆ. ಭಾರತೀಯ ಸಂಸ್ಕೃತಿ ಸಂಕುಚಿತತೆಯಿಂದ ಕೂಡಿಲ್ಲ. ಆದರೆ, ಯುವ ಸಮುದಾಯ ನಮ್ಮ ಸಂಸ್ಕೃತಿಯಿಂದ ದೂರವಾಗುತ್ತಿದ್ದು, ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರುಹೋಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ಇದು ಸ್ಪರ್ಧಾತ್ಮಕ ಜಗತ್ತು, ಇದಕ್ಕೆ ವಿದ್ಯಾರ್ಥಿಗಳು ಸಿದ್ಧರಾಗಬೇಕು. ವಿದ್ಯಾರ್ಥಿಗಳಿಗೆ ವರ್ಷಕ್ಕೊಂದು ಬಾರಿ ಪರೀಕ್ಷೆ ಎದುರಾಗುತ್ತದೆ. ವಾರ್ಷಿಕ ಪರೀಕ್ಷೆಯನ್ನು ಎದುರಿಸಲು ವಿದ್ಯಾರ್ಥಿಗಳು ಸಾಕಷ್ಟು ತಯಾರಿ ಮಾಡಿಕೊಳ್ಳುತ್ತಾರೆ. ಇದೇ ರೀತಿ ನಮ್ಮ ಜೀವನದ ಪರೀಕ್ಷೆ ಪ್ರತಿನಿತ್ಯ ನಡೆಯುತ್ತಿರುತ್ತದೆ. ಈ ಜೀವನದ ಪರೀಕ್ಷೆಯನ್ನು ಅತ್ಯಂತ ಜಾಣ್ಮೆಯಿಂದ ಎದುರಿಸುವುದನ್ನು ಕಲಿಯಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಪ್ರಕಟಣ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ, ಪ್ರಾಂಶುಪಾಲರಾದ ಡಾ.ಎಂ.ಪೂರ್ಣಿಮ, ಶೈಕ್ಷಣಿಕ ಡೀನ್ ಡಾ.ರೇಚಣ್ಣ, ಕವಿಗಳಾದ ಡಾ. ಜಯಪ್ಪ ಹೊನ್ನಾಳಿ, ಡಾ.ಕೆ.ಎಸ್. ಲಾವಣ್ಯ ಪ್ರಭಾ, ಕೆರೋಡಿ ಎಂ.ಲೋಲಾಕ್ಷಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಬಾಲಬೋಧಿನಿ ಶಾಲೆಯ ಮಕ್ಕಳಿಗೆ ಪುಸ್ತಕ, ಸಮವಸ್ತ್ರ ವಿತರಣೆ

ಮೈಸೂರು, ಜು. 10– ಮೈಸೂರಿನ ಚಾಮುಂಡಿಪುರಂನಲ್ಲಿರುವ ಬಾಲಬೋಧಿನಿ ಶಾಲೆಯಲ್ಲಿ ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧಿಕಾರಿಗಳ ವರ್ಗ, ನೌಕರರ ಸಂಘ ಮತ್ತು ಚಾಮುಂಡೇಶ್ವರಿ ಕಾರು ಮಾಲೀಕರ ಮತ್ತು ಚಾಲಕರ ಸಂಘ, ರವಿ ಸ್ನೇಹ ಬಳಗದ ವತಿಯಿಂದ 40 ಶಾಲಾ ಮಕ್ಕಳಿಗೆ ಪುಸ್ತಕ ಹಾಗೂ ಸಮವಸ್ತ್ರ ವಿತರಿಸಲಾಯಿತು.



ಈ ವೇಳೆ ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ ಮಾತನಾಡಿ, ಸರ್ಕಾರಿ ಸೌಲಭ್ಯ ಸದುಪಯೋಗವಾಗಲಿ. ಸರ್ಕಾರ ಬಡ ವಿದ್ಯಾರ್ಥಿಗಳಿಗೆ ನೀಡಿರುವ ಆರ್‌ಟಿಇ ಸೌಲಭ್ಯ ಸದುಪಯೋಗ ಪಡೆದುಕೊಂಡು ಸತ್ಪ್ರಜೆಗಳಾಗಬೇಕು ಎಂದರು. ಸರ್ಕಾರ ಶಿಕ್ಷಣಕ್ಕಾಗಿ ಸಾಕಷ್ಟು ಅನುದಾನ ನೀಡುತ್ತಿದೆ. ಪಾಲಕರು ಮಕ್ಕಳಿಗೆ ಶಿಕ್ಷಣ ಕೊಡಿಸುವ ಮೂಲಕ ವಿದ್ಯಾವಂತರನ್ನಾಗಿ ಮಾಡಬೇಕು. ಶಾಲೆಯಲ್ಲಿ ಪ್ರತಿವರ್ಷ ಆರ್‌ಟಿಇ ಅಡಿಯಲ್ಲಿ ಆಯ್ಕೆಯಾದ ಮಕ್ಕಳಿಗೆ ಉಚಿತ ಪಠ್ಯ ಪುಸ್ತಕ ನೀಡಲಾಗುವುದು. ಅದರಂತೆ ಈ ವರ್ಷ ಸಹ ಸರ್ಕಾರಿ ಶಾಲೆಗಳಿಗೆ ಹೆಚ್ಚು ಅನುದಾನವನ್ನು ಬಜೆಟ್‌ನಲ್ಲಿ ನೀಡಿರುವುದು ಸಂತೋಷವಾಗಿದೆ ಎಂದು ಹೇಳಿದರು.

ದೇವರಾಜ ಸಂಚಾರಿ ಠಾಣೆಯ ವೃತ ನಿರೀಕ್ಷ ಮುನಿಯಪ್ಪ ಸಾಮಾಜಿಕ ಹೋರಾಟಗಾರ ವಿಕ್ರಂ ಅಯ್ಯಂಗಾರ್, ಸಂಘದ ಪದಾಧಿಕಾರಿಗಳಾದ ರವಿ, ಸುಬ್ರಮಣ್ಯ, ದೀಪಕ್, ಶಾಲೆಯ ಮುಖ್ಯ ಶಿಕ್ಷಕರಾದ ಜಯಂತಿ, ಶಿಕ್ಷಕರಾದ ಲೀಲಾವತಿ, ಜತ್ತಿ ಎಂ.ಡಿ.ಶ್ರೀನಿವಾಸ್ ಹಾಗೂ ಇನ್ನಿತರರು ಹಾಜರಿದ್ದರು.

ನಾಳೆ 'ಸ್ವರಾಲಯ ಸಾಂಸ್ಕೃತಿಕ ಹಬ್ಬ–2023'

ಮೈಸೂರು, ಜು.10– ನಗರದ ರಾಮಕೃಷ್ಣನಗರದ ಡಿ.ವಿ.ಸಿ. ಬಡಾವಣೆಯಲ್ಲಿರುವ ಸ್ವರಾಲಯ ಸಂಗೀತ ಸಂಸ್ಥೆಯು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಸಹಯೋಗದೊಂದಿಗೆ ಜು.12ರಂದು (ಬುಧವಾರ) ಕುವೆಂಪುನಗರದ ಗಾನಭಾರತಿ (ವೀಣೆ ಶೇಷಣ್ಣ ಭವನ) ಸಭಾಂಗಣದಲ್ಲಿ ಸಂಜೆ 4.30 ಗಂಟೆಗೆ 'ಸ್ವರಾಲಯ ಸಾಂಸ್ಕೃತಿಕ ಹಬ್ಬ–2023' ಅನ್ನು ಆಯೋಜಿಸಲಾಗಿದೆ. ಕರ್ನಾಟಕ ವಾದ್ಯವೃಂದ ನಿವೃತ್ತ ವಾದ್ಯೋಪಾಧ್ಯಾಯ ಕಲಾದೀಪ್ತಿ ವಿದ್ವಾನ್ ಡಾ.ಹೆಚ್.ಎಸ್.ತಾಂಡವಮೂರ್ತಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮುಖ್ಯ ಅತಿಥಿಯಾಗಿ ಸಂಗೀತ ಶಿಕ್ಷಕ ವಿದ್ವಾನ್ ರಾವ್ ಆರ್.ಶರತ್ ಭಾಗವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಸ್ವರಾಲಯ ಸಂಸ್ಥೆ ಅಧ್ಯಕ್ಷೆ ವಿದುಷಿ ಡಾ.ಸುಮ ಹರಿನಾಥ್ ವಹಿಸಲಿದ್ದಾರೆ. ವೇದಿಕೆ ಕಾರ್ಯಕ್ರಮದ ನಂತರ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸಂಸ್ಥೆ ವಿದ್ಯಾರ್ಥಿಗಳಾದ ಕು.ಕೆ.ಎಂ. ರಮ್ಯ ಅವರಿಂದ ದಾಸರ ಪದಗಳ ಗಾಯನವಿದ್ದು, ವಯೋಲಿನ್‌ನಲ್ಲಿ ವಿದ್ವಾನ್ ಸಿ.ಚೇತನ್ ಹಾಗೂ ಮೃದಂಗದಲ್ಲಿ ವಿದ್ವಾನ್ ವಿ.ಶ್ಯಾಮ್ ಸಹಕಾರ ನೀಡಲಿದ್ದಾರೆ. ಇದಾದ ನಂತರ ಮೈಸೂರಿನ ನಾದ ವಿದ್ಯಾಲಯ ಅಕಾಡೆಮಿ ಆಫ್ ಮ್ಯೂಸಿಕ್ ಅಂಡ್ ಡ್ಯಾನ್ಸ್‌ನ ವಿದುಷಿ ಮಿತ್ರ ನವೀನ್‌ರವರ ಶಿಷ್ಯವೃಂದದವರಿಂದ ಭರತನಾಟ್ಯ ಪ್ರದರ್ಶನವಿರುತ್ತದೆ. ಕಾರ್ಯಕ್ರಮಕ್ಕೆ ಉಚಿತ ಪ್ರವೇಶವಿದ್ದು, ಸಂಗೀತಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದು ಸಂಸ್ಥೆ ಕಾರ್ಯದರ್ಶಿ ಹೆಚ್.ಎಸ್.ಶ್ರೀಕಾಂತಮಣಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಹಕ ವ್ಯಾಜ್ಯಗಳ ಕಡತಗಳ ನಾಶ

ಮೈಸೂರು, ಜು.10– ಮೈಸೂರು ಜಿಲ್ಲಾ ಗ್ರಾಹಕರ ರಾಜ್ಯಗಳ ಪರಿಹಾರ ಆಯೋಗದಲ್ಲಿ ಜನವರಿ 2016 ರಿಂದ ಡಿಸೆಂಬರ್ 2017ರವರೆಗೆ ಅಂತಿಮ ತೀರ್ಮಾನವಾದ ಪ್ರಕರಣಗಳ ಕಡತಗಳನ್ನು ನಾಶಗೊಳಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. ರಾಜ್ಯ ಪ್ರಕಾಶಕರು ಈ ಅವಧಿಯಲ್ಲಿ ತಮ್ಮ ಕಡತಗಳೊಂದಿಗೆ ಸಲ್ಲಿಸಿರುವ ಮೂಲ ದಾಖಲೆ ಮತ್ತು ಇನ್ನಿತರ ಆದೇಶದ ದಾಖಲೆಗಳನ್ನು ಪ್ರಕಟಣೆ ಹೊರಡಿಸಿದ ದಿನಾಂಕದಿಂದ ಒಂದು ತಿಂಗಳೊಳಗೆ ಕಚೇರಿಯನ್ನು ಸಂಪರ್ಕಿಸಿ ತಮ್ಮ ಮೂಲ ದಾಖಲೆಗಳನ್ನು ಪಡೆದುಕೊಳ್ಳತಕ್ಕದ್ದು.

ಈ ಪ್ರಕಟಣೆ ಹೊರಡಿಸಿದ ಒಂದು ತಿಂಗಳ ನಂತರ ಕಡತಗಳನ್ನು ನಾಶಪಡಿಸಲಾಗುವುದು. ತದನಂತರ ದಾಖಲೆಗಳನ್ನು ಕೋರಿ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಾ ಗ್ರಾಹಕರ ಆಯೋಗದ ಸಹಾಯಕ ರಿಜಿಸ್ಟರ್ ಹಾಗೂ ಸಹಾಯಕ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಾಜನ ಕಾಲೇಜಿನಲ್ಲಿ ಬಂಡವಾಳ ಮಾರುಕಟ್ಟೆ ಕಾರ್ಯಾಗಾರ

ಮೈಸೂರು, ಜು. 10– ಮೈಸೂರಿನ ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ ವ್ಯವಹಾರ ನಿರ್ವಹಣಾ ವಿಭಾಗ ಹಾಗೂ IQAC ಸಂಯುಕ್ತಾ ಶ್ರಯದಲ್ಲಿ ಬಂಡವಾಳ ಮಾರುಕಟ್ಟೆ ಕಾರ್ಯಾಗಾರ ನಡೆಯಿತು.



ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಜಸ್ಟ್ ನಿಫ್ಟಿ ಸಂಸ್ಥಾಪಕರಾದ ಪ್ರದೀಪ್, ಸಾಗರ್ ಹಾಗೂ ಮೋಹನ್ ಕುಮಾರ್ ಆಗಮಿಸಿದ್ದರು. ಕಾರ್ಯಾಗಾರವು ವಿದ್ಯಾರ್ಥಿಗಳಿಗೆ ಭಾರತದಲ್ಲಿ ಬಂಡವಾಳ ಮಾರುಕಟ್ಟೆಗಳ ಕಾರ್ಯನಿರ್ವಹಣೆ ಮತ್ತು ಮಹತ್ವದ ಬಗ್ಗೆ ಸಮಗ್ರ ತಿಳಿವಳಿಕೆಯನ್ನು ನೀಡಿತು. ಕಾರ್ಯಾಗಾರವು ಪ್ರಾಥಮಿಕ ಮತ್ತು ಮಾಧ್ಯಮಿಕ ಮಾರುಕಟ್ಟೆಗಳ ಸಮಗ್ರ ಅವಲೋಕನವನ್ನು ವಿದ್ಯಾರ್ಥಿಗಳಿಗೆ ಒದಗಿಸಿತು. ಕಾರ್ಯಕ್ರಮದಲ್ಲಿ ಮೂಲಭೂತ ವಿಶ್ಲೇಷಣಾ ವಿಧಾನವನ್ನು ಪರಿಚಯಿಸಲಾಯಿತು. ಇದು ಕಂಪನಿಯ ಹಣಕಾಸು ಹೇಳಿಕೆಗಳು, ಉದ್ಯಮದ ಪ್ರವೃತ್ತಿಗಳು ಮತ್ತು ಅದರ ಆಂತರಿಕ ಮೌಲ್ಯವನ್ನು ಮಾಡಲು ಸ್ಥೂಲ ಆರ್ಥಿಕ ಅಂಶಗಳನ್ನು ವಿಶ್ಲೇಷಿಸುವುದನ್ನು ಒಳಗೊಂಡಿತ್ತು. ತಿಳುವಳಿಕೆಯುಳ್ಳ ಹೂಡಿಕೆ ಆಯ್ಕೆಗಳನ್ನು ಮಾಡಲು ಹಣಕಾಸಿನ ಅನುಪಾತಗಳು ಮತ್ತು ಪ್ರಮುಖ ಕಾರ್ಯಕ್ಷಮತೆ ಸೂಚಕಗಳನ್ನು ಹೇಗೆ ನಿರ್ಣಯಿಸುವುದು ಎಂಬುದನ್ನು ವಿದ್ಯಾರ್ಥಿಗಳು ಕಲಿತರು.

ಹೂಡಿಕೆ ತಂತ್ರಗಳು: ಭಾಗವಹಿಸುವವರಿಗೆ ಮೌಲ್ಯ ಹೂಡಿಕೆ ಮತ್ತು ಆದಾಯ ಹೂಡಿಕೆಯಂತಹ ತಂತ್ರಗಳ ವ್ಯಾಪ್ತಿಯನ್ನು ಪರಿಚಯಿಸಲಾಯಿತು. ವೈಯಕ್ತಿಕ ಹೂಡಿಕೆ ವಿಧಾನವನ್ನು ಅಭಿವೃದ್ಧಿಪಡಿಸಿಕೊಳ್ಳಲು ಅವರನ್ನು ಪ್ರೋತ್ಸಾಹಿಸಲಾಯಿತು.

ಪೋರ್ಟ್‌ಫೋಲಿಯೊ ವೈವಿಧ್ಯೀಕರಣ: ಅಪಾಯವನ್ನು ಕಡಿಮೆ ಮಾಡಲು ಮತ್ತು ಆದಾಯವನ್ನು ಗರಿಷ್ಠಗೊಳಿಸಲು ಪೋರ್ಟ್‌ಫೋಲಿಯೊ ವೈವಿಧ್ಯೀಕರಣದ ಮಹತ್ವವನ್ನು ಕಾರ್ಯಾಗಾರವು ಒತ್ತಿ ಹೇಳಿತು. ವಿದ್ಯಾರ್ಥಿಗಳು ಆಸ್ತಿ ಹಂಚಿಕೆ, ವಲಯದ ವೈವಿಧ್ಯೀಕರಣ ಮತ್ತು ಸಮತೋಲಿತ ಹೂಡಿಕೆ ಬಂಡವಾಳದ ಪ್ರಾಮುಖ್ಯತೆಯ ಬಗ್ಗೆ ಕಲಿತರು.

ತಂತ್ರಜ್ಞಾನದ ಪಾತ್ರ: ಕಾರ್ಯಾಗಾರವು ಬಂಡವಾಳ ಮಾರುಕಟ್ಟೆಗಳ ಮೇಲೆ ತಂತ್ರಜ್ಞಾನದ ಪ್ರಭಾವವನ್ನು ಪರಿಶೋಧಿಸಿತು, ಡೌಸ್ ಥಿಯರಿ, ಅಪ್ಟ್ರೆಂಡ್, ಡೌನ್ಟ್ರೆಂಡ್, ಸೈಡ್ವೇಸ್ ಮತ್ತು ವ್ಯಾಪಾರ ಮತ್ತು ಹೂಡಿಕೆಗಾಗಿ ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳ ವಿಷಯಗಳ ಕುರಿತು ಚರ್ಚಿಸಲಾಯಿತು.

ಪ್ರಾಂಶುಪಾಲರಾದ ಡಾ. ಬಿ ಆರ್ ಜಯಕುಮಾರಿ, ನಿರ್ವಹಣಾ ವಿಭಾಗದ ಡಾ. ಶೈಲಾ ಎಸ್, ವಿಭಾಗದ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ

ನಂಜನಗೂಡು, ಹುಣಸೂರಲ್ಲಿ ಅಂಗನವಾಡಿ ನೌಕರರ ಪ್ರತಿಭಟನೆ





ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ನಂಜನಗೂಡು, ಹುಣಸೂರಲ್ಲಿ ಅಂಗನವಾಡಿ ನೌಕರರ ಸಂಘದ ತಾಲೂಕು ಘಟಕದ ಕಾರ್ಯಕರ್ತೆಯರು ಪ್ರತಿಭಟನೆ ನಡೆಸಿದರು.

ನಂಜನಗೂಡು/ಹುಣಸೂರು, ಜು.10– ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಕನಿಷ್ಠ ವೇತನ ನಿಗದಿ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆ ಒತ್ತಾಯಿಸಿ ನಂಜನಗೂಡು ಹಾಗೂ ಹುಣಸೂರಲ್ಲಿ ರಾಜ್ಯ ಅಂಗನವಾಡಿ ನೌಕರರ ಸಂಘದ ತಾಲೂಕು ಘಟಕದ ಕಾರ್ಯಕರ್ತೆಯರು ಸೋಮವಾರ ಪ್ರತಿಭಟನೆ ನಡೆಸಿದರು.

ನಂಜನಗೂಡು: ನಗರದ ಮಿನಿ ವಿಧಾನ ಸೌಧದ ಮುಂಭಾಗ ಜಮಾವಣೆಗೊಂಡ ಸಂಘದ ಕಾರ್ಯಕರ್ತೆಯರು ಭಿತ್ತಿಫಲಕಗಳನ್ನು ಪ್ರದರ್ಶಿಸುವ ಮೂಲಕ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಾ ತಮ್ಮ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು.

ಸಂಘದ ಅಧ್ಯಕ್ಷೆ ಕಮಲಾಕ್ಷಿ ಮಾತನಾಡಿ, 26 ಲಕ್ಷ ಅಂಗನವಾಡಿ ನೌಕರರು ದಯನೀಯ ಸ್ಥಿತಿಯಲ್ಲಿ ಕೆಲಸ ಮಾಡುತ್ತಿದ್ದಾರೆ. 2018ರ ಬಳಿಕ ಕೇಂದ್ರ ಸರ್ಕಾರ ಗೌರವಧನ ಏರಿಕೆ ಮಾಡಿಲ್ಲ. ಅಂಗನವಾಡಿ ನೌಕರರಿಗೆ ಇಎಸ್‌ಐ, ಪಿಎಫ್, ಪಿಂಚಣಿ ಹಾಗೂ ಇತರೆ ಸೌಲಭ್ಯಗಳನ್ನು ನೀಡಬೇಕು, ಸುಪ್ರೀಂಕೋರ್ಟ್ ಆದೇಶದಂತೆ ಗ್ರಾಜ್ಯೂಟಿ ನೀಡಬೇಕು, ಏಕರೂಪ ಸೇವಾ ನಿಯಮಗಳನ್ನು ರೂಪಿಸಬೇಕು, ಅಂಗನವಾಡಿ ಸಿಬ್ಬಂದಿ ಪರಿಣಾಮಕಾರಿಯಾಗಿ ಕೆಲಸ ನಿರ್ವಹಿಸಲು ಗುಣಮಟ್ಟದ ಮೊಬೈಲ್ ನೀಡಬೇಕು, ಎನ್‌ಇಪಿ ಹಿಂಪಡೆಯಬೇಕು, ಅಂಗನವಾಡಿಗಳಲ್ಲಿ ಕಾರ್ಪೋರೇಟ್ ಸಂಸ್ಥೆಗಳು ಬಂಡವಾಳ ಹೂಡಿಕೆ ಮಾಡಲು ಅವಕಾಶ ನೀಡಬಾರದು, ಪೋಷಣ್ ಅಭಿಯಾನಕ್ಕೆ ಆಧಾರ್ ಅಥವಾ ಫೋನ್ ನಂಬರ್ ಲಿಂಕ್ ಮಾಡುವುದು ಕಡ್ಡಾಯ ಎಂಬ ಆದೇಶವನ್ನು ಹಿಂಪಡೆಯಬೇಕು. ಸಂಘಟನೆ ರೂಪಿಸಿದ ಮುಷ್ಕರಗಳಲ್ಲಿ ಭಾಗವಹಿಸಿದ ಕಾರಣಕ್ಕಾಗಿ ದೆಹಲಿಯಲ್ಲಿ ಕಾನೂನುಬಾಹಿರವಾಗಿ ಕೆಲಸದಿಂದ ವಜಾ ಮಾಡಿರುವ ಅಂಗನವಾಡಿ ಕಾರ್ಯಕರ್ತೆಯನ್ನು ಮರು ನೇಮಕ ಮಾಡಿಕೊಳ್ಳಬೇಕು, ಪ್ರತಿಭಟಿಸುವ ಹಕ್ಕುಗಳನ್ನು ಖಾತರಿಗೊಳಿಸಬೇಕು, ಈ ಎಲ್ಲಾ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಬರೆದಿರುವ ಮನವಿ ಪತ್ರವನ್ನು ತಹಸೀಲ್ದಾರ್ ಶಿವಕುಮಾರ್‌ಗೆ ಹಸ್ತಾಂತರಿಸುವ ಮೂಲಕ ಪ್ರತಿಭಟನೆ ಅಂತ್ಯಗೊಳಿಸಿದರು.

ಪ್ರತಿಭಟನೆಯಲ್ಲಿ ಅಂಗನವಾಡಿ ನೌಕರರ ಸಂಘದ ಬಿಳಿಗೆರೆ ವೃತ್ತದ ಅಧ್ಯಕ್ಷೆ ಲೀಲಾವತಿ, ಕಾರ್ಯದರ್ಶಿ ಹೇಮಾವತಿ, ಉಪಾಧ್ಯಕ್ಷರಾದ ಯಶೋಧ, ಪುಷ್ಪಲತಾ, ಖಜಾಂಚಿಗಳಾದ ಮರಿಯಮ್ಮ, ಮಹದೇವಮ್ಮ, ನೇತ್ರಾವತಿ, ಭಾಗ್ಯಮ್ಮ, ಲಕ್ಷ್ಮಿ, ಜ್ಯೋತಿ, ಸುವರ್ಣ, ಚಂದ್ರಿಕಾ, ಅಜಿತ, ಯಶೋಧ, ಶಿವಮ್ಮ, ಸಾಕಮ್ಮ, ಸಣ್ಣ ತಾಯಮ್ಮ, ಸೇರಿದಂತೆ ನೂರಕ್ಕೂ ಹೆಚ್ಚು ಅಂಗನವಾಡಿ ನೌಕರರು ಭಾಗವಹಿಸಿದ್ದರು.

ಹುಣಸೂರು: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ನಗರದಲ್ಲಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ಅಂಗವಾಡಿ ನೌಕರರ ಸಂಘದ ಕಾರ್ಯದರ್ಶಿ ಪುಷ್ಪಲತಾ ಮಾತನಾಡಿ, ದೇಶದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಕನಿಷ್ಠ ವೇತನ ನಿಗದಿ ಮಾಡಬೇಕು. ನಾವು ಪರಿಣಾಮಕಾರಿಯಾಗಿ ಕೆಲಸ ಮಾಡಲು ಗುಣಮಟ್ಟದ ಮೊಬೈಲ್ ನೀಡಬೇಕು. ಹಂತಹಂತವಾಗಿ ಅವುಗಳಿಗೆ ಬದಲಾಗಿ ಟ್ಯಾಬ್‌ಗಳನ್ನು ಕೊಡಬೇಕು. ಅವುಗಳಿಗೆ ಡಾಟಾ ಪ್ಯಾಕ್‌ಗಳನ್ನು ಖಾತರಿ ಮಾಡಬೇಕು. ಅಲ್ಲದೇ ಮೊಬೈಲ್ ಹಾಗೂ ಟ್ಯಾಬ್‌ಗಳಲ್ಲಿ ಪ್ರಾದೇಶಿಕ ಭಾಷೆಗಳ ಪ್ರೋಗ್ರಾಂಗಳನ್ನು ಅಳವಡಿಸಬೇಕು. 2023ರ ಬಜೆಟ್‌ನಲ್ಲಿ ಹೆಚ್ಚಳವಾದ 1000 ರೂ. ಗೌರವಧನ ಬಿಡುಗಡೆಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಿಐಟಿಯುನ ಅಂಗನವಾಡಿ ನೌಕರರ ಸಂಘದ ಅಧ್ಯಕ್ಷೆ ಮಂಗಳಗೌರಮ್ಮ ಖಜಾಂಚಿ ಲತಾ, ಕಾಮಾಕ್ಷಿ ಮಂಜುಳ, ರಂಜಿತಾ, ಲತಾ, ಸುಲೋಚನಾ, ರೇಖಾಮಣಿ, ರಾಧ, ಪ್ರಮಿಳಾ, ಸಬೀತಾ, ಸಿಐಟಿಯುನ ಬಸವರಾಜು ಹಾಗೂ ಇತರರಿದ್ದರು.



ಹೆಚ್.ಡಿ.ಕೋಟೆಯ ಶ್ರೀಚಾಮುಂಡೇಶ್ವರಿ ದೇವಸ್ಥಾನದಲ್ಲಿ ಅಮ್ಮನವರ ಜನ್ಮೋತ್ಸವದ ಅಂಗವಾಗಿ ವಿಶೇಷ ಪೂಜೆ ನಡೆಯಿತು. ಈ ವೇಳೆ ಕೋಟೆ, ಸರಗೂರು ತಾಲೂಕಿನ ಸಾವಿರಾರು ಮಂದಿ ದೇವರ ದರ್ಶನ ಪಡೆದು ಪುನೀತರಾದರು. ಈ ವೇಳೆ ದೇವಾಲಯದ ಪ್ರಧಾನ ಅರ್ಚಕ ಸತೀಶ್, ಸೋಮಶೇಖರ್, ಸಚಿತ್ ಇನ್ನಿತರರಿದ್ದರು.



ಪಿರಿಯಾಪಟ್ಟಣ ತಾಲೂಕಿನ ಸೀಗೂರು ಗೇಟ್ ಬಳಿಯ ಎಸ್‌ಬಿಐ ಎದುರು ಸಾಲ ನೀಡುವಂತೆ ಆಗ್ರಹಿಸಿ ರೈತರು ದಿಢೀರ್ ಪ್ರತಿಭಟನೆ ನಡೆಸಿದರು. ಈ ವೇಳೆ ಬ್ಯಾಂಕ್ ವ್ಯವಸ್ಥಾಪಕ ಕೃಷ್ಣ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದರು. ಪ್ರತಿಭಟನೆಯಲ್ಲಿ ಸುಮಾರು 40ಕ್ಕೂ ಹೆಚ್ಚು ರೈತರು ಹಾಜರಿದ್ದರು.

ಜೈನಮುನಿ ಹತ್ಯೆ ಖಂಡಿಸಿ ಮೌನ ಪ್ರತಿಭಟನೆ



ಸರಗೂರು, ಜು.10– ಜೈನಮುನಿ ಕಾಮಕುಮಾರ ನಂದಿ ಮಹಾರಾಜ್ ಹತ್ಯೆ ಖಂಡಿಸಿ ಪಟ್ಟಣದಲ್ಲಿ ಸೋಮವಾರ ಜೈನ ಬಂಧುಗಳು ಮೌನ ಪ್ರತಿಭಟನೆ ನಡೆಸಿದರು.

ಪಟ್ಟಣದ ಶ್ರೀ ಅನಂತನಾಥಸ್ವಾಮಿ ಜಿನ ಚೈತ್ಯಾಲಯದ ಬಳಿ ಜಮಾಯಿಸಿದ ಜೈನ ಬಂಧುಗಳು, ಅಲ್ಲಿಂದ ಮೆರವಣಿಗೆಯಲ್ಲಿ ಹೊರಟು ಬಸವೇಶ್ವರ ದೇವಸ್ಥಾನ, ಚಿಕ್ಕ ದೇವಮ್ಮನವರ ಸರ್ಕಲ್, ಮಹಾವೀರ ವೃತ್ತದ ಮೂಲಕ ತೆರಳಿ ಬಸ್ ನಿಲ್ದಾಣದ ಬಳಿ ಪ್ರತಿಭಟನೆ ನಡೆಸಿದರು. ಬಳಿಕ ತಾಲೂಕು ಕಚೇರಿಗೆ ಮೆರವಣಿಗೆಯಲ್ಲಿ ತೆರಳಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ತಾಲೂಕು ತಹಸೀಲ್ದಾರ್ ನಾಗಡ ದಿನ್ನಿ ಶಂಶಾಲಂ ಅವರಿಗೆ ಮನವಿ ಸಲ್ಲಿಸಿದರು.

ಜೈನ ಸಮಾಜದ ಅಧ್ಯಕ್ಷ ಎಸ್.ಬಿ. ನಾಗರಾಜು, ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲೂಕಿನ ಹಿರೇಕೋಡಿ ಗ್ರಾಮದ ಆಶ್ರಮದಲ್ಲಿ ವಾಸವಿದ್ದ ಜೈನಮುನಿ ಕಾಮಕುಮಾರ ನಂದಿ ಮಹಾರಾಜ್ ಅವರು ತಮ್ಮ 22ನೇ ವಯಸ್ಸಿನಲ್ಲೇ ಸನ್ಯಾಸ ದೀಕ್ಷೆ ಪಡೆದು ದೇಶದ ಉದ್ದಗಲಕ್ಕೂ ಧರ್ಮ ಪ್ರಚಾರ ನಡೆಸಿದ ಜೈನ ಮುನಿಗಳಾಗಿದ್ದರು. ಆದರೆ ಇವರ ಹತ್ಯೆ ಖಂಡನೀಯವಾಗಿದ್ದು, ದೇಶದಲ್ಲಿ ಸಾಧು ಸಂತರಿಗೆ ರಕ್ಷಣೆ ಇಲ್ಲದಂತಾಗಿದೆ ಎಂದು ಆರೋಪಿಸಿದ ಅವರು, ಜೈನ ಮುನಿಗಳು ಹಾಗೂ ಜೈನ ಬಸದಿ, ಸಮಾಜಕ್ಕೆ ಸರ್ಕಾರ ರಕ್ಷಣೆ ಒದಗಿಸಬೇಕು ಎಂದು ಮನವಿ ಮಾಡಿದರು.

ಸಮಾಜದ ಹಿರಿಯ ಮುಖಂಡ ಎಸ್.ವಿ.ಪ್ರದ್ಮಪ್ರಭ ಮಾತನಾಡಿ, ಜೈನಮುನಿ ಕಾಮಕುಮಾರ ನಂದಿ ಮಹಾರಾಜ್ ಅವರ ಹತ್ಯೆಗೈದ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಜೈನ ಸಮಾಜದ ಅಧ್ಯಕ್ಷ ಎಸ್.ಬಿ.ನಾಗರಾಜು, ಕಾರ್ಯದರ್ಶಿ ಎಸ್.ಎನ್. ದೇವೇಂದ್ರಯ್ಯ, ಖಜಾಂಚಿ ಎಸ್.ಪಿ. ನಿತಿನ್, ಹಿರಿಯ ಮುಖಂಡರಾದ ಬ್ರಹ್ಮದೇವಯ್ಯ, ಎಸ್.ಜೆ. ರವಿಂದ್ರಕುಮಾರ್, ಫಣಿರಾಜ್, ಜೀವಣ್ಣ, ತಾಲೂಕು ಬಿಜೆಪಿ ಅಧ್ಯಕ್ಷ ಗುರುಸ್ವಾಮಿ, ಪಪಂ ಸದಸ್ಯ ರಾಮು, ಶ್ರೀವತ್ಸ, ಎಸ್.ಎಸ್. ಸೋಮಪ್ರಭ, ಎಸ್.ಪಿ. ಪ್ರಸಾದ್, ಸುರೇಶ್‌ಜೈನ್, ಎಸ್.ಎಸ್. ಮಂಜುನಾಥ್, ಪ್ರವೀಣ್‌ಕುಮಾರ್ ಸೇರಿದಂತೆ ಇನ್ನಿತರರಿದ್ದರು.

ಜ್ಞಾನದೀಪ ಸ್ವಯಂ ಸೇವಾ ಶಿಕ್ಷಕರ ಸೇರ್ಪಡೆ ಕಾರ್ಯಕ್ರಮ

ಕೊಟ್ಟ ಜವಾಬ್ದಾರಿ ನಿರ್ವಹಿಸದಿದ್ದರೇ ಶಿಕ್ಷಕರ ನೇಮಕ ರದ್ದು

ಶ್ರೀಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ತಾಲೂಕು ಯೋಜನಾಧಿಕಾರಿ ರಮೇಶ್

ಕೆ.ಆರ್.ನಗರ, ಜು.10– ಕೊಟ್ಟ ಜವಾಬ್ದಾರಿ ನಿರ್ವಹಿಸದೆ ಬೇರೆ ಕೆಲಸದತ್ತ ಗಮನ ಹರಿಸಿದರೆ ಅಂತಹ ಶಿಕ್ಷಕರ ನೇಮಕ ರದ್ದುಗೊಳಿಸಲಾಗುವುದು ಎಂದು ತಾಲೂಕು ಯೋಜನಾಧಿಕಾರಿ ರಮೇಶ್ ತಿಳಿಸಿದರು.

ಪಟ್ಟಣದ ಶ್ರೀಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಸಭಾಂಗಣದಲ್ಲಿ ನಡೆದ ಜ್ಞಾನದೀಪ ಸ್ವಯಂ ಸೇವಾ ಶಿಕ್ಷಕರ ಸೇರ್ಪಡೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ಬಾರಿ ನೇಮಕಗೊಂಡ ಶಿಕ್ಷಕರು ತರಕಾರಿ ತರುವುದು, ತಮ್ಮ ಮಕ್ಕಳನ್ನು ಶಾಲೆಗೆ ಬಿಡುವುದು ಹಾಗೂ ಇನ್ನಿತರ ಕೆಲಸದಲ್ಲಿ ತೊಡಗಿದ್ದರಿಂದ ಅಂತಹ ಶಿಕ್ಷಕರನ್ನು ಈ ಬಾರಿ ಮರು ನೇಮಕ ಮಾಡಿಕೊಂಡಿಲ್ಲ ಎಂದರು.

ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗಡೆಯವರು ರಾಜ್ಯದಲ್ಲಿ ಈ ಬಾರಿ ಸಾವಿರ ಜ್ಞಾನದೀಪ ಸ್ವಯಂ ಸೇವಾ ಶಿಕ್ಷಕರ ನೇಮಕ ಮಾಡಿದ್ದಾರೆ. ಈ ಪೈಕಿ ಮೈಸೂರಿನ 6 ತಾಲೂಕುಗಳಿಗೆ 14 ಶಿಕ್ಷಕರನ್ನು ನೇಮಿಸಿದ್ದು, ಅದರಲ್ಲೂ ಕೆ.ಆರ್.ನಗರ ತಾಲೂಕಿಗೆ 8 ಮಂದಿ ಶಿಕ್ಷಕರನ್ನು ನೇಮಿಸಿರುವುದು ವಿಶೇಷವಾಗಿದೆ ಎಂದರು.



ಕಳೆದ ಬಾರಿ ಪ್ರತಿ ಶಿಕ್ಷಕರಿಗೆ 5 ಸಾವಿರ ಗೌರವಧನ ನೀಡುತ್ತಿದ್ದೆವು. ಆದರೆ ಈ ಬಾರಿ 8 ಸಾವಿರ ಗೌರವಧನ ನೀಡುತ್ತಿದ್ದೇವೆ. ನೀವು ಸಹ ಸೇವಾ ಮನೋಭಾವದಿಂದ ಕಾರ್ಯ ನಿರ್ವಹಿಸಬೇಕು. ಅಲ್ಲದೇ ತರಬೇತಿ ಪಡೆದ ಸ್ಥಳೀಯರನ್ನೇ ಆಯಾ ಶಾಲೆಗೆ ನೇಮಕ ಮಾಡಿದ್ದು, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘಕ್ಕೆ ಒಳ್ಳೆಯ ಹೆಸರು ತರುವಂತೆ ಕರೆ ನೀಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘ ಸರ್ಕಾರದ ಭಾಗವಾಗಿ ಕೆಲಸ ಮಾಡುತ್ತಿದೆ. ಮಹಿಳಾ ಸಹಕಾರ ಸಂಘಗಳಿಗೆ ಸಾಲ ನೀಡುವುದಲ್ಲದೆ ಮಾಸಾಶನ, ಸಂಘದ ಸದಸ್ಯರ ಮಕ್ಕಳಿಗೆ ವಿದ್ಯಾರ್ಥಿ ವೇತನ, ಸಮುದಾಯ ಭವನಗಳು ಹಾಗೂ ಕೆರೆ ಅಭಿವೃದ್ಧಿ ಸೇರಿದಂತೆ ಗುಡಿ ಕಾರ್ಮಿಕರು, ರೈತರಿಗೆ ಸಹಾಯಧನ ಪರಿಕರ ನೀಡುವ ಕೆಲಸವನ್ನು ಮಾಡುತ್ತಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೃಷ್ಣಪ್ಪ ಮಾತನಾಡಿ, ಶಾಲೆಗಳಲ್ಲಿ ಶಿಕ್ಷಕರ ಕೊರತೆ ನೀಗಿಸಲು ಇಲಾಖೆ ಜೊತೆ ಕೈ ಜೋಡಿಸಿರುವ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಶಾಲಾ ಕಟ್ಟಡ, ಮೂಲ ಸೌಕರ್ಯ ಒದಗಿಸಲು ಮುಂದಾಗಿರುವುದು ಒಳ್ಳೆಯ ಬೆಳವಣಿಗೆ. ಮುಂದಿನ ದಿನಗಳಲ್ಲಿ ಹೆಚ್ಚು ಸಮಾಜಮುಖಿ ಕಾರ್ಯ ಕೈಗೊಳ್ಳುವ ಜೊತೆಗೆ ರಾಜ್ಯದ ಅಭಿವೃದ್ಧಿಗೆ ಶ್ರಮಿಸಲಿ ಎಂದ ಅವರು, ಇದೇ ವೇಳೆ ಧರ್ಮಸ್ಥಳದ ಧರ್ಮಾಧಿಕಾರಿ ಶ್ರೀಡಾ.ವೀರೇಂದ್ರ ಹೆಗ್ಗಡೆ ಮತ್ತು ಡಾ.ಹೇಮಾವತಿ ಹೆಗ್ಗಡೆ ಅವರನ್ನು ಅಭಿನಂಸನೆ ಸಲ್ಲಿಸುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಪತ್ರಕರ್ತರ ಸಂಘದ ಅಧ್ಯಕ್ಷ ಶಿವರಾಮು, ಇಸಿಓ ದಾಸಪ್ಪ ಧರ್ಮಸ್ಥಳ ಸಂಘದ ಬಾಲಚಂದ್ರ, ಮಮತಾ, ಜ್ಞಾನದೀಪ ಸ್ವಯಂಸೇವಾ ಶಿಕ್ಷಕರಾದ ಚಂದ್ರಕಲಾ ಪ್ರಸಾದ್, ಮೀನಾ, ಲಕ್ಷ್ಮಿ, ಲತಾ, ಗಿರೀಶ್, ಮೇಘಶ್ರೀ, ಜ್ಯೋತಿ, ಧರ್ಮಸ್ಥಳದ ಸಂಘದ ಸಿಬ್ಬಂದಿ ಇನ್ನಿತರರಿದ್ದರು.

ಆದರ್ಶ ವಿದ್ಯಾಲಯದಲ್ಲಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ನಂಜನಗೂಡು, ಜು.10– ತಾಲೂಕಿನ ದೇಬೂರು ಗ್ರಾಮದಲ್ಲಿರುವ ಆದರ್ಶ ವಿದ್ಯಾಲಯದಲ್ಲಿ 8 ಮತ್ತು 9ನೇ ತರಗತಿಯಲ್ಲಿ ನಾಲ್ಕು ಸೀಟುಗಳು ಖಾಲಿ ಇದ್ದು. ಎಂಟನೇ ತರಗತಿಯಲ್ಲಿ ಅಲ್ಪಸಂಖ್ಯಾತರ ಒಂದು ಸೀಟು, ಅಲ್ಪಸಂಖ್ಯಾತ ಮಹಿಳೆಯ ಒಂದು ಸೀಟು ಖಾಲಿ ಇದೆ. ಹಾಗೆಯೇ ಒಂಬತ್ತನೇ ತರಗತಿಯಲ್ಲಿ ಅಲ್ಪಸಂಖ್ಯಾತರ ಒಂದು ಸೀಟು, ಹಿಂದುಳಿದ 2ಎ ವರ್ಗದ ಒಂದು ಸೀಟು ಖಾಲಿ ಇದೆ.

ಖಾಲಿ ಇರುವ ಸೀಟುಗಳ ಭರ್ತಿಗಾಗಿ ಜು.19ರಂದು ಪರೀಕ್ಷೆ ನಡೆಸಲಾಗುತ್ತಿದ್ದು, ಆಸಕ್ತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿ ಪರೀಕ್ಷೆಗೆ ಹಾಜರಾಗಬಹುದು.

ಅರ್ಜಿ ಸಲ್ಲಿಸಲು ಜು.13 ರಂದು ಕೊನೆಯ ದಿನಾಂಕವಾಗಿದ್ದು ಆಸಕ್ತ ವಿದ್ಯಾರ್ಥಿಗಳು ನಿಗದಿತ ಸಮಯಕ್ಕೂ ಮುನ್ನ ಅರ್ಜಿ ಸಲ್ಲಿಸಿ ಪರೀಕ್ಷೆ ಎದುರಿಸುವ ಮೂಲಕ ಶಾಲೆಯಲ್ಲಿ ಪ್ರವೇಶ ಪಡೆಯಬಹುದಾಗಿದೆ ಎಂದು ಮುಖ್ಯ ಶಿಕ್ಷಕ ಚೆನ್ನಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಚಿತ ಆರೋಗ್ಯ ಶಿಬಿರ ಸದುಪಯೋಗಪಡಿಸಿಕೊಳ್ಳಿ



ಬನ್ನೂರು ಲಯನ್ಸ್ ಸಂಸ್ಥೆ ಅಧ್ಯಕ್ಷ ಎಸ್.ಕೃಷ್ಣಪ್ಪ ಕರೆ

ತಿ.ನರಸೀಪುರ, ಜು.10– ಗ್ರಾಮೀಣ ಬಡ ಜನರಿಗಾಗಿ ಸಂಘ ಸಂಸ್ಥೆಗಳು ಆಯೋಜಿಸುವ ಉಚಿತ ಆರೋಗ್ಯ ಶಿಬಿರವನ್ನು ಸದುಪಯೋಗಪಡಿಸಿಕೊಳ್ಳುವ ಮೂಲಕ ಸಾರ್ವಜನಿಕರು ಆರೋಗ್ಯದಲ್ಲಿ ಸಮತೋಲನ ಕಾಯ್ದುಕೊಳ್ಳಬೇಕು ಎಂದು ಮಾಜಿ ಶಾಸಕ ಹಾಗೂ ಬನ್ನೂರು ಲಯನ್ಸ್ ಸಂಸ್ಥೆ ಅಧ್ಯಕ್ಷ ಎಸ್.ಕೃಷ್ಣಪ್ಪ ಕರೆ ನೀಡಿದರು.

ಬನ್ನೂರಿನ ಲಯನ್ಸ್ ವಿದ್ಯಾಸಂಸ್ಥೆ ಆವರಣದಲ್ಲಿ ಆದಿಚುಂಚನಗಿರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಲಯನ್ಸ್ ಕ್ಲಬ್ ಸಂಯುಕ್ತಾಶ್ರಯದಲ್ಲಿ ಸೋಮವಾರ ನಡೆದ ಬೃಹತ್ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಜನರು ಆರೋಗ್ಯದ ಬಗ್ಗೆ ಕಾಳಜಿ ವಹಿಸದ ಕಾರಣ ಅನೇಕ ಮಾರಕ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ಅಲ್ಲದೇ ಬಹುಬೇಗ ಸಾವನ್ನಪ್ಪುತ್ತಿರುವುದು ಕಂಡು ಬರುತ್ತಿದೆ. ಈ ಹಿನ್ನೆಲೆಯಲ್ಲಿ ಸಂಘ ಸಂಸ್ಥೆಗಳು ಗ್ರಾಮೀಣ ಜನರ ಹಿತದೃಷ್ಟಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಏರ್ಪಡಿಸುತ್ತಿವೆ. ಆ ನಿಟ್ಟಿನಲ್ಲಿ ಲಯನ್ಸ್ ಸಂಸ್ಥೆ ಅನೇಕ ವರ್ಷಗಳಿಂದ ಗ್ರಾಮೀಣರ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ಶಿಬಿರ ಆಯೋಜಿಸುತ್ತಾ ಬಂದಿದೆ. ಹೀಗಾಗಿ ಸಾರ್ವಜನಿಕರು ಇದರ ಸದುಪಯೋಗಕ್ಕೆ ಮುಂದಾಗಬೇಕು. ಚುಂಚನಗಿರಿ ಆಸ್ಪತ್ರೆಯಿಂದ ನೂರಕ್ಕೂ ಹೆಚ್ಚು ನುರಿತ ತಜ್ಞ ವೈದ್ಯರ ತಂಡ ಆಗಮಿಸಿದೆ. ರೋಗಿಗಳ ತಪಾಸಣೆ ಮಾಡಿ ಗಂಭೀರ ಕಾಯಿಲೆಗಳಿದ್ದರೆ, ಬೆಳ್ಳೂರು ಕ್ರಾಸ್ ಬಳಿಯ ಹೈಟೆಕ್ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ನೀಡಿ ಅವರದೇ ಬಸ್‌ನಲ್ಲಿ ಮತ್ತೆ ಕರೆ ತಂದು ಬಿಡುವ ವ್ಯವಸ್ಥೆ ಮಾಡಿದ್ದಾರೆ. ಜನರು ಅಸಡ್ಡೆ ತೋರದೆ ತಪಾಸಣೆ ಮಾಡಿಸಿಕೊಂಡು ರೋಗಮುಕ್ತ ಜೀವನ ನಡೆಸುವಂತೆ ಅವರು ಮನವಿ ಮಾಡಿದರು.

ಬಿ.ಜಿ.ನಗರದ ಆದಿಚುಂಚನಗಿರಿ ಆಸ್ಪತ್ರೆ ವೈದ್ಯ ಡಾ.ಕೆ.ಎಂ.ಶಿವಕುಮಾರ್ ಮಾತನಾಡಿ, ಡಾ.ಬಾಲ ಗಂಗಾಧರನಾಥ ಸ್ವಾಮೀಜಿಯವರು ಜಿಲ್ಲಾಸ್ಪತ್ರೆಗಳಲ್ಲಿ ದೊರಕದ ಚಿಕಿತ್ಸಾ ಸೌಲಭ್ಯಗಳು ಗ್ರಾಮೀಣ ಮಟ್ಟದಲ್ಲಿ ದೊರಕಬೇಕೆಂಬ ಉದ್ದೇಶದೊಂದಿಗೆ ಬೆಳ್ಳೂರು ಕ್ರಾಸ್ ಬಳಿ ಹೈಟೆಕ್ ಆಸ್ಪತ್ರೆ ನಿರ್ಮಾಣ ಮಾಡಿದ್ದಾರೆ. ಇಲ್ಲಿ ಎಲ್ಲಾ ಸೌಕರ್ಯಗಳು ಲಭ್ಯವಿದ್ದು, ಉಚಿತ ತಪಾಸಣಾ ಶಿಬಿರದ ಮೂಲಕ ಗಂಭೀರ ಕಾಯಿಲೆ ಕಂಡು ಬಂದರೆ ಆಸ್ಪತ್ರೆ ವಾಹನದಲ್ಲಿ ರೋಗಿಗಳನ್ನು ಕರೆದೊಯ್ದು ಹೆಚ್ಚಿನ ಚಿಕಿತ್ಸೆ ನೀಡಿ ಮತ್ತೆ ವಾಪಸ್ ಕಳುಹಿಸಿ ಕೊಡಲಾಗುತ್ತದೆ. ಆಸ್ಪತ್ರೆಯಲ್ಲಿ ವೈದ್ಯಕೀಯ ಸೌಲಭ್ಯ, ಜನರಲ್ ವಾರ್ಡ್, ಆಪರೇಷನ್, ರೋಗಿಗಳಿಗೆ ಊಟದ ವ್ಯವಸ್ಥೆ, ಕಣ್ಣಿನ ಶಸ್ತ್ರಚಿಕಿತ್ಸೆ ಮತ್ತು ಮಸೂರ ಅಳವಡಿಕೆ ಹಾಗೂ ಕನ್ನಡಕ ವಿತರಣೆ ಇವಿಷ್ಟೂ ಉಚಿತವಾಗಿ ದೊರೆಯಲಿದ್ದು, ಔಷಧಗಳನ್ನು ಮಾತ್ರ ರೋಗಿಗಳು ತಮ್ಮ ಖರ್ಚಿನಲ್ಲಿ ಪಡೆಯಬೇಕಾಗುತ್ತದೆ ಎಂದರು.

ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ನೂರಾರು ಮಂದಿ ರೋಗಿಗಳು ಮಧುಮೇಹ, ಹೃದ್ರೋಗ, ನರರೋಗ, ಕೀಲು ಮತ್ತು ಮೂಳೆ, ಕಣ್ಣಿನ ತಪಾಸಣೆ ಸೇರಿದಂತೆ ವಿವಿಧ ಖಾಯಿಲೆಗಳ ತಪಾಸಣೆಗೆ ಒಳಗಾದರು.

ಕಾರ್ಯಕ್ರಮದಲ್ಲಿ ಡಾ.ದೇವೇಂದ್ರ, ಡಾ. ಶಿವಕುಮಾರ್, ಪರಿಸರ ಜಾಗೃತಿ ವೇದಿಕೆ ಅಧ್ಯಕ್ಷ ಮಹೇಂದ್ರ ಸಿಂಗ್ ಕಾಳಪ್ಪ, ಲಯನ್ಸ್ ಸಂಸ್ಥೆ ಕಾರ್ಯದರ್ಶಿ ಬಸವರಾಜು, ಖಜಾಂಚಿ ಬಿ.ಸಿ.ತಿಮ್ಮೇಗೌಡ, ಪುಟ್ಟಸ್ವಾಮಿ, ರವೀಂದ್ರ ಕುಮಾರ್, ಹೋಟೆಲ್ ರಾಮಸ್ವಾಮಿ, ಚನ್ನಪ್ಪ, ಡಿ.ಪುಟ್ಟಣ್ಣ ಮತ್ತಿತರರಿದ್ದರು.

ಬೆಟ್ಟದಪುರದಲ್ಲಿ ಅದ್ದೂರಿ ಚಾಮುಂಡೇಶ್ವರಿ ವರ್ಧಂತಿ



ಬೆಟ್ಟದಪುರ, ಜು.10– ಇಲ್ಲಿಗೆ ಸಮೀಪದ ಚಪ್ಪರದಹಳ್ಳಿಯಲ್ಲಿ ಶ್ರೀಚಾಮುಂಡೇಶ್ವರಿ ವರ್ಧಂತಿಯನ್ನು ಸೋಮವಾರ ನೂರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು.

ಬೆಳಗ್ಗೆ ಶ್ರೀಚಾಮುಂಡೇಶ್ವರಿ ದೇವಿ ಮೂರ್ತಿಗೆ ಗ್ರಾಮದ ಕರೆಯಲ್ಲಿ ಗಂಗಾ ಪೂಜೆ ನೆರವೇರಿಸಿ, ಅಲಂಕರಿಸಿ ಪೂಜೆ ಸಲ್ಲಿಸಲಾಯಿತು. ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ದೇವಿ ಮೂರ್ತಿಯನ್ನು ಮೆರವಣಿಗೆ ಮಾಡಲಾಯಿತು. ಬಳಿಕ ದೇವಸ್ಥಾನದಲ್ಲಿ ಭಕ್ತರ ದರ್ಶನಕ್ಕೆ ಅವಕಾಶ ಕಲ್ಪಿಸಲಾಯಿತು. ಅಲ್ಲದೇ ದೇವಾಲಯದ ವತಿಯಿಂದ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಕೋಟೆಯಲ್ಲಿ ಮಹಿಳೆಯರಿಗೆ ಹೊಲಿಗೆ ಯಂತ್ರ ವಿತರಣೆ



ಹೆಚ್.ಡಿ.ಕೋಟೆ, ಜು.10– ಪಟ್ಟಣದ ಪುರಸಭೆ ವತಿಯಿಂದ 2021–22ನೇ ಸಾಲಿನ ಎಸ್‌ಎಫ್‌ಸಿ ಯೋಜನೆಯಡಿ ಮಹಿಳೆಯರಿಗೆ 100 ಹೊಲಿಗೆ ಯಂತ್ರಗಳನ್ನು ವಿತರಿಸಲಾಗುತ್ತಿದೆ ಎಂದು ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಐಡಿಯಾ ವೆಂಕಟೇಶ್ ತಿಳಿಸಿದರು.

ಪಟ್ಟಣದ ಪುರಸಭೆಯಲ್ಲಿ ಸಾಮಾನ್ಯ ಸಭೆಯ ನಿರ್ಣಯದಂತೆ ಸೋಮವಾರ ಸಾಂಕೇತಿಕವಾಗಿ 10 ಹೊಲಿಗೆ ಯಂತ್ರ ವಿತರಿಸಿ ಮಾತನಾಡಿದ ಅವರು, ಪುರಸಭೆ ವ್ಯಾಪ್ತಿಯ ಹಲವು ಮಹಿಳೆಯರು ಹೊಲಿಗೆ ತರಬೇತಿ ಪಡೆದು ಹೊಲಿಗೆ ಯಂತ್ರಕ್ಕಾಗಿ ಪುರಸಭೆಗೆ ಅರ್ಜಿ ಸಲ್ಲಿಸಿದ್ದರು. ಅದರಂತೆ ಅರ್ಹ ಫಲಾನುಭವಿಗಳಿಗೆ 6900 ರೂ. ಮೌಲ್ಯದ ಹೊಲಿಗೆ ಯಂತ್ರಗಳನ್ನು ನೀಡಲಾಗುತ್ತಿದೆ ಎಂದರು.

ಫಲಾನುಭವಿ ಸುಧಾ, ರೇಖಾ ಮಾತನಾಡಿದರು. ಈ ವೇಳೆ ಪುರಸಭಾ ಮುಖ್ಯಾಧಿಕಾರಿ ಸುರೇಶ್, ಸದಸ್ಯರಾದ ನಾಗರಾಜು, ಶಿವಮ್ಮ ಚಾಕಹಳ್ಳಿ ಕೃಷ್ಣ, ನಂಜಪ್ಪ, ದರ್ಶಿನಿ ಯಶವಂತ್ ಇನ್ನಿತರರಿದ್ದರು.

ಯುವ ಬ್ರಿಗೇಡ್ ಕಾರ್ಯಕರ್ತ ವೇಣುಗೋಪಾಲ್ ಹತ್ಯೆ ಪ್ರಕರಣ

ಇಬ್ಬರ ಬಂಧನ; ಉಳಿದವರಿಗಾಗಿ ಶೋಧ

● ಹನುಮ ಜಯಂತಿ ವೇಳೆ ನಡೆದ ಜಗಳವೇ ಹತ್ಯೆಗೆ ಕಾರಣ ● ಸೂಕ್ತ ಸಮಯದಲ್ಲಿ ಪೊಲೀಸರಿಗೆ ಮಾಹಿತಿ ನೀಡಿದ್ದರೆ ಹತ್ಯೆ ತಪ್ಪಿಸಬಹುದಿತ್ತು




ವೇಣುಗೋಪಾಲ



ತಿ.ನರಸೀಪುರ, ಜು. 10– ಯುವ ಬ್ರಿಗೇಡ್ ಕಾರ್ಯಕರ್ತ ತಿ.ನರಸೀಪುರದ ವೇಣುಗೋಪಾಲ ನಾಯ್ಕ ಹತ್ಯೆಗೆ ಸಂಬಂಧಿಸಿದಂತೆ ಪೊಲೀಸರು ಇಬ್ಬರನ್ನು ಬಂಧಿಸಿದ್ದಾರೆ. ತಲೆಮರೆಸಿಕೊಂಡಿರುವ ನಾಲ್ವರು ಆರೋಪಿಗಳಿಗಾಗಿ ಹುಡುಕಾಟ ನಡೆಸಿದ್ದಾರೆ.

ಸಂದೇಶ್ ಮತ್ತು ಅನಿಲ್ ಅಲಿಯಾಸ್ ಗಲ್ಲಿ ಬಂಧಿತರಾಗಿದ್ದು ಪ್ರಕರಣದ ಪ್ರಮುಖ ಆರೋಪಿ ಮಣಿಕಂಠ ಅಲಿಯಾಸ್ ಕೊಳೆ ಮಣಿ, ಶಂಕರ ಅಲಿಯಾಸ್ ತುಪ್ಪ, ಮಂಜು, ಹ್ಯಾರೀಸ್ ಎಂಬುವರು ತಲೆಮರೆಸಿಕೊಂಡಿದ್ದಾರೆ. ವೇಣು ಗೋಪಾಲ ಹತ್ಯೆ ಖಂಡಿಸಿ ಇಂದು ತಿ.ನರಸೀಪುರದಲ್ಲಿ ವರ್ತಕರು ಸ್ವಯಂಪ್ರೇರಣೆಯಿಂದ ಅಂಗಡಿ ಮುಂಗಟ್ಟುಗಳನ್ನು ಮುಚ್ಚಿ ಬಂದ್ ಆಚರಿಸಿದರು. ಇದೇ ವೇಳೆ ಯುವ ಬ್ರಿಗೇಡ್ ಹಾಗೂ ಬಿಜೆಪಿ ಮುಖಂಡರು ಹತ್ಯೆಯನ್ನು ತೀವ್ರವಾಗಿ ಖಂಡಿಸಿದ್ದಾರೆ.

ಹತ್ಯೆಗೂ ಕೆಲ ಗಂಟೆಗಳ ಮುನ್ನ ಹಲ್ಲೆ: ಭಾನುವಾರ ಸಂಜೆ 4 ಗಂಟೆ ಸುಮಾರಿನಲ್ಲಿ ವೇಣು ಗೋಪಾಲ್ ಮತ್ತಿತರರು ಉತ್ಸವಕ್ಕೆ ಬಾಡಿಗೆಗೆ ತಂದಿದ್ದ ವಸ್ತುಗಳನ್ನು ಶಾಮಿಯಾನ ಅಂಗಡಿಗೆ ಹಿಂತಿರುಗಿಸುತ್ತಿದ್ದ ವೇಳೆ ಅಲ್ಲಿಗೆ ಬಂದ ಮಣಿಕಂಠ, ಅನಿಲ, ಶಂಕರ ಮತ್ತು ಸಂದೇಶ್ ಅವರುಗಳು ಉತ್ಸವದ ವೇಳೆ ಬೈಕ್‌ಗಳನ್ನು ದೇವ ಸ್ಥಾನದ ಆವರಣಕ್ಕೆ ಬಿಟ್ಟಿಲ್ಲ, ಮೆರವಣಿಗೆಯಲ್ಲಿ ಅಪ್ಪು ಫೋಟೋ ಇಡಲು ಬಿಡದೆ ಅವಮಾನ ಮಾಡಿದ್ದೀಯೇ ಎಂದು ಕ್ಯಾತೆ ತೆಗೆದು ವೇಣು ಗೋಪಾಲ್ ಮೇಲೆ ಹಲ್ಲೆ ನಡೆಸಿದ್ದಾರೆ. ಇದೇ ವೇಳೆ ಆ ಮಾರ್ಗವಾಗಿ ಪೊಲೀಸ್ ಜೀಪ್ ಬರುತ್ತಿರುವುದನ್ನು ನೋಡಿ ಆರೋಪಿಗಳು ಕಾಲ್ಕಿತ್ತಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಆದರೆ, ಈ ಸಂಬಂಧ ಜೀಪ್‌ನಲ್ಲಿ ಬಂದ ಪೊಲೀಸರಿಗೆ ವೇಣು ಗೋಪಾಲ್ ಹಾಗೂ ಇತರರು ಮಾಹಿತಿಯನ್ನು ನೀಡಿಲ್ಲ. ಅಲ್ಲದೇ ಠಾಣೆಗೆ ದೂರು ಸಲ್ಲಿಸಲಿಲ್ಲ ಎನ್ನಲಾಗಿದೆ.

ಧಮ್ಕಿ ಹಾಕಿ ಕರೆದು ಕೊಂದರು: ಶನಿವಾರ ರಾತ್ರಿ 8.15ರಲ್ಲಿ ರಾಮಾನುಜಂ ಅವರ ಮನೆ ಬಳಿ ವೇಣುಗೋಪಾಲ್ ಸ್ನೇಹಿತರಾದ ಸಂಜಯ್, ಚೇತನ್ ಅವರಿದ್ದಾಗ ವೇಣುಗೋಪಾಲ್‌ಗೆ ಕರೆ ಮಾಡಿದ ಮಣಿಕಂಠ ತಕ್ಷಣವೇ ಆರೋಪಿ ಅನಿಲ್‌ನ ಸರ್ವಿಸ್ ಸ್ಟೇಷನ್ ಬಳಿಗೆ ಅಥವಾ ಫೈರ್ ಸ್ಟೇಷನ್ ಬಳಿಗೆ ಬಾ ಎಂದು ಕರೆದಿದ್ದಾನೆ. ಬರುವುದಿಲ್ಲ ಎಂದು ವೇಣುಗೋಪಾಲ್ ಹೇಳಿದಾಗ, ಬರದಿದ್ದರೆ ಮನೆ ಬಳಿ ಬಂದು ಗಲಾಟೆ ಮಾಡಬೇಕಾಗುತ್ತದೆ ಎಂದು ಧಮ್ಕಿ ಹಾಕಿದಾಗ ವೇಣುಗೋಪಾಲ್ ಆರೋಪಿಗಳನ್ನು ಭೇಟಿ ಮಾಡಲು ಹೊರಟಿದ್ದಾನೆ. ಆ ಸಂದರ್ಭದಲ್ಲಿ ರಾಮಾನುಜಂ ತಡೆದರಾದರೂ ಮಾತನಾಡಿ ಸಮಸ್ಯೆ ಇತ್ಯರ್ಥಪಡಿಸಿಕೊಳ್ಳೋಣ ಎಂದು ತಿಳಿಸಿ, ವೇಣುಗೋಪಾಲ್ ಹೊರಟಾಗ ಅವನ ಜೊತೆ ಸ್ನೇಹಿತ ಚೇತನ್ ಹೋಗಿದ್ದಾನೆ. ಇದನ್ನು ಕಂಡ ರಾಮಾನುಜಂ ಮತ್ತು ಸಂಜಯ್ ಕೂಡ ಅವರನ್ನು ಹಿಂಬಾಲಿಸಿದ್ದಾರೆ.

ವೇಣುಗೋಪಾಲ್ ಹಾಗೂ ಚೇತನ್ ತಲಕಾಡು ರಸ್ತೆಯಲ್ಲಿರುವ ಅನಿಲ್‌ನ ಸರ್ವಿಸ್ ಸ್ಟೇಷನ್ ಬಳಿ ಹೋಗಿ ಬೈಕ್‌ನಿಂದ ಇಳಿಯುತ್ತಿದ್ದಂತೆಯೇ ಹೆಸರಿಸಿರುವ ಆರೋಪಿಗಳಲ್ಲದೇ ಇನ್ನೂ ಮೂರ್‍ನಾಲ್ಕು ಜನ ಸೇರಿಕೊಂಡು ವೇಣುಗೋಪಾಲ್‌ನನ್ನು ಒಡೆದ ಗಾಜಿನ ಬಾಟಲ್‌ಗಳಿಂದ ಚುಚ್ಚಿ, ಚಾಕುವಿನಿಂದ ಇರಿದು ಹತ್ಯೆ ಮಾಡಿದ್ದಾರೆ. ತಡೆಯಲು ಹೋದ ರಾಮಾನುಜಂ ಅವರನ್ನು ಬಾಟಲಿಯಿಂದ ಚುಚ್ಚಲು ಬಂದಾಗ ಅವರು ತಪ್ಪಿಸಿಕೊಂಡಿದ್ದಾರೆ. ತೀವ್ರವಾಗಿ ಗಾಯಗೊಂಡಿದ್ದ ವೇಣು ಗೋಪಾಲ್‌ನನ್ನು ರಾಮಾನುಜಂ ಮತ್ತು ಸ್ನೇಹಿತರು ಆಸ್ಪತ್ರೆಗೆ ಕೊಂಡೊಯ್ದಾಗ ಅದಾಗಲೇ ಆತ ಮೃತಪಟ್ಟಿರುವುದಾಗಿ ವೈದ್ಯರು ಘೋಷಿಸಿದರು ಎಂದು ಪೊಲೀಸರಿಗೆ ರಾಮಾನುಜಂ ನೀಡಿರುವ ದೂರಿನಲ್ಲಿ ವಿವರಿಸಲಾಗಿದೆ. ಭಾರತೀಯ ದಂಡ ಸಂಹಿತೆ 143, 147, 148, 504, 307, 302, 149ರಡಿ ತಿ.ನರಸೀಪುರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಇಬ್ಬರನ್ನು ಬಂಧಿಸಿ, ತನಿಖೆ ಮುಂದುವರೆಸಿದ್ದಾರೆ.

ಹತ್ಯೆಗೆ ಅಪ್ಪು ಫೋಟೋ ನೆಪ

ಯುವ ಬ್ರಿಗೇಡ್ ಕಾರ್ಯಕರ್ತ ವೇಣು ಗೋಪಾಲ್ ಹತ್ಯೆಗೆ ಹಂತಕರು ದಿವಂಗತ ಪುನೀತ್ ರಾಜ್‌ಕುಮಾರ್ ಅವರ ಫೋಟೋವನ್ನೇ ನೆಪವಾಗಿ ತೆಗೆದುಕೊಂಡಿದ್ದರು ಎಂದು ಹೇಳಲಾಗಿದೆ. ಶನಿವಾರ ವೀರಾಂಜನೇಯ ಧರ್ಮ ಜಾಗೃತಿ ಬಳಗದ ವತಿಯಿಂದ ತಿ.ನರಸೀಪುರ ದಲ್ಲಿ ನಡೆದ ಹನುಮ ಜಯಂತಿ ಕಾರ್ಯಕ್ರಮದ ನೇತೃತ್ವವನ್ನು ವೇಣುಗೋಪಾಲ್ ವಹಿಸಿಕೊಂಡಿದ್ದರು. ಅಂದು ಮಧ್ಯಾಹ್ನ 1 ಗಂಟೆ ಸುಮಾರಿನಲ್ಲಿ ಉತ್ಸವ ಹೊರಡುವ ಗುಂಜಾ ನರಸಿಂಹಸ್ವಾಮಿ ದೇವಾಲಯದ ಆವರಣಕ್ಕೆ ಯಾವುದೇ ವಾಹನಗಳನ್ನು ಬಿಡಬಾರದೆಂದು ವೇಣುಗೋಪಾಲ್ ಸೇರಿದಂತೆ ಆಯೋಜಕರು ನಿರ್ಧರಿಸಿದ್ದರು ಎನ್ನಲಾಗಿದೆ.

ಈ ವೇಳೆ ಆರೋಪಿಗಳಾದ ಮಣಿಕಂಠ ಮತ್ತು ಸಂದೇಶ್ ಬೈಕ್‌ಗಳಲ್ಲಿ ದೇವಸ್ಥಾನದ ಆವರಣ ಪ್ರವೇಶಿಸಲು ಪ್ರಯತ್ನಿಸಿದಾಗ ವೇಣುಗೋಪಾಲ್ ಮತ್ತು ಬಳಗದ ಸದಸ್ಯ ರಾಮಾನುಜಂ ಅವರು ತಡೆದಿದ್ದಾರೆ. ಈ ಸಂದರ್ಭದಲ್ಲಿ ಮಾತಿನ ಚಕಮಕಿ ನಡೆದು ನಾಳೆ (ಭಾನುವಾರ) ನಿನ್ನನ್ನು ಮುಗಿಸುತ್ತೇವೆ ಎಂದು ಆರೋಪಿಗಳು ವೇಣುಗೋಪಾಲ್‌ಗೆ ಬೆದರಿಕೆ ಹಾಕಿದ್ದರು ಎಂದು ಪೊಲೀಸರಿಗೆ ದೂರು ನೀಡಿರುವ ರಾಮಾನುಜಂ ತಿಳಿಸಿದ್ದಾರೆ.


ನಂತರ ಹನುಮ ಜಯಂತಿ ಮೆರವಣಿಗೆಯಲ್ಲೂ ಪಾಲ್ಗೊಂಡಿದ್ದ ಆರೋಪಿಗಳು ಭಾರತ ಮಾತೆ ಚಿತ್ರದ ಮುಂದೆ ಪುನೀತ್ ರಾಜ್‌ಕುಮಾರ್ ಅವರ ಫೋಟೋವನ್ನು ಹಾಕಿದ್ದರು ಎನ್ನಲಾಗಿದ್ದು, ಅದಕ್ಕೆ ಕೆಲವರು ಆಕ್ಷೇಪ ವ್ಯಕ್ತಪಡಿಸಿದರಂತೆ. ಕೊನೆಗೆ ವೇಣುಗೋಪಾಲ್, ಪುನೀತ್ ರಾಜ್‌ಕುಮಾರ್ ಫೋಟೋವನ್ನು ತೆರವುಗೊಳಿಸಿದ್ದಾರೆ. ಇದುವೇ ವೇಣುಗೋಪಾಲ್ ಹತ್ಯೆಗೆ ಆರೋಪಿಗಳಿಗೆ ನೆಪವಾಗಿದೆ


ಅನಿಲ್


ಸಂದೇಶ್

ಸೂಕ್ತ ಪರಿಹಾರಕ್ಕೆ ಆಗ್ರಹಿಸಿ ಆರ್‌ಎಸ್‌ಎಸ್ ಕಾರ್ಯಕರ್ತರ ಪ್ರತಿಭಟನೆ

ಅಧಿಕಾರಿಗಳ ಭರವಸೆ ಹಿನ್ನೆಲೆಯಲ್ಲಿ ಮರಣೋತ್ತರ ಪರೀಕ್ಷೆ ನಂತರ ದೇಹ ತಿ.ನರಸೀಪುರಕ್ಕೆ ರವಾನೆ



ಮೈಸೂರು, ಜು.10(ಆರ್‌ಕೆ)– ತಿ.ನರಸೀಪುರದಲ್ಲಿ ಹತ್ಯೆಗೀಡಾದ ಯುವ ಬ್ರಿಗೇಡ್ ಕಾರ್ಯಕರ್ತ ವೇಣು ಗೋಪಾಲ ನಾಯಕ ಅವರ ಕುಟುಂಬಕ್ಕೆ ಪರಿಹಾರ ನೀಡುವಂತೆ ಆರ್‌ಎಸ್‌ಎಸ್ ಕಾರ್ಯ ಕರ್ತರು ಇಂದು ಮಧ್ಯಾಹ್ನ ಮೈಸೂರು ಮೆಡಿಕಲ್ ಕಾಲೇಜಿನ ಶವಾಗಾರದ ಬಳಿ ಪ್ರತಿಭಟನೆ ನಡೆಸಿದರು.

ಮರಣೋತ್ತರ ಪರೀಕ್ಷೆ ನಂತರ ದೇಹವನ್ನು ಆಂಬುಲೆನ್ಸ್‌ನಲ್ಲಿ ಸಾಗಿಸಲು ಸಿದ್ಧರಾಗುತ್ತಿದ್ದಂತೆಯೇ ಮಧ್ಯಾಹ್ನ 1 ಗಂಟೆ ವೇಳೆಗೆ ಸ್ಥಳಕ್ಕೆ ದಾವಿಸಿದ ಮುಖಂಡರಾದ ತೋಟದಪ್ಪ ಬಸವ ರಾಜು, ಗಿರಿಧರ್, ಸಂಜಯ್ ನೇತೃತ್ವದ ಆರ್‌ಎಸ್‌ಎಸ್ ಕಾರ್ಯಕರ್ತರು, ವಾಹನದ ಮುಂದೆ ಧರಣಿ ಕುಳಿತರು.

ವೇಣುಗೋಪಾಲ್ ಕುಟುಂಬಕ್ಕೆ ಮುಖ್ಯಮಂತ್ರಿಗಳ ಪರಿಹಾರ ನಿಧಿ ಹಾಗೂ ದೌರ್ಜನ್ಯ (ಅಟ್ರಾಸಿಟಿ)ದಡಿ ಪ್ರಕರಣ ದಾಖಲಿಸಿ ಸಮಾಜ ಕಲ್ಯಾಣ ಇಲಾಖೆಯಿಂದಲೂ ಪರಿಹಾರ ಹಣ ನೀಡಬೇಕು. ಅಲ್ಲದೆ, ಮೃತ ಯುವಕನ ಪತ್ನಿ ಪೂರ್ಣಿಮಾಗೆ ಸರ್ಕಾರಿ ಕೆಲಸ ಕೊಡಿಸಬೇಕೆಂದು ಒತ್ತಾಯಿಸಿದರು.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಎಸಿಪಿಗಳಾದ ಅಶ್ವಥ ನಾರಾಯಣ, ಶಾಂತಮಲ್ಲಪ್ಪ, ಮಂಡಿ ಠಾಣೆ ಇನ್‌ಸ್ಪೆಕ್ಟರ್ ನಾಗೇಶ್, ಪ್ರತಿಭಟನಾಕಾರರನ್ನು ಮನವೊಲಿಸಲೆತ್ನಿಸಿದರಾದರೂ, ಪಟ್ಟು ಬಿಡದೆ ದೇಹ ಕೊಂಡೊಯ್ಯಲು ಅವಕಾಶ ನೀಡದೇ ಜಿಲ್ಲಾಡಳಿತದ ಜವಾಬ್ದಾರಿಯುತ ಅಧಿಕಾರಿಗಳನ್ನು ಕರೆಸಬೇಕೆಂದು ಒತ್ತಾಯಿಸಿದರು.

ಪರಿಸ್ಥಿತಿ ಬಿಗಡಾಯಿಸುತ್ತಿದ್ದಂತೆಯೇ ಡಿಸಿಪಿ ಎಂ.ಮುತ್ತುರಾಜ್, ಉಪವಿಭಾಗಾಧಿಕಾರಿ ಕೆ.ಆರ್.ರಕ್ಷಿತ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಂಗೇಗೌಡ, ಶವಾಗಾರದ ಬಳಿ ಬಂದು ಈಗಾಗಲೇ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ. ದೌರ್ಜನ್ಯದಡಿ ಪ್ರಕರಣ ನಡೆದಿದೆ ಎಂಬುದು ದೃಢಪಟ್ಟಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದಲೂ ನಿಯಮಾನುಸಾರ ಪರಿಹಾರ ಕೊಡಲಾಗುವುದು ಎಂದರು.

ಘಟನೆ ಬಗ್ಗೆ ವರದಿ ತರಿಸಿಕೊಂಡು ಜಿಲ್ಲಾಡಳಿತದಿಂದ ಸರ್ಕಾರಕ್ಕೆ ಶಿಫಾರಸು ಮಾಡುತ್ತೇವೆ. ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದಲೂ ಹಣ ಬರುತ್ತದೆ. ಅಲ್ಲದೇ ದೌರ್ಜನ್ಯದಡಿ ಮೃತ ವ್ಯಕ್ತಿಯ ಪತ್ನಿಗೂ ಸರ್ಕಾರದ ನೌಕರಿ ಕೊಡಲು ಅವಕಾಶವಿದೆ. ಅದಕ್ಕೆ ಪೂರಕವಾದ ವರದಿ ನೀಡಿ ಸಹಾಯ ಮಾಡುವುದಾಗಿ ರಕ್ಷಿತ್ ಭರವಸೆ ನೀಡಿದರಲ್ಲದೆ, ಕೊಲೆ ಆರೋಪಿಗಳನ್ನು ಬಂಧಿಸಿ ಕಾನೂನು ರೀತಿಯ ಕ್ರಮಕ್ಕೆ ತಿ.ನರಸೀಪುರ ಪೊಲೀಸರು ಕಾರ್ಯೋನ್ಮುಖರಾಗಿದ್ದಾರೆ ಎಂದರು.

ಅಧಿಕಾರಿಗಳ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆ ಕೈಬಿಟ್ಟು ಆರ್‌ಎಸ್‌ಎಸ್ ಕಾರ್ಯಕರ್ತರು, ಮಧ್ಯಾಹ್ನ 2.45 ಗಂಟೆ ವೇಳೆಗೆ ವೇಣುಗೋಪಾಲ್ ದೇಹವನ್ನು ಸಾಗಿಸಲು ಅವಕಾಶ ಮಾಡಿಕೊಟ್ಟರು. ನಂತರ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ತೋಟದಪ್ಪ ಬಸವರಾಜು, ದೌರ್ಜನ್ಯ ಪ್ರಕರಣದಡಿ 8.25 ಲಕ್ಷ ರೂ., ಸಿಎಂ ಪರಿಹಾರ ನಿಧಿಯಿಂದ 25 ಲಕ್ಷ ರೂ. ಪರಿಹಾರದ ಜೊತೆಗೆ ಮೃತರ ಪತ್ನಿಗೆ ಸರ್ಕಾರಿ ಕೆಲಸ ನೀಡುವ ಬಗ್ಗೆ ಅಧಿಕಾರಿಗಳು ಭರವಸೆ ನೀಡಿದ್ದಾರೆ. ಸರ್ಕಾರ ಹೇಳಿದಂತೆ ನಡೆದುಕೊಳ್ಳಲಿದೆ ಎಂಬ ನಂಬಿಕೆಯಿಂದ ನಾವು ಪ್ರತಿಭಟನೆ ಕೈಬಿಟ್ಟು ಅಂತ್ಯಕ್ರಿಯೆಗೆ ಅನುವು ಮಾಡಿಕೊಟ್ಟಿದ್ದೇವೆ ಎಂದು ತಿಳಿಸಿದರು.

ಅಮರನಾಥ ಯಾತ್ರೆ: ಸಂಕಷ್ಟಕ್ಕೆ ಸಿಲುಕಿದ್ದ 300 ಕನ್ನಡಿಗರು ಸುರಕ್ಷಿತ

ಶೀಘ್ರದಲ್ಲೇ ತವರಿಗೆ ವಾಪಸ್



ಬೆಂಗಳೂರು: ಅಮರನಾಥ ಯಾತ್ರೆಗೆ ತೆರಳಿ ಭಾರೀ ಮಳೆ, ಭೂಕುಸಿತದಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದ 300 ಮಂದಿ ಕನ್ನಡಿಗರು ಸುರಕ್ಷಿತರಾಗಿದ್ದು, ಶೀಘ್ರದಲ್ಲೇ ತವರಿಗೆ ವಾಪಸ್ಸಾಗಲಿದ್ದಾರೆಂದು ತಿಳಿದುಬಂದಿದೆ.

ಜಮ್ಮು–ಕಾಶ್ಮೀರದಲ್ಲಿ ಸುರಿದಿರುವ ಭಾರೀ ಮಳೆಯಿಂದಾಗಿ ಗುಡ್ಡ ಕುಸಿತಗೊಂಡು, ರಸ್ತೆಗಳು ಹಾಳಾಗಿವೆ. ಹೀಗಾಗಿ ಯಾತ್ರೆಗೆ ತೆರಳುತ್ತಿದ್ದವರು, ವಾಪಸ್ ಬರುತ್ತಿದ್ದವರು ಸಂಕಷ್ಟಕ್ಕೆ ಸಿಲುಕಿದ್ದರು. ಈ ಪೈಕಿ 300 ಮಂದಿ ಕನ್ನಡಿಗರೂ ಇದ್ದರೂ ಎಂದು ಹೇಳಲಾಗುತ್ತಿತ್ತು.

ಇದರಂತೆ ಸಂಕಷ್ಟಕ್ಕೆ ಸಿಲುಕಿರುವ ಕನ್ನಡಿಗರ ರಕ್ಷಣೆಗೆ ರಾಜ್ಯ ಸರ್ಕಾರ, ಕ್ರಮ ಕೈಗೊಂಡಿದ್ದು, ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಶ್ಮಿ ಅವರನ್ನು ನೋಡೆಲ್ ಅಧಿಕಾರಿಯನ್ನಾಗಿ ನಿಯೋಜನೆಗೊಳಿಸಿದೆ.

ರಾಜ್ಯದ ಅಧಿಕಾರಿಗಳು, ಜಮ್ಮು–ಕಾಶ್ಮೀರದ ಪ್ರದೇಶಿಕ ಆಯುಕ್ತರು, ಜಿಲ್ಲಾಧಿಕಾರಿಗಳು, ಪೊಲೀಸರು ಮತ್ತು ಸೇನೆಯ ಹಿರಿಯ ಅಧಿಕಾರಿಗಳ ಜೊತೆ ಚರ್ಚೆ ನಡೆಸಿದ್ದಾರೆ. ಇದರಂತೆ ಇಂದು ಬೆಳಿಗ್ಗೆ ಹವಾಮಾನ ತಿಳಿಗೊಂಡಿದ್ದು, ಮಳೆ ಕಡಿಮೆಯಾಗಿದೆ ಎಂದು ಹೇಳಲಾಗುತ್ತಿದೆ. ಇದೀಗ ಒಂದಷ್ಟು ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ ಎಂದು ವರದಿಗಳು ತಿಳಿಸಿವೆ. ಮಳೆ ಕಡಿಮೆಯಾದ ಬಳಿಕ ಹೆಲಿಕಾಪ್ಟರ್, ವಿಮಾನ ಸೇರಿದಂತೆ ಎಲ್ಲಾ ಸಾರಿಗೆ ವ್ಯವಸ್ಥೆಗಳನ್ನು ಬಳಸಿಕೊಂಡು ಕನ್ನಡಿಗರನ್ನು ಮರಳಿ ಕರೆತರುವ ಪ್ರಯತ್ನ ನಡೆಸಲಾಗುವುದು ಎಂದು ಸರ್ಕಾರ ತಿಳಿಸಿದೆ.

4 ಸಾವಿರ ಪಶು ವೈದ್ಯರ ನೇಮಕ

ಪಶುಸಂಗೋಪನಾ ಸಚಿವ ವೆಂಕಟೇಶ್ ಭರವಸೆ



ಬೆಂಗಳೂರು, ಜು.10(ಕೆಎಂಶಿ)– ಪಶುಸಂಗೋಪನೆ ಇಲಾಖೆಯಲ್ಲಿ 4 ಸಾವಿರ ವೈದ್ಯರ ನೇಮಕಾತಿಗೆ ಕ್ರಮ ವಹಿಸಲಾಗಿದ್ದು, ಹೆಚ್ಚುವರಿ ಹುದ್ದೆ ಗಳಲ್ಲಿ ಕೆಲಸ ಮಾಡುತ್ತಿರುವವರನ್ನು ವರ್ಗಾವಣೆ ಮಾಡುವ ಮೂಲಕ ನಿರುದ್ಯೋಗ ನಿವಾರಿಸಲು ಕ್ರಮಕೈಗೊಳ್ಳುವ ಭರವಸೆಯನ್ನು ಪಶು ಸಂಗೋಪನೆ ಸಚಿವ ಕೆ. ವೆಂಕಟೇಶ್ ವಿಧಾನಸಭೆಗೆ ನೀಡಿದರು.

ಪ್ರಶ್ನೋತ್ತರ ವೇಳೆಯಲ್ಲಿ ಶಾಸಕರಾದ ಗುರುರಾಜ ಶೆಟ್ಟಿ, ಗಂಟಿಹೊಳೆ, ಭರತ್ ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಉತ್ತರ ಕನ್ನಡ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಪಶುವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. 2–3 ತಿಂಗಳಲ್ಲಿ ಪಶುವೈದ್ಯರ ನೇಮಕಾತಿಗೆ ಕ್ರಮ ಕೈಗೊಳ್ಳಲಾಗುವುದು.

ಖಾಲಿ ಇರುವ ಪಶು ವೈದ್ಯ ಇನ್ಸ್‌ಪೆಕ್ಟರ್ 400 ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಯಲಿದ್ದು, ಡಿಸೆಂಬರ್ ವೇಳೆಗೆ ಪೂರ್ಣಗೊಳ್ಳಲಿದೆ. ಖಾಲಿ ಹುದ್ದೆಗಳಿಗೆ ವೈದ್ಯರನ್ನು ನಿಯೋಜನೆ ಮಾಡಲಾಗುವುದು ಎಂದರು. ವಿವಿಧ ತಾಲೂಕುಗಳಲ್ಲಿ ಹೆಚ್ಚುವರಿ ವೈದ್ಯಾಧಿಕಾರಿಗಳನ್ನು ಕೊರತೆ ಇರುವ ಕಡೆ ವರ್ಗಾವಣೆ ಮಾಡಲಾಗುವುದು. ನಿಯಮದ ಪ್ರಕಾರ 5 ಸಾವಿರ ಜಾನುವಾರುಗಳಿಗೆ ಒಬ್ಬ ವೈದ್ಯರಿರಬೇಕಿದೆ. ಈ ಅನುಪಾತ ಕೆಲವು ಕಡೆ ಪಾಲನೆಯಾಗಿಲ್ಲ ಎಂದು ಹೇಳಿದರು.

ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಮಧ್ಯೆ ಪ್ರವೇಶಿಸಿ ಎಲ್ಲಾ ಕ್ಷೇತ್ರಗಳಲ್ಲೂ ಪಶುವೈದ್ಯರ ಕೊರತೆ ಸಮಸ್ಯೆ ಇದೆ. ನಾವು ಮನುಷ್ಯರ ರಕ್ಷಣೆಗಷ್ಟೇ ಅಲ್ಲ ಬಾಯಿ ಬಾರದ ಜಾನುವಾರುಗಳ ರಕ್ಷಣೆಗೂ ಆದ್ಯತೆ ನೀಡಬೇಕು.

ಪಶುವೈದ್ಯರ ಕೊರತೆ ನೀಗಿಸಲು ಖಾಸಗಿ ಪಶುವೈದ್ಯಕೀಯ ಕಾಲೇಜಿಗೆ ಅನುಮತಿ ನೀಡಬೇಕೆಂದು ಸಲಹೆ ನೀಡಿದರು. ಇದಕ್ಕೂ ಮೊದಲು ಗುರುರಾಜ ಶೆಟ್ಟಿ ಮಾತನಾಡಿ, ತಮ್ಮ ಬೈಂದೂರು ಕ್ಷೇತ್ರದಲ್ಲಿ 83 ಸಾವಿರ ಜಾನುವಾರುಗಳಿವೆ, ಇಬ್ಬರು ಮಾತ್ರ ಪಶುವೈದ್ಯರಿದ್ದಾರೆ. ಜಾನುವಾರು ವೈದ್ಯರ ಅನುಪಾತ 40 ಸಾವಿರ ಮತ್ತು 2 ಎಂಬಂತಾಗಿದೆ.

ರಾಷ್ಟ್ರೀಯ ನಿಯಮಗಳ ಪ್ರಕಾರ 4 ಸಾವಿರ ಜಾನುವಾರುಗಳಿಗೆ ಒಬ್ಬ ವೈದ್ಯರಿರಬೇಕು ಕ್ಷೇತ್ರದಲ್ಲಿ ಹಾಲು ಉತ್ಪಾದನೆ 3 ಲಕ್ಷ ಲೀ.ನಿಂದ ಒಂದೂವರೆ ಲಕ್ಷ ಲೀ.ಗೆ ಕುಸಿತವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಪಶು ಆಸ್ಪತ್ರೆಗಳ ಔಷಧ ಖರೀದಿಗೆ ಬೆಳಗಾವಿ ಜಿಲ್ಲೆಗೆ 12 ಕೋಟಿ ನೀಡಲಾಗಿದೆ. ನಮ್ಮ ಉಡುಪಿ ಜಿಲ್ಲೆಗೆ 70 ಲಕ್ಷ ಮಾತ್ರ ನೀಡಲಾಗಿದೆ. ಈ ತಾರತಮ್ಯ ನಿವಾರಿಸಬೇಕು ಎಂದರು.

ಭರತ್ ಶೆಟ್ಟಿ ಅವರು ಮಾತನಾಡಿ, ದ. ಕನ್ನಡ ಜಿಲ್ಲೆಯಲ್ಲೂ ಪಶುವೈದ್ಯರ ಸಮಸ್ಯೆ ತೀವ್ರವಾಗಿದೆ. ಗೋಶಾಲೆಗಳ ಸಬಲೀಕರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ವಿದ್ಯಾರ್ಥಿಗಳನ್ನು ಸಾಮಾಜಿಕ ಜಾಲತಾಣದ ಬಲೆಯಿಂದ ತಪ್ಪಿಸಿ



ಮೈಸೂರು, ಜು.10(ಎಸ್‌ಪಿಎನ್)– 'ವಾಟ್ಸಾಪ್' ಮತ್ತು 'ಫೇಸ್‌ಬುಕ್' ಯೂನಿವರ್ಸಿಟಿಗಳಿಂದ ವಿದ್ಯಾರ್ಥಿಗಳನ್ನು ಹೊರತರುವ ಕೆಲಸ ಅಧ್ಯಾಪಕರದ್ದು ಎಂದು ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಕನ್ನಡ ಪ್ರಾಧ್ಯಾಪಕ ಡಾ.ಕೆ.ಇ. ಗೋವಿಂದೇಗೌಡ ಅಭಿಪ್ರಾಯಪಟ್ಟರು.

ಮೈಸೂರು ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಹಾಗೂ ಮೈಸೂರಿನ ದೇಸಿರಂಗ ಸಹಯೋಗದೊಂದಿಗೆ ಆಯೋಜಿಸಿದ್ದ ರಂಗ ಮತ್ತು ನೃತ್ಯೋತ್ಸವ ಉದ್ಘಾಟಿಸಿ ಮಾತನಾಡಿದರು.

ಇಂದಿನ ಪೀಳಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ನಿರಾಸಕ್ತಿ ತೋರಿ, ಸಾಮಾಜಿಕ ಜಾಲತಾಣದ ವೀಕ್ಷಣೆಯಲ್ಲಿ ತೊಡಗಿಕೊಳ್ಳುತ್ತಿದ್ದಾರೆ. ಇದರಿಂದ ಮನೆಯಿಂದ ಹೊರಬರುತ್ತಿಲ್ಲ. ಹಾಗಾಗಿ ವಿದ್ಯಾರ್ಥಿಗಳು ಸಾಮಾಜಿಕ ಜಾಲ ತಾಣಗಳ ಚಟುವಟಿಕೆಗಳಿಂದ ಹೊರತರುವ ಪ್ರಯತ್ನ ನಡೆಸಬೇಕು ಎಂದು ತಿಳಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಎಂ.ಡಿ.ಸುದರ್ಶನ್ ಮಾತನಾಡಿದರು. ಈ ವೇಳೆ ಹಿರಿಯ ಪತ್ರಕರ್ತ ಅಂಶಿಪ್ರಸನ್ನ ಕುಮಾರ್, ಇತರೆ ಕಲಾವಿದರು ಉಪಸ್ಥಿತರಿದ್ದರು.

ತಾಲೂಕುವಾರು ಲೋಕಾಯುಕ್ತ ಅಧಿಕಾರಿಗಳ ಭೇಟಿ

ಮೈಸೂರು, ಜು.10– ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗದ ಅಧಿಕಾರಿಗಳು ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಂಬಂಧಪಟ್ಟ ಸಾರ್ವಜನಿಕ ಸರ್ಕಾರಿ ಅಧಿಕಾರಿ ಅಥವಾ ನೌಕರರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಅಡಿಯಲ್ಲಿ ಕ್ರಮಬದ್ಧವಾಗಿ ಭರ್ತಿ ಮಾಡಿದ ದೂರುಗಳನ್ನು ನಮೂನೆ–1 ರಲ್ಲಿ ಮತ್ತು ನಮೂನೆ–2 ರಲ್ಲಿ ಪ್ರಮಾಣ ಪತ್ರಗಳನ್ನು ಅಗತ್ಯ ದಾಖಲಾತಿಗಳು ಸ್ವೀಕರಿಸುವ ಕಾರ್ಯಕ್ರಮವನ್ನು ತಾಲೂಕು ಮಟ್ಟದಲ್ಲಿ ಜುಲೈ 12 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಪಿರಿಯಾಪಟ್ಟಣ ತಾಲೂಕಿನ ತಾಲೂಕು ಪಂಚಾಯಿತಿ ಸಭಾಂಗಣ, ಗುಂಡ್ಲುಪೇಟೆ ತಾಲೂಕಿನ ಪ್ರವಾಸಿ ಮಂದಿರ ಹಾಗೂ ಪೊನ್ನಂಪೇಟೆ ತಾಲೂಕಿನ ತಾಲೂಕು ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗದ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.